ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ಜುಲೈ 29 ಸೋಮವಾರ 2024

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871


ಸಂಪುಟ: 45 | ಸಂಚಿಕೆ: 104 | ಪುಟಗಳು: 10
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಇಂದು ಕೆಆರ್‌ಎಸ್, ಕಬಿನಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯರಿಂದ ಬಾಗಿನ ಸಮರ್ಪಣೆ


ಕೆಆರ್‌ಎಸ್ ಜಲಾಶಯ

● ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಸೇರಿದಂತೆ ಜನಪ್ರತಿನಿಧಿಗಳು ಭಾಗಿ ● ಬೆಳಗ್ಗೆ 11ಕ್ಕೆ ಕೆಆರ್‌ಎಸ್, ಮಧ್ಯಾಹ್ನ 3 ಗಂಟೆಗೆ ಕಬಿನಿ ಜಲಾಶಯಕ್ಕೆ ಬಾಗಿನ ಸಮರ್ಪಣೆ


ಕಬಿನಿ ಜಲಾಶಯ

ಮೈಸೂರು, ಜು.28(ಎಂಟಿವೈ)– ಕನ್ನಡ ನಾಡಿನ ಜೀವನದಿ ಕಾವೇರಿ ಕಣಿವೆ ಹಾಗೂ ಕಪಿಲಾ ನದಿ ಪಾತ್ರದಲ್ಲಿ ಭಾರಿ ಪ್ರಮಾಣದ ಮಳೆ ಸುರಿದ ಪರಿಣಾಮ ಹಳೇ ಮೈಸೂರು ಭಾಗದ ಪ್ರಮುಖ ಜಲಾಶಯಗಳಾದ ಕೃಷ್ಣರಾಜಸಾಗರ (ಕೆಆರ್‌ಎಸ್) ಹಾಗೂ ಕಬಿನಿ ಜಲಾಶಯ ತುಂಬಿರುವುದರಿಂದ ನಾಳೆ (ಜು.29) ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಉಭಯ ಜಲಾಶಯಗಳಿಗೆ ಬಾಗಿನ ಅರ್ಪಿಸಿ, ಪೂಜೆ ಸಲ್ಲಿಸಲಿದ್ದಾರೆ.

ಬರಗಾಲದ ಹಿನ್ನೆಲೆಯಲ್ಲಿ ಕಳೆದ ವರ್ಷ ತೀವ್ರ ಮಳೆ ಕೊರತೆಯಿಂದ ಜಲಾಶಯಗಳಲ್ಲಿ ಸಂಗ್ರಹವಾದ ನೀರಿನ ಪ್ರಮಾಣ ಕುಸಿದಿತ್ತು. ಕಳೆದ 15 ದಿನದಿಂದ ಸುರಿದ ಧಾರಾಕಾರ ಮಳೆಗೆ ಮೈಸೂರು ಭಾಗದ ಜಲಾಶಯಗಳಿಗೆ ಒಳಹರಿವಿನ ಪ್ರವಾಹ ಹೆಚ್ಚಾಗಿ ಕಡಿಮೆ ಅವಧಿಯಲ್ಲಿಯೇ ಈ ಬಾರಿ ಜಲಾಶಯಗಳು ಭರ್ತಿಯಾಗಿವೆ. ಈ ಹಿನ್ನೆಲೆಯಲ್ಲಿ ತುಂಬಿ ತುಳುಕುತ್ತಿರುವ ಜಲಾಶಯಗಳಿಗೆ ಸಂಪ್ರದಾಯದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಂಪುಟ ಸಹೋದ್ಯೋಗಿಗಳು ಬಾಗಿನ ಸಮರ್ಪಿಸಿ, ಪೂಜೆ ಸಲ್ಲಿಸಲಿದ್ದಾರೆ.


ಸಿದ್ದರಾಮಯ್ಯ

ಕೆಆರ್‌ಎಸ್: ಮೈಸೂರಿನ ಸರ್ಕಾರಿ ಅತಿಥಿ ಗೃಹದಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ, ಸ್ಥಳೀಯ ಜನಪ್ರತಿನಿಧಿಗಳೊಂದಿಗೆ ಬೆಳಗ್ಗೆ 9.30ಕ್ಕೆ ರಸ್ತೆ ಮಾರ್ಗವಾಗಿ ಕೆಆರ್‌ಎಸ್‌ಗೆ ಪ್ರಯಾಣ ಬೆಳೆಸಲಿದ್ದು, 10.30ಕ್ಕೆ ಕೆಆರ್‌ಎಸ್ ತಲುಪಲಿದ್ದಾರೆ. ಬಳಿಕ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ, ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ, ಸಚಿವರಾದ ಕೆ.ವೆಂಕಟೇಶ್, ಎನ್.ಎಸ್.ಭೋಸರಾಜು, ಸಂಸದರಾದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಸುನೀಲ್ ಬೋಸ್ ಹಾಗೂ ಮೈಸೂರು, ಮಂಡ್ಯ ಜಿಲ್ಲೆಗಳ ಶಾಸಕರೊಂದಿಗೆ ಕೃಷ್ಣರಾಜ ಸಾಗರ ಜಲಾಶಯಕ್ಕೆ ಬಾಗಿನ ಅರ್ಪಿಸಿ ಪೂಜೆ ಸಲ್ಲಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀರಂಗಪಟ್ಟಣ ಶಾಸಕ ರಮೇಶ್ ಬಂಡಿಸಿದ್ದೇಗೌಡ ವಹಿಸಲಿದ್ದಾರೆ. ಬಳಿಕ ಜಲಾಶಯದ ಸಮೀಪ ಬಾಗಿನ ಸಮರ್ಪಣೆಯ ಸಭಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಸಂದೇಶ ನೀಡಲಿದ್ದಾರೆ.



ಡಿ.ಕೆ.ಶಿವಕುಮಾರ್

ಕಬಿನಿ ಜಲಾಶಯ: ಕೆಆರ್‌ಎಸ್‌ಗೆ ಬಾಗಿನ ಅರ್ಪಿಸಿದ ಬಳಿಕ ಹೆಚ್.ಡಿ. ಕೋಟೆ ತಾಲೂಕಿನ ಬೀಚನಹಳ್ಳಿಗೆ ಮಧ್ಯಾಹ್ನ 3 ಗಂಟೆಗೆ ಕಬಿನಿ ಡ್ಯಾಂ ತಲುಪಲಿದ್ದಾರೆ. ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಸಂಪ್ರದಾಯದಂತೆ ಕಬಿನಿ ಜಲಾಶಯಕ್ಕೂ ಬಾಗಿನ ಅರ್ಪಿಸಿ ಪೂಜೆ ಸಲ್ಲಿಸಲಿದ್ದಾರೆ. ಈ ಸಂದರ್ಭದಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಇನ್ನಿತರರು ಭಾಗವಹಿಸಲಿದ್ದಾರೆ. ಶಾಸಕ ಸಿ.ಅನಿಲ್ ಕುಮಾರ್ ಅಧ್ಯಕ್ಷತೆ ವಹಿಸಲಿದ್ದಾರೆ.

ಮೇಘಾಲಯದ ನೂತನ ರಾಜ್ಯಪಾಲರಾಗಿ ಮಾಜಿ ಸಚಿವ ಸಿ.ಹೆಚ್.ವಿಜಯಶಂಕರ್ ನೇಮಕ

9 ರಾಜ್ಯಗಳಿಗೆ ನೂತನ ರಾಜ್ಯಪಾಲರ ನೇಮಕ, ಅವರಲ್ಲಿ 3 ಮಂದಿ ರಾಜ್ಯಪಾಲರು ವರ್ಗಾವಣೆ

ನವದೆಹಲಿ, ಜು.28– ಕೇಂದ್ರ 9 ರಾಜ್ಯಗಳಿಗೆ ರಾಜ್ಯಪಾಲರನ್ನು ನೇಮಿಸಿದ್ದು, ಇವರಲ್ಲಿ 6 ಮಂದಿ ಹೊಸದಾಗಿ ನೇಮಕಗೊಂಡಿದ್ದಾರೆ. ಮೂವರನ್ನು ವರ್ಗಾವಣೆ ಮಾಡಲಾಗಿದೆ. ಮೈಸೂರಿನವರೇ ಆದ ಮಾಜಿ ಸಚಿವ ಸಿ.ಹೆಚ್. ವಿಜಯಶಂಕರ್ ಅವರನ್ನು ಮೇಘಾಲಯದ ನೂತನ ರಾಜ್ಯಪಾಲರಾಗಿ ನೇಮಕ ಮಾಡಲಾಗಿದೆ.



ಈ ಸಂಬಂಧ ರಾಷ್ಟ್ರಪತಿ ದ್ರೌಪದಿ ಮುರ್ಮು ಶನಿವಾರ ರಾತ್ರಿ ಆದೇಶ ಹೊರಡಿಸಿದ್ದಾರೆ. ಮಾಜಿ ಕೇಂದ್ರ ಸಚಿವ ಸಂತೋಷ್ ಗಂಗ್ವಾರ್ ಅವರನ್ನು ಜಾರ್ಖಂಡ್‌ಗೆ, ಅಸ್ಸಾಂನ ಮಾಜಿ ಸಂಸದ ರಾಮೆನ್ ಡೆಕಾ ಅವರನ್ನು ಛತ್ತೀಸ್‌ಗಢಕ್ಕೆ, ಮಹಾರಾಷ್ಟ್ರ ವಿಧಾನಸಭೆಯ ಮಾಜಿ ಸ್ಪೀಕರ್ ಹರಿಭಾವು ಕಿಶನ್‌ರಾವ್ ಬಾಗ್ಡೆ ಅವರನ್ನು ರಾಜಸ್ಥಾನಕ್ಕೆ, ತ್ರಿಪುರಾದ ಮಾಜಿ ಉಪ ಮುಖ್ಯಮಂತ್ರಿ ಜಿಷ್ಣುದೇವ್ ವರ್ಮಾ ಅವರನ್ನು ತೆಲಂಗಾಣಕ್ಕೆ, ರಾಜಸ್ಥಾನದ ಹಿರಿಯ ಬಿಜೆಪಿ ನಾಯಕ ಓ.ಪಿ.ಮಾಥುರ್ ಸಿಕ್ಕಿಂ ರಾಜ್ಯಪಾಲರಾಗಿ ನೇಮಕ ಮಾಡಲಾಗಿದೆ. ಪ್ರಧಾನಿ ಮೋದಿ ಅವರು ಮುಖ್ಯಮಂತ್ರಿಯಾಗಿದ್ದಾಗ ಅವರ ಮುಖ್ಯ ಪ್ರಧಾನ ಕಾರ್ಯದರ್ಶಿಯಾಗಿದ್ದ ನಿವೃತ್ತ ಐಎಎಸ್ ಅಧಿಕಾರಿ ಕೆ.ಕೈಲಾಶನಾಥನ್ ರನ್ನು ಪಾಂಡಿಚೇರಿಯ ಲೆಫ್ಟಿನೆಂಟ್ ಗವರ್ನರ್ ಆಗಿ ನೇಮಿಸಲಾಗಿದೆ.

ಜಾರ್ಖಂಡ್ ರಾಜ್ಯಪಾಲ ಸಿ.ಪಿ. ರಾಧಾಕೃಷ್ಣನ್ ತೆಲಂಗಾಣ ಹೆಚ್ಚುವರಿ ಉಸ್ತುವಾರಿ ವಹಿಸಿದ್ದರು, ಅವರು ಪ್ರಸ್ತುತ ಮಹಾರಾಷ್ಟ್ರದ ಹೊಸ ರಾಜ್ಯಪಾಲರಾಗಿ ನೇಮಕಗೊಂಡಿದ್ದಾರೆ. ಅಸ್ಸಾಂನ ರಾಜ್ಯಪಾಲರಾದ ಗುಲಾಬ್ ಚಂದ್ ಕಟಾರಿಯಾ ಅವರನ್ನು ಪಂಜಾಬ್‌ನ ರಾಜ್ಯಪಾಲರಾಗಿ ಮತ್ತು ಚಂಡೀಗಢದ ಕೇಂದ್ರಾಡಳಿತ ಪ್ರದೇಶದ ಆಡಳಿತಾಧಿಕಾರಿಯಾಗಿ ನೇಮಿಸಲಾಗಿದೆ. ಬಿಜೆಪಿಯ ಹಿರಿಯ ನಾಯಕ ಕಟಾರಿಯಾ ಈ ಹಿಂದೆ ರಾಜಸ್ಥಾನದಲ್ಲಿ ಸಚಿವರಾಗಿದ್ದರು. ಸಿಕ್ಕಿಂ ಗವರ್ನರ್ ಲಕ್ಷ್ಮಣ್ ಪ್ರಸಾದ್ ಆಚಾರ್ಯ ಅವರನ್ನು ಅಸ್ಸಾಂನ ರಾಜ್ಯಪಾಲರನ್ನಾಗಿ ನೇಮಿಸಲಾಗಿದೆ ಮತ್ತು ಮಣಿಪುರದ ರಾಜ್ಯಪಾಲರ ■6ನೇ ಪುಟಕ್ಕೆ

ಪ್ಯಾರಿಸ್ ಒಲಿಂಪಿಕ್ಸ್ 2024: ಭಾರತದ ಮೊದಲ ಪದಕ ಬೇಟೆ

ಏರ್ ಪಿಸ್ತೂಲ್‌ನಲ್ಲಿ ಪದಕ ಗೆದ್ದ ಮನು ಭಾಕರ್!

ಪ್ಯಾರಿಸ್, ಜು.28– ಒಲಿಂಪಿಕ್ಸ್ 2024ರ ಕ್ರೀಡಾಕೂಟದಲ್ಲಿ ಭಾರತಕ್ಕೆ ಮೊದಲ ಪದಕ ಬಂದಿದ್ದು ಭಾರತದ ಶೂಟರ್ ಮನು ಭಾಕರ್ ಕಂಚಿನ ಪದಕಕ್ಕೆ ಮುತ್ತಿಟ್ಟಿದ್ದಾರೆ.

10 ಮೀಟರ್ ಏರ್ ಪಿಸ್ತೂಲ್‌ನಲ್ಲಿ ಮನು ಭಾಕರ್ 221.7 ಅಂಕಗಳೊಂದಿಗೆ ಮೂರನೇ ಸ್ಥಾನ ಪಡೆದಿದ್ದು ಕಂಚಿನ ಪದಕ ಗೆದ್ದಿದ್ದಾರೆ. ಇನ್ನು ದಕ್ಷಿಣ ಕೊರಿಯಾದ ವೈಜೆಓ 243.2 ಅಂಕಗಳೊಂದಿಗೆ ಚಿನ್ನದ ಪದಕಕ್ಕೆ ಮುತ್ತಿಟ್ಟರೆ ದಕ್ಷಿಣ ಕೊರಿಯಾದ ವೈಜೆ ಕಿಮ್ 241.3 ಅಂಕಗಳೊಂದಿಗೆ ಬೆಳ್ಳಿ ಪದಕ ಗೆದ್ದಿದ್ದಾರೆ.



10 ಮೀಟರ್ ಏರ್ ಪಿಸ್ತೂಲ್‌ನಲ್ಲಿ ಹರಿಯಾಣ ಮೂಲದ ಮನು ಭಾಕರ್ ಚೊಚ್ಚಲ ಪದಕ ಗೆದ್ದಿದ್ದಾರೆ. ಇನ್ನು ಒಲಿಂಪಿಕ್ಸ್‌ನಲ್ಲಿ ಮೊದಲ ಪದಕ ಗೆದ್ದ ಭಾರತೀಯ ಮಹಿಳೆ ಎಂಬ ಖ್ಯಾತಿಗೂ ಮನು ಭಾಕರ್ ಭಾಜನರಾಗಿದ್ದಾರೆ. ಒಲಿಂಪಿಕ್ಸ್‌ನಲ್ಲಿ ಭಾರತ ಮೊದಲ ಪದಕ ಗೆದ್ದಿದೆ. ಕಂಚಿನ ಪದಕದೊಂದಿಗೆ ಭಾರತ ಪದಕ ಬೇಟೆ ಮುಂದುವರೆಸಿದೆ.

ಮೋದಿ ಅಭಿನಂದನೆ: ಪ್ಯಾರಿಸ್ ಒಲಿಂಪಿಕ್ಸ್‌ನ ಮಹಿಳೆಯರ 10 ಮೀಟರ್ ಏರ್ ಪಿಸ್ತೂಲ್ ವಿಭಾಗದಲ್ಲಿ ಶೂಟರ್ ಮನು ಭಾಕರ್ ಕಂಚಿನ ಪದಕ ಗೆದ್ದಿದ್ದಾರೆ. ಪದಕ ಗೆದ್ದ ಭಾಕರ್ ಅವರಿಗೆ ಪ್ರಧಾನಿ ನರೇಂದ್ರ ಮೋದಿ, ರಾಷ್ಟ್ರಪತಿ ದ್ರೌಪದಿ ಮುರ್ಮು, ಕೇಂದ್ರ ಗೃಹಸಚಿವ ಅಮಿತ್ ಶಾ, ಶೂಟರ್ ಅಭಿನವ್ ಬಿಂದ್ರಾ ಸೇರಿದಂತೆ ಹಲವರು ಅಭಿನಂದನೆ ತಿಳಿಸಿದ್ದಾರೆ.

ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ ಮೋದಿ, 'ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಭಾರತಕ್ಕೆ ಮೊದಲ ಪದಕ ತಂದುಕೊಟ್ಟಿದ್ದಕ್ಕಾಗಿ ಮನು ಭಾಕರ್ ಅವರಿಗೆ ಅಭಿನಂದನೆಗಳು. ಇದು ಐತಿಹಾಸಿಕ ಗೆಲುವಾಗಿದೆ. ಅಲ್ಲದೇ ಶೂಟಿಂಗ್‌ನಲ್ಲಿ ಪದಕ ಗೆದ್ದ ಭಾರತ ಮೊದಲ ಮಹಿಳೆ ಎಂಬ ಹೆಗ್ಗಳಿಕೆಗೂ ಭಾಕರ್ ಅವರು ಪಾತ್ರರಾಗಿದ್ದಾರೆ' ಎಂದು ಹೇಳಿದ್ದಾರೆ. ■6ನೇ ಪುಟಕ್ಕೆ

ಮುಡಾ, ವಾಲ್ಮೀಕಿ ಹಗರಣ, ಎಸ್‌ಸಿ–ಎಸ್‌ಟಿ ಹಣ ದುರ್ಬಳಕೆ ಖಂಡಿಸಿ, ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ–ಜೆಡಿಎಸ್‌ನಿಂದ

ಆ.3ರಂದು ಬೆಂಗಳೂರಿನಿಂದ ಮೈಸೂರಿಗೆ ಪಾದಯಾತ್ರೆ

- ದಿನಕ್ಕೆ 20 ಕಿ.ಮೀ. ಪಾದಯಾತ್ರೆ, ಕೆಲ ನಗರಗಳಲ್ಲಿ ಸಮಾವೇಶ
- ಸಮಾರೋಪದಲ್ಲೇ ಬಿಜೆಪಿ ರಾಷ್ಟ್ರೀಯ ನಾಯಕರು ಭಾಗಿ
- ಬಿಜೆಪಿ–ಜೆಡಿಎಸ್ ನಾಯಕರ ಸಭೆಯಲ್ಲಿ ನಿರ್ಧಾರ

ಆ.10, ಮೈಸೂರಲ್ಲಿ ಸಮಾರೋಪ


ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ನಡೆದ ಸಭೆಯಲ್ಲಿ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಪ್ರಹ್ಲಾದ್ ಜೋಷಿ, ವಿಪಕ್ಷ ನಾಯಕ ಆರ್.ಅಶೋಕ್ ಮತ್ತಿತರರು ಭಾಗವಹಿಸಿದ್ದರು.

ಬೆಂಗಳೂರು, ಜು.28– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ಹಗರಣ, ವಾಲ್ಮೀಕಿ ನಿಗಮದ ಹಗರಣ ಹಾಗೂ ದಲಿತರ ಹಣವನ್ನು ಬೇರೆ ಉದ್ದೇಶಕ್ಕೆ ವರ್ಗಾವಣೆ ಮಾಡಿದ್ದನ್ನು ಖಂಡಿಸಿ, ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ, ಬಿಜೆಪಿ–ಜೆಡಿಎಸ್ ಆಗಸ್ಟ್ 3ರಂದು ಬೆಂಗಳೂರಿನಿಂದ ಮೈಸೂರಿಗೆ ಪಾದಯಾತ್ರೆ ಆರಂಭಿಸಲಿದ್ದು, ಆಗಸ್ಟ್ 10ರಂದು ಮೈಸೂರಿನಲ್ಲಿ ಪಾದಯಾತ್ರೆಯ ಸಮಾರೋಪ ಸಮಾರಂಭ ನಡೆಯಲಿದೆ.

ಮುಡಾ ಮತ್ತು ವಾಲ್ಮೀಕಿ ಹಗರಣ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಬೆಂಗಳೂರಿನಿಂದ ಮೈಸೂರಿಗೆ ಪಾದಯಾತ್ರೆ ನಡೆಸುವ ಸಂಬಂಧ ಭಾನುವಾರ ಸಂಜೆ ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ಬಿಜೆಪಿ ಮತ್ತು ಜೆಡಿಎಸ್ ನಾಯಕರ ಸಭೆ ನಡೆಸಿ, ಪಾದಯಾತ್ರೆಯ ರೂಪು–ರೇಷೆ ರಚಿಸಲಾಗಿದೆ.

ಬೆಂಗಳೂರಿನಿಂದ ಮೈಸೂರಿಗೆ 7 ದಿನಗಳ ಕಾಲ ನಡೆಯಲಿರುವ ಪಾದಯಾತ್ರೆಯಲ್ಲಿ ದಿನಕ್ಕೆ 20 ಕಿ.ಮೀ. ಕ್ರಮಿಸಲು ಉಭಯ ಪಕ್ಷದ ಮುಖಂಡರು ನಿರ್ಧರಿಸಲಿದ್ದಾರೆ. ಪಾದಯಾತ್ರೆ ಮಧ್ಯೆ ಕೆಲವು ನಗರಗಳಲ್ಲಿ ಮೈತ್ರಿ ಪಕ್ಷದ ಸಮಾವೇಶಗಳನ್ನು ಆಯೋಜಿಸುವ ಬಗ್ಗೆಯೂ ಸಭೆಯಲ್ಲಿ ಚರ್ಚಿಸಿ, ತೀರ್ಮಾನ ಕೈಗೊಳ್ಳಲಾಗಿದೆ ಎಂದು ತಿಳಿದು ಬಂದಿದೆ. ಮೈಸೂರಿನಲ್ಲಿ ಆಗಸ್ಟ್ 10ರಂದು ನಡೆಯಲಿರುವ ಸಮಾರೋಪ ಸಮಾರಂಭಕ್ಕೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಅವರನ್ನು ಕರೆಸುವ ಬಗ್ಗೆಯೂ ಸಭೆಯಲ್ಲಿ ಚರ್ಚಿಸಲಾಗಿದೆ. ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ರಾಜ್ಯದಲ್ಲಿ ಭ್ರಷ್ಟ ಕಾಂಗ್ರೆಸ್ ಸರ್ಕಾರ ಇದೆ. ಮುಡಾ, ವಾಲ್ಮೀಕಿ ಹಗರಣ, ಎಸ್‌ಸಿ, ಎಸ್‌ಟಿ ದುರ್ಬಳಕೆ ವಿಚಾರ ■5ನೇ ಪುಟಕ್ಕೆ

ಸುದ್ದಿಗೋಷ್ಠಿ ವೇಳೆ ಕುಮಾರಸ್ವಾಮಿ ಮೂಗಿನಲ್ಲಿ ರಕ್ತಸ್ರಾವ

ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಡಿಸ್ಚಾರ್ಜ್

ಬೆಂಗಳೂರು, ಜು.28– ಸುದ್ದಿಗೋಷ್ಠಿ ನಡೆಸುತ್ತಿದ್ದ ವೇಳೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರ ಮೂಗಿನಿಂದ ರಕ್ತಸ್ರಾವವಾಗಿ ಅಸ್ವಸ್ಥಗೊಂಡು, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದ ನಂತರ ಮನೆಗೆ ವಾಪಸ್ಸಾಗಿದ್ದಾರೆ.

ಭಾನುವಾರ ಸಂಜೆ ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ಆಯೋಜಿಸಿದ್ದ ಬಿಜೆಪಿ ಹಾಗೂ ಜೆಡಿಎಸ್ ನಾಯಕರ ಸಭೆ ನಂತರ ಬೆಂಗಳೂರಿನಿಂದ ಮೈಸೂರಿಗೆ ಪಾದಯಾತ್ರೆ ಕೈಗೊಳ್ಳಲಿರುವ ಬಗ್ಗೆ ಸುದ್ದಿಗಾರರೊಂದಿಗೆ ಮಾತನಾಡುತ್ತಿದ್ದ ವೇಳೆ ಅವರ ಮೂಗಿನಲ್ಲಿ ರಕ್ತಸ್ರಾವವಾಗಿದೆ. ಪಕ್ಕದಲ್ಲೇ ನಿಂತಿದ್ದ ಪುತ್ರ ನಿಖಿಲ್ ಕುಮಾರ ಸ್ವಾಮಿ ತಂದೆಯನ್ನು ಜಯನಗರದ ಅಪೋಲೋ ಆಸ್ಪತ್ರೆಗೆ ಕರೆದೊಯ್ದು, ಚಿಕಿತ್ಸೆ ಕೊಡಿಸಿದ ನಂತರ ಮನೆಗೆ ಕರೆದುಕೊಂಡು ಹೋದರು. ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿ ತಮ್ಮ ನಿವಾಸಕ್ಕೆ ಹೊರಡುವ ■6ನೇ ಪುಟಕ್ಕೆ

ಮುಡಾ ಹಗರಣದಿಂದ ಬಚಾವಾಗಲು ಏಕ ಸದಸ್ಯ ಆಯೋಗ ರಚನೆ

ಸಿಎಂ ಸಿದ್ದರಾಮಯ್ಯ ವಿರುದ್ಧ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಆರೋಪ

● ಆಯೋಗ ವರದಿ ನಿರೀಕ್ಷಿತ ● ವರದಿ ತೆಗೆದುಕೊಂಡು ನೆಕ್ಕಲು ಆಗುತ್ತಾ ● ಅಕ್ರಮ ಎಸಗಿದ್ದರೂ ಸಿದ್ದರಾಮಯ್ಯ ಖುರ್ಚಿ ಬಿಡಲ್ಲ

ಮೈಸೂರು, ಜು.28(ಬಿಎಲ್‌ಯು)– ಮುಡಾದಿಂದ ತಮ್ಮ ಪತ್ನಿ ಪಾರ್ವತಿ ಅಕ್ರಮವಾಗಿ ನಿವೇಶನ ಪಡೆದಿರುವ ಹಗರಣ ಮುಚ್ಚಿ ಹಾಕಿ, ಅದರಿಂದ ಬಚಾವಾಗಲು ಮುಖ್ಯಮಂತ್ರಿ ಸಿದ್ದರಾಮಯ್ಯ ಹೈಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ಪಿ.ಎನ್.ದೇಸಾಯಿ ನೇತೃತ್ವದ ಆಯೋಗ ರಚನೆ ಮಾಡಿದ್ದಾರೆ ಎಂದು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ. ಕುಮಾರಸ್ವಾಮಿ ಆರೋಪಿಸಿದ್ದಾರೆ.

ಮೈಸೂರಿನ ಪತ್ರಕರ್ತರ ಭವನದಲ್ಲಿ ಇಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಹಗರಣದಿಂದ ದೋಷಮುಕ್ತರಾಗಲು ಆಯೋಗ ರಚನೆ ಮಾಡಿದ್ದಾರೆ. ಇದರಿಂದ ಆಯೋಗ ಅಂತಿಮವಾಗಿ ನೀಡುವ ವರದಿಯನ್ನು ತೆಗೆದುಕೊಂಡು ನೆಕ್ಕಲು ಆಗುತ್ತಾ ಎಂದು ಕಿಡಿಕಾರಿದರು.


ಮೈಸೂರಿನ ಪತ್ರಕರ್ತರ ಭವನದಲ್ಲಿ ಭಾನುವಾರ ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ಇಷ್ಟೆಲ್ಲಾ ಅಕ್ರಮ ಎಸಗಿರುವ ಸಿದ್ದರಾಮಯ್ಯ ಮಾತ್ರವಲ್ಲದೆ ಕಾಂಗ್ರೆಸ್ ಸರ್ಕಾರ ಕೂಡ ಒಂದು ಕ್ಷಣವೂ ಮುಂದುವರೆಯಬಾರದು ಎಂಬುದು ನನ್ನ ಆಶಯ ಎಂದು ತಿಳಿಸಿದರು. ಸಿದ್ದರಾಮಯ್ಯ ಪತ್ನಿ 50 ಅಲ್ಲ, 100 ನಿವೇಶನವನ್ನೇ ಪಡೆಯಲಿ. ಇದಕ್ಕೆ ನಮ್ಮದೇನು ಅಭ್ಯಂತರವಿಲ್ಲ. ಆದರೆ ಕಾನೂನುಬದ್ಧವಾಗಿ ಪಡೆಯಲಿ. ಅದು ಬಿಟ್ಟು ಕಾನೂನು ನಿಯಮಗಳನ್ನು ಗಾಳಿಗೆ ತೂರಿ, ಪರಿಶಿಷ್ಟ ಜಾತಿಯವರಿಗೆ ಸೇರಿದ ಜಮೀನು ಖರೀದಿ ಮಾಡಿರುವುದು ಎಷ್ಟು ಸರಿ? ಎಂದು ಕುಮಾರಸ್ವಾಮಿ ಪ್ರಶ್ನಿಸಿದರು.

16/2 ಆಗಿರುವ ಜಮೀನನ್ನು ಹೇಗೆ ಖರೀದಿ ಮಾಡಿದರು ಎಂದು ಪ್ರಶ್ನಿಸಿದ ಕುಮಾರಸ್ವಾಮಿ, ಪಾರ್ವತಿ ಸಹೋದರ ಮಲ್ಲಿಕಾರ್ಜುನ ಸ್ವಾಮಿ ಭೂಮಿ ಖರೀದಿ ಮಾಡುವಾಗ ಅದನ್ನು ಕೃಷಿ ಜಮೀನು ಎಂದು ವರದಿ ನೀಡಲಾಗಿದೆ. ಆಗ ಇದ್ದ ಜಿಲ್ಲಾಧಿಕಾರಿ ಮಣ್ಣು ತಿನ್ನುತ್ತಿದ್ದನೆ, ಸ್ಥಳ ಪರಿಶೀಲನೆಗೆ ಹೋಗಿರಲಿಲ್ಲವೇ ಎಂದು ಮರು ಪ್ರಶ್ನಿಸಿದರು. ಇದಿಷ್ಟೆ ಅಲ್ಲದೆ ಜಮೀನಿನ ■5ನೇ ಪುಟಕ್ಕೆ

ಮೇಕೆದಾಟು ತಗಾದೆ ತೆಗೆಯದಂತೆ ಮೊದಲು ಸ್ಟಾಲಿನ್ ಮನವೊಲಿಸಿ

ಇಂದು ರಾಜ್ಯಸಭೆಯಲ್ಲಿ ದೇವೇಗೌಡರು ಮೇಕೆದಾಟು ವಿಚಾರ ಮಾತನಾಡುತ್ತಾರೆ, ಖರ್ಗೆ ಬೆಂಬಲಿಸಲಿ

ನಿಮ್ಮ ಇಂಡಿಯಾ ಮೈತ್ರಿಕೂಟದ ಅಂಗಪಕ್ಷವಾದ ಡಿಎಂಕೆ ಪಕ್ಷದ ತಮಿಳುನಾಡು ಮುಖ್ಯಮಂತ್ರಿ ಸ್ಟಾಲಿನ್ ಅವರನ್ನು ಭೇಟಿ ಮಾಡಿ ಮೇಕೆದಾಟು ಯೋಜನೆ ಅನುಷ್ಠಾನಕ್ಕೆ ತಗಾದೆ ತೆಗೆಯದಂತೆ ಮೊದಲು ಮನವೊಲಿಸಿ ಎಂದು ಹೆಚ್.ಡಿ.ಕುಮಾರಸ್ವಾಮಿ ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಸಲಹೆ ನೀಡಿದರು.

ಕಾವೇರಿ ಜಲಾನಯನ ಪ್ರದೇಶದ ಅಣೆಕಟ್ಟು ಮಳೆಗಾಲದಲ್ಲಿ ತುಂಬಿ ವ್ಯರ್ಥವಾಗುವ ನೀರು ಸಮುದ್ರ ಸೇರುತ್ತಿರುವ ಕಾರಣ ಮೇಕೆದಾಟು ಯೋಜನೆ ಅನುಷ್ಠಾನ ಮಾಡುತ್ತೇವೆ. ಇದಕ್ಕೆ ಅಡ್ಡಿಪಡಿಸದೆ, ಬೆಂಬಲವಾಗಿ ನಿಲ್ಲುವಂತೆ ಸ್ಟಾಲಿನ್ ಅವರನ್ನು ಕೇಳಿ ಎಂದು ಹೇಳಿದರು.

ಸರ್ವಪಕ್ಷ ಸಭೆ ನಡೆಸುವ ಬದಲು ಆದ್ಯತೆಯಾಗಿ ಈ ಕೆಲಸ ಮಾಡಿ. ಇದರಿಂದ ಮೇಕೆದಾಟು ಸಮಸ್ಯೆ ಪರಿಹಾರವಾಗುತ್ತದೆ. ಅದು ಬಿಟ್ಟು ಕಾಟಾಚಾರಕ್ಕೆ ಸರ್ವಪಕ್ಷ ಸಭೆ ಕರೆದು ರಾಜಕೀಯ ನಾಟಕವಾಡಬೇಡಿ ಎಂದು ಕುಮಾರಸ್ವಾಮಿ ತಿರುಗೇಟು ನೀಡಿದರು.

ಮೊನ್ನೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿದ ಸಂದರ್ಭದಲ್ಲಿ ಹೆಚ್.ಡಿ.ದೇವೇಗೌಡರು ಕಾವೇರಿ ವಿವಾದ ಪರಿಹಾರ ಮಾಡುವಂತೆ ಎರಡೂ ಕೈ ಮುಗಿದು ಮನವಿ ಮಾಡಿದರು ಎಂದು ಹೇಳಿದರು. ಅಲ್ಲದೆ ಮೇಕೆದಾಟು ವಿಚಾರವಾಗಿ ಸೋಮವಾರ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ■5ನೇ ಪುಟಕ್ಕೆ

ಮೋದಿ ಬೈಯೋದು ಬಿಡಿ, ನಡವಳಿಕೆ ಬದಲಾಯಿಸಿಕೊಳ್ಳಿ

ಯೋಜನೆಗಳಿಗೆ ರಾಜ್ಯ ಸರ್ಕಾರದ ಪಾಲಿನ ಹಣ ಮೀಸಲಿಡದೆ ಕೇಂದ್ರ ಸರ್ಕಾರದ ವಿರುದ್ಧ ಪ್ರತಿ ದಿನ ಬೈಯುತ್ತಾ ಬೀದಿಯಲ್ಲಿ ತಮಟೆ ಹೊಡೆಯುವುದನ್ನು ನಿಲ್ಲಿಸಿ, ಮೊದಲು ನಡವಳಿಕೆ ಬದಲಾಯಿಸಿಕೊಳ್ಳಿ ಎಂದು ಹೆಚ್.ಡಿ. ಕುಮಾರಸ್ವಾಮಿ ಕಾಂಗ್ರೆಸ್ ನಾಯಕರಿಗೆ ಸಲಹೆ ನೀಡಿದರು.

ಯಾವುದೇ ಸಿದ್ಧತೆ ಮಾಡಿಕೊಳ್ಳದೆ, ದಾಖಲಾತಿ ನೀಡದೆ ಸಿದ್ದರಾಮಯ್ಯ ಅವರು ಪ್ರಧಾನಿ ನರೇಂದ್ರ ಮೋದಿ ಅವರನ್ನು ಕಾಟಾಚಾರಕ್ಕೆ ಭೇಟಿ ಮಾಡಿ ಅನುದಾನ ಕೇಳುತ್ತಾರೆ. ಕರ್ನಾಟಕದ ಯೋಜನೆಗಳಿಗೆ ಕೇಂದ್ರ ಸರ್ಕಾರ ಹಣ ನೀಡಲು ಸಿದ್ಧವಿದೆ. ಆದರೆ ರಾಜ್ಯ ಸರ್ಕಾರ ■5ನೇ ಪುಟಕ್ಕೆ

ಮೈಸೂರು ಮಿತ್ರ ಸೋಮವಾರ 29 ಜುಲೈ 2024

ಕೇಂದ್ರದ ವಿರುದ್ಧ ಮಹಿಳಾ ಕಾಂಗ್ರೆಸ್ ಪ್ರತಿಭಟನೆ ಸರಿಯಲ್ಲ

ಮಾಜಿ ಕಾರ್ಪೋರೇಟರ್ ಪ್ರೇಮಾ ಶಂಕರೇಗೌಡ


ಪ್ರೇಮಾ ಶಂಕರೇಗೌಡ

ಮೈಸೂರು, ಜು.28(ಜಿಎ)–ಕೇಂದ್ರ ಬಜೆಟ್‌ನಲ್ಲಿ ರಾಜ್ಯಕ್ಕೆ ಅನ್ಯಾಯವಾಗಿದೆ ಎಂದು ಆರೋಪಿಸಿ ಕೆಪಿಸಿಸಿ ಮಹಿಳಾ ಘಟಕದ ಅಧ್ಯಕ್ಷೆ ಪುಷ್ಪಾ ಅಮರ್‌ನಾಥ್ ಅವರ ನೇತೃತ್ವದಲ್ಲಿ ಕಾಂಗ್ರೆಸ್ ಮಹಿಳಾ ಘಟಕ ಪ್ರತಿಭಟನೆ ನಡೆಸಿದ್ದು ಸರಿಯಲ್ಲ ಎಂದು ನಗರ ಪಾಲಿಕೆ ಮಾಜಿ ಸದಸ್ಯೆ ಎಸ್. ಪ್ರೇಮಾ ಶಂಕರೇಗೌಡ ಟೀಕಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರತಿಭಟನೆ ವೇಳೆ ಖಾಲಿ ಚೊಂಬು ಪ್ರದರ್ಶಿಸಲಾಗಿದೆ. ಕೇಂದ್ರ ಸಚಿವರಾದ ಎಚ್.ಡಿ.ಕುಮಾರಸ್ವಾಮಿ ಅವರ ಬಗ್ಗೆ ನಾಲಿಗೆ ಹರಿಬಿಟ್ಟು ಮಾತನಾಡಿದ್ದಾರೆ ಇದು ಖಂಡನೀಯ. ಕೇಂದ್ರ ಸರ್ಕಾರ ರಾಜ್ಯದ ರೈಲ್ವೆ ವಲಯಕ್ಕೆ 7500 ಕೋಟಿ ನೀಡಿದೆ. ಬೆಂಗಳೂರು–ಹೈದರಾಬಾದ್ 12 ಪಥದ ರಸ್ತೆ ನಿರ್ಮಾಣ ಅಂತಿಮ ಹಂತಕ್ಕೆ ಬಂದಿದೆ. ಆದರೆ, ರಾಜ್ಯ ಸರ್ಕಾರ ಗೃಹಲಕ್ಷ್ಮಿ ಯೋಜನೆಯ ಹಣ ನೀಡಲಾಗದೇ ಪಾಪರ್ ಆಗಿದೆ ಎಂದು ಲೇವಡಿ ಮಾಡಿದರು.

ಚಾಮರಾಜನಗರ ಲೋಕಸಭಾ ಕ್ಷೇತ್ರದ ಟಿಕೆಟ್ ಸಿಗದೇ ಹತಾಶರಾಗಿರುವ ಪುಷ್ಪಾ ಅಮರ್‌ನಾಥ್ ಅವರು ವೃಥಾ ಕೇಂದ್ರದ ವಿರುದ್ಧ ಆರೋಪ ಮಾಡುತ್ತ ಕಾಲಹರಣ ಮಾಡುತ್ತಿದ್ದಾರೆ ಎಂದರು. ಗೋಷ್ಠಿಯಲ್ಲಿ ಎಂ.ಡಿ.ದಾಕ್ಷಾಯಿಣಿ, ಭಾಗ್ಯ ಮಹದೇಶ್ ಮತ್ತಿತರರು ಉಪಸ್ಥಿತರಿದ್ದರು.

ಬಜೆಟ್‌ನಲ್ಲಿ ಕರ್ನಾಟಕಕ್ಕೆ ಚೊಂಬು: ಕಾಂಗ್ರೆಸ್ ಆರೋಪ ಶುದ್ಧ ಸುಳ್ಳು ಕೇಂದ್ರ

ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್



ಬೆಂಗಳೂರು, ಜು.28– ಕೇಂದ್ರ ಸರ್ಕಾರದ ಬಜೆಟ್‌ನಲ್ಲಿ ಕರ್ನಾಟಕಕ್ಕೆ ಅನ್ಯಾಯ ಆಗಿದೆ ಎಂಬ ಕಾಂಗ್ರೆಸ್ ನಾಯಕರ ವಿರುದ್ಧ ವಿತ್ತ ಸಚಿವ ನಿರ್ಮಲಾ ಸೀತಾರಾಮನ್ ಅವರು ಭಾನುವಾರ ತೀವ್ರವಾಗಿ ಕಿಡಿಕಾರಿದ್ದಾರೆ.

ಬೆಂಗಳೂರಿನ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಜ್ಯ ಕಾಂಗ್ರೆಸ್ ಸರ್ಕಾರ ಸುಳ್ಳು ಹೇಳುತ್ತಿದೆ. ಯುಪಿಎ ಸರ್ಕಾರ ಇದ್ದಾಗ ರಾಜ್ಯಕ್ಕೆ 81,791 ಕೋಟಿ ರೂ. ನೀಡಿತ್ತು ಆದರೆ, 2014ರಿಂದ ಇಲ್ಲಿಯವರೆಗೆ ಎನ್‌ಡಿಎ ಸರ್ಕಾರ 2,95,818 ಕೋಟಿ ರೂಪಾಯಿ ನೀಡಿದೆ. ಕಳೆದ 10 ವರ್ಷದಲ್ಲಿ 2,36,955 ಕೋಟಿ ತೆರಿಗೆ ಹಂಚಿಕೆಯಾಗಿದೆ ಎಂದು ಹೇಳಿದರು.

ಬಜೆಟ್‌ನಲ್ಲಿ ಸ್ಟಾರ್ಟ್‌ಅಪ್‌ಗಳಿಗೆ ನಾವು ಹೆಚ್ಚಿನ ಒತ್ತು ನೀಡಿದ್ದೇವೆ ಕೇಂದ್ರ ಬಜೆಟ್‌ನಲ್ಲಿ ಯುವಕರಿಗೆ ಮೂರು ಯೋಜನೆ ತಂದಿದ್ದೇವೆ ಯುವಕರಿಗೆ ತರಬೇತಿ, ಇಂಟರ್ನ್‌ಶಿಪ್ ಯೋಜನೆ, ಕೌಶಲ್ಯಾಭಿವೃದ್ಧಿ ನೀಡಲಾಗುವುದು. ಎಂಎಸ್‌ಎಮ್‌ಇಗಳಿಗೆ ಸ್ವಲ್ಪ ಸಮಸ್ಯೆ ಆಗುತ್ತಿದೆ, ಆ ಸಮಸ್ಯೆ ಬಗೆಹರಿಸಲು ಕೇಂದ್ರ ಬಜೆಟ್‌ನಲ್ಲಿ ಉತ್ತರ ನೀಡಿದ್ದೇವೆ. ಬಾಹ್ಯಾಕಾಶ ವಲಯಕ್ಕೆ ಬೆಂಗಳೂರಿನ ಕೊಡುಗೆ ಇದೆ. ಆವಾಸ್ ಯೋಜನೆಯಡಿ ಬಡ ವರ್ಗದ ಜನರಿಗೆ ಮನೆ ನೀಡಲಾಗುತ್ತಿದೆ. ಮಹಿಳೆಯರು, ಕೃಷಿ ವಲಯಕ್ಕೂ ಕೇಂದ್ರದಿಂದ ಯೋಜನೆ ತಂದಿದ್ದೇವೆ. ಈ ಎಲ್ಲ ಯೋಜನೆಗಳ ಪ್ರಯೋಜನ ಕರ್ನಾಟಕವೂ ಪಡೆದುಕೊಳ್ಳುತ್ತದೆ ಎಂದು ತಿಳಿಸಿದರು.

ಬೆಂಗಳೂರಿನ ಪೀಣ್ಯದಲ್ಲಿ ಸಣ್ಣ ಕೈಗಾರಿಕೆಗಳಿವೆ. ಕೃಷಿ ವಲಯದ ವಿಸ್ತರಣೆಗೆ ಬೆಂಗಳೂರು ಕೊಡುಗೆ ಇದೆ. ಕಲಬುರಗಿಯಲ್ಲಿ ಪಿಎಂ ಮಿತ್ರಾ ಪಾರ್ಕ್ ನಿರ್ಮಾಣವಾಗಲಿದೆ. ರೈಲ್ವೇ ವಲಯಕ್ಕೂ ಕೋಟಿ ಕೋಟಿ ಹಣ ನೀಡಿದ್ದೇವೆ 825 ಕೋಟಿ ರೂ. ಅನುದಾನ ಯುಪಿಎ ಸರ್ಕಾರ ಇದ್ದಾಗ ನೀಡಿತ್ತು. ಆದರೆ ಈ ಬಜೆಟ್‌ನಲ್ಲಿ 7,559 ಕೋಟಿ ಅನುದಾನ ಕೊಟ್ಟಿದ್ದೇವೆ. 47,016 ಕೋಟಿ ಮೊತ್ತದ 31 ಯೋಜನೆಯ ರೈಲ್ವೆ ಕಾಮಗಾರಿ ನಡೆಯುತ್ತಿದೆ. 640 ರೈಲ್ವೇ ಸೇತುವೆ, ವಂದೇ ಭಾರತ್ ರೈಲು ಸೇರಿ ಹಲವು ರೈಲ್ವೆ ಯೋಜನೆ ಜಾರಿಯಲ್ಲಿವೆ. ಐಐಟಿ ಧಾರವಾಡ, ತುಮಕೂರಲ್ಲಿ ಮೊದಲ ಕೈಗಾರಿಕಾ ಕಾರಿಡಾರ್ ಪಾರ್ಕ್, 7 ಸ್ಮಾರ್ಟ್ ಸಿಟಿ ನಿರ್ಮಾಣವಾಗುತ್ತಿವೆ ಎಂದು ಮಾಹಿತಿ ನೀಡಿದರು.

ಮಹಾಜನ ಕಾಲೇಜಲ್ಲಿ ಕಾರ್ಗಿಲ್ ವಿಜಯ ದಿವಸ್ ಆಚರಣೆ


ಮೈಸೂರಿನ ಮಹಾಜನ ಪ್ರಥಮ ದರ್ಜೆ ಕಾಲೇಜಿನಲ್ಲಿ 25ನೇ ವರ್ಷದ ಕಾರ್ಗಿಲ್ ವಿಜಯ ದಿವಸ್ ಅಂಗವಾಗಿ ಹುತಾತ್ಮರಿಗೆ ಗೌರವ ಸಮರ್ಪಿಸಲಾಯಿತು.

ಮೈಸೂರು, ಜು. 28– ಮೈಸೂರಿನ ಮಹಾಜನ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಿದ್ದ 25ನೇ ವರ್ಷದ ಕಾರ್ಗಿಲ್ ವಿಜಯ ದಿವಸ್ ಅಂಗವಾಗಿ ಸ್ವಾಮಿ ವಿವೇಕಾನಂದ ಹಾಲ್‌ನಲ್ಲಿ ನಡೆದ ಸಮಾರಂಭದಲ್ಲಿ ಹುತಾತ್ಮರಿಗೆ ಗೌರವ ಸಮರ್ಪಿಸಲಾಯಿತು. ಕಾರ್ಯಕ್ರಮದಲ್ಲಿ ಸುಮಾರು 40 ಎನ್‌ಸಿಸಿ ಕೆಡೆಟ್ಸ್ ಹಾಗೂ 200 ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಪ್ರಾಂಶುಪಾಲರಾದ ಡಾ.ಬಿ.ಆರ್. ಜಯಕುಮಾರಿ, ಎನ್‌ಸಿಸಿ ಆಫೀಸರ್ ಕ್ಯಾಪ್ಟನ್ ಡಾ. ಇಂದ್ರಾಣಿ ಎಂ.ಆರ್., ಫ್ಲೇಯಿಂಗ್ ಆಫೀಸರ್ ಡಾ. ಪುಷ್ಪರಾಣಿ ಪಿ.ಜಿ., ಕನ್ನಡ ವಿಭಾಗದ ಮುಖ್ಯಸ್ಥ ಡಾ.ಎಚ್.ಆರ್. ತಿಮ್ಮೇಗೌಡ, ಐಕ್ಯೂಎಸಿ ಅಂಡ್ ನ್ಯಾಕ್ ಸಂಚಾಲಕರಾದ ಶ್ರೀಮತಿ ಗೀತಾ, ಪಿಆರ್‌ಓ ಶ್ರೀಮತಿ ಪೂರ್ಣಿಮಾ, ಅವಾಲ್‌ದಾರ್ ಸಂಜಯ್‌ಕುಮಾರ್, ಅವಾಲ್‌ದಾರ್ ಸಂಜೋಯ್‌ಕುಮಾರ್ ಒನ್ ಕರ್ನಾಟಕ ಆರ್‌ಟಿಲರಿ ಬ್ಯಾಟರಿ, ಅಧ್ಯಾಪಕ, ಅಧ್ಯಾಪಕೇತರರು ಹಾಗೂ ಎನ್‌ಸಿಸಿ ಕೆಡೆಟ್‌ಗಳು ಹಾಜರಿದ್ದರು.

ಯುವ ಬ್ರಿಗೇಡ್‌ನಿಂದ ಕಾರ್ಗಿಲ್ ವಿಜಯೋತ್ಸವ ಮ್ಯಾರಥಾನ್


ಮೈಸೂರು ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದ ಮುಂಭಾಗದಲ್ಲಿ ಯುವ ಬ್ರಿಗೇಡ್ ಕಾರ್ಯಕರ್ತರು 'ಟಾರ್ಗೆಟ್ ಪಿಓಕೆ ಶೀರ್ಷಿಕೆಯಡಿ ಮ್ಯಾರಥಾನ್ ಓಟ ಆಯೋಜಿಸಿದ್ದರು

ಮೈಸೂರು, ಜು. 28(ಎಸ್‌ಪಿಎನ್)– 25ನೇ ವರ್ಷದ ಕಾರ್ಗಿಲ್ ವಿಜಯೋತ್ಸವ ಹಿನ್ನೆಲೆಯಲ್ಲಿ ಯುವ ಬ್ರಿಗೇಡ್ ಕಾರ್ಯಕರ್ತರು ಮೈಸೂರು ನಗರದ ಪ್ರಮುಖ ರಸ್ತೆಗಳಲ್ಲಿ ಭಾನುವಾರ 4 ಕಿ.ಮೀ ಮ್ಯಾರಥಾನ್ ಓಟ ನಡೆಸಿದರು.

ಮೈಸೂರು ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದ ಮುಂಭಾಗದಲ್ಲಿ ಯುವ ಬ್ರಿಗೇಡ್ ಕಾರ್ಯಕರ್ತರು 'ಟಾರ್ಗೆಟ್ ಪಿಓಕೆ ಶೀರ್ಷಿಕೆಯಡಿ ಮ್ಯಾರಥಾನ್ ಓಟ ಆಯೋಜಿಸಿದ್ದರು. ಈ ವೇಳೆ ಹುತಾತ್ಮ ಯೋಧ ಹೇಮಚಂದು ಅವರ ತಂದೆ ಮರೀಗೌಡ ಹಾಗೂ ಮಾಜಿ ಸೈನಿಕ ಸುಬೇದಾರ್ ರಾಜೇಂದ್ರ ಬಸ್ಸಿನ್, ಡಾ.ಚಂದ್ರಶೇಖರ್ ನೇತೃತ್ವದಲ್ಲಿ ಯುವ ಬ್ರಿಗೇಡ್‌ವತಿಯಿಂದ ಕಾರ್ಗಿಲ್ ಬೆಟ್ಟದಲ್ಲಿ ಹಾರಿಸಿದ್ದ ತಿರಂಗಾವನ್ನು ಪ್ರದರ್ಶಿಸಿ, ದೇಶ ಪ್ರೇಮ ಮೆರೆದರು.

ಮ್ಯಾರಥಾನ್‌ನಲ್ಲಿ 300ಕ್ಕೂ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿದ್ದ ದೇಶಭಕ್ತರ ದಂಡು ಭಾಗವಹಿಸಿ 'ಪಿಓಕೆ ಆದಷ್ಟು ಬೇಗನೆ ಭಾರತ ವಶವಾಗಲಿ' ಜೈ ಜವಾನ್ ಜೈ ಕಿಸಾನ್ ಸೇರಿದಂತೆ ಇತರೆ ಘೋಷಣೆಗಳನ್ನು ಕೂಗಿ ದೇಶಪ್ರೇಮ ಮೆರೆದರು. ಈ ಓಟ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದ ಮುಂಭಾಗದಿಂದ ಆರಂಭವಾದ ಮ್ಯಾರಥಾನ್ ಓಟ ಗಾಂಧಿಚೌಕ, ಚಿಕ್ಕಗಡಿಯಾರ, ದೇವರಾಜ ರಸ್ತೆ, ನಾರಾಯಣ ಶಾಸ್ತ್ರಿ ರಸ್ತೆ, ಶ್ರೀಶಿವರಾತ್ರಿ ರಾಜೇಂದ್ರ ವೃತ್ತ, ಹಾರ್ಡಿಂಜ್ ವೃತ್ತ ತಲುಪಿ 4 ಕಿ.ಮೀ ಮ್ಯಾರಥಾನ್ ಓಟ ಮುಕ್ತಾಯಗೊಂಡಿತು.

ನಂತರ ವೇದಿಕೆ ಕಾರ್ಯಕ್ರಮದಲ್ಲಿ ಯುವಾ ಬ್ರಿಗೇಡ್ ಸಂಘಟಕ ಚಂದ್ರಶೇಖರ್ ಮಾತನಾಡಿ, ಕಾರ್ಗಿಲ್ ಯುದ್ಧದ ಕುರಿತು ಮಾಹಿತಿ ನೀಡುವುದರ ಜೊತೆಗೆ ಪಿಓಕೆ ಭಾರತದ ಭಾಗವಾಗಬೇಕೆಂಬ ಇಂದಿನ ಸಮಸ್ತ ಭಾರತೀಯರ ಸಂಕಲ್ಪ ಸದ್ಯದಲ್ಲೇ ಈಡೇರಲಿ ಎಂದು ಆಶಯ ವ್ಯಕ್ತಪಡಿಸಿದರು.

ಈ ವೇಳೆ ಯುವಾ ಬ್ರಿಗೇಡ್ ಜಿಲ್ಲಾ ಪ್ರಮುಖರಾದ ನಿತಿನ್, ನಗರ ಸಂಚಾಲಕ ಸಾಗರ್, ರಾಮಾನುಜಂ, ರುದ್ರೇಶ್, ಪ್ರಶಾಂತ್, ಸುನಾದ್, ಶ್ಯಾಮ್, ನಿಂಗರಾಜ್, ನಾರಾಯಣ, ಜಯರಾಮ್, ತೇಜಸ್, ಸುಬ್ರಹ್ಮಣ್ಯ, ಸೇರಿದಂತೆ ಹಲವರು ಭಾಗಿಯಾಗಿದ್ದರು.

'ಪ್ರಗತಿ' ಉಜ್ವಲ ಭಾರತ ಪರಿಕಲ್ಪನೆಯಡಿ ಯದುವೀರ್‌ಗೆ ಅಭಿನಂದನೆ



'ಪ್ರಗತಿ' ಉಜ್ವಲ ಭಾರತ ಪರಿಕಲ್ಪನೆಯಡಿ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ನೂತನ ಸಂಸದರೂ ಆದ ರಾಜವಂಶಸ್ಥ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರನ್ನು ಅಭಿನಂದಿಸಲಾಯಿತು. ಮೈಸೂರು ವಿವಿ ವಿಶ್ರಾಂತ ಕುಲಪತಿ ಪ್ರೊ.ಕೆ.ಎಸ್.ರಂಗಪ್ಪ, ಇತಿಹಾಸಕಾರ ಧರ್ಮೇಂದ್ರ ಕುಮಾರ್, ವಿಷನ್ ಟೀಮ್ ಆಫ್ ಮೈಸೂರು ಸಂಚಾಲಕಿ ಹೇಮಾ ನಂದೀಶ್ ಮತ್ತಿತರರಿದ್ದರು.

ಮುಂದಿನ 25 ವರ್ಷಗಳ ದೂರದೃಷ್ಟಿ...

ರಾಷ್ಟ್ರ ಮತ್ತು ರಾಜ್ಯದಲ್ಲಿ ಒಳ್ಳೆಯ ಅಭಿವೃದ್ಧಿ ಆಗಬೇಕಿದೆ. ಜನರ ಹಿತರಕ್ಷಣೆ ಕಾಪಾಡುವುದು ಹಾಗೂ ಜೀವನ ಶೈಲಿಯನ್ನು ಉತ್ತಮಗೊಳಿಸುವುದು ಮುಖ್ಯವಾಗಿದೆ. ಮೈಸೂರು ಮತ್ತು ಕೊಡಗಿನ ಮೂಲ ಸಂಸ್ಕೃತಿಯ ಸಂರಕ್ಷಣೆ ಜೊತೆಗೆ ಅಭಿವೃದ್ಧಿ ಮಾಡಬೇಕಿದೆ. ಈಗಾಗಲೇ ವಿಕಸಿತ ಭಾರತ ನಿರ್ಮಾಣಕ್ಕೆ ಅಡಿಪಾಯ ಹಾಕಲಾಗಿದ್ದು, ಮಹಿಳೆಯರ ಪಾತ್ರ ದೊಡ್ಡದೆಂಬ ಚಿಂತನೆಯಲ್ಲಿ ಮಹಿಳೆಯರು ಸ್ವಾವಲಂಬಿಯಾಗಲು ಅವಕಾಶ, ಕೌಶಲ್ಯಾಭಿವೃದ್ಧಿಗೆ ಆದ್ಯತೆ ನೀಡಲಾಗಿದೆ. ಕಳೆದ ಹತ್ತು ವರ್ಷದಲ್ಲಿ ಅಸಮತೋಲನ ಆರ್ಥಿಕತೆಯಿಂದ ಬಲಿಷ್ಠ ಆರ್ಥಿಕತೆಗೆ ಬಂದಿದ್ದೇವೆ. ಮೂಲಭೂತ ಸೌಕರ್ಯಗಳು ಸಮರ್ಪಕವಾಗಿ ದೊರೆಯುತ್ತಿದ್ದು, ಮೈಸೂರು ವಿವಿ ಸೇರಿದಂತೆ ಶತಮಾನಕ್ಕೂ ಹೆಚ್ಚಿನ ಸೇವೆ ನೀಡಿರುವ ವಿವಿಧ ಸಂಸ್ಥೆಗಳಂತೆಯೇ ಮುಂದಿನ 25 ವರ್ಷಗಳ ಅಭಿವೃದ್ಧಿಯ ದೂರದೃಷ್ಟಿಯನ್ನಿರಿಸಲಾಗಿದೆ. ಮುಂದಿನ ಪೀಳಿಗೆಯ ಹಿತದೃಷ್ಟಿಯಿಂದ ಕೇಂದ್ರ ಸರ್ಕಾರ ತನ್ನ ಕಾರ್ಯಕ್ರಮಗಳನ್ನು ರೂಪಿಸಿದ್ದು, ಸಕಾರಾತ್ಮಕವಾಗಿ ಎಲ್ಲರ ಸಹಕಾರದೊಂದಿಗೆ ಮುಂದುವರೆಯೋಣ.

- ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್,
ಸಂಸದ, ಮೈಸೂರು–ಕೊಡಗು ಲೋಕಸಭಾ ಕ್ಷೇತ್ರ

ಮೈಸೂರು, ಜು.28(ಎಂಕೆ)– ಮೈಸೂರು ವಿವಿ ಮಾನಸಗಂಗೋತ್ರಿಯ ವಿಜ್ಞಾನ ಭವನದಲ್ಲಿ ವಿಷನ್ ಟೀಮ್ ಆಫ್ ಮೈಸೂರು, ಮೈಸೂರು ಸಿಹೆಚ್ ಆರ್‌ಒ ಫೋರಂ ಮತ್ತು ಎಡಿನ್ ಬ್ರಿಡ್ಜ್ ಫೌಂಡೇಶನ್ ವತಿಯಿಂದ 'ಪ್ರಗತಿ' ಉಜ್ವಲ ಭಾರತ ಪರಿಕಲ್ಪನೆಯಡಿ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ನೂತನ ಸಂಸದರೂ ಆದ ರಾಜವಂಶಸ್ಥ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರನ್ನು ಅಭಿನಂದಿಸಲಾಯಿತು.

ಇದೇ ವೇಳೆ ಅಭಿನಂದನಾ ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಮೈಸೂರು ವಿವಿ ವಿಶ್ರಾಂತ ಕುಲಪತಿ ಪ್ರೊ.ಕೆ. ಎಸ್.ರಂಗಪ್ಪ ಮಾತನಾಡಿ, ಭಾರತಕ್ಕೆ ಒಂದು ಸಂಸ್ಕೃತಿ ಇದೆ ಎಂದರೆ ಅದು ಮೈಸೂರು ಮಹಾರಾಜರಿಂದ ಬಂದಿರುವುದಾಗಿದೆ. ಈ ಮೈಸೂರು ವಿಶ್ವವಿದ್ಯಾನಿಲಯವೂ ಅವರ ಕೊಡುಗೆಯೇ. ಶಿಕ್ಷಣಕ್ಕೆ ಬಹುದೊಡ್ಡ ಪ್ರೋತ್ಸಾಹ ನೀಡಿದವರು. ನಾನು ಕುಲಪತಿಯಾಗಿದ್ದ ಅವಧಿಯಲ್ಲಿಯೂ ಮೈಸೂರು ಮಹಾರಾಜರಿಗೆ ಸಲ್ಲಿಸಬೇಕಾದ ಗೌರವವನ್ನು ಸಲ್ಲಿಸಿ, ಅವರು ಕಟ್ಟಿದ್ದ ಸಂಸ್ಥೆಗಳನ್ನು ಇನ್ನಷ್ಟು ಉಜ್ವಲ ರೀತಿಯಲ್ಲಿ ಬೆಳೆಸುವ ಪ್ರಯತ್ನ ಮಾಡಿದ್ದೇನೆ ಎಂದರು.

ಯದುವೀರ್ ಅವರು ಸಂಸತ್ತಿನಲ್ಲಿ ನಮ್ಮೆಲ್ಲರನ್ನು ಪ್ರತಿನಿಧಿಸಲಿದ್ದಾರೆ. ಅವರಿಗೆ ಒಳ್ಳೆಯ ಭವಿಷ್ಯವಿದೆ. ಇಂತಹ ವ್ಯಕ್ತಿತ್ವವುಳ್ಳ ವ್ಯಕ್ತಿಯನ್ನು ಸಂಸತ್ತಿಗೆ ಆಯ್ಕೆಮಾಡಿ ಕಳುಹಿಸಿರುವುದು ನಮ್ಮ ಪುಣ್ಯ. ರಾಜಕೀಯದಲ್ಲಿ ಎಂತೆಂತಹ ಕೆಟ್ಟವರಿದ್ದಾರೆ ಎಂಬುದನ್ನು ನೋಡಿದ್ದೇವೆ. ಆದರೆ ಇವತ್ತಿನಿಂದ ಯದುವೀರ್ ಅವರ ಮೂಲಕ ಒಳ್ಳೆಯ ಕಾಲ ಶುರುವಾಗಿದೆ. ಮೈಸೂರು ಇವರ ಮೂಲಕ ಉಜ್ವಲವಾಗಿ ಬೆಳೆಯಲಿದೆ ಹಿಂದೆ ಇದ್ದಂತಹ ಮಹಾರಾಜರ ಕಾಲದ ವೈಭವವನ್ನು ಯದುವೀರ್ ಅವರು ಮತ್ತೆ ತರುತ್ತಾರೆ ಎಂದು ನಂಬಿದ್ದೇವೆ ಎಂದು ಅಭಿಲಾಷೆ ವ್ಯಕ್ತಪಡಿಸಿದರು.

ಇತಿಹಾಸಕಾರ ಧರ್ಮೇಂದ್ರ ಕುಮಾರ್ ಮಾತನಾಡಿ, ಮೈಸೂರು ಮಹಾರಾಜರೆಂದರೆ ನಮ್ಮ ಪಾಲಿನ ದೇವರು ಎಂಬ ಮನೋಭಾವನೆ ರಾಜ್ಯದ ಜನತೆಯಲ್ಲಿ ಇಂದಿಗೂ ಇದೆ. ಚುನಾವಣೆ ಗೆದ್ದಿದ್ದಾರೆ(ಯದುವೀರ್) ಎಂದು ಅಭಿನಂದನೆ ಮಾಡುತ್ತಿದ್ದೇವೆ. ಆದರೆ ಇಡೀ ಭಾರತಕ್ಕೆ ಪ್ರಜಾಪ್ರಭುತ್ವ ಮತ್ತು ಚುನಾವಣೆ ಎಂಬುದನ್ನು ತೋರಿಸಿದ್ದೆ ಹತ್ತನೇ ಚಾಮರಾಜ ಒಡೆಯರ್‌ರವರು. 1881ರಲ್ಲಿ ಮೊಟ್ಟ ಮೊದಲ ಪ್ರಜಾ ಪ್ರತಿನಿಧಿ ಸಭೆ ಮಾಡಿದ್ದ ಮಹಾರಾಜರು. ಲೋಕೋಪಕಾರ, ಜನೋಪಕಾರದಿಂದಲೇ ಜಗತ್ ಪ್ರಸಿದ್ಧಿಯಾದವರು. ಶತಮಾನಗಳಿಂದ ಅದಕ್ಕಾಗಿಯೇ ಬಂದಿದ್ದಾರೆ ಎಂದು ಸ್ಮರಿಸಿದರು.

ಮಹಾರಾಜರ ತ್ಯಾಗ ಸ್ಮರಿಸಿ: ಆಗಸ್ಟ್ 15 ರಂದು ಸ್ವಾತಂತ್ರ್ಯ ದಿನ ಆಚರಿಸುತ್ತೇವೆ. ಅದಕ್ಕೆ ಒಂದು ವಾರ ಮುಂಚಿತವಾಗಿ ಅಂದರೆ ಆಗಸ್ಟ್ 9 ರಂದು ಎಲ್ಲರು ತಮ್ಮ ತಮ್ಮ ಮನೆಗಳಲ್ಲಿ, ಶಾಲೆಗಳಲ್ಲಿ ಜಯಚಾಮರಾಜ ಒಡೆಯರ್ ಅವರ ಫೋಟೋ ಇಟ್ಟು ಪೂಜೆ ಮಾಡಿ. ಭಾರತದಲ್ಲಿ ಮೊಟ್ಟ ಮೊದಲ ಬಾರಿಗೆ ಪ್ರಜಾಪ್ರಭುತ್ವ ವ್ಯವಸ್ಥೆಗೆ ಸಹಿ ಮಾಡಿ, ಮೈಸೂರಿನ ಆಸ್ತಿಯನ್ನು ಕೇಂದ್ರ ಸರ್ಕಾರಕ್ಕೆ ಬಿಟ್ಟುಕೊಟ್ಟ ಪುಣ್ಯಾತ್ಮರು. ಹಾಗಾಗಿ ಸ್ವಾತಂತ್ರ್ಯ ದಿನ ಮಹಾತ್ಮ ಗಾಂಧಿ, ನೆಹರು ಇನ್ನಿತರ ಮಹನೀಯರನ್ನು ಸ್ಮರಿಸುವುದಕ್ಕೂ ಒಂದು ವಾರ ಮುಂಚಿತವಾಗಿ ಮೈಸೂರು ಮಹಾರಾಜರ ತ್ಯಾಗವನ್ನು ಸ್ಮರಿಸುವಂತೆ ತಿಳಿಸಿದರು.

ಜನತೆ ಪರವಾಗಿ ಸ್ವೀಕಾರ: ಅಭಿನಂದನೆ ಸ್ವೀಕರಿಸಿದ ಬಳಿಕ ಮಾತನಾಡಿದ ಸಂಸದ ಯದುವೀರ್, ಚುನಾವಣೆ ವೇಳೆ ಹಾಗೂ ಫಲಿತಾಂಶ ಬಂದಾಗಲೂ ಹೇಳಿದಂತೆ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಜನತೆಯ ಪರವಾಗಿ ಅಭಿನಂದನೆಗಳನ್ನು ಸ್ವೀಕರಿಸುತ್ತಿದ್ದೇನೆ. ನಿಮಗೋಸ್ಕರ ಕೆಲಸ ಮಾಡಲು ಅವಕಾಶ ಮಾಡಿಕೊಟ್ಟಿರುವುದಕ್ಕೆ ನಾನು ಚಿರಋಣಿಯಾಗಿದ್ದೇನೆ. ನಿಮ್ಮೆಲ್ಲರ ಸಹಕಾರದೊಂದಿಗೆ ಮುಂದುವರೆಯುತ್ತೇನೆ. ಯಾವುದೇ ರಾಜಕೀಯ ಅನುಭವ ಇಲ್ಲದೆಯೂ ರಾಜಕೀಯ ಪ್ರವೇಶ ಮಾಡಿ, ರಾಜಕೀಯ ಜೀವನ ಆರಂಭಿಸಿದ್ದೇವೆ. ಇದಕ್ಕೆ ನಿಮ್ಮೆಲ್ಲರ ಸಹಕಾರ, ನೀಡಿದ ಅವಕಾಶ ಕಾರಣ ಎಂದು ನೆನೆದರು.

ಎಂಐಟಿ ಕಾಲೇಜು ಮುಖ್ಯಸ್ಥ ಡಾ.ಮುರಳಿ, ಉದ್ಯಮಿ ಹರೀಶ್ ಶೆಣೈ, ಮಹಿಳಾ ಉದ್ಯಮಿ ತೀರ್ಥ ಎಸ್.ಸ್ವಾಮಿ, ವಿಷನ್ ಟೀಮ್ ಆಫ್ ಮೈಸೂರು ಸಂಚಾಲಕಿ ಹೇಮಾ ನಂದೀಶ್, ಮೈಸೂರು ಸಿಹೆಚ್‌ಆರ್‌ಒ ಫೋರು ಮತ್ತು ಎಡಿನ್ ಬ್ರಿಡ್ಜ್ ಫೌಂಡೇಶನ್‌ನ ಬಿ.ಎಂ.ಗೌತಮ್, ಮಲ್ಲಿಗೆ ಸೇವಾ ಟ್ರಸ್ಟ್ ಅಧ್ಯಕ್ಷ ಗೋಪಾಲ್‌ರಾಜೇ ಅರಸ್ ಮತ್ತಿತರರು ಉಪಸ್ಥಿತರಿದ್ದರು.

ವಿದ್ಯಾವರ್ಧಕ ಕಾಲೇಜಲ್ಲಿ ಕಾರ್ಗಿಲ್ ವಿಜಯ್ ದಿವಸ್ ಆಚರಣೆ


ಮೈಸೂರಿನ ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜಿನಲ್ಲಿ ಕಾರ್ಗಿಲ್ ವಿಜಯ್ ದಿವಸ್ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಮೈಸೂರು, ಜು. 28– ಸ್ವಾತಂತ್ರ್ಯಾನಂತರ ಭಾರತದ ವಿರುದ್ಧ ಶತ್ರು ರಾಷ್ಟ್ರಗಳು ಅನೇಕ ಯುದ್ಧಗಳನ್ನು ಸಾರಿವೆ. ಆದರೆ 1999ರಲ್ಲಿ ನಡೆದ ಕಾರ್ಗಿಲ್ ಯುದ್ಧವನ್ನು ಎಂದಿಗೂ ಸಹ ಭಾರತೀಯರು ಮರೆಯಲು ಸಾಧ್ಯವಿಲ್ಲವೆಂದು ಮೇಜರ್ ಡಾ.ಬಿ.ಎಸ್. ಶ್ರೀಹರ್ಷ ಅಭಿಪ್ರಾಯಪಟ್ಟರು.

ಮೈಸೂರಿನ ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜಿನಲ್ಲಿ ಶುಕ್ರವಾರ ಆಯೋಜಿಸಿದ್ದ ಕಾರ್ಗಿಲ್ ವಿಜಯ್ ದಿವಸ್ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿದ್ದ ಅವರು ವಿದ್ಯಾರ್ಥಿಗಳಿಗೆ ಕಾರ್ಗಿಲ್ ವಿಜಯ್‌ದಿವಸ್‌ನ ಮಹತ್ವ ಕುರಿತು ವಿವರಿಸಿದರು. ಕಾರ್ಗಿಲ್ ಘಟನೆಯನ್ನು ಯುದ್ಧವೆಂದು ಕರೆಯಲು ಸಾಧ್ಯವಿಲ್ಲ. ಆದರೂ ಒಂದು ಯುದ್ಧದಲ್ಲಿ ಸಂಭವಿಸಬಹುದಾದ ಎಲ್ಲಾ ದುರಂತಗಳನ್ನೂ ಇಲ್ಲಿ ಕಾಣಬಹುದು. ನೆರೆರಾಷ್ಟ್ರದವರು 1971ರ ಶಿಮ್ಲಾ ಒಪ್ಪಂದವನ್ನು ಮುರಿದು ಭಾರತದ ಕಾರ್ಗಿಲ್–ದ್ರಾಸ್ ಸೆಕ್ಟರ್‌ನ ನೆಲವನ್ನು ಆಕ್ರಮಿಸಿಕೊಳ್ಳಲು ಮಾಡಿದ ಪ್ರಯತ್ನವನ್ನು ಭಾರತೀಯ ಸೈನಿಕರು ಹತ್ತಿಕ್ಕಿ ಭಾರತದ ಕಾರ್ಗಿಲ್ ನೆಲದಲ್ಲಿ ವಿಜಯವನ್ನು ಸ್ಥಾಪಿಸಿದರು. ಈ ದಿನವನ್ನು ಅತ್ಯಂತ ಹೆಮ್ಮೆಯಿಂದ "ಕಾರ್ಗಿಲ್ ವಿಜಯ್ ದಿವಸ್" ಎಂದು ಆಚರಿಸಿ, ದೇಶಕ್ಕಾಗಿ ಮಡಿದ ಸುಮಾರು 1200ಕ್ಕೂ ಅಧಿಕ ವೀರ ಯೋಧರಿಗೆ ನಮನ ಸಲ್ಲಿಸಲಾಗುತ್ತಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ.ಎಸ್.ಮರೀಗೌಡ ಮಾತನಾಡಿ, ಬಡವರು ಮಾತ್ರ ಭಾರತೀಯ ಸೇನೆಗೆ ಸೇರುತ್ತಾರೆ ಎಂದು ಹೇಳುವುದು ಸರಿಯಲ್ಲ. ದೇಶಾಭಿಮಾನ ಹೊಂದಿರುವ ಯಾವುದೇ ವ್ಯಕ್ತಿಯಾದರೂ ಸೇನೆಗೆ ಸೇರಿ ದೇಶ ಸೇವೆಗೆ ಉತ್ಸುಕರಾಗಿರುತ್ತಾರೆ. ವಿದ್ಯಾರ್ಥಿ ಜೀವನದಲ್ಲಿಯೇ ಸೇನೆಯ ಬಗ್ಗೆ ಅಪಾರವಾದ ಗೌರವ ಮತ್ತು ಅಭಿಮಾನವನ್ನು ಹೊಂದಬೇಕು ಎಂದರು.

ಕಾರ್ಗಿಲ್ ಯುದ್ಧದಲ್ಲಿ ಹುತಾತ್ಮರಾದ ಯೋಧರಿಗೆ ಪುಷ್ಪನಮನ ಸಲ್ಲಿಸುವ ಮೂಲಕ ಕಾರ್ಯಕ್ರಮ ಆರಂಭಿಸಲಾಯಿತು. ಅಧ್ಯಾಪಕ ಸಲಹೆಗಾರರಾದ ಡಾ.ಪಿ.ಕೆ.ಗೋವರ್ಧನ್, ಇತರ ಅಧ್ಯಾಪಕರು ಹಾಗೂ ಅಧ್ಯಾಪಕೇತರರು, ಎನ್.ಸಿ.ಸಿ ಕೆಡೆಟ್ಸ್ ಮತ್ತು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಹಾಜರಿದ್ದರು.


ರಂಗ ವೈಭವದಲ್ಲಿ ಹುಟ್ಟುಹಬ್ಬ


ಮೈಸೂರು ಜಿಲ್ಲಾ ಜೆಡಿಎಸ್ ಮುಖಂಡರೂ ಆದ ಶ್ರೀ ಲಕ್ಷ್ಮೀ ನಾರಾಯಣ ಡ್ರಾಮ ಸೀನರಿ ಮಾಲೀಕ ಮುಳ್ಳೂರು ದೇಮಾಜು ಅವರ ಹುಟ್ಟುಹಬ್ಬದ ಪ್ರಯುಕ್ತ ನಾರದ ಪುರಭವನದಲ್ಲಿ ನಡೆದ ಐದು ದಿನಗಳ ರಂಗ ವೈಭವ ಕಾರ್ಯಕ್ರಮದಲ್ಲಿ ಅವರನ್ನು ಅಭಿನಂದಿಸಲಾಯಿತು. ಹಿರಿಯ ಕಲಾವಿದರಾದ ತುಮಕೂರು ಮಂಜಣ್ಣ, ಚೌಡೇಶ್ ಮಳವಳ್ಳಿ, ಕಲ್ಕುಂದ ಲೋಕೇಶ್, ಮೈಸೂರು ಜಿಲ್ಲಾ ಯುವ ಮುಖಂಡರಾದ ಮುರುಡಗಳ್ಳಿ ಮಹದೇವು, ಕಲ್ಲಹಳ್ಳಿ ರಮೇಶ್, ನಾಡನಹಳ್ಳಿ ಸಿದ್ದರಾಜು, ಹೆಬ್ಬಾಳು ವಿಜಿ, ಬೆಳವಾಡಿ ಸ್ವಾಮಿ, ಮದ್ದೂರು ಮಹೇಂದ್ರ, ವಿನೋದ್ ಕೋಟೆ, ಜಟ್ಟಿಹುಂಡಿ ರಾಚಪ್ಪ ಮತ್ತಿತರರು ಉಪಸ್ಥಿತರಿದ್ದರು.

ಇಂದು ವಿಶೇಷ ಉಪನ್ಯಾಸ ಕಾರ್ಯಕ್ರಮ

ಮೈಸೂರು: ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಮೈಸೂರು ವತಿಯಿಂದ ಜುಲೈ 29 ರಂದು ಬೆಳಗ್ಗೆ 11 ಗಂಟೆಗೆ "ಬಿ.ಎಲ್ ರೈಸ್ ಮತ್ತು ಪುರಾತತ್ವ' ಕುರಿತು ಬೆಂಗಳೂರು ವಿಶ್ವವಿದ್ಯಾನಿಲಯದ ರಿಜಿಸ್ಟ್ರಾರ್ ಅನುರಾಧ ಅವರಿಂದ ವಿಶೇಷ ಉಪನ್ಯಾಸವನ್ನು ಆಯೋಜಿಸಲಾಗಿದೆ. ಕಾರ್ಯಕ್ರಮಕ್ಕೆ ಆಸಕ್ತ ಇತಿಹಾಸ ತಜ್ಞರು, ಸಂಶೋಧಕರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಭಾಗವಹಿಸಬಹುದು ಎಂದು ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಆಯುಕ್ತರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ


29.07.2024 ಸೋಮವಾರ, ಮಳೆ ನಕ್ಷತ್ರ: ಪುಷ್ಯ, 20.07.2024ರಿಂದ 02.08.2024
ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಗ್ರೀಷ್ಮ ಋತು, ಆಷಾಢ ಮಾಸ, ಕೃಷ್ಣ ಪಕ್ಷ,
ತಿಥಿ: ನವಮಿ, ನಕ್ಷತ್ರ: ಭರಣಿ, ರಾಹುಕಾಲ: ಬೆಳಗ್ಗೆ 7.30ರಿಂದ 9ರವರೆಗೆ

- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಚರ್ಮರೋಗಿಗಳಿಗೆ ಆಯುರ್ವೇದ ಪಂಚಕರ್ಮ ಪ್ರತ್ಯೇಕ ಚಿಕಿತ್ಸಾ ಶಿಬಿರ. ಸ್ಥಳ: ಆಸ್ಪತ್ರೆ ಆವರಣ, ಆಲನಹಳ್ಳಿ, ಬೆಳಗ್ಗೆ 9 ಗಂಟೆಯಿಂದ.
- **ಮೈಸೂರು ಅಮೃತಾಂಶು ಟ್ರಸ್ಟ್, ನಾರಾಯಣ ಹೃದಯಾಲಯ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆ ಮತ್ತು ಜಿಲ್ಲಾ ಅಂಧತ್ವ ನಿಯಂತ್ರಣ ಸಂಸ್ಥೆ, ಮೈಸೂರು ಜಿಲ್ಲಾ ಸರ್ಕಾರಿ ನೇತ್ರ ಚಿಕಿತ್ಸಾ ಘಟಕ (ಕೆ.ಆರ್. ಆಸ್ಪತ್ರೆ) :** ಉಚಿತ ಕಣ್ಣಿನ ತಪಾಸಣೆ ಮತ್ತು ಶಸ್ತ್ರಚಿಕಿತ್ಸಾ ಶಿಬಿರ, ಸ್ಥಳ: #2767, ಪಾಂಚಜನ್ಯ, 5ನೇ ಮೇನ್, ಮೇದರಕೇರಿ, ಚಾಮುಂಡಿಪುರಂ, ಬೆಳಗ್ಗೆ 9 ಗಂಟೆಯಿಂದ.
- **ಕಾವೇರಿ ಸಮೂಹ ವಿದ್ಯಾ ಸಂಸ್ಥೆ:** ಸೈನೋಸೈಟಿಸ್ ಮತ್ತು ತಲೆನೋವಿ(ನಾನಾ ವಿಧ)ಗೆ ಉಚಿತ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಕೆಬಿಎಲ್ ಲೇಔಟ್, ದೇವೇಗೌಡ ಸರ್ಕಲ್ ಬಳಿ, ಬೆಳಗ್ಗೆ 10ರಿಂದ ಸಂಜೆ 4 ಗಂಟೆವರೆಗೆ.
- **ಶ್ರೀ ಚಾಮುಂಡೇಶ್ವರಿ ದೇವಸ್ಥಾನ :** ಚಾಮುಂಡೇಶ್ವರಿ ಅಮ್ಮನವರ ಹಬ್ಬ ಮತ್ತು ಅಮ್ಮನವರ ಉತ್ಸವ, ಬೆಳಗ್ಗೆ 9 ಗಂಟೆಯಿಂದ ಗಣಪತಿ ಪೂಜೆ, ನವಗ್ರಹ ಮತ್ತು ಮೃತ್ಯುಂಜಯ ಪೂಜೆ, 11 ಗಂಟೆಗೆ ಗಣಪತಿ ಪೂಜೆ, ನವಗ್ರಹ, ಮೃತ್ಯುಂಜಯ ದುರ್ಗಾ ಹೋಮ, ಮಧ್ಯಾಹ್ನ 12.30ಕ್ಕೆ ಪೂರ್ಣಾಹುತಿ, ಮಧ್ಯಾಹ್ನ 2.10ರಿಂದ 2.50ರವರೆಗೆ ದೇವಸ್ಥಾನದಿಂದ ಅಮ್ಮನವರ ಉತ್ಸವ ಆರಂಭ, ಸಂಜೆ 6 ಗಂಟೆಗೆ ತಿಪ್ಪಾಜಿ ಕೊಳದಿಂದ ಅಮ್ಮನವರ ಮೆರವಣಿಗೆ, ಡೊಳ್ಳು ಕುಣಿತ, ವೀರಗಾಸೆ, ಕಳಸ ಹೊಂಬಾಳೆ ಮೆರವಣಿಗೆ, ಸ್ಥಳ: ದೇವಸ್ಥಾನದ ಆವರಣ, ಹೆಬ್ಬಾಳು.
- **ಮೈಸೂರು ವಿಶ್ವವಿದ್ಯಾನಿಲಯ :** ಸಂಸ್ಥಾಪನಾ ದಿನಾಚರಣೆ, ಉಪನ್ಯಾಸ: 'ಜಾಯ್ ಆಫ್ ಲಿವಿಂಗ್' ಕುರಿತು ಬೆಂಗಳೂರಿನ ಸೃಜನಶೀಲ ಅಧ್ಯಾಪಕ ಕೇಂದ್ರ ಅಧ್ಯಕ್ಷ ಡಾ.ಗುರುರಾಜ ಕರಜಗಿ, ಅಧ್ಯಕ್ಷತೆ: ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್, ಸ್ಥಳ: ಕ್ರಾಫರ್ಡ್ ಭವನ, ಮೈಸೂರು ವಿವಿ, ಬೆಳಗ್ಗೆ 11ಕ್ಕೆ.
- **ಸಿತಾರ ಐಟಿ ಇನೋವೇಶನ್ಸ್ ಪ್ರೈ ಲಿ. :** ಏಷ್ಯಾದಲ್ಲಿ ಮೊದಲ ಬಾರಿಗೆ ಅಭಿವೃದ್ಧಿಪಡಿಸಲಾದ ವಿಶಿಷ್ಟ ಬ್ಯಾಂಕಿಂಗ್ ವೆಬ್ ಅಪ್ಲಿಕೇಶನ್ ಸಾಫ್ಟ್‌ವೇರ್ ಅನಾವರಣ, ಉದ್ಘಾಟನೆ: ಶಾಸಕ ಟಿ.ಎಸ್.ಶ್ರೀವತ್ಸ, ಆಶೀರ್ವಾದ: ಆದಿಚುಂಚನಗಿರಿ ಮೈಸೂರು ಶಾಖಾ ಮಠದ ಶ್ರೀ ಸೋಮೇಶ್ವರನಾಥ ಸ್ವಾಮೀಜಿ, ಸ್ಥಳ: ಸೋಹೋ ಬೋಟಿಕ್ ಹೋಟೆಲ್, ನ್ಯೂ ಕಾಂತರಾಜ ಅರಸ್ ರಸ್ತೆ, ಬೆಳಗ್ಗೆ 11.30ಕ್ಕೆ.
- **ಗೋಪಾಲಗೌಡ ಶಾಂತವೇರಿ ಸ್ಮಾರಕ ಆಸ್ಪತ್ರೆ :** ಉಚಿತ ಆರೋಗ್ಯ ತಪಾಸಣಾ ಶಿಬಿರ, ಸ್ಥಳ: ಗ್ಯಾಸ್ಟ್ರೋ ಓಪಿಡಿ ಕೊಠಡಿ ಸಂಖ್ಯೆ 10, ಆಸ್ಪತ್ರೆ ಆವರಣ, ಬೆಳಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆ, ಮಧ್ಯಾಹ್ನ 3ರಿಂದ 4 ಗಂಟೆವರೆಗೆ.
- **ಸಿಎಸ್‌ಐಆರ್–ಸೆಂಟ್ರಲ್ ಫುಡ್ ಟೆಕ್ನಾಲಜಿಕಲ್ ರಿಸರ್ಚ್ ಇನ್‌ಸ್ಟಿಟ್ಯೂಟ್ ಮತ್ತು ಸಿಎಫ್‌ಟಿಆರ್‌ಐ ಎಸ್‌ಸಿ, ಎಸ್‌ಟಿ ನೌಕರರ ಕ್ಷೇಮಾಭಿವೃದ್ಧಿ ಸಂಘ :** ಡಾ.ಬಿ.ಆರ್.ಅಂಬೇಡ್ಕರ್ ಅವರ 133ನೇ ಜಯಂತ್ಯುತ್ಸವ, ಉದ್ಘಾಟನೆ ಮತ್ತು ವಿಶೇಷ ಭಾಷಣ: ಇತಿಹಾಸಕಾರ ಪ್ರೊ.ರಾಮಚಂದ್ರ ಗುಹಾ, ಅಧ್ಯಕ್ಷತೆ: ಸಿಎಸ್‌ಐಆರ್–ಸಿಎಫ್‌ಟಿಆರ್‌ಐ ನಿರ್ದೇಶಕಿ ಡಾ.ಶ್ರೀದೇವಿ ಅನ್ನಪೂರ್ಣಸಿಂಗ್, ಸ್ಥಳ: ಸಿಎಫ್‌ಟಿಆರ್‌ಐ ಆವರಣ, ಮಧ್ಯಾಹ್ನ 2.30ಕ್ಕೆ.
- **ಓಟಿಕೇರ್ ಸ್ಪೀಚ್ ಅಂಡ್ ಹಿಯರಿಂಗ್ ಆಸ್ಪತ್ರೆ :** ಉಚಿತ ಕಿವಿ ಪರೀಕ್ಷೆ, ಸ್ಥಳ: ಆಸ್ಪತ್ರೆ ಆವರಣ, ರಾಮಾನುಜ ರಸ್ತೆ, ಬೆಳಗ್ಗೆ 10ರಿಂದ ಮಧ್ಯಾಹ್ನ 3 ಗಂಟೆವರೆಗೆ.
- **ಗಣಪತಿ ಸಚ್ಚಿದಾನಂದ ಆಶ್ರಮ :** ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಮತ್ತು ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿ ಅವರಿಂದ 21ನೇ ಚಾತುರ್ಮಾಸ್ಯ ವ್ರತದೀಕ್ಷಾ ಮಹೋತ್ಸವ, ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿಯವರ ಆಗಮನ, ಬೆಳಗ್ಗೆ 6 ಗಂಟೆಯಿಂದ ಸಂಜೆ 6 ಗಂಟೆವರೆಗೆ ಶ್ರೀ ಸ್ವಾಮೀಜಿಯವರ ಏಕಾದಶಿ ಮೌನವ್ರತ, ಸ್ಥಳ: ಗಣಪತಿ ಸಚ್ಚಿದಾನಂದ ಆಶ್ರಮ.
- **ಋಷಿ ಸಂಸ್ಕೃತಿ ವಿದ್ಯಾ ಕೇಂದ್ರ ಟ್ರಸ್ಟ್ :** ಸಿದ್ಧ ಸಮಾಧಿ ಯೋಗ ಶಿಬಿರ, ಸ್ಥಳ: ಋಷಿ ಸಂಸ್ಕೃತಿ ವಿದ್ಯಾ ಕೇಂದ್ರ, ಕುವೆಂಪುನಗರ, ಸಂಜೆ 6 ಗಂಟೆಯಿಂದ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10–ಚಿಂತನ–ಮಂಜುನಾಥ ಪಿ.ಚಡಗ, 6.15–ಗೀತಾರಾಧನ, 6.35 ಮತ್ತು ಸಂಜೆ 6.10: ಅಂಚೆ–ಅಂಕನ–ಆಕಾಶವಾಣಿ ಅಂಕಣ, ಪ್ರಸ್ತುತಿ: ಡಾ.ಅಮ್ಮಸಂದ್ರ ಸುರೇಶ ಹಾಗೂ ಎಂ.ಎನ್. ವಿಜಯಲಕ್ಷ್ಮಿ, ಪ್ರಾಯೋಜಕರು: ಭಾರತೀಯ ಅಂಚೆ, ಮೈಸೂರು ವಿಭಾಗ, 6.40–ಅರಿವಿನ ಶಿಖರ: ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ: ಡಿ.ಪುರುಷೋತ್ತಮ್ ಮತ್ತು ಕೆ.ಶ್ರೇಯಾ, ವ್ಯಾಖ್ಯಾನ: ಡಾ.ಜಿ.ಆರ್.ತಿಪ್ಪೇಸ್ವಾಮಿ, 6.50–ರೈತರಿಗೆ ಸಲಹೆ, 7.15–ಭಾವಗೀತೆಗಳು, 9.00–ರಾಷ್ಟ್ರೀಯ ಬಾಹ್ಯಾಕಾಶ ದಿನದ ಸಂದರ್ಭದಲ್ಲಿ ವಿಶೇಷ ಕಾರ್ಯಕ್ರಮ ಸರಣಿ, "ಬಾಹ್ಯಾಕಾಶ ವಿಸ್ಮಯ", 9.15–ನೆನಪಿನಂಗಳ (ಧ್ವನಿ ಭಂಡಾರದಿಂದ) ಹಿರಿಯ ರಂಗಕಲಾವಿದ ಹಾಗೂ ಚಲನಚಿತ್ರ ನಟ ಸದಾಶಿವ ಬ್ರಹ್ಮಾವರ್ ಅವರೊಂದಿಗೆ ಎನ್.ವಿ.ರಮೇಶ್ ಅವರು ನಡೆಸಿ ರುವ ಸಂವಾದ. 10.00–ಕರ್ನಾಟಕ ಶಾಸ್ತ್ರೀಯ ಸಂಗೀತ: ಅನಂತಪದ್ಮನಾಭನ್–ವೀಣಾ ವಾದನ, 11.00–ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ನೇರ ಫೋನ್ ಇನ್ ಕಾರ್ಯಕ್ರಮ–ಗೇಮ್ ಶೋ, ಪ್ರಸ್ತುತಿ: ದಿಗ್ವಿಜಯ್. ಬಿ ಮತ್ತು ಕೀರ್ತನಾ. ವಿ, 12.30–ದೇವರನಾಮ, 12.45–ನಮ್ಮ ಆರೋಗ್ಯ– ವಿಶ್ವ ಸ್ತನ್ಯಪಾನ ಸಪ್ತಾಹದ ಸಂದರ್ಭದಲ್ಲಿ 'ಸ್ತನ್ಯಪಾನದ ಮಹತ್ವ ಮತ್ತು ಅಗತ್ಯ' ಕುರಿತು ಮಾಹಿತಿ ನೀಡಲಿದ್ದಾರೆ ಇಂಡಿಯನ್ ಅಕಾಡೆಮಿ ಆಫ್ ಪೀಡಿಯಾಟ್ರಿಕ್ಸ್‌ನ ಕರ್ನಾಟಕ ಶಾಖೆಯ ಕಾರ್ಯದರ್ಶಿ ಡಾ.ಶಶಿಕಿರಣ್ ಕೆ.ಬಿ. ಮತ್ತು ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ಹಾಗೂ ಚೆಲುವಾಂಬ ಆಸ್ಪತ್ರೆಯ ಮಕ್ಕಳ ತಜ್ಞರಾದ ಡಾ.ಪ್ರಶಾಂತ್. ಎಂ.ಆರ್. ಇವರೊಂದಿಗೆ ಭಾಗವಹಿಸು ತ್ತಾರೆ: ಬೇದ್ರೆ ಮಂಜುನಾಥ್, 1.20–ಭಾವಗೀತೆಗಳು–ಅಪರ್ಣಾ ಎನ್,. 3.00–ಕರ್ನಾಟಕ ಶಾಸ್ತ್ರೀಯ ಸಂಗೀತ: ಕಾರ್ತಿಕ ವೈದ್ಯನಾಥನ್–ಹಾಡುಗಾರಿಕೆ, 4.00–ಮಹಿಳಾರಂಗ : "ನಾನು ನನ್ನ ಕಂಪನಿ", ವಿಷಯ: ಆಯುರ್ವೇದ ಚಿಕಿತ್ಸಕಿ, ವಸ್ತ್ರ ವಿನ್ಯಾಸಕಿ ಹಾಗೂ ಬ್ಯೂಟಿಷಿಯನ್ ಸುಧಾ ಹೆಗಡೆ ಅವರೊಂದಿಗೆ ಮಾತುಕತೆ. ಪ್ರಸ್ತುತಿ: ಸಹನಾ, 4.45–ಹಿಂದಿ ಪಾಠ – ಶಾಂತಾ. ಡಿ. ಕಿಣಿ , 6.50 ಕೃಷಿರಂಗ : 'ಪಶುಸಂಗೋಪನೆ ಡಿಪ್ಲೋಮಾ ವಿಷಯದಲ್ಲಿ ಇರುವ ಅಧ್ಯಯನ ಮತ್ತು ವೃತ್ತಿಪರ ಅವಕಾಶಗಳು' ಕುರಿತು ಚಾಮರಾಜನಗರ ಜಿಲ್ಲೆ ಗುಂಡ್ಲುಪೇಟೆ ತಾಲೂಕು ಬರಗಿಯಲ್ಲಿರುವ ಸರ್ಕಾರಿ ಪಶುಸಂಗೋಪನಾ ಡಿಪ್ಲೊಮಾ ಕಾಲೇಜಿನ ಪ್ರಾಂಶುಪಾಲರಾದ ಡಾ.ರವಿಕುಮಾರ್. ಸಿ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ: ಬೇದ್ರೆ ಮಂಜುನಾಥ್, 7.45–ಕನ್ನಡದಲ್ಲಿ ಭಾಷಣ: ತ್ಯಾಜ್ಯ ರಹಿತ ಪರಿಸರ–ಆನಂದರಾಜ್ ಅವರೊಂದಿಗೆ ಸಂದರ್ಶನ, ಸಂದರ್ಶಕರು–ನೂತನ್ ಎಸ್.ಕದಂ, 8.15–ಸಂಸತ್ ಸಮೀಕ್ಷಾ, 9.30–ಕರ್ನಾಟಕ ಶಾಸ್ತ್ರೀಯ ಸಂಗೀತ: ಎಂ.ಕೆ.ಸರಸ್ವತಿ–ವೀಣಾವಾದನ, 10.00 ನಾಟಕ, 10.30–ಸವಿನೆನಪು



ಕೃಷ್ಣರಾಜಸಾಗರ ಮತ್ತು ಕಬಿನಿ ಜಲಾಶಯಗಳು

ಭರ್ತಿಯಾಗಿರುವ ಸಮೃದ್ಧಿಯ ಸಂಕೇತದ ಶುಭ ಸಂದರ್ಭದಲ್ಲಿ
ಸನ್ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯ ರವರು
ಹಾಗೂ
ಮಾನ್ಯ ಉಪಮುಖ್ಯಮಂತ್ರಿಗಳಾದ ಶ್ರೀ ಡಿ.ಕೆ. ಶಿವಕುಮಾರ್ ರವರಿಂದ

ಶ್ರೀ ಕಾವೇರಿ ಮಾತೆಗೆ ಪೂಜೆ ಹಾಗೂ ಬಾಗಿನ ಸಮರ್ಪಣೆ

ಕಾವೇರಿ ನ್ಯಾಯಾಧೀಕರಣದಂತೆ ತಮಿಳುನಾಡಿಗೆ ಬಿಳಿಗುಂಡ್ಲುವಿನಲ್ಲಿ ಹರಿಸಬೇಕಾದ ನೀರಿನ ಪ್ರಮಾಣ ಹಾಗೂ ವಾಸ್ತವವಾಗಿ ಹರಿಸಿದ ನೀರಿನ ಪ್ರಮಾಣದ ವಿವರಗಳು

ಕಳೆದ 6 ವರ್ಷಗಳಲ್ಲಿ

ಜಲವರ್ಷ	ಕಾವೇರಿ ನ್ಯಾಯಾಧೀಕರಣದಂತೆ ಹರಿಸಬೇಕಾದ ನೀರಿನ ಪ್ರಮಾಣ (ಟಿ.ಎಂ.ಸಿ)	ವಾಸ್ತವವಾಗಿ ಬಿಳಿಗುಂಡ್ಲುವಿನಲ್ಲಿ ಹರಿಸಿರುವ ನೀರಿನ ಪ್ರಮಾಣ (ಸಿ.ಡಬ್ಲ್ಯೂ.ಸಿ ಯ ಮಾಪನದ ಪ್ರಕಾರ) (ಟಿ.ಎಂ.ಸಿ)
2018-19	ದಿ: 16.02.2018 ರ ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ 177.250	404.444
2019-20		275.40
2020-21		211.316
2021-22		281.084
2022-23		667.533
2023-24		81.417

ಪ್ರಸಕ್ತ ಜಲವರ್ಷದಲ್ಲಿ (2024-25)

ತಿಂಗಳು	ಕಾವೇರಿ ನ್ಯಾಯಾಧೀಕರಣದಂತೆ ಮಾಸಿಕವಾರು ಹರಿಸಬೇಕಾದ ನೀರಿನ ಪ್ರಮಾಣ (ಟಿ.ಎಂ.ಸಿ)	ವಾಸ್ತವವಾಗಿ ಬಿಳಿಗುಂಡ್ಲುವಿನಲ್ಲಿ ಮಾಸಿಕವಾರು ಹರಿಸಿರುವ ನೀರಿನ ಪ್ರಮಾಣ (ಸಿ.ಡಬ್ಲ್ಯೂ.ಟಿ ಯ ಮಾಪನದ ಪ್ರಕಾರ) (ಟಿ.ಎಂ.ಸಿ)
ಜೂನ್ 2024	9.19	2.252
ಜುಲೈ 2024	28.21 (28.07.2024)	67.748
28 ಜುಲೈ 2024ರ ಸಂಚಿತ ಅವಧಿಗೆ	37.40	70.00

ಕೃಷ್ಣರಾಜಸಾಗರ ಜಲಾಶಯಕ್ಕೆ ಬಾಗಿನ ಸಮರ್ಪಣೆ ಕಾರ್ಯಕ್ರಮ

ದಿನಾಂಕ : 29.07.2024, ಸೋಮವಾರ, ಬೆಳಿಗ್ಗೆ 11.00 ಗಂಟೆಗೆ
ಸ್ಥಳ : ಕೃಷ್ಣರಾಜಸಾಗರದ ಶ್ರೀ ಕಾವೇರಿ ಮಾತೆ ಪ್ರತಿಮೆಯ ಬಳಿ

ಘನ ಉಪಸ್ಥಿತಿ

ಶ್ರೀ ಹೆಚ್.ಡಿ. ಕುಮಾರಸ್ವಾಮಿ
ಮಾನ್ಯ ಕೇಂದ್ರ ಸಚಿವರು, ಬೃಹತ್ ಕೈಗಾರಿಕೆ ಹಾಗೂ ಉಕ್ಕು ಇಲಾಖೆ, ಭಾರತ ಸರ್ಕಾರ

ಶ್ರೀ ಎನ್. ಚಲುವರಾಯಸ್ವಾಮಿ
ಮಾನ್ಯ ಸಚಿವರು, ಕೃಷಿ ಇಲಾಖೆ
ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರು

ಶ್ರೀ ಎನ್.ಎಸ್. ಬೋಸರಾಜು
ಮಾನ್ಯ ಸಚಿವರು, ಸಣ್ಣ ನೀರಾವರಿ ಹಾಗೂ ವಿಜ್ಞಾನ, ತಂತ್ರಜ್ಞಾನ ಇಲಾಖೆ
ಕೊಡಗು ಜಿಲ್ಲಾ ಉಸ್ತುವಾರಿ ಸಚಿವರು

ಶ್ರೀ ಕೆ. ವೆಂಕಟೇಶ್
ಮಾನ್ಯ ಸಚಿವರು, ಪಶುಸಂಗೋಪನೆ ಮತ್ತು ರೇಷ್ಮೆ ಇಲಾಖೆ
ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವರು

ಅಧ್ಯಕ್ಷತೆ:

ಶ್ರೀ ರಮೇಶ್ ಬಾಬು ಬಂಡಿ ಸಿದ್ದೇಗೌಡ
ಮಾನ್ಯ ಶಾಸಕರು
ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರ



ಮಾನ್ಯ ಜಲ ಸಂಪನ್ಮೂಲ ಸಚಿವರಾದ **ಶ್ರೀ ಡಿ.ಕೆ. ಶಿವಕುಮಾರ್** ರವರು ಮಾನ್ಯ ಕೃಷಿ ಸಚಿವರಾದ **ಶ್ರೀ ಚಲುವರಾಯಸ್ವಾಮಿ** ಯವರೊಂದಿಗೆ ಕೆ.ಆರ್.ಎಸ್. ಜಲಾಶಯವನ್ನು ವೀಕ್ಷಿಸುತ್ತಿರುವುದು.

ಕಬಿನಿ ಜಲಾಶಯಕ್ಕೆ ಬಾಗಿನ ಸಮರ್ಪಣೆ ಕಾರ್ಯಕ್ರಮ

ದಿನಾಂಕ : 29.07.2024, ಸೋಮವಾರ, ಅಪರಾಹ್ನ 3.00 ಗಂಟೆಗೆ
ಸ್ಥಳ : ಕಬಿನಿ ಜಲಾಶಯ, ಬೀಚನಹಳ್ಳಿ, ಹೆಗ್ಗಡೆದೇವನಕೋಟೆ ತಾಲ್ಲೂಕು, ಮೈಸೂರು ಜಿಲ್ಲೆ

ಘನ ಉಪಸ್ಥಿತಿ

ಶ್ರೀ ಹೆಚ್.ಡಿ. ಕುಮಾರಸ್ವಾಮಿ
ಮಾನ್ಯ ಕೇಂದ್ರ ಸಚಿವರು, ಬೃಹತ್ ಕೈಗಾರಿಕೆ ಹಾಗೂ ಉಕ್ಕು ಇಲಾಖೆ, ಭಾರತ ಸರ್ಕಾರ

ಶ್ರೀ ಹೆಚ್.ಸಿ. ಮಹದೇವಪ್ಪ
ಮಾನ್ಯ ಸಚಿವರು, ಸಮಾಜ ಕಲ್ಯಾಣ ಇಲಾಖೆ
ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರು

ಶ್ರೀ ಎನ್.ಎಸ್. ಬೋಸರಾಜು
ಮಾನ್ಯ ಸಚಿವರು, ಸಣ್ಣ ನೀರಾವರಿ ಹಾಗೂ ವಿಜ್ಞಾನ, ತಂತ್ರಜ್ಞಾನ ಇಲಾಖೆ
ಕೊಡಗು ಜಿಲ್ಲಾ ಉಸ್ತುವಾರಿ ಸಚಿವರು

ಶ್ರೀ ಕೆ. ವೆಂಕಟೇಶ್
ಮಾನ್ಯ ಸಚಿವರು, ಪಶುಸಂಗೋಪನೆ ಮತ್ತು ರೇಷ್ಮೆ ಇಲಾಖೆ
ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವರು

ಅಧ್ಯಕ್ಷತೆ:

ಶ್ರೀ ಸಿ. ಅನಿಲ್ ಕುಮಾರ್
ಮಾನ್ಯ ಶಾಸಕರು
ಹೆಗ್ಗಡೆದೇವನಕೋಟೆ ವಿಧಾನಸಭಾ ಕ್ಷೇತ್ರ



ಮಾನ್ಯ ಸಮಾಜ ಕಲ್ಯಾಣ ಇಲಾಖೆ ಸಚಿವರಾದ **ಶ್ರೀ ಹೆಚ್. ಸಿ. ಮಹದೇವಪ್ಪ** ರವರು ಮಾನ್ಯ ಜಲ ಸಂಪನ್ಮೂಲ ಸಚಿವರಾದ **ಶ್ರೀ ಡಿ.ಕೆ. ಶಿವಕುಮಾರ್** ರವರೊಂದಿಗೆ ಸಮಾರಂಭವೊಂದರಲ್ಲಿ ಭಾಗವಹಿಸಿರುವುದು.

ಮುಖ್ಯ ಅತಿಥಿಗಳು

ಮಾನ್ಯ ಲೋಕಸಭಾ ಮತ್ತು ರಾಜ್ಯಸಭಾ ಸದಸ್ಯರುಗಳು, ವಿಧಾನಸಭಾ ಮತ್ತು ವಿಧಾನ ಪರಿಷತ್ ಸದಸ್ಯರುಗಳು, ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳು, ನಿಗಮ ಮಂಡಳಿ ಅಧ್ಯಕ್ಷರುಗಳು ಹಾಗೂ ಎಲ್ಲಾ ಚುನಾಯಿತ ಜನಪ್ರತಿನಿಧಿಗಳು

ನುಡಿದಂತೆ ನಡೆದಿದ್ದೇವೆ...

ಶಕ್ತಿ – ಮಹಿಳೆಯರಿಗೆ ಬಸ್ ಪ್ರಯಾಣ ಉಚಿತ | ಗೃಹ ಜ್ಯೋತಿ – ಪ್ರತಿ ಮನೆಗೆ 200 ಯೂನಿಟ್‌ವರೆಗೆ ವಿದ್ಯುತ್ ಉಚಿತ | ಅನ್ನಭಾಗ್ಯ – 10 kg | ಗೃಹಲಕ್ಷ್ಮಿ – ₹2000 | ಯುವನಿಧಿ – ಪ್ರತಿ ತಿಂಗಳು ನಿರುದ್ಯೋಗ ಭತ್ಯೆ ₹3000 ₹1500

ಸರ್ವರಿಗೂ ಆದರದ ಸುಸ್ವಾಗತ

ಶ್ರೀ ಗೌರವ್ ಗುಪ್ತ, ಭಾ.ಆ.ಸೇ
ಅಪರ ಮುಖ್ಯ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ

ಶ್ರೀ ಕೃಷ್ಣಮೂರ್ತಿ ಬಿ. ಕುಲಕರ್ಣಿ, ಕೆ.ಇ.ಎಸ್.
ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ

ಶ್ರೀ ಮಹೇಶ, ಕೆ.ಇ.ಎಸ್.
ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ

ನಾಡಿನ ನೈಸರ್ಗಿಕ ಪರಿಸರವನ್ನೊಳಗೊಂಡ ಅರಣ್ಯಗಳು, ಸರೋವರಗಳು, ನದಿಗಳು ಹಾಗೂ ವನ್ಯ ಜೀವಿಗಳನ್ನು ಸಂರಕ್ಷಿಸುವುದು ಹಾಗೂ ಉತ್ತಮಗೊಳಿಸುವುದು ಪ್ರತಿಯೊಬ್ಬ ನಾಗರೀಕನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ.

ನಕ್ಕರೆ ಅದೇ ಸ್ವರ್ಗ

ಸೊಸೆ ಬುಕ್ ನೋಡಿ ಅಡುಗೆ ಮಾಡುತ್ತಿದ್ದಳು
ಅತ್ತೆ : ಏನಮ್ಮ ಚಪಾತಿ ಹಿಟ್ಟಿನ ಮೇಲೆ 'ದೇವರ ಗಂಟೆ' ಇಟ್ಟಿದ್ದೀಯ?
ಸೊಸೆ : ಬುಕ್‌ನಲ್ಲಿ ಕೊಟ್ಟಿದ್ದಾರೆ ಅತ್ತೆ ಹಿಟ್ಟು ಕಲಸಿ ಒಂದು ಗಂಟೆ ಇಡಿ ಅಂತ!

ಮೈಸೂರು ಮಿತ್ರ

ಸೋಮವಾರ, 29 ಜುಲೈ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ..........

ಸಮುದ್ರದಲ್ಲಿ ಸ್ನಾನಕ್ಕೆಂದೇ ಬೇರೆ ತೆರೆಗಳಿರುವುದಿಲ್ಲ. ಬಂದ ತೆರೆಗಳಿಗೆ ತಲೆಕೊಡ್ಡಿ ಸ್ನಾನ ಮುಗಿಸಬೇಕು. ಹಾಗೆಯೇ ಬದುಕಿನಲ್ಲಿ ಖುಷಿಗೆಂದೇ ಬೇರೆ ದಿನಗಳಿರುವುದಿಲ್ಲ, ಎಲ್ಲಾ ದಿನಗಳಲ್ಲಿ ಖುಷಿ ಪಡೆಯಲು ಸಾಧ್ಯವಿದೆ. ಅದನ್ನು ಅನುಭವಿಸುವ ಮನಸ್ಸು ನಮ್ಮದಾಗಬೇಕು.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಹಲ್ಲಿದ್ದಾಗ ಕಡಲೆ ತಿನ್ನಬೇಕು, ಹರೆಯವಿದ್ದಾಗ ಹಣ ಗಳಿಸಬೇಕು

ನಿಮ್ಮ ಪತ್ರಗಳು

■ ಮುಡಾ ಬದಲು ರಾಜಕಾರಣಿಗಳ ಅಭಿವೃದ್ಧಿ ಪ್ರಾಧಿಕಾರವೆಂದು ಹೆಸರಿಡಲಿ

ಮಾನ್ಯರೆ,

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ವನ್ನು ಇನ್ನು ಮುಂದೆ "ರಾಜಕಾರಣಿಗಳ ಅಭಿವೃದ್ಧಿ ಪ್ರಾಧಿಕಾರ ಎಂದು ಬದಲಿಸುವುದು ಸೂಕ್ತ.



ಏಕೆಂದರೆ ಜನಸಾಮಾನ್ಯರಿಗಿಂತ ಬಹುತೇಕ ರಾಜಕಾರಣಿಗಳೇ ಹೆಚ್ಚು ಫಲಾನುಭವಿಗಳಾಗಿರುವುದರಿಂದ ಈ ಹೆಸರೇ ಸಮಂಜಸವಾಗಿದೆ. ಇದಕ್ಕೆ ಪುಷ್ಟಿ ನೀಡುವಂತೆ ಯಾವ ರಾಜಕಾರಣಿಗಳು ಎಷ್ಟೆಷ್ಟು ಪ್ರಮಾಣದಲ್ಲಿ ನಿವೇಶನ ಪಡೆದಿದ್ದಾರೆ ಎಂಬುದು ಈಗ ಬಹಿರಂಗವಾಗಿದೆ. ಎಕರೆಗಟ್ಟಲೆ, ಗುಂಟೆಗಟ್ಟಲೆ, ಡಜನ್‌ಗಟ್ಟಲೆ ನಿವೇಶನ ಪಡೆದಿರುವ ವಿವರಗಳಲ್ಲಿ ರಾಜಕೀಯ ಮುಖಂಡರ ಹೆಸರೇ ವಿಜೃಂಭಿಸುತ್ತಿರುವುದರಿಂದ ಇದು ಮಂತ್ರಿ, ಶಾಸಕರು ಹಾಗೂ ರಾಜಕಾರಣಿಗಳ "ಪ್ರೈವೇಟ್ ಲಿಮಿಟೆಡ್" ಆಗಿ ಪರಿವರ್ತನೆ ಆದಂತೆ ಕಂಡುಬರುತ್ತಿದೆ. ಕಳೆದ 30 ವರ್ಷದಿಂದ ಸುಮಾರು 85 ಸಾವಿರಕ್ಕೂ ಹೆಚ್ಚು ಮಂದಿ ನಿವೇಶನಕ್ಕೆ ಅರ್ಜಿ ಸಲ್ಲಿಸಿ ಚಾತಕ ಪಕ್ಷಿಗಳಂತೆ ಕಾಯುತ್ತಿದ್ದಾರೆ. ಕೆಲವರು ಮುಡಾ ಕಚೇರಿಗೆ ಅಲೆದು ಅಲೆದು ದಿವಂಗತರೂ ಆಗಿದ್ದಾರೆ. ಆದರೆ ಬಡವರಿಗೆ ಕೊಡಲು ಪಾಪ ನಮ್ಮ ಮುಡಾದಲ್ಲಿ ನಿವೇಶನಗಳಿಲ್ಲ. ರಾಜಕೀಯ ವ್ಯಕ್ತಿಗಳಿಗೆ ಮಾತ್ರ ಎಕರೆಗಟ್ಟಲೆ ನೀಡಿರುವ ಒಳಮರ್ಮ ಏನೆಂಬುದು ನಿಗೂಢ ರಹಸ್ಯವೇ ಸರಿ. 30 ವರ್ಷದ ಅವಧಿಯಲ್ಲಿ ಮೈಸೂರು ನಗರ ವ್ಯಾಪಕವಾಗಿ ಬೆಳೆದಿದೆ. ಎಲ್ಲಿ ನೋಡಿದರೂ ಖಾಸಗಿ ಲೇಔಟ್‌ಗಳದ್ದೆ ಕಾರುಬಾರು. ಮನಬಂದಂತೆ ದರ ನಿಗದಿ ಮಾಡಿರುವ ಈ ಭೂಮಾಫಿಯಾ ದಂಧೆಯಿಂದ ಜನಸಾಮಾನ್ಯ ನಿವೇಶನ ಹೊಂದುವುದು ಮರೀಚಿಕೆಯೇ ಸರಿ. ಮುಡಾ ಎಂಬುದು ರಾಜಕೀಯ ವ್ಯಕ್ತಿಗಳ ಪ್ರಧಾನ ಕಚೇರಿ ಆಗಿದೆ. ಶ್ರೀಸಾಮಾನ್ಯನಿಗೆ ಒಂದು ನೀತಿ, ರಾಜಕೀಯ ವ್ಯಕ್ತಿಗಳಿಗೆ ಇನ್ನೊಂದು ಎಂಬ ದ್ವಿಮುಖ ನೀತಿ ಅನುಸರಿಸುತ್ತಿರುವುದು ಇತ್ತೀಚಿನ ವಿದ್ಯಮಾನಗಳಿಂದ ರುಜುವಾತಾಗಿದೆ. **–ಹೆಚ್.ಆರ್.ಪ್ರಸಾದ್, ವಿವೇಕಾನಂದನಗರ, ಮೈಸೂರು.**

■ ರೈತರ ಸಂಕಷ್ಟಕ್ಕೆ ಪರಿಹಾರ ಒದಗಿಸಿ

ಮಾನ್ಯರೆ,

ಕಳೆದ ವರ್ಷ ಭೀಕರ ಬರಗಾಲದಿಂದ ಸಂಕಷ್ಟ ಮತ್ತು ಹಾನಿಯನ್ನು ಕಂಡ ರೈತರು ಈ ಕಹಿ ಅನುಭವದಿಂದ ಹೊರ ಬರುವ ಮುನ್ನವೇ ಮತ್ತೆ ಆಘಾತ ಅನುಭವಿಸುತ್ತಿದ್ದು ದಿಕ್ಕು ತೋಚದಂತಾಗಿದ್ದಾರೆ. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕಳೆದ ಹಲವು ದಿನಗಳಿಂದ ಸುರಿಯುತ್ತಿರುವ ಭಾರಿ ಮಳೆಯಿಂದಾಗಿ ಜಮೀನುಗಳು ಜಲಾವೃತಗೊಂಡು ರೈತರಿಗೆ ಅಪಾರ ಪ್ರಮಾಣದ ನಷ್ಟ ಉಂಟಾಗಿದೆ.

ಇನ್ನೂ ಕೆಲವಡೆ ಮಳೆ ಸಮಾಧಾನಕರ. ಇನ್ನೂ ಕೆಲವು ದಿನ ಮಳೆ ಮುಂದುವರೆಯುವ ಸಾಧ್ಯತೆಯನ್ನು ಹವಾಮಾನ ಇಲಾಖೆ ವ್ಯಕ್ತಪಡಿಸುತ್ತಿರುವುದರಿಂದ ಪರಿಸ್ಥಿತಿ ಮತ್ತಷ್ಟು ಶೋಚನೀಯವಾಗಬಹುದು. ವಾರದಿಂದ ರಾಜ್ಯದಲ್ಲಿ ವಾಡಿಕೆಗಿಂತ ಬಹುತೇಕ ಜಿಲ್ಲೆಗಳಲ್ಲಿ ಭಾರಿ ಮಳೆಯಾಗಿದೆ. ಇಂಥ ಸಂಕಷ್ಟದ ಸಂದರ್ಭದಲ್ಲಿ ಸರ್ಕಾರದಿಂದ ಶೀಘ್ರ ಸ್ಪಂದನೆ ದೊರೆಯಬೇಕು. ಸ್ಥಳೀಯ ಆಡಳಿತ ಎಚ್ಚೆತ್ತುಕೊಂಡು ರೈತರ ನೆರವಿಗೆ ಧಾವಿಸಬೇಕು. ಅಧಿಕಾರಿಗಳು ಬೆಳೆ ಹಾನಿ ಕುರಿತಂತೆ ಸರ್ಕಾರಕ್ಕೆ ವರದಿ ಸಲ್ಲಿಸುವ ಮೂಲಕ ನಷ್ಟದ ನಿಖರ ಚಿತ್ರಣವನ್ನು ಒದಗಿಸಬೇಕು. ನಷ್ಟದ ಮೇಲೆ ನಷ್ಟ ಅನುಭವಿಸುತ್ತಿರುವ ರೈತರಿಗೆ ಸೂಕ್ತ ಪರಿಹಾರವನ್ನು ನೀಡುವ ಜೊತೆಗೆ ನಿಮ್ಮೊಂದಿಗೆ ನಾವಿದ್ದೇವೆ ಎಂದು ಆತ್ಮಸ್ಥೈರ್ಯವನ್ನು ಸರ್ಕಾರ ಒದಗಿಸಿ ಮಳೆಯಿಂದ ಅನಾಹುತ ನಡೆದ ಸ್ಥಳಗಳಲ್ಲಿ ಪರಿಹಾರ ಕಾರ್ಯ ತ್ವರಿತವಾಗಿ ನಡೆಯಬೇಕು. ಮತ್ತೆ ರೈತರಿಗೆ ಆತ್ಮಸ್ಥೈರ್ಯ ಪ್ರೋತ್ಸಾಹ ನೀಡುವುದು ಅತ್ಯಗತ್ಯ.
–ಪಿ.ಸಿ.ಕಂಗಾಣಿಸೋಮು, ಕ್ಯಾತಮಾರನಹಳ್ಳಿ ಮೈಸೂರು.

■ ವಾಲ್ಮೀಕಿ ಮಹರ್ಷಿಗೆ ಅಪಮಾನ!

ಮಾನ್ಯರೆ,

ವಾಲ್ಮೀಕಿ ಅಭಿವೃದ್ಧಿ ನಿಗಮಮದಲ್ಲಿ ನಡೆದಿದೆ ಎನ್ನಲಾಗುತ್ತಿರುವ ಹಣದ ದುರುಪಯೋಗವನ್ನು, ಸಾಮಾನ್ಯವಾಗಿ ಎಲ್ಲ ದೃಶ್ಯ ಮಾಧ್ಯಮಗಳಲ್ಲಿ ಮತ್ತು ಪ್ರಿಂಟ್ ಮೀಡಿಯಾಗಳು ಹಾಗೂ ವಿಧಾನಸಭೆಯಲ್ಲಿ ಮುಖ್ಯಮಂತ್ರಿಗಳು, ವಿಧಾನಸಭೆಯ ವಿರೋಧ ಪಕ್ಷದ ನಾಯಕ ಮತ್ತು ಜನಪ್ರತಿನಿಧಿಗಳು, 'ವಾಲ್ಮೀಕಿ ಹಗರಣ–ವಾಲ್ಮೀಕಿ ಹಗರಣ' ಎಂದೇ ಹೇಳುತ್ತಾರೆ. ಇದು ಭಾರತ ಖಂಡಕ್ಕೆ ಮಹಾಭಾರತವನ್ನು ಕೊಡುಗೆಯಾಗಿ ನೀಡಿದ, ಮಹರ್ಷಿ ವಾಲ್ಮೀಕಿಗೆ ನಾವುಗಳು ಮಾಡುತ್ತಿರುವ ಅವಮಾನ, ಅಗೌರವ.

ನಮ್ಮ ಜನಪ್ರತಿನಿಧಿಗಳು ಹೋಗಲಿ, ಅವರ ತಿಳುವಳಿಕೆ ಅಷ್ಟೇ ಇರಬಹುದು, ಆದರೆ ನಮ್ಮ ದೃಶ್ಯ ಮಾಧ್ಯಮಗಳಿಗೆ ಏನಾಗಿದೆ? ಮುಖ್ಯ ವಾರ್ತೆಗಳಲ್ಲೇ ವಾಲ್ಮೀಕಿ ಹಗರಣದಲ್ಲಿ ಸಚಿವ ನಾಗೇಂದ್ರ ಬಂಧನ, ವಾಲ್ಮೀಕಿ ಹಣವನ್ನು ಕಳೆದ ಲೋಕಸಭಾ ಚುನಾವಣೆಯಲ್ಲಿ ದುರುಪಯೋಗ ಮಾಡಿಕೊಂಡ ರಾಜಕಾರಣಿಗಳು, ವಾಲ್ಮೀಕಿ ಹಣ ಆಂಧ್ರಪ್ರದೇಶದ ಬ್ಯಾಂಕ್‌ನಲ್ಲಿ ಪತ್ತೆಯಾಗಿದೆ. ಮಹರ್ಷಿ ವಾಲ್ಮೀಕಿಗೂ ಈ ಹಣಕ್ಕೂ ಸಂಬಂಧವೇನು? ವಾಲ್ಮೀಕಿ, ಅಭಿವೃದ್ಧಿ ನಿಗಮದಲ್ಲಿ ಈ ಹಗರಣ ನಡೆದಿದೆ ಎಂದು ಮಾಧ್ಯಮಗಳು ಇನ್ನು ಮುಂದಾದರೂ ಹೇಳುವಂತಾಗಬೇಕು!
–ಬೂಕನಕೆರೆ ವಿಜೇಂದ್ರ, ಕುವೆಂಪುನಗರ ಮೈಸೂರು.

■ ಚಂದಾ ವಸೂಲಿ ಎಷ್ಟರಮಟ್ಟಿಗೆ ಸರಿ

ಮಾನ್ಯರೆ,

ಸೆಪ್ಟೆಂಬರ್ 7ರಂದು ಬರಲಿರುವ ಗಣಪತಿ ಚತುರ್ಥಿಯನ್ನು ಎಳೆಯ್ರು, ಯುವಜನರ ಬಳಗಗಳು ಸಾರ್ವಜನಿಕ ಸ್ಥಳಗಳಲ್ಲಿ(ಬೀದಿ ಬೀದಿಗಳಲ್ಲಿ) ಪೆಂಡಾಲು ನಿಲ್ಲಿಸಿ, ಪೂಜೆಗೈಯ್ಯುವರು. ಇವುಗಳ ವೆಚ್ಚಕ್ಕಾಗಿ ಭಕ್ತ ಜನರಿಂದ ಹಣ ವಸೂಲಿ ಮಾಡುವ ಪರಿಪಾಠವುಂಟು.

ಈ ವರುಷದ ಚಂದಾ ವಸೂಲಿಗಳು ಈಗ ತಾನೆ ಶುರುವಾಗಿವೆ. ಭಕ್ತಿ & ನಂಬಿಕೆ ಇರುವ ಮಂದಿ ಈ ಬಳಗದ ಸದಸ್ಯರಿಗೆ ತಮ್ಮ ಇಷ್ಟವೆನಿಸಿದ ಕಾಣಿಕೆಗಳನ್ನು ಸಲ್ಲಿಸಿ ಪುಣ್ಯ ಕಟ್ಟಿಕೊಳ್ಳಲು ಅಡ್ಡಿಯಿಲ್ಲ. ಆದರೆ, ಕೆಲವು ಎಳೆಯರ, ಯುವ ತಂಡಗಳಿಗೆ "ಗಣಪತಿ"ಯು ನೆಪಮಾತ್ರವಾಗಿರುತ್ತದೆ. ಇಂತಹ ಎಳೆಯ ವಯಸ್ಸಿನ ಮಂದಿ ಮಾಡುವುದೇನು? ಒಂದಷ್ಟು ರೊಕ್ಕವನ್ನು ಅಮಾಯಕ ಭಕ್ತ ಜನರಿಂದ ಸಂಗ್ರಹಿಸುವುದು. ತರುವಾಯ ಅದನ್ನು ತಮ್ಮ ಸ್ವಂತ ಖಯಾಲಿ ಕುಡಿತ, ಜೂಜು, ಇತರ ಮನರಂಜನೆಗಳಲ್ಲಿ ಹೂಡಿ ಆನಂದಿಸುವುದೇ ಆಗಿರುತ್ತದೆ. ಆದ್ದರಿಂದ, ಜನರು ಇಂತಹ ಚಂದಾ ವಸೂಲಿಯವರ ಬಗ್ಗೆ ಬಹು ವಿವೇಚನೆಯಿಂದ ನಡೆದುಕೊಳ್ಳುವುದು ಯುಕ್ತ. ಇಲ್ಲದಿರೆ, ಮುಂದಿನ ಪ್ರಜೆಗಳನ್ನು ತಪ್ಪು ದಾರಿಗೆ ಜಾರಿಸುವ ಕಾರ್ಯದಲ್ಲಿ ತಾವೂ ಪಾಲುದಾರರಾಗಿರುತ್ತೀರಿ! **–ನೊಂದ ಭಕ್ತರು, ಮೈಸೂರು.**

ನಾಡನ್ನು ಸಮೃದ್ಧಗೊಳಿಸಿದ ಕಾವೇರಿ ತಾಯಿಗೆ ನಮನಗಳು



ಬರಗಾಲದ ಸಂಕಷ್ಟದಿಂದ ಬಸವಳಿದಿದ್ದ ನಾಡಿಗೆ ಕಳೆದ ಒಂದು ತಿಂಗಳ ವರುಣ ದೇವನ ಕೃಪೆಯಿಂದ ಇಳೆಗೆ ತಂಪಾಗಿದೆ. ನಾಡನ್ನು ಸಮೃದ್ಧಗೊಳಿಸಲು ಕಾವೇರಿ ತಾಯಿ ಮೈದುಂಬಿ ಹರಿದಿದ್ದಾಳೆ. ಕನ್ನಡ ನಾಡನ್ನು ಸಮೃದ್ಧಗೊಳಿಸಿ, ನೆರೆಯ ರಾಜ್ಯದ ದಾಹವನ್ನೂ ತೀರಿಸಿ ಸರ್ವರನ್ನೂ ಸಂತೃಪ್ತಿಗೊಳಿಸಿದ ಕಾವೇರಿಗೆ ನಾಡಿನ ಸಮಸ್ತ ಜನರ ಪರವಾಗಿ ಬಾಗಿನ ಅರ್ಪಿಸುವ ಅವಕಾಶ ದೊರೆತಿರುವುದು ನಮ್ಮ ಸೌಭಾಗ್ಯ.

ಬರದ ಸಂಕಷ್ಟಗಳ ನಡುವೆ ಕುಡಿಯುವ ನೀರಿಗೂ ಹಾಹಾಕಾರವನ್ನು ಎದುರಿಸಿದ್ದ ಬೆಂಗಳೂರು ಸೇರಿದಂತೆ ಕಾವೇರಿ ಜಲಾನಯನ ಪ್ರದೇಶದ ಜನರಿಗೆ ವರುಣ ದೇವನ ಕೃಪೆ ಮತ್ತು ತಾಯಿ ಚಾಮುಂಡೇಶ್ವರಿ ದಯೆ ಲಭಿಸಿದೆ. ಮುಂಬರುವ ದಿನಗಳು ಸಮೃದ್ಧಿ ತರುವ ಆಶಾ ಭಾವನೆಯೂ ಈ ಮೂಲಕ ನಮಗೆ ಗೋಚರಿಸಿದೆ.

ಈಗ ಬರ ಕಳೆದು ಬಂದಿರುವ ವರುಣ ಧಾರೆ, ಜನ ಮಾನಸದಲ್ಲಿ ಹರ್ಷದ ಹೊನಲನ್ನು ಹರಿಸಿದೆ. ಈ ಸಂತಸವನ್ನು ಹಂಚಿಕೊಳ್ಳಲು ಹಾಗೂ ತಾಯಿ ಕಾವೇರಿಗೆ ಭಕ್ತಿಯಿಂದ ನಮನ ಸಲ್ಲಿಸಲು, ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದ ನಮ್ಮ ಕಾಂಗ್ರೆಸ್ ಸರ್ಕಾರ ಜುಲೈ 29ರಂದು (ಇಂದು) ಬಾಗಿನ ಸಮರ್ಪಿಸಲಿದೆ. ಲಕ್ಷಾಂತರ ರೈತರಿಗೆ ಜೀವನಾಡಿಯಾಗಿರುವ ಕೃಷ್ಣರಾಜಸಾಗರ ಮತ್ತು ಕಬಿನಿ ಜಲಾಶಯಕ್ಕೆ ತೆರಳಿ ಬಾಗಿನ ಸಮರ್ಪಿಸುವುದು ಎಂದರೆ ಅದು ನಮ್ಮ ಪುಣ್ಯಕಾರ್ಯವೇ ಸರಿ. ಇದೊಂದು ಸುದಿನವಾಗಿದೆ.

ಕಾವೇರಿ ಎಂದರೆ ಕೇವಲ ನದಿಯಲ್ಲ. ಅದು ಒಂದು ಭಕ್ತಿಭಾವ. ಕಾವೇರ ರಾಜನ ಮಗಳಾಗಿ, ಅಗಸ್ತ್ಯ ಮಹರ್ಷಿಗಳ ಪತ್ನಿಯಾಗಿ ಕೊಡಗಿಗೆ ಬಂದ ಕಾವೇರಿ, ತಲಕಾವೇರಿ ಕ್ಷೇತ್ರದ ಬ್ರಹ್ಮಗಿರಿಯಿಂದ ಹರಿದು ಈ ಭಾಗದ ಜನರ ಜೀವನಾಡಿಯಾದಳು. ಅವಳು ಕೊಡಗಿನ ಮಕ್ಕಳಾದ ಕೊಡವರ ಕುಲದೇವತೆಯೂ ಆದಳು. ಅದಕ್ಕಾಗಿ ಕೊಡವರು 'ದೇಶಕೋರ್ ಮಾದೇವಿ, ಕಾವೇರಮ್ಮ ಮಾತಾಯಿ, ಎಂದು ಆಕೆಯನ್ನು ಸ್ಮರಿಸುತ್ತಾರೆ. ಕೊಡವರು ತಮ್ಮ ಉಮ್ಮತ್ತಾಟ್ ನೃತ್ಯದಲ್ಲಿ, "ಕಾವೇರಯಮ್ಮೆ ದೇವಿ ತಾಯೆ ಕಾಪಾಡೆಂಗಳ, ಬಾವಬಟ್ಟೆ ಕೇಟಿಚಾಕ್ ದೇವಿ ತಾಯಿಯೆ" ಎಂದು ಹಾಡಿ ನಲಿಯುತ್ತಾರೆ. ಕೊಡಗಿನ ನೆಲದ ಕವಿ ಪಂಜೆ ಮಂಗೇಶರಾಯರು, "ಎಲ್ಲಿ ಮುಗಿಲಲಿ ಮಿಂಚಿ ನೋಲ್ ಕಾವೇರಿ ಹೊಳೆ ಹೊಳೆ ಹೊಳೆವಳೋ?" ಎಂದು ಕಾವೇರಿಯ ಭವ್ಯತೆಯನ್ನು ಬಣ್ಣಿಸಿದ್ದಾರೆ. ಶ್ರೀ ವಿಜಯ ಬರೆದ ಕವಿರಾಜ ಮಾರ್ಗದಲ್ಲೂ ಕನ್ನಡ ನಾಡನ್ನು ಗುರುತಿಸಲು ಕಾವೇರಿಯನ್ನೇ ಆಧಾರವಾಗಿ ತೆಗೆದುಕೊಳ್ಳಲಾಗಿದೆ. ಅದರಲ್ಲಿ ಕವಿ, ಕಾವೇರಿಯಿಂದಮಾ ಗೋದಾವರಿ ವರಮಿರ್ಪ ನಾಡದಾ ಕನ್ನಡದೊಳ್" ಎಂದು ನಾಡಿನ ಸೀಮೆಗಳನ್ನು ಗುರುತಿಸುತ್ತಾನೆ. ಕೊಡಗು, ಹಾಸನ, ಮಂಡ್ಯ, ಮೈಸೂರು ಹಾಗೂ ಸುತ್ತಮುತ್ತಲಿನ ಪ್ರದೇಶಗಳ ಜನರಿಗೆ ಕಾವೇರಿ ಎಂದರೆ ಬ್ರಹ್ಮನಿಂದ ಸಿಕ್ಕ ವರ.

ಗಂಗಾರತಿ ಮಾದರಿ ಕಾವೇರಿ ಮಾತೆಗೆ ಆರತಿ



ಕಾವೇರಿ ನದಿಗೆ ವಾರಾಣಸಿಯಲ್ಲಿನ ಗಂಗಾ ನದಿಗೆ ಮಾಡಲಾಗುವ ಗಂಗಾ ಆರತಿಯ ಮಾದರಿಯಲ್ಲಿ ಆರತಿ ಕಾರ್ಯಕ್ರಮವನ್ನು ಆಯೋಜಿಸಲು ತೀರ್ಮಾನಿಸಿದ್ದೇವೆ. ಈ ಭಾಗದ ಜನರ ಭಾವನೆಗಳನ್ನು ಗೌರವಿಸಿ, ಭಕ್ತಿಭಾವದಿಂದ ಈ ಕಾರ್ಯಕ್ರಮ ನಡೆಸಲು ನಿರ್ಧರಿಸಿದ್ದೇವೆ.



ಡಿ.ಕೆ.ಶಿವಕುಮಾರ್
ಕೆಪಿಸಿಸಿ ಅಧ್ಯಕ್ಷರು,
ಉಪಮುಖ್ಯಮಂತ್ರಿಗಳು,
ಕರ್ನಾಟಕ ಸರ್ಕಾರ

ತಲಕಾವೇರಿಯಲ್ಲಿ ಪ್ರತಿ ವರ್ಷದ ಕಾವೇರಿ ಸಂಕ್ರಮಣದಂದು, ಕಾವೇರಿ ತೀರ್ಥರೂಪಿಣಿಯಾಗಿ ಕಾಣಿಸಿಕೊಂಡು ಭಕ್ತರಿಗೆ ಅಭಯ ನೀಡುವ ಸಂಭ್ರಮದ ಆಚರಣೆ ವಿಶಿಷ್ಟವಾದುದು. ಇದು ಉತ್ತರದ ಗಂಗೆಗೆ ಸಮಾನವಾದ ದಕ್ಷಿಣದ ಪವಿತ್ರ ತೀರ್ಥವಾಗಿದ್ದು, ನಾಡಿನ ಜನರೆಲ್ಲರೂ ತೀರ್ಥವನ್ನು ಪಡೆದು ಕೃತಾರ್ಥರಾಗುತ್ತಾರೆ.

ಪರಂಪರೆಯ ಕೊಂಡಿ

ಕಾವೇರಿ ಭಾರತದ ಏಳು ಪವಿತ್ರ ನದಿಗಳಲ್ಲೊಂದು. "ಗಂಗೇಚ ಯಮುನೇಚೈವ ಗೋದಾವರಿ ಸರಸ್ವತಿ, ನರ್ಮದೇ ಸಿಂಧು ಕಾವೇರಿ ಜಲೇಸ್ಮಿನ್ ಸನ್ನಿಧಿಂ ಕುರು" ಎಂದು ಸ್ನಾನ ಮಾಡುವಾಗ ತಪ್ಪದೇ ಈ ಶ್ಲೋಕವನ್ನು ಹೇಳುತ್ತೇವೆ. ಈ ನದಿಗಳಲ್ಲಿ ನಮಗೆ ಸ್ನಾನ ಮಾಡಲು ಸಾಧ್ಯವಾಗದಿದ್ದರೂ ಅವುಗಳನ್ನು ನೆನೆದು ಮನೆಯಲ್ಲೇ ಸ್ನಾನ ಮಾಡುವುದು ಒಂದು ಸಂಪ್ರದಾಯ.

ಕಾವೇರಿ ಎಲ್ಲೆಲ್ಲಿ ಹರಿಯುತ್ತಾಳೋ ಅಲ್ಲೆಲ್ಲ ಹಸಿರು ಸಮೃದ್ಧಿಯಾಗಿ ಬೆಳೆದಿದೆ. ಕೃಷಿಗೆ ನೀರಾವರಿಯ ಚಿಂತೆ ದೂರವಾಗಿದೆ. ಜನಜೀವನ ನೆಮ್ಮದಿಯಿಂದ ಸಾಗಿದೆ. ಕಾವೇರಿ ಹುಟ್ಟುವ ಬ್ರಹ್ಮಗಿರಿಯ ತಪ್ಪಲಿನ ಸಮೀಪ ತಲಕಾವೇರಿ ಹಾಗೂ ಭಾಗಮಂಡಲ ಕ್ಷೇತ್ರವಿದೆ. ನಂತರ ಶ್ರೀರಂಗಪಟ್ಟಣದ ರಂಗನಾಥ ದೇವಾಲಯ ಹಾಗೂ ಪಶ್ಚಿಮವಾಹಿನಿ, ನರಸೀಪುರದ ತ್ರಿಮುಕುಟ ಕ್ಷೇತ್ರ, ಮುಡುಕುತೊರೆಯ ಸೋಮಶೈಲ ಕ್ಷೇತ್ರ, ತಲಕಾಡಿನ ಗಜಾರಣ್ಯ ಕ್ಷೇತ್ರ, ಸತ್ಯಗಾಲದ ಜ್ಞಾನಾಶ್ವತ್ಥ ಕ್ಷೇತ್ರ, ಶಿವನಸಮುದ್ರದ ಶಿಲಾಭೇದಿ ಕ್ಷೇತ್ರ ಹೀಗೆ ಆಕೆ ಹರಿಯುವಲ್ಲೆಲ್ಲ ಪುಣ್ಯಕ್ಷೇತ್ರಗಳು ಉದ್ಭವಿಸಿದೆ. ಒಂದು ಅಂದಾಜಿನಂತೆ, ಕರ್ನಾಟಕ ಹಾಗೂ ತಮಿಳುನಾಡಿನಲ್ಲಿ ಕಾವೇರಿ ಹರಿಯುವ ದಂಡೆಯಲ್ಲಿ ಏಳು ನೂರಕ್ಕೂ ಅಧಿಕ ಧಾರ್ಮಿಕ ಕ್ಷೇತ್ರಗಳಿವೆ.

> **“ ಅಮೂಲ್ಯ ನೀರನ್ನು ಉಳಿಸೋಣ**
>
> ಕಾವೇರಿ ಎಂದರೆ ಬರೀ ನೀರಲ್ಲ. ಅದರಲ್ಲಿ ಕೋಟಿ ಪಾಪಗಳನ್ನು ತೊಳೆಯುವ ಶಕ್ತಿ ಇದೆ. ಈ ಬಾರಿಯ ಬರಗಾಲ, ಅಂತಹ ಜೀವನದಿಯ ಮಹತ್ವವನ್ನು ಮತ್ತೊಮ್ಮೆ ಮನವರಿಕೆ ಮಾಡಿಕೊಟ್ಟಿದೆ. ಒಂದು ಹನಿ ನೀರನ್ನು ಪೋಲು ಮಾಡುವ ಮುನ್ನ ಈ ನೀರು ಕಾವೇರಿಯ ಭಾಗ ಎಂಬುದನ್ನು ಸ್ಮರಿಸಿದರೆ ಜೀವಜಲದ ವ್ಯರ್ಥ ಬಳಕೆಯಿಂದ ಮನಸ್ಸು ಹಿಂದೆ ಸರಿಯುತ್ತದೆ. ಕೃಷಿ ಹಾಗೂ ಕುಡಿಯುವ ನೀರಿಗೆ ಆಧಾರವಾಗಿರುವ ಕಾವೇರಿ ನೀರನ್ನು ಅನಗತ್ಯವಾಗಿ ಬಳಸದೆ ಉಳಿತಾಯ ಮಾಡುವ, ಅವಶ್ಯಕತೆ ಇದ್ದಷ್ಟು ಬಳಸುವ ಮನೋಭಾವ ಎಲ್ಲರಲ್ಲೂ ಬೆಳೆಯಬೇಕು. ಈ ಕುರಿತು ಸರ್ಕಾರ, ಜಲಮಂಡಳಿ, ಸಂಘ, ಸಂಸ್ಥೆಗಳು ಜನರಲ್ಲಿ ಜಾಗೃತಿ ಮೂಡಿಸುತ್ತಿವೆ. ಆದರೂ ಇಡೀ ಸಮಾಜದಲ್ಲಿ ಸ್ವಯಂ ಜಾಗೃತಿ ಮೂಡುವುದು ಇಂದಿನ ಕಾಲಕ್ಕೆ ಅನಿವಾರ್ಯ.

ಜೀವ ಸೆಲೆ ಕನ್ನಂಬಾಡಿ

ಮೈಸೂರು ಒಡೆಯರ್ ರಾಜವಂಶಸ್ಥರಿಗೂ ಕಾವೇರಿ ತಾಯಿ ಪವಿತ್ರ ಪೂಜ್ಯ. ಜನವಲ್ಲಭ ಮಹಾರಾಜ ನಾಲ್ವಡಿ ಕೃಷ್ಣರಾಜ ಒಡೆಯರ್, ಸರ್ ಎಂ.ವಿಶ್ವೇಶ್ವರಯ್ಯ ಹಾಗೂ ಇತರೆ ತಜ್ಞರ ಶ್ರಮದಿಂದಾಗಿ ಕನ್ನಂಬಾಡಿ ಅಣೆಕಟ್ಟು ನಿರ್ಮಾಣವಾಗಿ ಕಾವೇರಿ ನದಿಯ ಪ್ರಯೋಜನವನ್ನು ನಾಡಿನ ರೈತರು ಪಡೆಯುತ್ತಿದ್ದಾರೆ. 1911ರಲ್ಲಿ ಆರಂಭವಾದ ಈ ಜಲಾಶಯದ ಕಾಮಗಾರಿ ಪೂರ್ಣಗೊಳ್ಳುವಾಗ 1932 ಆಗಿತ್ತು. ಆಗಿನ ಕಾಲದಲ್ಲಿ ಇದರ ನಿರ್ಮಾಣ ನಿರಂತರವಾಗಿ ಸವಾಲುಗಳನ್ನು ಒಡ್ಡಿತ್ತು. 10 ಸಾವಿರಕ್ಕೂ ಅಧಿಕ ಕಾರ್ಮಿಕರು ಈ ಜಲಾಶಯದ ಕಾಮಗಾರಿಗಾಗಿ ಶ್ರಮಿಸಿದ್ದರು. ಒಂದು ಶತಮಾನವನ್ನೇ ಕಂಡಿರುವ ಈ ಜಲಾಶಯ ಇಂದಿಗೂ ಗಟ್ಟಿಯಾಗಿ ನಿಂತು ಲಕ್ಷಾಂತರ ಎಕರೆ ಭೂಮಿಗೆ ನೀರು ಪೂರೈಸಿ ಕೃಷಿ ನಳನಳಿಸುವಂತೆ ಮಾಡುತ್ತಿದೆ. ಈ ಸಂದರ್ಭದಲ್ಲಿ ಮಹಾರಾಜರು, ಸರ್.ಎಂ.ವಿ. ಹಾಗೂ ಕಾರ್ಮಿಕರನ್ನು ಗೌರವದಿಂದ ಸ್ಮರಿಸಬೇಕಿದೆ.

ನಾಡಪ್ರಭು ಕೆಂಪೇಗೌಡರು 500 ವರ್ಷಗಳ ಹಿಂದೆ ಭವ್ಯ ಬೆಂಗಳೂರಿಗೆ ಭದ್ರ ಅಡಿಪಾಯ ಹಾಕಿದ್ದರು. ಈ ಪ್ರದೇಶ ಮುಂದೊಂದು ದಿನ ಮಹಾ ನಗರವಾಗಿ ಬೆಳೆಯಲಿದೆ ಎಂಬ ದೂರದೃಷ್ಟಿ ಹೊಂದಿದ್ದ ಅವರು, ಅದಕ್ಕಾಗಿ 300ಕ್ಕೂ ಅಧಿಕ ಕೆರೆ, ಕಟ್ಟೆಗಳನ್ನು ನಿರ್ಮಿಸಿ ನಗರಕ್ಕೆ ಜಲಮೂಲವನ್ನು ಸೃಷ್ಟಿಸಿಕೊಟ್ಟರು. ಆದರೆ ನಗರೀಕರಣ, ಒತ್ತುವರಿ ಮೊದಲಾದ ಕಾರಣಗಳಿಂದ ಕೆರೆಗಳು ಮಾಯವಾಗಿ ನಗರಕ್ಕೆ ಜಲಮೂಲದ ಕೊರತೆ ಉಂಟಾಯಿತು. ಆಗ ಕಾವೇರಿ ಯೋಜನೆಯ ಮೂಲಕ ನಗರಕ್ಕೆ ನೀರು ಸರಬರಾಜು ಮಾಡಲಾಯಿತು. ಶಿವ ಸಮತೋಲನ ಜಲಾಶಯದಿಂದ, ಸುಮಾರು 100 ಕಿ.ಮೀ. ದೂರದಿಂದ ಪ್ರತಿದಿನ ಪಂಪ್ ಮಾಡಿ ನಗರಕ್ಕೆ ಕಾವೇರಿ ಪೂರೈಸುವ ಈ ಯೋಜನೆ ಬೇರೆ ನಗರಗಳಿಗೂ ಮಾದರಿಯಾಗಬಲ್ಲದು. ನಗರದ ಜನಸಂಖ್ಯೆ 1 ಕೋಟಿಗಿಂತ ಹೆಚ್ಚಿದ್ದರೂ, ಕಾವೇರಿಯಿಂದ ನೀರು ಪಡೆದು ಪೂರೈಸುವುದು ಸಾಧ್ಯವಾಗಿದೆ. ಐಟಿ, ಬಿಟಿ ಕೇಂದ್ರ, ಸಿಲಿಕಾನ್ ವ್ಯಾಲಿ ಎಂದೆಲ್ಲ ಕೀರ್ತಿ ಪಡೆದ ಜಾಗತಿಕ ನಗರಿ ಬೆಂಗಳೂರಿನ ಈ ಮಟ್ಟಿಗಿನ ಬೆಳವಣಿಗೆಯಲ್ಲಿ ಕಾವೇರಿಯ ಪಾತ್ರ ನಿರ್ಣಾಯಕ. ಹಾಗೆಯೇ ಬ್ರ್ಯಾಂಡ್ ಬೆಂಗಳೂರು ನಿರ್ಮಾಣದಲ್ಲಿ ಕಾವೇರಿಯ ಪಾತ್ರ ಅಮೂಲ್ಯ.

ಮೋದಿ ಕೃಪೆಯಿಂದ ರಾಜ್ಯಪಾಲರ ಹುದ್ದೆ

ಸಿ.ಹೆಚ್.ವಿಜಯಶಂಕರ್ ಹರ್ಷ

ಮೈಸೂರು, ಜು.28(ಎಂಟಿವೈ)– ರಾಜ್ಯಪಾಲ ಹುದ್ದೆ ಲಭಿಸುವ ನಿರೀಕ್ಷೆ ನನಗಿರಲಿಲ್ಲ. ಪ್ರಧಾನಿ ನರೇಂದ್ರ ಮೋದಿ ಅವರ ಕೃಪಾಕಟಾಕ್ಷದಿಂದ ಮೇಘಾಲಯದ ರಾಜ್ಯಪಾಲರ ಹುದ್ದೆ ದೊರೆತಿದೆ ಎಂದು ಮೇಘಾಲಯ ನಿಯೋಜಿತ ರಾಜ್ಯಪಾಲ, ಬಿಜೆಪಿ ಮುಖಂಡ ಸಿ.ಹೆಚ್.ವಿಜಯ ಶಂಕರ್ ಹರ್ಷ ವ್ಯಕ್ತಪಡಿಸಿದ್ದಾರೆ.

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಕಳೆದ ರಾತ್ರಿ ಹೊರಡಿಸಿದ ರಾಜ್ಯಪಾಲರ ಆಯ್ಕೆ ಕುರಿತ ಆದೇಶದಲ್ಲಿ ಮೇಘಾಲಯದ ರಾಜ್ಯಪಾಲರಾಗಿ ಮೈಸೂರಿನ ಹಿರಿಯ ಬಿಜೆಪಿ ಮುಖಂಡ, ಮಾಜಿ ಸಚಿವ ಸಿ.ಹೆಚ್.ವಿಜಯ ಶಂಕರ್ ಅವರ ಹೆಸರು ಘೋಷಣೆಯಾಗುತ್ತಿದ್ದಂತೆಯೇ ಮೈಸೂರಿನ ವಿಜಯನಗರದಲ್ಲಿರುವ ಸಿ.ಹೆಚ್.ವಿಜಯ್‌ಶಂಕರ್ ಅವರ ನಿವಾಸದಲ್ಲಿ ಸಂಭ್ರಮ ಮನೆ ಮಾಡಿದ್ದು, ಭಾನುವಾರ ಬೆಳಗ್ಗಿನಿಂದಲೇ ಅಭಿಮಾನಿಗಳು, ಮುಖಂಡರು ವಿಜಯಶಂಕರ್ ಅವರ ನಿವಾಸಕ್ಕೆ ತೆರಳಿ ಶುಭಾಶಯ ತಿಳಿಸಲು ಮುಗಿ ಬೀಳುವವರ ಸಂಖ್ಯೆ ಹೆಚ್ಚಾಗಿದೆ ಅಲ್ಲದೆ, ಸಜ್ಜನ ರಾಜಕಾರಣಿಗೆ ಸಂದ ಗೌರವಕ್ಕೆ ದೂರವಾಣಿ ಮೂಲಕ ಶುಭ ಕೋರುವವರ ಸಂಖ್ಯೆಯೂ ಹೆಚ್ಚಾಗಿತ್ತು.



ಮೇಘಾಲಯದ ನೂತನ ರಾಜ್ಯಪಾಲರಾಗಿ ನೇಮಕಗೊಂಡ ಸಿ.ಹೆಚ್.ವಿಜಯಶಂಕರ್ ಅವರನ್ನು ಬಿಜೆಪಿ ಮುಖಂಡರು ಅಭಿನಂದಿಸಿದರು. ಮಾಜಿ ಕಾರ್ಪೋರೇಟರ್ ಬಿ.ವಿ.ಮಂಜುನಾಥ್, ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷೆ ಮಂಗಳಾ ಸೋಮಶೇಖರ್, ನಗರ ಕಾರ್ಯದರ್ಶಿ ಎಂ.ಆರ್.ಬಾಲಕೃಷ್ಣ, ಎಂ.ವಿ.ಕೃಷ್ಣ ಚಿತ್ರದಲ್ಲಿದ್ದಾರೆ.

ನಿರೀಕ್ಷೆ ಇರಲೇ ಇಲ್ಲ: ರಾಜ್ಯಪಾಲರಾಗಿ ಆಯ್ಕೆಯಾದ ಹಿನ್ನೆಲೆಯಲ್ಲಿ ವಿಜಯನಗರದ ನಿವಾಸದಲ್ಲಿ 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಸಿ.ಹೆಚ್.ವಿಜಯಶಂಕರ್ ಅವರು, ಮೇಘಾಲಯದ ರಾಜ್ಯಪಾಲರ ಹುದ್ದೆ ನನಗೆ ನೀಡಿರುವುದು ತುಂಬ ಸಂತೋಷವಾಗಿದೆ. ನಾನು ಎಂದಿಗೂ ಈ ಹುದ್ದೆ ಸಿಗುತ್ತದೆ ಎಂದು ಕಲ್ಪನೆ ಮಾಡಿಕೊಂಡಿರಲಿಲ್ಲ. ಎರಡು ತಿಂಗಳ ಹಿಂದೆ ನನ್ನ ಕೆಲ ಆತ್ಮೀಯರು, ಸ್ನೇಹಿತರು ತಮಾಷೆಗಾಗಿ ನಿಮ್ಮನ್ನು ರಾಜ್ಯಪಾಲರಾಗಿ ಮಾಡಿ ಕಳಿಸುತ್ತಾರೆ ಎಂದು ಛೇಡಿಸಿದ್ದರು. ಆದರೆ, ಅಂದು ಸ್ನೇಹಿತರು ಹೇಳಿದ ಮಾತು ಇಂದು ಕಾಕತಾಳೀಯದಂತೆ ನಿಜವಾಗಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಪ್ರಧಾನಿಯೇ ಕರೆ ಮಾಡಿ ತಿಳಿಸಿದರು: ಪ್ರಧಾನಿ ನರೇಂದ್ರ ಮೋದಿ ಶನಿವಾರ ಮಧ್ಯಾಹ್ನ ನನಗೆ ಕರೆ ಮಾಡಿ, 'ನಿಮಗೆ ಪ್ರಮುಖ ಹುದ್ದೆಯೊಂದನ್ನು ನೀಡಬೇಕೆಂದು ಉದ್ದೇಶಿಸಿದ್ದೇವೆ, ನಿಮಗೆ ಒಳ್ಳೆದಾಗಲಿ' ಎಂದರು. ಅದಕ್ಕೆ ಪ್ರತಿಕ್ರಿಯಿಸಿದ ನಾನು ನೀವು ನೀಡುವ ಯಾವುದೇ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿಭಾಯಿಸುವುದಾಗಿ ತಿಳಿಸಿದೆ ಎಂದು ಸಿಹೆಚ್‌ವಿ ತಿಳಿಸಿದರು.

ಪ್ರಧಾನಿ ಕೃಪೆಯಿಂದ: ಬಿಜೆಪಿಯಲ್ಲಿ ಕಳೆದ 35 ವರ್ಷದಿಂದ ನಿಷ್ಠಾವಂತ ಕಾರ್ಯಕರ್ತನಾಗಿ ಸೇವೆ ಸಲ್ಲಿಸಿದ್ದೇನೆ. ನನ್ನ ಬಗ್ಗೆ ಯಾರಿಂದ ಮಾಹಿತಿ ಸಂಗ್ರಹಿಸಿದರೋ ನನಗೆ ತಿಳಿದಿಲ್ಲ. ಇಂದು ನಾನು ರಾಜ್ಯಪಾಲನಾಗಿ ಆಯ್ಕೆಯಾಗಲು ಪ್ರಧಾನಿ ನರೇಂದ್ರ ಮೋದಿ ಅವರೇ ಕಾರಣ. ಇದರ ಶ್ರೇಯಸ್ಸು ಮೋದಿ ಅವರಿಗೆ ಸಲ್ಲಬೇಕು ಎಂದರು.

ಕನ್ನಡದ ಕೀರ್ತಿ ಹೆಚ್ಚಿಸುವೆ: ಮೇಘಾಲಯದ ರಾಜ್ಯಪಾಲರ ಹುದ್ದೆ ದೊರೆತಿರುವುದರಿಂದ ನಾನು ಕನ್ನಡ, ಕರ್ನಾಟಕದ ಕೀರ್ತಿ ಹೆಚ್ಚಿಸುವ ನಿಟ್ಟಿನಲ್ಲಿ ಕರ್ತವ್ಯ ನಿರ್ವಹಿಸುತ್ತೇನೆ. ಅಲ್ಲಿನ ರಾಜಕೀಯ ವ್ಯವಸ್ಥೆ ಅವಲೋಕಿಸಲು ನನಗೆ ಇದೊಂದು ಅವಕಾಶ ಸಿಕ್ಕಂದಾಗಿದೆ. ಯಾವುದೇ ಕಾರಣಕ್ಕೂ ಕಿಂಚಿತ್ತು ಧಕ್ಕೆಬಾರದಂತೆ ಕರ್ತವ್ಯ ನಿಭಾಯಿಸುತ್ತೇನೆ ಎಂದು ಭರವಸೆ ನೀಡಿದರು.

ಕಂಪ್ಯೂಟರ್ ಟ್ಯಾಲಿ ಉಚಿತ ತರಬೇತಿಗೆ ಅರ್ಜಿ ಆಹ್ವಾನ

ಮೈಸೂರು, ಜು. 28– ಕೆ.ಆರ್.ನಗರದ ಜೀನಿಯಸ್ ಕಂಪ್ಯೂಟರ್ ಅಕಾಡೆಮಿ ವತಿಯಿಂದ 18ರಿಂದ 45 ವರ್ಷ ವಯೋಮಿತಿಯೊಳಗಿರುವ ಯುವಕ–ಯುವತಿಯರಿಗೆ ಆ.1ರಿಂದ 30ರವರೆಗೆ 30 ದಿನಗಳ ಕಂಪ್ಯೂಟರ್ ಬೇಸಿಕ್, ಡಿ.ಟಿ.ಪಿ ಟ್ಯಾಲಿ ತರಬೇತಿಯನ್ನು ಆಯೋಜಿಸಲಾಗಿದೆ. ತರಬೇತಿಯಲ್ಲಿ ಸಂಬಂಧಪಟ್ಟ ವಿಷಯದ ಜೊತೆಗೆ ಜೀನಿಯಸ್ ಜೀವನ ಕೌಶಲ ತರಬೇತಿ ಹಾಗೂ ಉದ್ಯೋಗದ ಬಗ್ಗೆ ಮಾಹಿತಿ ನೀಡಲಾಗುವುದು. ಆಸಕ್ತರು ತಮ್ಮ ಹೆಸರು, ವಿಳಾಸ, ವಯಸ್ಸು, ವಿದ್ಯಾರ್ಹತೆ ಅನುಭವಗಳ ವಿವರಗಳೊಂದಿಗೆ ಅರ್ಜಿ ಸಲ್ಲಿಸತಕ್ಕದ್ದು. ಆಸಕ್ತ ಅಭ್ಯರ್ಥಿಗಳು ಜು. 30ರೊಳಗೆ ಬಿಳಿಹಾಳೆಯಲ್ಲಿ ತಮ್ಮ ಹೆಸರು, ವಿಳಾಸ, ದೂರವಾಣಿ ಸಂಖ್ಯೆ, ವಿದ್ಯಾರ್ಹತೆ, ಪಡೆಯಲಿಚ್ಛಿಸುವ ತರಬೇತಿ ವಿವರಗಳೊಂದಿಗೆ ಅರ್ಜಿ ಸಲ್ಲಿಸತಕ್ಕದ್ದು. ಹೆಚ್ಚಿನ ವಿವರಗಳಿಗೆ ಸಂಸ್ಥೆಯ ಮೊಬೈಲ್ ಸಂಖ್ಯೆ: 9945942109 ಅನ್ನು ಸಂಪರ್ಕಿಸಬಹುದು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಒಂದನೇ ಪುಟದಿಂದ

ಏಕ ಸದಸ್ಯ ಆಯೋಗ ರಚನೆ

ಮೂಲ ಮಾಲೀಕ ನಿಂಗ ಮೃತಪಟ್ಟಿದ್ದರೂ ಅದು ಹೇಗೆ ಆ ಜಮೀನನನ್ನು ಡಿ ನೋಟಿಫಿಕೇಷನ್ ಮಾಡಿದರು. ವಕೀಲರಾಗಿರುವ ಸಿದ್ದರಾಮಯ್ಯ ಅವರಿಗೆ ಈ ಬಗ್ಗೆ ಮಾಹಿತಿ ಇರಲಿಲ್ಲವೆ. ಇದ ನ್ನೆಲ್ಲಾ ನೋಡಿದರೆ ಯಾವ ರೀತಿ ಅಕ್ರಮ ನಡೆಸಿದ್ದಾರೆ ಎಂಬುದು ಸ್ಪಷ್ಟವಾಗಿದೆ. ಈ ಹಿನ್ನೆಲೆ ಇಡೀ ಹಗರಣ ಮುಚ್ಚಿ ಹಾಕಲು ನ್ಯಾಯಮೂರ್ತಿ ದೇಸಾಯಿ ನೇತೃತ್ವದ ಆಯೋಗ ರಚನೆ ಮಾಡಿದ್ದಾರೆ ಎಂದು ದೂರಿದರು. ಇಂತಹ ಹಲವು ಅಕ್ರಮ ನಡೆದಿದ್ದರೂ, ರಾಜಿನಾಮೆ ನೀಡಿ ಎಂದು ಆಗ್ರಹಿಸಿದ್ದರೂ ಸಿದ್ದರಾಮಯ್ಯ ಖುರ್ಚಿ ಬಿಟ್ಟು ಕದಲುತ್ತಾರಾ. ಆ ಕಾರಣ ದಿಂದ ಈ ಹಗರಣದ ಬಗ್ಗೆ ಕಾನೂನು ಹೋರಾಟ ಮಾಡುತ್ತೇವೆ ಎಂದು ಕುಮಾರಸ್ವಾಮಿ ತಿಳಿಸಿದರು.

ಪತ್ನಿ ಹೆಸರಿನಲ್ಲಿ ಮುಡಾ ನಿವೇಶನವನ್ನು ಅಕ್ರಮವಾಗಿ ಪಡೆದಿರುವುದು ದಾಖಲಾತಿ ಸಮೇತ ಸಾಬೀತಾಗಿದ್ದರೂ, ಇದೆಲ್ಲಾ ವಿರೋಧ ಪಕ್ಷದ ಆಧಾರ ರಹಿತ ಆರೋಪ, ಷಡ್ಯಂತ್ರ ಎಂದು ನಮ್ಮ ಕಡೆ ಬೊಟ್ಟು ಮಾಡಿ ತೋರಿಸುತ್ತಾರೆ. ಆದರೆ ಈ ಹಗರಣ ಹೊರ ಬರಲು ನಿಮ್ಮದೆ ಪಕ್ಷದವರು ಮುಖ್ಯಮಂತ್ರಿ ಚೇರ್ ಮೇಲೆ ಟವಾಲ್ ಹಾಕಿಕೊಂಡಿದ್ದಾರೆ. ಮೊದಲು ನಿಮ್ಮ ಪಕ್ಷದ ಭಿನ್ನಾಭಿಪ್ರಾಯ ಸರಿಮಾಡಿಕೊಳ್ಳಿ. ತರುವಾಯ ವಿರೋಧ ಪಕ್ಷದ ಬಗ್ಗೆ ಆಪಾದನೆ ಮಾಡಿ ಎಂದು ಸಿದ್ದರಾಮಯ್ಯಗೆ ಕುಮಾರಸ್ವಾಮಿ ಸಲಹೆ ನೀಡಿದರು.

ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸುರೇಶ್ ಬಾಬು, ಶಾಸಕರಾದ ಜಿ.ಡಿ. ಹರೀಶ್ ಗೌಡ, ಸಿ.ಎನ್.ಮಂಜೇಗೌಡ, ವಿವೇಕಾನಂದ, ಮಾಜಿ ಶಾಸಕರಾದ ಸಾ.ರಾ. ಮಹೇಶ್, ಕೆ.ಮಹದೇವ್, ಅಶ್ವಿನ್ ಕುಮಾರ್ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ಜಿ.ಟಿ.ದೇವೇಗೌಡರಿಗೆ ಅಸಮಾಧಾನವಿಲ್ಲ

ಶಾಸಕರೂ ಆದ ಜೆಡಿಎಸ್ ಕೋರ್ ಕಮಿಟಿ ಸದಸ್ಯ ಜಿ.ಟಿ.ದೇವೇಗೌಡ ರಿಗೆ ನಮ್ಮ ಬಗ್ಗೆ ಯಾವುದೇ ಅಸಮಾಧಾನವಿಲ್ಲ ಎಂದು ಹೆಚ್.ಡಿ.ಕುಮಾರಸ್ವಾಮಿ ಸ್ಪಷ್ಟಪಡಿಸಿದರು. ಬೇರೆ ಕಾರ್ಯಕ್ರಮ ಇದ್ದ ಕಾರಣ ಜಿ.ಟಿ.ದೇವೇಗೌಡರು ಇಂದು ನನ್ನೊಡನೆ ಇಲ್ಲಿಗೆ ಬರಲಿಲ್ಲ. ಆದರೆ ಅವರ ಪುತ್ರರೂ ಆದ ಶಾಸಕ ಜಿ.ಡಿ.ಹರೀಶ್ ಗೌಡ ಬಂದಿದ್ದಾರೆ ಎಂದರು.

ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸ್ಥಾನ ಸಿಗದ ಹಿನ್ನೆಲೆ ಜಿ.ಟಿ.ದೇವೇ ಗೌಡರು ಅಸಮಾಧಾನಗೊಂಡಿದ್ದಾರೆ ಎಂಬುದು ಸುಳ್ಳು ಜಿ.ಟಿ.ದೇವೇಗೌಡರು ನಮ್ಮ ಕುಟುಂಬದ ಹಿರಿಯ ಸದಸ್ಯರು. ಅವರಿಗೆ ಯಾವುದೇ ಅಸಮಾಧಾನವಿಲ್ಲ ಎಂದು ಹೆಚ್.ಡಿ. ಕುಮಾರಸ್ವಾಮಿ ಪುನರ್ ಸ್ಪಷ್ಟಪಡಿಸಿದರು.

ಸಿದ್ದರಾಮಯ್ಯ ಬಗ್ಗೆ ಕುಮಾರಸ್ವಾಮಿ ಮಿಮಿಕ್ರಿ

ನಾನು ಪಾರದರ್ಶಕವಾಗಿದ್ದೇನೆ, ಒಂದು ಸಣ್ಣ ಕಪ್ಪು ಚುಕ್ಕೆ ಇಲ್ಲ ಎಂದು ಹೇಳುತ್ತಿದ್ರಿ, ಆದರೆ ಈಗ ವಿಧಾನಸಭಾ ಅಧಿವೇಶನ ನಡೆಸಲು ಹೆದರಿ ಓಡಿ ಬಂದಿದ್ದೀರಾ ಎಂದು ಹೆಚ್.ಡಿ.ಕುಮಾರಸ್ವಾಮಿ ಸಿದ್ದರಾಮಯ್ಯ ಸ್ಟೈಲ್‌ನಲ್ಲೆ ಹೇಳಿ ಗೇಲಿ ಮಾಡಿದರು.

ಹಗರಣ ಮುಚ್ಚಿಕೊಳ್ಳಲು ದಿನ ಪತ್ರಿಕೆಗಳಲ್ಲಿ ಸುದ್ದಿ ಮಾದರಿಯ ಜಾಹಿರಾತು ನೀಡಿದ್ದೀರಿ. ಸಿದ್ದರಾಮಯ್ಯನವರೆ ನಿಮಗೆ ಈ ದುಸ್ಥಿತಿ ಬರಬಾರದಿತ್ತು ಎಂದು ಲೇವಡಿ ಮಾಡಿದರು. ಇಷ್ಟೆಲ್ಲಾ ಅಕ್ರಮ ಮಾಡಿ ನಿವೇಶನ ಪಡೆದಿದ್ದರೂ 62 ಕೋಟಿ ರೂಪಾಯಿ ಕೇಳುತ್ತಿದ್ದೀರಲ್ಲ, ಯಾರ ಮನೆಯದು ಅಂತ ಕೊಡಲು ಸಾಧ್ಯ ಎಂದು ಪ್ರಶ್ನಿಸಿದರು. ಮೊದಲು ಸಿದ್ದರಾಮಯ್ಯ ಅಬ್ಬರಿಸುತ್ತಿದ್ದರು. ಆದರೆ ಈಗ ಅವರ ಹವಾಭಾವವೆ ಬದಲಾಗಿದೆ ಎಂದು ಕುಮಾರಸ್ವಾಮಿ ಛೇಡಿಸಿದರು.

ಹೆಚ್‌ಎಂಟಿ ಕಾರ್ಖಾನೆಗೆ ನಾನು ಭೇಟಿ ಕೊಟ್ಟ ದಿನವೇ ಷೇರು ಮೌಲ್ಯ ಜಿಗಿತ

ಮುಚ್ಚಿರುವ ಕಾರ್ಖಾನೆಯನ್ನು ಪುನರುಜ್ಜೀವನಗೊಳಿಸಲು ಹೆಚ್‌ಎಂಟಿ ಕಾರ್ಖಾನೆಗೆ ಭೇಟಿ ಕೊಟ್ಟ ದಿನವೇ ಹೆಚ್ ಎಂಟಿ ಷೇರು ಮೌಲ್ಯ 45 ರಿಂದ 95 ರೂಪಾಯಿಗೆ ಏರಿಕೆಯಾಗಿದೆ ಎಂದು ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದರು.

ಮೈಸೂರು ಮಹಾರಾಜರು ಹೆಚ್‌ಎಂಟಿ ಕಾರ್ಖಾನೆಯನ್ನು 1953 ರಲ್ಲಿ ಆರಂಭಿಸಿದರು. ಅಲ್ಲಿ 8 ಸಾವಿರ ಮಂದಿಗೆ ಉದ್ಯೋಗ ದೊರಕಿತ್ತು. ಅಂತರಾಷ್ಟ್ರೀಯ ಗುಣಮಟ್ಟದ ಹೆಚ್ ಎಂಟಿ ವಾಚುಗಳು ದೇಶದ ಶೇಕಡ 90 ಮಾರುಕಟ್ಟೆ ಆವರಿಸಿಕೊಂಡಿತ್ತು. ಆ ದಿನಕ್ಕೆ 279 ಕೋಟಿ ಆದಾಯ ಗಳಿಸುತ್ತಿತ್ತು ಎಂದರು. ಆದರೆ ತರುವಾಯ ಬಂದ ಟೈಟಾನ್ ವಾಚ್‌ನವರು ಹೆಚ್‌ಎಂಟಿ ಕಾರ್ಖಾನೆಯ ತಜ್ಞ ನೌಕರರನ್ನು ಕರೆದುಕೊಂಡು ಹೋದರು. ಇಂತಹ ಹಲವು ಸಮಸ್ಯೆಗಳಿಂದ ಹೆಚ್‌ಎಂಟಿ ಕಾರ್ಖಾನೆ ಬಾಗಿಲು ಹಾಕಿತು. ಆದರೆ ಈಗ ಅದನ್ನು ಪುನರುಜ್ಜೀವನಗೊಳಿಸಬೇಕಿದೆ ಎಂದರು.

ಕರ್ನಾಟಕದ ಹೆಚ್‌ಎಂಟಿ ಮಾತ್ರವಲ್ಲದೆ ಭದ್ರಾವತಿ ಉಕ್ಕಿನ ಕಾರ್ಖಾನೆಗೆ ಕೂಡ ಜೀವ ಕೊಡಬೇಕಿದೆ. ಇದಲ್ಲದೆ ವಿಎಸ್ ಎಲ್ ಸೇರಿದಂತೆ ದೇಶದ ಹಲವು ಕಾರ್ಖಾನೆಗಳನ್ನು ಪುನರುಜ್ಜೀವನಗೊಳಿಸಬೇಕಿದೆ. ಇದಕ್ಕಾಗಿ ಪ್ರತಿ ದಿನ 15 ಸಭೆ ನಡೆಸುತ್ತಿದ್ದೇನೆ ಎಂದು ಕುಮಾರಸ್ವಾಮಿ ತಿಳಿಸಿದರು.

ಮೊದಲು ಸ್ಟಾಲಿನ್ ಮನವೊಲಿಸಿ

ರಾಜ್ಯಸಭೆಯಲ್ಲಿ ವಿಷಯ ಪ್ರಸ್ತಾಪಿಸುತ್ತಾರೆ. ಆ ವೇಳೆ ಡಿಎಂಕೆ ಸದಸ್ಯರು ಅಡ್ಡಿಪಡಿಸುತ್ತಾರೆ. ಕರ್ನಾಟಕದವರೆ ಆದ ರಾಜ್ಯಸಭೆಯ ಸಭಾ ನಾಯಕ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಕಾಂಗ್ರೆಸ್ ಸಂಸದರು ಆ ಸಂದರ್ಭ ಮೌನವಾಗಿರುತ್ತಾರೆ. ಈ ಹಿನ್ನೆಲೆ ದೇವೇಗೌಡರಿಗೆ ಬೆಂಬಲವಾಗಿ ನಾನು ಅಂದು ಉಪಸ್ಥಿತನಿರುತ್ತೇನೆ ಎಂದು ತಿಳಿಸಿದರು.

ಮೇಕೆದಾಟು ಯೋಜನೆಗೆ ಕೇಂದ್ರ ಸರ್ಕಾರ ಅನುಮತಿ ನೀಡುವಂತೆ ಕೇಳುವ ಮೊದಲು ಅನುದಾನ ಮೀಸಲು ಸೇರಿದಂತೆ ಇತರೆ ಸಿದ್ಧತೆ ಮಾಡಿಕೊಳ್ಳಿ ಎಂದು ಸಲಹೆ ನೀಡಿದರು. ಮೇಕೆದಾಟು ಯೋಜನೆ 125 ವರ್ಷದ ಸಮಸ್ಯೆ. ಒಂದೇ ರಾತ್ರಿ ಅದನ್ನು ಪರಿಹಾರ ಮಾಡಲು ಸಾಧ್ಯವಿಲ್ಲ. ಕಾವೇರಿ ಜಲಾಯನ ಪ್ರದೇಶದ ಅಣೆಕಟ್ಟನ್ನು ಕರ್ನಾಟಕದವರೆ ಕಟ್ಟಿದ್ದು, ಕೇಂದ್ರ ಸರ್ಕಾರ ನಯಾ ಪೈಸೆ ಹಣ ಕೊಟ್ಟಿಲ್ಲ. ಆದ ಕಾರಣ ಮೇಕೆದಾಟು ಯೋಜನೆ ಅನುಷ್ಠಾನಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಭರವಸೆ ನೀಡಿದರು. ಕೇಂದ್ರ ಸಚಿವನಾಗಿ ನಾನು ಕೇಂದ್ರ ಸರ್ಕಾರದಿಂದ ಕರ್ನಾಟಕಕ್ಕೆ ಯಾವುದೇ ರೀತಿಯಲ್ಲೂ ಅನ್ಯಾಯವಾಗದಂತೆ ನೋಡಿಕೊಳ್ಳುತ್ತೇನೆ ಎಂದು ಕುಮಾರಸ್ವಾಮಿ ಭರವಸೆ ನೀಡಿದರು. ರಾಜಕಾರಣ, ಚುನಾವಣೆ ಬೇರೆ. ಆದರೆ ರಾಜ್ಯದ ಹಿತಾಸಕ್ತಿ ಬಂದಾಗ ನಾನು ರಾಜಕಾರಣ ಮಾಡುವುದಿಲ್ಲ. ಅಗತ್ಯ ದಾಖಲಾತಿ ಜೊತೆ ದೆಹಲಿಗೆ ಬನ್ನಿ, ಅಲ್ಲಿ ನಿಮ್ಮ ಪರವಾಗಿ ನಾನೇ ಕೆಲಸ ಮಾಡಿಸಿಕೊಡುತ್ತೇನೆ ಎಂದು ಆಶ್ವಾಸನೆ ನೀಡಿದರು.

ಬಿಡಿ, ನಡವಳಿಕೆ ಬದಲಾಯಿಸಿಕೊಳ್ಳಿ

ತನ್ನ ಪಾಲಿನ ಹಣ ಎಷ್ಟು ಮೀಸಲಿಟ್ಟಿದೆ ಎಂದು ಮೊದಲು ತಿಳಿಸಲಿ ಎಂದು ಸಲಹೆ ನೀಡಿದರು. ಒಂದು ವೇಳೆ ನೀವು ಕೇಳಿದ ಯೋಜನೆಗಳಿಗೆ ಹಣ ಕೊಟ್ಟರೆ ಅದನ್ನು ಬೇರೆ ಉದ್ದೇಶಕ್ಕೆ ಬಳಸಿಕೊಳ್ಳುತ್ತೀರಾ. ಇದರಿಂದ ಕೇಂದ್ರ ಸರ್ಕಾರ ಹಣ ನೀಡಲು ಹೇಗೆ ಸಾಧ್ಯ ಎಂದು ಪ್ರಶ್ನಿಸಿದ ಕುಮಾರಸ್ವಾಮಿ, ಕೇಂದ್ರ ಸರ್ಕಾರದ ಸಚಿವನಾಗಿ ನಿಮ್ಮ ಕೊಡುಗೆ ಏನು ಎಂದು ಪ್ರಶ್ನಿಸುತ್ತೀರಾ, ಹಾಗಾದರೆ ನನ್ನ ಮನೆಯಿಂದ ತಂದು ಕೊಡಲು ಸಾಧ್ಯವೆ ಕೇಳಿದರು. ಕೆರೆ ಪುನರುಜ್ಜೀವನಕ್ಕಾಗಿ ಕೊಟ್ಟ ಹಣದಲ್ಲಿ ಎಷ್ಟು ಬಳಸಿದ್ದೀರಾ, ಜಲ ಮಿಷನ್ ಯೋಜನೆಗೆ ಕೊಟ್ಟ ಹಣ ಏನು ಮಾಡಿದ್ದೀರಾ ಎಂದು ಮರು ಪ್ರಶ್ನಿಸಿದ ಕುಮಾರಸ್ವಾಮಿ, ನಿಮ್ಮ ಅಕ್ರಮಗಳು ಸಿಎಜಿ ವರದಿಯಲ್ಲಿ ಸ್ಪಷ್ಟವಾಗಿದೆ ಎಂದು ಆರೋಪಿಸಿದರು. ಹಣಕಾಸು ಸಚಿವ ನಿರ್ಮಲಾ ಸೀತಾರಾಮನ್ ಯಾವುದೇ ತಾರತಮ್ಯ ಮಾಡದೆ ಯಾವ ರಾಜ್ಯಕ್ಕೆ ಎಷ್ಟು ನ್ಯಾಯಯುತವಾಗಿ ಅನುದಾನ ನೀಡಬೇಕೊ ಅದನ್ನು ನೀಡಿದ್ದಾರೆ. ಇದನ್ನು ಅರ್ಥಮಾಡಿಕೊಳ್ಳಿ, ಕೇಂದ್ರ ಸರ್ಕಾರದ ಬಜೆಟ್ ಆಂಧ್ರ ಪ್ರದೇಶ ಮತ್ತು ಬಿಹಾರಕ್ಕೆ ಸೀಮಿತ ಎಂದು ಆಪಾದಿಸಬೇಡಿ ಎಂದು ಸಲಹೆ ನೀಡಿದರು. ಕೇಂದ್ರ ಸರ್ಕಾರ ಜಿಎಸ್ ಟಿ ಜಾರಿಗೊಳಿಸಲು ಮುಂದಾದಾಗ ಲೋಪ ಸರಿ ಮಾಡಿಕೊಳ್ಳಿ ಎಂದು ನಾನು ಸಲಹೆ ನೀಡಿದ್ದೆ. ಆದರೆ ಸಿದ್ದರಾಮಯ್ಯ ಅವರೆ ಒಪ್ಪಿಗೆ ನೀಡಿ, ಜಿಎಸ್ ಟಿ ಪಿತಾಮಹಾರಾದರು. ಜಿಎಸ್ ಟಿ ವಿಚಾರವಾಗಿ ಕುತ್ತಿಗೆ ಕೊಟ್ಟು, ಹಗ್ಗನೂ ನೀಡಿ ಬಂದಿದ್ದೀರಾ ಎಂದು ನಾನು ಹೇಳಿದ್ದೆ. ಅದೇನೆ ಇರಲಿ, ಈಗ ಜಿಎಸ್ ಟಿ ಲೋಪ ಸರಿಪಡಿಸಲಾಗುವುದು ಎಂದು ಕುಮಾರಸ್ವಾಮಿ ಭರವಸೆ ನೀಡಿದರು.

ಮೈಸೂರಿಗೆ ಪಾದಯಾತ್ರೆ

ಮುಂದಿಟ್ಟುಕೊಂಡು, ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಪಾದಯಾತ್ರೆ ನಡೆಸಲು ಉಭಯ ಪಕ್ಷದ ನಾಯಕರು ತೀರ್ಮಾನಿಸಿದ್ದೇವೆ ಎಂದರು.


ಬೆಂಗಳೂರಿನಿಂದ ಮೈಸೂರಿಗೆ ಪಾದಯಾತ್ರೆಯಲ್ಲಿ ತೆರಳಲು 7 ದಿನ ಬೇಕಾಗುತ್ತದೆ. ಬಿಜೆಪಿ ಹಿರಿಯ ಮುಖಂಡರೂ ಆದ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಪಾದಯಾತ್ರೆಯಲ್ಲಿ ಭಾಗವಹಿಸುತ್ತಾರೆ ಎಂದರು. ಆಗಸ್ಟ್ 10ರಂದು ಮೈಸೂರಿನಲ್ಲಿ ಸಮಾರೋಪ ಸಮಾರಂಭ ನಡೆಯಲಿದ್ದು, ಈ ಸಮಾರಂಭದಲ್ಲಿ ಬಿಜೆಪಿ ರಾಷ್ಟ್ರೀಯ ನಾಯಕರು ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದ ವಿಜಯೇಂದ್ರ, ಇಂದಿನ ಸಭೆಯಲ್ಲಿ ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಷಿ, ಹೆಚ್.ಡಿ.ಕುಮಾರಸ್ವಾಮಿ, ವಿಪಕ್ಷ ನಾಯಕ ಆರ್.ಅಶೋಕ್, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಮುಂತಾದವರು ಭಾಗವಹಿಸಿದ್ದರು. ಬಿಜೆಪಿ ಮತ್ತು ಜೆಡಿಎಸ್ ಪಕ್ಷದ ಮುಖಂಡರು ಸಭೆಯಲ್ಲಿ ಕಾಂಗ್ರೆಸ್ ಸರ್ಕಾರದ ಹಗರಣಗಳನ್ನು ಕುರಿತು ಚರ್ಚಿಸಿ, ಪಾದಯಾತ್ರೆ ನಡೆಸಲು ನಿರ್ಧಾರ ಕೈಗೊಂಡರು ಎಂದರು.

ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಮಾತನಾಡಿ, ಭ್ರಷ್ಟ ಕಾಂಗ್ರೆಸ್ ಸರ್ಕಾರವನ್ನು ಕಿತ್ತೊಗೆಯುವ ಹೋರಾಟದಲ್ಲಿ ಜನರೂ ಭಾಗವಹಿಸಬೇಕು ಎಂದು ಮನವಿ ಮಾಡಿದರು. ಎರಡೂ ಪಕ್ಷಗಳೂ ಸೇರಿ ಹೋರಾಟ ನಡೆಸಲಿದ್ದು, ಹತ್ತಾರು ಸಾವಿರ ಜನರು ಈ ಹೋರಾಟದಲ್ಲಿ ಪಾಲ್ಗೊಳ್ಳಲಿದ್ದಾರೆ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ಕೊಡುವವರೆಗೂ ಹೋರಾಟ ನಿಲ್ಲುವುದಿಲ್ಲ. ಲೋಕಸಭೆ ಮತ್ತು ರಾಜ್ಯಸಭೆಯಲ್ಲಿ ಈ ಸಂಬಂಧ ಚರ್ಚೆ ನಡೆದಿದೆ. ರಾಜ್ಯದ ಮುಖ್ಯಮಂತ್ರಿಗಳಿಗೆ ಕಿಂಚಿತ್ತೂ ಗೌರವವಿದ್ದರೆ ಮಾಡಿರುವ ಅಪರಾಧವನ್ನು ಒಪ್ಪಿಕೊಂಡು ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು. ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ಮಾತನಾಡಿ, ರಾಜ್ಯದಲ್ಲಿ ಶೇ.100ರಷ್ಟು ಭ್ರಷ್ಟ ಸರ್ಕಾರ ಆಡಳಿತ ನಡೆಸುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಶೇ.100ರಷ್ಟು ಭ್ರಷ್ಟ ಎಂಬ ಬಿರುದನ್ನು ಪಡೆದಿದ್ದಾರೆ. ಹಾಗಾಗಿ ಜನ ಜಾಗೃತಿಗಾಗಿ ಹೋರಾಟ ನಡೆಸುತ್ತಿದ್ದೇವೆ. ಕಾನೂನು ಹೋರಾಟವನ್ನೂ ಕೂಡ ಅತ್ಯಂತ ಗಟ್ಟಿಯಾಗಿ ಮುಂದುವರೆಸುತ್ತೇವೆ ಎಂದು ಹೇಳಿದರು.

ಆ.1, ಮಹಮ್ಮದ್ ರಫೀ ಗೀತಗಾಯನ

ಮೈಸೂರು,ಜು.28–ಮೈಸೂರಿನ ಗಾಯಕ ರಾಘವೇಂದ್ರ ರತ್ನಾಕರ್ ಅರ್ಪಿಸುವ ಸಂಗೀತ ಸಾಮ್ರಾಟ್ ಮಹಮ್ಮದ್ ರಫೀ ಸ್ಮರಣಾರ್ಥ ಹಿಂದಿ ಚಲಚಿತ್ರ ಗೀತೆಗಳ ಗಾಯನ ಕಾರ್ಯಕ್ರಮವನ್ನು ಆಗಸ್ಟ್ 1ರಂದು ಸಂಜೆ 6 ಗಂಟೆಗೆ ನಾದ ಬ್ರಹ್ಮ ಸಂಗೀತ ಸಭಾದಲ್ಲಿ ಏರ್ಪಡಿಸಲಾಗಿದೆ.

ಮಹಮ್ಮದ್ ರಫೀ ಅವರ ಆಯ್ದ ಹಿಂದಿ ಚಲನಚಿತ್ರ ಗೀತೆಗಳನ್ನು ಗಾಯಕರಾದ ರಾಘವೇಂದ್ರ ರತ್ನಾಕರ್, ಡಾ.ಪ್ರೀತಂ ರಾಘವೇಂದ್ರ, ಶ್ರೇಷ್ಠ ಕೆ.ರಾಘ್ ವಿಶೇಷ ಗಾಯನದೊಂದಿಗೆ ಗೀತೆಗಳನ್ನು ಪ್ರಸ್ತುತಪಡಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಟಿ.ಆರ್.ಹರೀಶ್‌ಪ್ರಸಾದ್, ಎಂ.ಕೆ.ಪುರಾಣಿಕ್, ಡಾ. ಶಿವರಾಜಪ್ಪ, ಉದ್ಯಮಿ ರವಿಗೌಡ, ಸಮಾಜಸೇವಕ ಕೆ.ರಘುರಾಂ, ಕಸಾಪ ಜಿಲ್ಲಾಧ್ಯಕ್ಷ ಮಡ್ಡೀಕೆರೆ ಗೋಪಾಲ್, ಲೇಖಕಿ ಡಾ.ಸೌಗಂಧಿಕಾ ವಿ.ಜೋಯಿಸ್, ಮಹಾರಾಣಿ ಕಾಲೇಜಿನ ಪ್ರಾಂಶುಪಾಲರಾದ ಡಾ.ಬಿ.ವಿ.ವಸಂತ್ ಕುಮಾರ್, ಸಹಾಯಕ ಪ್ರಾಧ್ಯಾಪಕ ಎಂ.ನಂಜುಂಡಯ್ಯ ಉಪಸ್ಥಿತರಿರುತ್ತಾರೆ.





ಮೈಸೂರು ಮಿತ್ರ 45
ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಮಳೆಯಿಂದ ಮುತ್ತತ್ತಿ ಜಲಾವೃತ

ಸೇತುವೆ ಮುಳುಗಡೆ, ರಸ್ತೆ ಸಂಪರ್ಕ ಕಡಿತ, ಆಂಜನೇಯ ಸ್ವಾಮಿ ದೇವಸ್ಥಾನಕ್ಕೆ ನುಗ್ಗಿದ ನೀರು

ಹಲಗೂರು, ಜು.28– ಭಾರಿ ಮಳೆಯ ಕಾರಣ ಕೆಆರ್‌ಎಸ್ ಮತ್ತು ಕಬಿನಿ ಜಲಾಶಯಗಳು ಸಂಪೂರ್ಣ ಭರ್ತಿಯಾಗಿದ್ದು, ನದಿಗಳಿಗೆ ಹೆಚ್ಚಿನ ಪ್ರಮಾಣದ ನೀರು ಬಿಟ್ಟಿರುವುದರಿಂದ ಮುತ್ತತ್ತಿ ಜಲಾವೃತಗೊಂಡು ಕೆಸರಕ್ಕಿ ಹಳ್ಳದ ಬಳಿ ಇರುವ ಸೇತುವೆ ಸಂಪೂರ್ಣ ಮುಳುಗಡೆ ಆಗಿದೆ. ಇದರಿಂದ ಮುತ್ತತ್ತಿ ರಸ್ತೆ ಸಂಪರ್ಕ ಕಡಿತಗೊಂಡಿದೆ.

ಕಾವೇರಿ ಹಾಗೂ ಕಬಿನಿ ಪ್ರದೇಶದಲ್ಲಿ ಹೆಚ್ಚು ಮಳೆ ಆಗುತ್ತಿರುವ ಕಾರಣ ಕೃಷ್ಣರಾಜ ಸಾಗರ ಮತ್ತು ಕಬಿನಿ ಅಣೆಕಟ್ಟುಗಳು ಪೂರ್ಣ ಭರ್ತಿಯಾಗಿದ್ದು, ಕೆಆರ್‌ಎಸ್‌ನಿಂದ 1,30,000 ಕ್ಯೂಸೆಕ್ ಮತ್ತು ಕಬಿನಿಯಿಂದ 20,000 ಕ್ಯೂಸೆಕ್ ನೀರು ಬಿಟ್ಟಿರುವುದರಿಂದ ಮುತ್ತತ್ತಿ ಒಟ್ಟು 1,50,000 ನದಿಗೆ ಹೊರ ಬಿಟ್ಟಿರುವ ಕಾರಣ ಮುತ್ತತ್ತಿ ಬಳಿಯಿರುವ ಕೆಸರಕ್ಕಿ ಹಳ್ಳ ಬಳಿಯ ಸೇತುವೆ ಸಂಪೂರ್ಣ ಜಲಾವೃತಗೊಂಡಿದೆ ಇದರಿಂದಾಗಿ ಮುತ್ತತ್ತಿ ಮತ್ತು ಹಲಗೂರು ರಸ್ತೆ ಸಂಪರ್ಕ ಕಳೆದುಕೊಂಡಿದೆ. ಮುತ್ತತ್ತಿಯ ಗ್ರಾಮಸ್ಥರು ಗ್ರಾಮಕ್ಕೆ ತೆರಳಲು ಪ್ರಾಣಾಪಾಯವನ್ನು ಲೆಕ್ಕಿಸದೆ ಜೀವದ ಹಂಗು ತೊರೆದು ಹಳ್ಳ ದಾಟುತ್ತಿರುವ ದೃಶ್ಯ ಶೋಚನೀಯವಾಗಿದೆ. ಮುತ್ತತ್ತಿ ಪುರಾಣ ಪ್ರಸಿದ್ಧ ಯಾತ್ರಾಸ್ಥಳ ಮತ್ತು ಪ್ರೇಕ್ಷಣೀಯ ಸ್ಥಳವಾಗಿದೆ. ಇಲ್ಲಿಗೆ ಆಗಮಿಸುವ ಭಕ್ತಾದಿಗಳು ಕಾವೇರಿ ನದಿಗೆ ಇಳಿದು ಸ್ನಾನ ಮಾಡಲು ಮತ್ತು ಈಜಾಡಲು ಹೋಗುತ್ತಾರೆ. ಇತ್ತೀಚಿನ ದಿನಗಳಲ್ಲಿ ನೈಸರ್ಗಿಕವಾಗಿ ಹೆಚ್ಚು ಮಳೆಯಾಗುತ್ತಿದ್ದು, ಕಾವೇರಿ ನದಿ ಪಾತ್ರದಲ್ಲಿ ಪ್ರವಾಹದ ಭೀತಿ ಎದುರಾಗಿದೆ. ಕೃಷ್ಣರಾಜಸಾಗರದಿಂದ ಹೆಚ್ಚುವರಿ ನೀರನ್ನು ಬಿಡುಗಡೆ ಮಾಡಿದ್ದು, ಯಾವುದೇ ಅಹಿತಕರ ಘಟನೆ ಸಂಭವಿಸದಂತೆ ಕಾನೂನು ಸುವ್ಯವಸ್ಥೆ ಕಾಪಾಡುವ ಹಿನ್ನೆಲೆಯಲ್ಲಿ ಹಲಗೂರು ಪಿಎಸ್‌ಐ ಬಿ.ಮಹೇಂದ್ರ ಮತ್ತು ಕಾವೇರಿ ವನ್ಯಜೀವಿ ಹಲಗೂರು ವಲಯ ಅರಣ್ಯಾಧಿಕಾರಿ ರವಿ ಬುರ್ಜಿ ಅವರು ಎಚ್ಚರಿಕೆ ವಹಿಸುವಂತೆ ಮನವಿ ಮಾಡಿದ್ದಾರೆ.



ಕೆಸರಕ್ಕಿ ಹಳ್ಳದ ಬಳಿ ಇರುವ ಸೇತುವೆ ಸಂಪೂರ್ಣ ಮುಳುಗಡೆಯಾಗಿರುವುದು.

ಜು.26 ರಂದು ಶುಕ್ರವಾರ ಸಂಜೆ ಆರು ಗಂಟೆಯಿಂದ ಮುಂದಿನ ಅದೇಶದವರೆಗೆ ಪ್ರವಾಸಿ ತಾಣ ಮುತ್ತತ್ತಿ ಪ್ರದೇಶಕ್ಕೆ ಸಾರ್ವಜನಿಕರ ಪ್ರವೇಶವನ್ನು ಸಂಪೂರ್ಣವಾಗಿ ನಿಷೇಧಿಸಿ ನಿಷೇಧಾಜ್ಞೆ ಹೊರಡಿಸಲಾಗಿದೆ. ಜೆಎಲ್‌ಆರ್‌ನ ಕಾವೇರಿ ಫಿಶಿಂಗ್ ಕ್ಯಾಂಪಿಗೆ ಬರುವ ಪ್ರವಾಸಿಗರಿಗೂ ಸಹ ಪ್ರವೇಶವನ್ನು ನಿಷೇಧಿಸಲಾಗಿದೆ ಎಂದು ತಹಶೀಲ್ದಾರ್ ಕೆ.ಎನ್.ಲೋಕೇಶ್ ಅದೇಶ ಮಾಡಿದ್ದಾರೆ.

ಇದೇ ವೇಳೆ ಜಿಲ್ಲಾಧಿಕಾರಿ ಕುಮಾರ್ ಅವರು ಮುತ್ತತ್ತಿಗೆ ಇತ್ತೀಚೆಗೆ ಭೇಟಿ ನೀಡಿದ್ದ ವೇಳೆ ಮುತ್ತತ್ತಿ ಆಂಜನೇಯ ಸ್ವಾಮಿ ದೇವಾಲಯಕ್ಕೆ ಭಕ್ತಾದಿಗಳು ಆಗಮಿಸುತ್ತಿದ್ದು, ನದಿ ದಂಡೆಯಲ್ಲಿ ಪ್ರತಿ ದಿನವೂ ಹೋಮ್ ಗಾರ್ಡ್ ಸಿಬ್ಬಂದಿ ಸೇರಿದಂತೆ ಪೊಲೀಸ್ ಸಿಬ್ಬಂದಿ ಕಾವಲು ನಿಯೋಜಿಸಲಾಗಿದೆ ಸಾರ್ವಜನಿಕರು ಮತ್ತು ಭಕ್ತಾದಿಗಳು ಕಾವೇರಿ ನದಿಗೆ ಇಳಿಯದಂತೆ ಎಚ್ಚರಿಕೆ ವಹಿಸಬೇಕು. ಮುಂಜಾಗ್ರತಾ ಕ್ರಮವಾಗಿ ನದಿ ದಂಡೆಯಲ್ಲಿ ಸಾರ್ವಜನಿಕರಿಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ಬೃಹತ್ ಸೂಚನಾ ಫಲಕ ಅಳವಡಿಸಲು ಕ್ರಮ ವಹಿಸಬೇಕು ಮತ್ತು ಧ್ವನಿವರ್ಧಕಗಳಿಂದ ಎಚ್ಚರಿಕೆಯನ್ನು ನೀಡುತ್ತಿರಬೇಕು ಎಂದು ತಾಲೂಕು ಆಡಳಿತಕ್ಕೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಯವರ ಸೂಚನೆಯ ಮೇರೆಗೆ ಕಾವೇರಿ ನದಿಯ ಹತ್ತಿರದಲ್ಲಿರುವ ಮನೆಗಳು ಹಾಗೂ ಅಂಗಡಿಗಳನ್ನು ಪೊಲೀಸ್ ಇಲಾಖೆ, ಅರಣ್ಯ ಇಲಾಖೆ, ಕಂದಾಯ ಇಲಾಖೆಯವರು ಜೊತೆಗೂಡಿ ತೆರವುಗೊಳಿಸಿದ್ದಾರೆ.

ಧ್ವನಿ ವರ್ಧಕಗಳ ಮೂಲಕ ಕಾವೇರಿ ನದಿಯಲ್ಲಿ ಚಿತಾಭಸ್ಮ ಬಿಡುವುದಕ್ಕಾಗಲಿ ಹಾಗೂ ನದಿ ವೀಕ್ಷಿಸಲು ಬರಬಾರದು ಎಂದು ಎಚ್ಚರಿಕೆ ನೀಡಲಾಗಿದೆ. ಮುಂಜಾಗ್ರತಾ ಕ್ರಮವಾಗಿ ಮುತ್ತತ್ತಿಗೆ ಹೋಗಿ ಬರುವ ಸಾರಿಗೆ ಬಸ್ ವ್ಯವಸ್ಥೆ ತಾತ್ಕಾಲಿಕವಾಗಿ ನಿಲ್ಲಿಸಲಾಗಿದೆ.

ಮುತ್ತತ್ತಿಗೆ ಹೋಗುವಾಗ ಸಿಗುವ ಮಾರ್ಗ ಮಧ್ಯದಲ್ಲಿ ಸಿಗುವ ಕೆಸರಕ್ಕಿ ಹಳ್ಳ ಸಹ ನೀರು ತುಂಬಿರುತ್ತದೆ. ಆದ ಕಾರಣ ಅಲ್ಲಿಯ ಗ್ರಾಮಸ್ಥರು ಸಹ ಹೊರಬಾರದಂತೆ ಜಲ ದಿಗ್ಬಂಧನ ಏರ್ಪಟ್ಟಿದೆ.

ಮೈಸೂರು ಮುಡಾ ಹಗರಣ ಸಿಬಿಐಗೆ ವಹಿಸುವಂತೆ ಆಗ್ರಹಿಸಿ ಪಾದಯಾತ್ರೆ



ಖಾಸಗಿ ಸಮುದಾಯ ಭವನದಲ್ಲಿ ನಡೆದ ಸಭೆಯಲ್ಲಿ ಜೆಡಿಎಸ್ ರಾಜ್ಯ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಮಾತನಾಡಿದರು.

ಮಂಡ್ಯ,ಜು.28– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಡೆದಿದೆ ಎನ್ನಲಾದ ಹಗರಣವನ್ನು ಸಿಬಿಐ ತನಿಖೆಗೆ ವಹಿಸುವಂತೆ ಆಗ್ರಹಿಸಿ ಬೆಂಗಳೂರಿನಿಂದ ಮೈಸೂರಿಗೆ ಆ.3 ರಿಂದ ಬೃಹತ್ ಪಾದಯಾತ್ರೆ ನಡೆಸಲಾಗುತ್ತಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಮತ್ತು ಪಕ್ಷದ ಕಾರ್ಯಕರ್ತರು ಭಾಗವಹಿಸುವಂತೆ ಜೆಡಿಎಸ್ ರಾಜ್ಯ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಮನವಿ ಮಾಡಿದ್ದಾರೆ.

ನಗರದ ಖಾಸಗಿ ಸಮುದಾಯ ಭವನದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಮೈಸೂರು ಮುಡಾ ಹಾಗೂ ವಾಲ್ಮೀಕಿ ನಿಗಮದ ಹಗರಣ ಸಿಬಿಐಗೆ ವಹಿಸಲು ಆಗ್ರಹಿಸಿ ಪಾದಯಾತ್ರೆ ಕೈಗೊಳ್ಳಲಾಗಿದೆ. ಪಕ್ಷದ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದರು.

ಮಂಡ್ಯ ಜಿಲ್ಲಾದ್ಯಂತ ಪ್ರವಾಸ ಮಾಡಿ ಪಕ್ಷ ಕಟ್ಟುವ ಕೆಲಸ ಮಾಡುತ್ತೇವೆ, ಚುನಾವಣೆ ಫಲಿತಾಂಶದ ಬಳಿಕ ಜೆಡಿಎಸ್ ಇರಲ್ಲ ಅಂತ ಕಾಂಗ್ರೆಸ್‌ನವರು ಹೇಳಿದ್ರು. ಆದರೆ ಕುಮಾರಸ್ವಾಮಿ ಹೆಚ್ಚು ಅಂತರದಲ್ಲಿ ಗೆಲುವು ಸಾಧಿಸಿದರು. ಆದರೂ ನನ್ನ ಸೋಲನ್ನು ಮರೆಯಲು ಸಾಧ್ಯವಿಲ್ಲ. ಭಗವಂತನ ಆಶೀರ್ವಾದ ಕುಮಾರಸ್ವಾಮಿ ಕೇಂದ್ರ ಸಚಿವರಾಗಿದ್ದಾರೆ. ಕುಮಾರಸ್ವಾಮಿ ಅವರಿಗೆ ಪ್ರಧಾನಿ ಮೋದಿ ಗೌರವ ಕೊಟ್ಟಿದ್ದಾರೆ. ಕನ್ನಡ ಭಾಷೆಯ ಮೇಲೆ ಗೌರವ ಇದೆ ಎಂದು ತಿಳಿಸಿದರು.

ಕುಮಾರಸ್ವಾಮಿ ಜಿಲ್ಲೆಯ ಅಭಿವೃದ್ಧಿಗೆ ಈಗಾಗಲೇ ಚಾಲನೆ ಕೊಟ್ಟಿದ್ದಾರೆ, ವಾರದಲ್ಲಿ ಒಂದು ದಿನ ತಂದೆಯವರು ಬರ್ತಾರೆ. ಅವರ ಅನುಪಸ್ಥಿತಿಯಲ್ಲಿ ನಾನು ಜಿಲ್ಲೆಯಲ್ಲಿ ನಿಮ್ಮ ಜೊತೆ ಇರ್ತೇನೆ. ಎಂಪಿ ಕಚೇರಿಯಲ್ಲಿ ಕುಳಿತು ಸಾರ್ವಜನಿಕರ ಸಮಸ್ಯೆ ಕೇಳುತ್ತೇನೆ. ಸಾರ್ವಜನಿಕ ಸಮಸ್ಯೆ ಕೇಳಲು ಶಾಶ್ವತವಾಗಿ ಪಕ್ಷದ ಕಚೇರಿ ಆರಂಭ ಮಾಡಲಾಗುವುದು ಎಂದರು. ಇತ್ತೀಚಿನ ದಿನಗಳಲ್ಲಿ ಕಾಂಗ್ರೆಸ್ ಆಡಳಿತಕ್ಕೆ ಬಂದ ನಂತರ ಹಗರಣ ಹೊರ ಬರುತ್ತಿದೆ, ಬಿಜೆಪಿ ವಿರುದ್ಧ 40% ಆರೋಪ ಮಾಡಿದ್ರು. ಇವತ್ತು ಕಾಂಗ್ರೆಸ್ ಸರ್ಕಾರ ಹಗರಣದ ಮೇಲೆ ಹಗರಣ ಮಾಡಿದ್ದಾರೆ. ವಾಲ್ಮೀಕಿ ನಿಗಮದ 187 ಕೋಟಿ ಹಗರಣ ಕಣ್ಣ ಮುಂದೆ ಇದೆ. ಸಿಎಂ ಕೂಡ 87 ಕೋಟಿ ಅಂತ ಒಪ್ಪಿಕೊಂಡಿದ್ದಾರೆ. ಸಾರ್ವಜನಿಕರು ಕಟ್ಟುವ ಹಣವನ್ನು ದುರುಪಯೋಗಪಡಿಸಿಕೊಂಡಿದ್ದಾರೆ ಎಂದು ದೂರಿದರು.

ಎಸ್ಸಿ,ಎಸ್ಟಿ ಸಮುದಾಯವನ್ನು ಓಟ್ ಬ್ಯಾಂಕ್ ಆಗಿ ಬಳಕೆ ಮಾಡಿಕೊಳ್ಳಲಾಗುತ್ತಿದೆ, ಮುಡಾ ಹಗರಣ ವಿಚಾರವಾಗಿ ಮಾತನಾಡಲು ಅವಕಾಶ ಕೊಟ್ಟಿಲ್ಲ. ಹಾಲಿನ ಪ್ರೋತ್ಸಾಹ ಧನ 1200ಕೋಟಿಯನ್ನ ರೈತರಿಗೆ ಕೊಟ್ಟಿಲ್ಲ. ರೈತಾಪಿ ವರ್ಗ ಆತ್ಮಹತ್ಯೆ ಮಾಡಿಕೊಳ್ಳುತ್ತಿದೆ. ಡೆಂಗ್ಯೂ ನಿಯಂತ್ರಣ ಮಾಡುತ್ತಿಲ್ಲ ಎಂದು ಆರೋಪಿಸಿದರು.

ಸಭೆಯಲ್ಲಿ ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸುರೇಶ್‌ಬಾಬು, ಮಾಜಿ ಶಾಸಕರಾದ ಡಾ.ಕೆ.ಅನ್ನದಾನಿ, ಕೆ.ಸುರೇಶ್‌ಗೌಡ, ಕೆ.ಟಿ.ಶ್ರೀಕಂಠೇಗೌಡ, ಪಿಇಟಿ ಅಧ್ಯಕ್ಷ ವಿಜಯಾನಂದ, ಮನ್‌ಮುಲ್ ಮಾಜಿ ಅಧ್ಯಕ್ಷರಾಮಚಂದ್ರು, ಜೆಡಿಎಸ್ ಜಿಲ್ಲಾಧ್ಯಕ್ಷ ಡಿ.ರಮೇಶ್ ಇತರರಿದ್ದರು.

ಅಪಾಯದ ಮಟ್ಟ ಮೀರಿ ಹರಿಯುತ್ತಿರುವ ಕಾವೇರಿ

- ಡ್ಯಾಂನಿಂದ 1.30 ಲಕ್ಷ ಕ್ಯೂಸೆಕ್ ನೀರು ಬಿಡುಗಡೆ
- ಶ್ರೀರಂಗಪಟ್ಟಣ, ಮಳವಳ್ಳಿ ವ್ಯಾಪ್ತಿ ಪ್ರದೇಶಗಳು ಜಲಾವೃತ

ಮಂಡ್ಯ,ಜು.28– ಜಿಲ್ಲೆಯ ಕೃಷ್ಣರಾಜ ಸಾಗರ ಅಣೆಕಟ್ಟೆ ಭರ್ತಿಯಾಗಿ ಅಪಾಯದ ಮಟ್ಟ ಮೀರಿ ಹರಿಯುತ್ತಿದ್ದು, ಡ್ಯಾಂನಿಂದ 1,30,867 ಕ್ಯೂಸೆಕ್ ನೀರನ್ನು ನದಿಗೆ ಬಿಡಲಾಗುತ್ತಿದ್ದು, ಈ ನಿಟ್ಟಿನಲ್ಲಿ ನದಿ ವ್ಯಾಪ್ತಿಯ ಪ್ರದೇಶ ಹಾಗೂ ಕಾವೇರಿ ನದಿ ಹರಿಯುವ ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರಿಗೆ ನಿರ್ಬಂಧ ವಿಧಿಸಲಾಗಿದೆ.

ಭಾನುವಾರ 123.34 ಅಡಿ ನೀರಿದ್ದು, 1,17,066 ಕ್ಯೂಸೆಕ್ ಒಳ ಹರಿವಿದ್ದು, 1,30,867 ಕ್ಯೂಸೆಕ್ ಹೊರ ಹರಿವಿದೆ. ಇದರಿಂದ ಶ್ರೀರಂಗಪಟ್ಟಣ ತಾಲೂಕಿನ ವ್ಯಾಪ್ತಿಯಲ್ಲಿ ಕಾವೇರಿ ಹರಿಯುವ ಬಲಮುರಿ, ಪಶ್ಚಿಮ ವಾಹಿನಿ, ಸಾಯಿಧಾಮ, ರಂಗನತಿಟ್ಟು,



ಸಂಗಮ, ವೆಲ್ಲೆಸ್ಲಿ ಸೇತುವೆ, ನಿಮಿಷಾಂಬ ದೇಗುಲ, ಮಹದೇವಪುರ, ಮಂಡ್ಯ ಕೊಪ್ಪಲಿನಲ್ಲಿ ಪ್ರವಾಹದ ರೀತಿಯಲ್ಲಿ ಕಾವೇರಿ ಉಕ್ಕಿ ಹರಿಯುತ್ತಿದೆ.

ಇದಲ್ಲದೇ ಮಳವಳ್ಳಿ ತಾಲೂಕಿನ ಗಗನ ಚುಕ್ಕಿ, ಮುತ್ತತ್ತಿ, ಮಾರೆಹಳ್ಳಿ ಕೆರೆಯಲ್ಲೂ ಸಹ ಪ್ರವಾಹದಂತೆ ಹರಿಯುತ್ತಿರುವ ಕಾವೇರಿ, ಪಕ್ಕದ ಚಾಮರಾಜನಗರದ ಕೊಳ್ಳೇಗಾಲ ತಾಲೂಕಿನ ಎಡಮುರಿ ಮತ್ತು ರಾಮನಗರ ಜಿಲ್ಲೆಯ ಕನಕಪುರ ತಾಲೂಕಿನ ಮೇಕೆದಾಟು, ಸಂಗಮ ಹಾಗೂ ಹೊಗೇನಕಲ್‌ನಲ್ಲೂ ಕಾವೇರಿ ಉಕ್ಕಿ ಹರಿಯುತ್ತಿದೆ. ಈ ಎಲ್ಲಾ ಪ್ರದೇಶಗಳಲ್ಲೂ ಹೈಅಲರ್ಟ್ ಘೋಷಿಸಿದ್ದು, ನೀರಿನ ಬಳಿ ಯಾರೂ ಹೋಗದಂತೆ ಹಾಗೂ ಸ್ಥಳದಲ್ಲಿ ವಾಸಿಸುವವರಿಗೆ ಅಪಾಯದ ಮುನ್ಸೂಚನೆ ಇರುವುದರಿಂದ ಜಾಗರೂಕರಾಗಿರುವಂತೆ ಸೂಚಿಸಲಾಗಿದೆ.

ಈ ಎಲ್ಲಾ ಸ್ಥಳಗಳಿಗೆ ಅಧಿಕಾರಿಗಳು ಭೇಟಿ ನೀಡಿ, ಪರಿಶೀಲನೆಯನ್ನು ನಡೆಸಿದ್ದು, ಸಾರ್ವಜನಿಕರಿಗೆ ತಿಳಿಹೇಳಲಾಗಿದೆ. ಜೊತೆಗೆ ಪ್ರವಾಸಿ ತಾಣಗಳಲ್ಲಿ ಬ್ಯಾರಿಕೇಡ್ ಹಾಕಿ ಪ್ರವಾಸಿಗರ ಪ್ರವೇಶವನ್ನು ನಿರ್ಬಂಧಿಸಿದ್ದು, ದೂರದಲ್ಲೇ ಪ್ರವಾಸಿತಾಣಗಳ ವೀಕ್ಷಣೆಗೆ ಅನುವು ಮಾಡಿಕೊಡಲಾಗಿದೆ. ಜೊತೆಗೆ ಹೆಚ್ಚಿನ ಪೊಲೀಸ್ ಸಿಬ್ಬಂದಿಗಳನ್ನು ನೇಮಕ ಮಾಡಲಾಗಿದೆ.

ಬಾಗಿನ ಅರ್ಪಣೆ ಸ್ಥಳ ಪರಿಶೀಲಿಸಿದ ಜಿಲ್ಲಾಧಿಕಾರಿ

ಶ್ರೀರಂಗಪಟ್ಟಣ, ಜು.28– ಕಾವೇರಿ ಮಾತೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಾಗಿನ ಅರ್ಪಿಸಲು ಸೋಮವಾರ (ಜು.29) ಬರುವ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಡಾ.ಕುಮಾರ್, ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಹಾಗೂ ಶಾಸಕ ರಮೇಶ ಬಂಡಿಸಿದ್ದೇಗೌಡ ಅವರುಗಳು ಬಾಗಿನ ಅರ್ಪಿಸುವ ಸ್ಥಳ ಸೇರಿದಂತೆ ವಿವಿಧೆಡೆ ತೆರಳಿ ಸಿದ್ಧತೆಗಳನ್ನು ಪರಿಶೀಲನೆ ನಡೆಸಿದರು.

ಕಾವೇರಿ ನೀರಾವರಿ ನಿಗಮ ಕಾರ್ಯಪಾಲಕ ಅಭಿಯಂತರ ಜಯಂತ್‌ರಿಂದ ಸಿದ್ಧತೆ ಕುರಿತು ಮಾಹಿತಿ ಪಡೆದು ಸಲಹೆ ಸೂಚನೆ ನೀಡಿದ ಜಿಲ್ಲಾಧಿಕಾರಿ ಕುಮಾರ್ ಹಾಗೂ ಎಸ್ಪಿ ಬಾಲದಂಡಿ ಯಾವುದೇ ಲೋಪವಾಗದಂತೆ ಎಲ್ಲರೂ ಎಚ್ಚರ ವಹಿಸಲು ಸೂಚಿಸಿದರು. ಬಾಗಿನ ಅರ್ಪಿಸುವ ಜಾಗಕ್ಕೆ, ಅನುಮತಿ ನೀಡಿರುವವರಷ್ಟೆ ಇರುವಂತೆ ಎಚ್ಚರ ವಹಿಸಲು ಸೂಚಿಸಿದರು. ಇದೇ ಸಂದರ್ಭದಲ್ಲಿ ಸಾರ್ವಜನಿಕರಿಗೆ ಮನವಿ ಸಲ್ಲಿಸಲು ನಿಗದಿತ ಜಾಗ ಮೀಸಲಿರಿಸಿದ್ದು ಅಲ್ಲಿಯೇ ಅವರು ಇದ್ದು, ಮನವಿ ಸಲ್ಲಿಸುವಂತೆ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಅಧಿಕಾರಿಗಳಿಗೆ ಸೂಚಿಸಿದರು

ಹೇಮಾವತಿ ನಾಲೆ ಕಾಮಗಾರಿ ಕಳಪೆ: ರೈತರ ಪ್ರತಿಭಟನೆ

ಕಿಕ್ಕೇರಿ, ಜು.28– ರೈತರಿಗೆ ಅನುಕೂಲವಾಗಬೇಕಿದ್ದ ನಾಲೆಗಳ ಕಾಮಗಾರಿ ಕಳಪೆಯಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿ ರೈತರು ಪ್ರತಿಭಟನೆ ನಡೆಸಿದರು.

ಸಮೀಪದ ಗಾಂಧಿನಗರದ ಬಳಿ ನಡೆಯುತ್ತಿರುವ ಕಾವೇರಿ ನೀರಾವರಿ ನಿಗಮದ ಹೇಮಾವತಿ ನಾಲೆ ಕಿಕ್ಕೇರಿ ಉಪವಿಭಾಗದ ವಿತರಣಾ ವಿಭಾಗದ ಸರಪಳಿ ನಂ.54ರ ಕಾಮಗಾರಿ ಸ್ಥಳಕ್ಕೆ ಆಗಮಿಸಿದ ರೈತರು, ಗ್ರಾಮಸ್ಥರು ತಲೆ ಮೇಲೆ ಕಲ್ಲುಚಪ್ಪಡಿ ಹೊತ್ತುಕೊಂಡು ಮಾತನಾಡಿ, ಎರಡು ವರ್ಷವಾದರೂ ನಾಲೆ ದುರಸ್ತಿಯಾಗದೆ ತಲೆ ಮೇಲೆ ಚಪ್ಪಡಿ ಹಾಕಿಕೊಳ್ಳುವಂತಾಗಿದೆ. ನಾಲೆ 5373 ಎಕರೆ ಅಚ್ಚುಕಟ್ಟು ಪ್ರದೇಶ ಹೊಂದಿದೆ. ನಾಲೆ ಅಡ್ಡ ಮೋರಿ, ಏರಿ, ಲೈನಿಂಗ್ ಹಾಳಾಗಿದ್ದು 20 ವರ್ಷಗಳಿಂದ ರೈತರು ಹೋರಾಟ ನಡೆಸಿದ ಫಲವಾಗಿ ದುರಸ್ತಿಗಾಗಿ ಸಚಿವ ಕೆ.ಸಿ.ನಾರಾಯಣಗೌಡರ ಅವಧಿಯಲ್ಲಿ 55 ಕೋಟಿ ರೂ. ಅನುದಾನ ಬಿಡುಗಡೆಯಾಗಿ ಕಾಮಗಾರಿ ನಡೆಯುತ್ತಿದ್ದು ಎಲ್ಲವೂ ಕಳಪೆಯಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ನಾಲೆ ನಂಬಿಕೊಂಡು ಕುಂದೂರು, ಗಂಗನಹಳ್ಳಿ, ಅಣೆಚಾಕನಹಳ್ಳಿ, ಕೃಷ್ಣಾಪುರ, ಮಾಕವಳ್ಳಿ, ಕರೋಟಿ,



ಹೇಮಾವತಿ ನಾಲೆಯಲ್ಲಿ ಕಳಪೆ ಕಾಮಗಾರಿ ನಡೆಯುತ್ತಿದೆ ಎಂದು ಗ್ರಾಮಸ್ಥರು ಪ್ರತಿಭಟನೆ ನಡೆಸಿದರು.

ಲಿಂಗಾಪುರ, ಕಾರಿಗಾನಹಳ್ಳಿ, ಹೆಗ್ಗಡಹಳ್ಳಿ ಸೇರಿದಂತೆ ಸುಮಾರು 18 ಗ್ರಾಮಗಳ ರೈತರು ಜೀವಿಸುತ್ತಿದ್ದಾರೆ. ಮಾಡಲಾಗಿರುವ ಲೈನಿಂಗ್, ಸಿಮೆಂಟ್ ಸ್ಲಾಬ್‌ಗಳಲ್ಲಿ ಬಿರುಕು ಬಿಟ್ಟಿವೆ. ಕ್ಯೂರಿಂಗ್ ಕಾಣದಾಗಿದೆ. ಕಳಪೆ ಕಾಮಗಾರಿಯ ಗುತ್ತಿಗೆದಾರರನ್ನು ಕಪ್ಪುಪಟ್ಟಿಗೆ ಸೇರಿಸಿ. ಸಂಬಂಧಪಟ್ಟ ಅಧಿಕಾರಿಗಳು ಇತ್ತ ಗಮನಹರಿಸಿ ಗುಣಮಟ್ಟದ ಕಾಮಗಾರಿಗೆ ಮುಂದಾಗಬೇಕು ಎಂದು ಕೂಗಾಡಿದರು. ಕರೋಟಿ ತಮ್ಮಯ್ಯ, ಅಜಯ್, ಚಂದ್ರೇಗೌಡ, ದಿನೇಶ, ಸುನಿಲ್, ಪಾಪೇಗೌಡ, ಯೋಗೇಶ್, ಪುಟ್ಟೇಗೌಡ, ಮೋಹನ ಹಾಜರಿದ್ದರು.

ಒಂದನೇ ಪುಟದಿಂದ

ಕುಮಾರಸ್ವಾಮಿ ಮೂಗಿನಲ್ಲಿ ರಕ್ತಸ್ರಾವ

ವೇಳೆ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಕುಮಾರಸ್ವಾಮಿ, ಯಾರೂ ಆತಂಕಕ್ಕೆ ಒಳಗಾಗುವುದು ಅವಶ್ಯಕತೆ ಇಲ್ಲ. ಮೂರು ಬಾರಿ ನನಗೆ ಹೃದಯ ಕವಾಟನ್ನು ಬದಲಾವಣೆ ಮಾಡಲಾಗಿದೆ. ರಕ್ತ ಗಟ್ಟಿ ಆಗಬಾರದು ಎಂಬ ಕಾರಣಕ್ಕೆ ಬ್ಲಡ್ ತಿನ್ನರ್ ಮಾತ್ರೆ ತೆಗೆದುಕೊಳ್ಳುತ್ತೇನೆ. ಒತ್ತಡ ಜಾಸ್ತಿಯಾದಾಗ, ವಿಶ್ರಾಂತಿ ಇಲ್ಲದೆ ಇದ್ದಾಗ ನನಗೆ ಮೂಗಿನಿಂದ ರಕ್ತಸ್ರಾವ ಆಗುವುದು ಸಹಜ. ಕೆಲಸದ ಒತ್ತಡ ಕಡಿಮೆ ಮಾಡಿಕೊಳ್ಳಿ ಎಂದು ವೈದ್ಯರು ಸಲಹೆ ನೀಡಿದ್ದಾರೆ ಎಂದರು.

92 ವರ್ಷಗಳ ದೇವೇಗೌಡರು ನಾಳೆಯ ದಿನ ಸಂಸತ್ತಿನಲ್ಲಿ ಕಾವೇರಿ ವಿಚಾರ ಪ್ರಸ್ತಾಪ ಮಾಡಲಿದ್ದಾರೆ. ಡಿಎಂಕೆ ಮತ್ತು ಇತರೆ ಸದಸ್ಯರು ಅಡ್ಡಿಪಡಿಸುವ ಕೆಲಸ ಮಾಡುತ್ತಾರೆ. ಆ ಸಂದರ್ಭದಲ್ಲಿ ನಾನು ಅವರ ಜೊತೆಗೆ ಇರಬೇಕು. ರಾತ್ರಿ ನನ್ನ ದೇಹದಲ್ಲಿನ ಏರುಪೇರು ನೋಡಿಕೊಂಡು

> ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿಯವರ ಆರೋಗ್ಯದಲ್ಲಿ ಏರುಪೇರಾದ ಸುದ್ದಿ ಮಾಧ್ಯಮಗಳಲ್ಲಿ ನೋಡಿದೆ. ಚಿಕಿತ್ಸೆ ಪಡೆಯುತ್ತಿರುವ ಹೆಚ್.ಡಿ. ಕುಮಾರಸ್ವಾಮಿಯವರು ಶೀಘ್ರ ಚೇತರಿಸಿಕೊಂಡು ಮತ್ತೇ ತಮ್ಮ ಕರ್ತವ್ಯದಲ್ಲಿ ತೊಡಗಿಸಿ ಕೊಳ್ಳುವಂತಾಗಲೀ ಎಂದು ಹಾರೈಸುತ್ತೇನೆ. – ಮುಖ್ಯಮಂತ್ರಿ ಸಿದ್ದರಾಮಯ್ಯ ಟ್ವೀಟ್.

ದೆಹಲಿ ಪ್ರವಾಸ ನಿರ್ಧಾರ ಮಾಡುತ್ತೇನೆ ಎಂದ ಅವರು, ಪಾದಯಾತ್ರೆ ಮಾಡದೇ ಇರುವುದಕ್ಕೆ ನನ್ನ ಆರೋಗ್ಯ ಸಂಪೂರ್ಣ ಕೆಟ್ಟಿಲ್ಲ. ಅದಕ್ಕೆ ಇನ್ನೂ ಒಂದು ವಾರ ಸಮಯ ಇದೆ. ನಾನು ಇಲ್ಲದಿದ್ದರೆ ನಿಖಿಲ್ ಕುಮಾರಸ್ವಾಮಿ ನಮ್ಮ ಶಾಸಕರ ಜೊತೆ ಪಾದಯಾತ್ರೆ ಮಾಡುತ್ತಾರೆ. ಈ ಬಗ್ಗೆ ಕಾರ್ಯಕರ್ತರಿಗೆ ಆತಂಕ ಬೇಡ ಎಂದು ಕುಮಾರಸ್ವಾಮಿ ಅವರು ಹೇಳಿದರು.

ಸಿ.ಹೆಚ್.ವಿಜಯಶಂಕರ್ ನೇಮಕ

ಹೆಚ್ಚುವರಿ ಜವಾಬ್ದಾರಿಯನ್ನು ಸಹ ನೀಡಲಾಗಿದೆ.

ಸಿ.ಹೆಚ್.ವಿಜಯಶಂಕರ್: ಮೈಸೂರಿನಿಂದ ಎರಡು ಬಾರಿ ಸಂಸದರಾಗಿದ್ದ ವಿಜಯಶಂಕರ್ ಬಿಜೆಪಿ ಮತ್ತು ಕಾಂಗ್ರೆಸ್ ಎರಡನ್ನೂ ಪ್ರತಿನಿಧಿಸುವ ಮೂಲಕ ರಾಜಕೀಯದಲ್ಲಿ ಸೋಲು–ಗೆಲುವನ್ನು ಕಂಡಿದ್ದರು. ಮೈಸೂರಿನ ಕುರುಬ ಸಮುದಾಯದ ನಾಯಕ ವಿಜಯಶಂಕರ್ ಅವರು 1998 ಮತ್ತು 2004ರ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಭದ್ರಕೋಟೆಯಾಗಿದ್ದ ಮೈಸೂರು–ಕೊಡಗು ಕ್ಷೇತ್ರದಲ್ಲಿ ಬಿಜೆಪಿ ಕಾಲಿಡಲು ಸಹಾಯ ಮಾಡಿದರು. ಆದರೆ 2014ರ ಲೋಕಸಭೆ ಚುನಾವಣೆಯಲ್ಲಿ ಹಾಸನ ಕ್ಷೇತ್ರದಲ್ಲಿ ಹೆಚ್.ಡಿ.ದೇವೇಗೌಡರ ವಿರುದ್ಧ ಸೋತಿದ್ದರು.

2017ರಲ್ಲಿ ಬಿಜೆಪಿ ತೊರೆದಿದ್ದ ವಿಜಯಶಂಕರ್ ಮರು ವರ್ಷ ಕಾಂಗ್ರೆಸ್‌ಗೆ ಸೇರ್ಪಡೆಯಾದರು. 2019ರ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್–ಜೆಡಿಎಸ್ ಮೈತ್ರಿಕೂಟದ ಅಭ್ಯರ್ಥಿಯಾಗಿ ಮೈಸೂರಿನಿಂದ ಕಾಂಗ್ರೆಸ್ ಟಿಕೆಟ್‌ನಿಂದ ಕಣಕ್ಕಿಳಿದಿದ್ದರು. ಆದರೆ ಅವರು ಬಿಜೆಪಿಯ ಪ್ರತಾಪ್ ಸಿಂಹ ವಿರುದ್ಧ ಸೋತಿದ್ದರು. ಕಾಂಗ್ರೆಸ್‌ನಲ್ಲಿ ಮೂಲ, ವಲಸಿಗ ಎಂಬ ಬಣಗಳಿದ್ದು, ತಮ್ಮ ಕಡೆಗಣಿಸಲಾಗುತ್ತಿದೆ ಎಂದು ನವೆಂಬರ್ 2019ರಲ್ಲಿ ಬಿಜೆಪಿ ಮರಳಿದ್ದರು. 2023ರ ವಿಧಾನಸಭಾ ಚುನಾವಣೆಯಲ್ಲಿ ಮೈಸೂರಿನ ಪಿರಿಯಾಪಟ್ಟಣ ವಿಧಾನಸಭಾ ಕ್ಷೇತ್ರದಿಂದ ಸ್ಪರ್ಧಿಸಿ ಸೋತಿದ್ದರು. ಮಾಜಿ ಕ್ಯಾಬಿನೆಟ್ ಸಚಿವರಾಗಿದ್ದ ವಿಜಯಶಂಕರ್ ಅವರು ಅರಣ್ಯ ಇಲಾಖೆ, ಪರಿಸರ ಮತ್ತು ಪರಿಸರ ಇಲಾಖೆ ಮತ್ತು ಸಣ್ಣ ಪ್ರಮಾಣದ ಕೈಗಾರಿಕೆಗಳು ಸೇರಿದಂತೆ ವಿವಿಧ ಖಾತೆಗಳನ್ನು ನಿರ್ವಹಿಸಿದ್ದಾರೆ. ಅವರು 2010 ರಿಂದ 2016 ರವರೆಗೆ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರೂ ಆಗಿದ್ದರು.

ಪದಕ ಗೆದ್ದ ಮನು ಭಾಕರ್!

ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ 10 ಮೀಟರ್ ಏರ್ ಪಿಸ್ತೂಲ್ ಸ್ಪರ್ಧೆಯಲ್ಲಿ ಕಂಚಿನ ಪದಕ ಗೆದ್ದಿರುವ ಮನು ಭಾಕರ್ ಅವರಿಗೆ ಹೃತ್ಪೂರ್ವಕ ಅಭಿನಂದನೆಗಳು. ಭಾರತವು ನಿಮ್ಮ ಬಗ್ಗೆ ಹೆಮ್ಮೆಪಡುತ್ತದೆ. ಶೂಟಿಂಗ್‌ನಲ್ಲಿ ಪದಕ ಗೆದ್ದ ದೇಶದ ಮೊದಲ ಮಹಿಳೆಯೂ ನೀವಾಗಿದ್ದಿರಿ. ನಿಮ್ಮ ಸಾಧನೆಯು ಅನೇಕ ಕ್ರೀಡಾಪಟುಗಳಿಗೆ ವಿಶೇಷವಾಗಿ ಮಹಿಳೆಯರಿಗೆ ಸ್ಫೂರ್ತಿ ನೀಡಲಿದೆ' ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಮನು ಭಾಕರ್ ಅವರಿಗೆ ಅಭಿನಂದನೆ ತಿಳಿಸಿ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಗೃಹಸಚಿವ ಅಮಿತ್ ಶಾ, 'ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಕಂಚಿನ ಪದಕ ಗೆಲ್ಲುವ ಮೂಲಕ ಭಾರತಕ್ಕೆ ಮೊದಲ ಪದಕ ತಂದುಕೊಟ್ಟ ಮನು ಭಾಕರ್ ಅವರಿಗೆ ಅಭಿನಂದನೆಗಳು. ನಿಮ್ಮ ಗೆಲುವು ಇಡೀ ದೇಶದಲ್ಲಿ ಸಂಭ್ರಮವನ್ನುಂಟು ಮಾಡಿದೆ. ನಿಮ್ಮ ಸಾಧನೆಗೆ ಇಡೀ ರಾಷ್ಟ್ರವೇ ಹೆಮ್ಮೆ ಪಡುತ್ತಿದೆ' ಎಂದಿದ್ದಾರೆ. ನಿಮ್ಮ ಸಮರ್ಪಣಾ ಭಾವ, ಕಠಿಣ ಪರಿಶ್ರಮ ಮತ್ತು ಉತ್ಸಾಹವೂ ಇದೀಗ ಫಲ ನೀಡಿದೆ. ಈ ಸಾಧನೆಯು ನಿಮ್ಮ ಪರಿಶ್ರಮ ಮತ್ತು ಸಂಕಲ್ಪಕ್ಕೆ ಸಾಕ್ಷಿಯಾಗಿದೆ. ನಿಮಗೆ ತುಂಬು ಹೃದಯದ ಅಭಿನಂದನೆಗಳು' ಎಂದು ಶೂಟರ್ ಅಭಿನವ್ ಬಿಂದ್ರಾ ಹೇಳಿದ್ದಾರೆ.

ಪ್ಯಾರಿಸ್ ಒಲಿಂಪಿಕ್ ಕ್ರೀಡಾಕೂಟ-2024

ಬ್ಯಾಡ್ಮಿಂಟನ್‌ನಲ್ಲಿ ಪಿ.ವಿ.ಸಿಂಧು ಶುಭಾರಂಭ

ಪ್ಯಾರಿಸ್, ಜು.28– ಭಾರತದ ಬ್ಯಾಡ್ಮಿಂಟನ್ ಆಟಗಾರ್ತಿ ಪಿ.ವಿ.ಸಿಂಧು ಗೆಲುವಿನೊಂದಿಗೆ ಪ್ಯಾರಿಸ್ ಒಲಿಂಪಿಕ್ಸ್ ಅಭಿಯಾನ ಆರಂಭಿಸಿದ್ದಾರೆ. ಇಂದು ನಡೆದ ಮಹಿಳೆಯರ ಸಿಂಗಲ್ಸ್ ಬ್ಯಾಡ್ಮಿಂಟನ್ ಪಂದ್ಯದಲ್ಲಿ ಸಿಂಧು, ಮಾಲ್ಡೀವ್ಸ್ ಆಟಗಾರ್ತಿ ಫಾತಿಮತ್ ನಬಾಹ್ ಅಬ್ದುಲ್ ರಜಾಕ್ ಅವರನ್ನು 21–9, 21–6 ನೇರ ಸೆಟ್‌ಗಳಿಂದ ಮಣಿಸಿದರು.

ಮೊದಲ ಸೆಟ್‌ನಲ್ಲಿ 13ನೇ ಶ್ರೇಯಾಂಕಿತ ಆಟಗಾರ್ತಿ ಪಿ.ವಿ.ಸಿಂಧು ಎದುರಾಳಿ ಆಟಗಾರ್ತಿಗೆ ಹಲವು ಅವಕಾಶ ನೀಡಿದರು. ಸೆಟ್‌ನ ಆರಂಭದಲ್ಲಿ 3–3ರಲ್ಲಿ ಸಮಬಲಗೊಂಡಿತ್ತು. ಇದಾದ



ಬಳಿಕ ಮಾಲ್ಡೀವ್ಸ್ ಆಟಗಾರ್ತಿಗೆ ಯಾವುದೇ ಅವಕಾಶ ನೀಡದ ಸಿಂಧು ಮಧ್ಯ ವಿರಾಮದವರೆಗೂ 11–4 ಅಂಕಗಳೊಂದಿಗೆ 7 ಅಂಕಗಳ ಮುನ್ನಡೆ ಸಾಧಿಸಿದರು. ವಿರಾಮದ ನಂತರವೂ ಅದ್ಭುತ ಪ್ರದರ್ಶನ ಮುಂದುವರಿಸಿ ಅವರು ಮೊದಲ ಸೆಟ್ ಅನ್ನು 21–9 ಅಂತರದಿಂದ ಗೆದ್ದುಕೊಂಡರು.

ಎರಡನೇ ಸೆಟ್‌ನಲ್ಲೂ ಅಕ್ರಮಣಕಾರಿ ಆಟವಾಡಿದ ಸಿಂಧು ವಿಶ್ವ ರ್‍ಯಾಂಕಿಂಗ್‌ನಲ್ಲಿ 99ನೇ ಸ್ಥಾನದ ಮಾಲ್ಡೀವ್ಸ್‌ನ ಅಬ್ದುಲ್ ರಜಾಕ್ ಮೇಲೆ ಒತ್ತಡ ಹೇರಲು ಆರಂಭಿಸಿದರು. ಪಂದ್ಯದ ಕೊನೆಯವರೆಗೂ ಎದುರಾಳಿ ಮೇಲೆ ಸವಾರಿ ಮಾಡಿ 21–6 ಅಂತರದಿಂದ ಗೆದ್ದು ಬೀಗಿದರು.

ಈ ಹಿಂದೆ ಒಲಿಂಪಿಕ್ಸ್‌ನಲ್ಲಿ ಭಾರತಕ್ಕೆ ಬೆಳ್ಳಿ ಮತ್ತು ಕಂಚಿನ ಪದಕ ತಂದುಕೊಟ್ಟಿರುವ ಸಿಂಧು, ಈ ಬಾರಿ ಚಿನ್ನದ ಪದಕದ ನಿರೀಕ್ಷೆಯಲ್ಲಿದ್ದಾರೆ.

ಪ್ರೀಕ್ವಾರ್ಟರ್ ಫೈನಲ್ ಪ್ರವೇಶಿಸಿದ ಬಾಕ್ಸರ್ ನಿಖತ್ ಜರೀನ್

ಪ್ಯಾರಿಸ್: ಭಾರತದ ಮಹಿಳಾ ಬಾಕ್ಸರ್ ನಿಖತ್ ಜರೀನ್ ತಮ್ಮ ಚೊಚ್ಚಲ ಒಲಿಂಪಿಕ್ಸ್‌ನಲ್ಲಿ ಪ್ರೀಕ್ವಾರ್ಟರ್ ಫೈನಲ್ ಪ್ರವೇಶಿಸಿದ್ದಾರೆ. ಮಹಿಳೆಯರ 50 ಕೆಜಿ ವಿಭಾಗದ 32ನೇ ಸುತ್ತಿನ ಪಂದ್ಯದಲ್ಲಿ ಎದುರಾಳಿ ಜರ್ಮನಿಯ ಬಾಕ್ಸರ್ ಮ್ಯಾಕ್ಸಿ ಕ್ಲೋಟ್ಜರ್ ವಿರುದ್ಧ 5–0 ಅಂತರದಿಂದ ಏಕಪಕ್ಷೀಯವಾಗಿ ಗೆದ್ದ ಅವರು, ಪ್ರೀಕ್ವಾರ್ಟರ್ ಫೈನಲ್ ಪ್ರವೇಶಿಸಿದ್ದಾರೆ.

2 ಬಾರಿಯ ವಿಶ್ವ ಚಾಂಪಿಯನ್ ನಿಖತ್ ಜರೀನ್



2022ರ ಕಾಮನ್‌ವೆಲ್ತ್ ಗೇಮ್ಸ್‌ನಲ್ಲಿ ಚಿನ್ನದ ಪದಕ ಮತ್ತು 2022ರ ಏಷ್ಯನ್ ಗೇಮ್ಸ್‌ನಲ್ಲಿ ಕಂಚಿನ ಪದಕ ಗೆದ್ದಿದ್ದರು. ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಚಿನ್ನದ ಪದಕ ಗೆಲ್ಲುವ ಸ್ಪರ್ಧಿಗಳ ಪೈಕಿ ನಿಖತ್ ಜರೀನ್ ಕೂಡ ಒಬ್ಬರಾಗಿದ್ದಾರೆ. ನಿಖತ್ ಝರೀನ್ ಅವರ ಮುಂದಿನ ಪಂದ್ಯ ಗುರುವಾರ ಏಷ್ಯನ್ ಗೇಮ್ಸ್ ಅಗ್ರ ಶ್ರೇಯಾಂಕದ ಮತ್ತು ಹಾಲಿ ಫ್ಲೈವೇಟ್ ವಿಶ್ವ ಚಾಂಪಿಯನ್ ಚೀನಾದ ವು ಯು ವಿರುದ್ಧ ನಡೆಯಲಿದೆ.

ಲಂಕಾ ವಿರುದ್ಧ ಟಿ20 ಸರಣಿ ಗೆದ್ದ ಭಾರತ

ಕೊಲಂಬೊ, ಜು.28– ಮಳೆ ಬಾಧಿತ ಪಂದ್ಯದಲ್ಲಿ ಬೌಲಿಂಗ್ ಹಾಗೂ ಬ್ಯಾಟಿಂಗ್‌ನಲ್ಲಿ ಸಂಘಟಿತ ಪ್ರದರ್ಶನ ನೀಡಿದ ಭಾರತ, ಶ್ರೀಲಂಕಾ ವಿರುದ್ಧ 7 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ. ಇದರೊಂದಿಗೆ ಭಾರತ 3 ಪಂದ್ಯಗಳ ಟಿ20 ಸರಣಿಯನ್ನು ಇನ್ನೂ ಒಂದು ಪಂದ್ಯ ಬಾಕಿ ಇರುವಾಗಲೇ 2–0 ಅಂತರದಲ್ಲಿ ತನ್ನದಾಗಿಸಿಕೊಂಡಿತು.



ಇಲ್ಲಿನ ಪಲ್ಲೆಕೆಲೆ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆದ ಟಿ20 ಸರಣಿಯ 2ನೇ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಶ್ರೀಲಂಕಾ 20 ಓವರ್‌ಗಳಲ್ಲಿ 9 ವಿಕೆಟ್ ನಷ್ಟಕ್ಕೆ 161 ರನ್ ಬಾರಿಸಿತ್ತು. 162 ರನ್‌ಗಳ ಗುರಿ ಬೆನ್ನತ್ತಿದ ಭಾರತ ಮೊದಲ 3 ಎಸೆತಗಳಲ್ಲಿ 6 ರನ್ ಗಳಿಸುತ್ತಿದ್ದಂತೆ ಮಳೆಯ ಆರ್ಭಟ ಶುರುವಾಯಿತು. ಸುಮಾರು 1 ಗಂಟೆಗಳ ಕಾಲ ಮಳೆಯಾದ ಕಾರಣ ಡಕ್ವರ್ತ್ ಲೂಯಿಸ್ ನಿಯಮದ ಅನ್ವಯ ಭಾರತಕ್ಕೆ 8 ಓವರ್‌ಗಳಲ್ಲಿ 78 ರನ್ ಗುರಿ ನೀಡಲಾಯಿತು. ಸ್ಪರ್ಧಾತ್ಮಕ ಗುರಿ ಪಡೆದ ಭಾರತ ಕೇವಲ 6.3 ಓವರ್‌ಗಳಲ್ಲೇ 3 ವಿಕೆಟ್ ನಷ್ಟಕ್ಕೆ 81 ರನ್ ಬಾರಿಸಿ ಗೆಲುವಿನ ನಗೆ ಬೀರಿತು.

ಭಾರತದ ಪರ ಇನ್ನಿಂಗ್ಸ್ ಆರಂಭಿಸಿದ ಸಂಜು ಸ್ಯಾಮ್ಸನ್ ಮೊದಲ ಎಸೆತದಲ್ಲೇ ಗೋಲ್ಡನ್ ಡಕ್ ಆಗುವ ಮೂಲಕ ನಿರ್ಗಮಿಸಿದರು. ಬಳಿಕ ಯಶಸ್ವಿ ಜೈಸ್ವಾಲ್ ಜೊತೆಗೂಡಿದ ನಾಯಕ ಸೂರ್ಯಕುಮಾರ್ ಯಾದವ್ ಲಂಕಾ ಬೌಲರ್‌ಗಳಲ್ಲ ಬೆಂಡೆತ್ತಿದರು. ಬಿರುಸಿನ ಬ್ಯಾಟಿಂಗ್ ಮಾಡಿದ ಸೂರ್ಯಕುಮಾರ್ ಯಾದವ್ 12 ಎಸೆತಗಳಲ್ಲಿ ಸ್ಫೋಟಕ 26 ರನ್ ಚಚ್ಚಿ ಔಟಾದರು. ಇದರ ಬೆನ್ನಲ್ಲೇ ಯಶಸ್ವಿ ಜೈಸ್ವಾಲ್ 15 ಎಸೆತಗಳಲ್ಲಿ 30 ರನ್ ಬಾರಿಸಿ ಪೆವಿಲಿಯನ್‌ಗೆ ಮರಳಿದರು. ನಂತರ ಬಂದ ಹಾರ್ದಿಕ್ ಪಾಂಡ್ಯ 9 ಎಸೆತಗಳಲ್ಲಿ 1 ಸಿಕ್ಸ್, 3 ಬೌಂಡರಿಯೊಂದಿಗೆ ಸ್ಫೋಟಕ 22 ರನ್ ಬಾರಿಸಿ ಗೆಲುವು ತಂದುಕೊಟ್ಟರು. ರಿಷಭ್ ಪಂತ್ 2 ರನ್ ಗಳಿಸಿ ಅಜೇಯರಾಗುಳಿದರು. ಶ್ರೀಲಂಕಾ ಪರ ಮತೀಶ ತೀಕ್ಷ್ಣ, ವಾನಿಂದು ಹಸರಂಗ ಹಾಗೂ ಮತೀಶ ಪತಿರಾನ ತಲಾ ಒಂದೊಂದು ವಿಕೆಟ್ ಕಬಳಿಸಿದರು.

ಇದಕ್ಕೂ ಮುನ್ನ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಶ್ರೀಲಂಕಾ ಪರ 20 ಓವರ್‌ಗಳಲ್ಲಿ 9 ವಿಕೆಟ್ ನಷ್ಟಕ್ಕೆ 161 ರನ್ ಗಳಿಸಿತು. ತಂಡದ ಪರ ಪಥುಮ್ ನಿಸ್ಸಾಂಕ 32, ಕುಸಲ್ ಪೆರೇರಾ 53, ಕುಸಲ್ ಮೆಂಡಿಸ್ 10, ಕಮಿಂಡು ಮೆಂಡಿಸ್ 26, ಚರಿತ್ ಹಸಲಂಕ 14, ರಮೇಶ್ ಮೆಂಡಿಸ್ 12 ರನ್ ಗಳಿಸಿದರು. ಭಾರತದ ಪರ ರವಿ ಬಿಷ್ಣೋಯಿ 3, ಅರ್ಷದೀಪ್ ಸಿಂಗ್, ಅಕ್ಷರ್ ಪಟೇಲ್, ಹಾರ್ದಿಕ್ ಪಾಂಡ್ಯ ತಲಾ 2 ವಿಕೆಟ್ ಪಡೆದು ಮಿಂಚಿದರು. ಭಾರತದ ಪರ ರವಿ ಬಿಷ್ಣೋಯಿ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು.

ಬಾಕ್ಸಿಂಗ್: ಪ್ರೀ ಕ್ವಾರ್ಟರ್ ಫೈನಲ್‌ಗೆ ಪ್ರೀತಿ ಪವಾರ್



ಪ್ಯಾರೀಸ್: ಏಷ್ಯನ್ ಗೇಮ್ಸ್ ಕಂಚಿನ ಪದಕ ವಿಜೇತೆ ಪ್ರೀತಿ ಪವಾರ್ ತಮ್ಮ ಚೊಚ್ಚಲ ಒಲಿಂಪಿಕ್ಸ್ ಅನ್ನು ಗೆಲುವಿನೊಂದಿಗೆ ಆರಂಭಿಸಿದ್ದಾರೆ.

ನಾರ್ತ್ ಪ್ಯಾರಿಸ್ ಅರೆನಾದಲ್ಲಿ ನಡೆದ ಮಹಿಳೆಯರ ಬಾಕ್ಸಿಂಗ್ 54 ಕೆಜಿ ಈವೆಂಟ್‌ನ ಮೊದಲ ಸುತ್ತಿನ ಪಂದ್ಯದಲ್ಲಿ ವಿಯೆಟ್ನಾಂನ ವೋ ಥಿ ಕಿಮ್ ಅನ್ಹ್ ಅವರನ್ನು ಪ್ರೀತಿ 5–0 ಅಂತರದಿಂದ ಸೋಲಿಸಿದರು.

ಹರಿಯಾಣದ ಅಥ್ಲೀಟ್ ಪ್ರೀತಿ ಪವಾರ್, ಆರಂಭಿಕ ಸುತ್ತಿನಲ್ಲಿ ಹಿನ್ನಡೆ ಅನುಭವಿಸಿದ್ದರು. ಮೊದಲ ಸುತ್ತಿನ 6 ರೌಂಡ್ಸ್ ವಿಯೆಟ್ನಾಂ ಪರವಾಗಿದ್ದವು. ಆದಾಗ್ಯೂ, ಮೊದಲ ಸುತ್ತಿನ ಕೊನೆ ನಿಮಿಷಗಳಲ್ಲಿ ಪುಟಿದೆದ್ದ ಪ್ರೀತಿ ಪವಾರ್ ಆಕ್ರಮಣಕಾರಿ ತಂತ್ರಗಳ ಮೂಲಕ ಎದುರಾಳಿಗೆ ಬಲವಾದ ಪಂಚ್‌ಗಳನ್ನು ಮಾಡಿ ಪಂದ್ಯದ ಫಲಿತಾಂಶವನ್ನೇ ತನ್ನೆಡೆ ತಿರುಗಿಸಿ ಭರ್ಜರಿಯಾಗಿ ಗೆದ್ದರು.

ಈ ಗೆಲುವಿನೊಂದಿಗೆ ಪ್ರೀ ಕ್ವಾರ್ಟರ್ ಫೈನಲ್ ಪ್ರವೇಶಿಸಿರುವ ಪ್ರೀತಿ 16ನೇ ಸುತ್ತು ತಲುಪಿದ್ದಾರೆ. ಈ ಘಟ್ಟದಲ್ಲಿ ವಿಶ್ವ ಚಾಂಪಿಯನ್‌ಶಿಪ್ ಬೆಳ್ಳಿ ಪದಕ ವಿಜೇತೆ ಹಾಗೂ ಪ್ಯಾರಿಸ್ ಒಲಿಂಪಿಕ್ಸ್‌ನ ಎರಡನೇ ಶ್ರೇಯಾಂಕದ ಕೊಲಂಬಿಯಾದ ಯೆನಿ ಅರಿಯಾಸ್ ಅವರನ್ನು ಎದುರಿಸಲಿದ್ದಾರೆ. ಈ ಪಂದ್ಯದಲ್ಲಿ ಗೆಲುವು ಸಾಧಿಸಿದ್ದೇ ಆದಲ್ಲಿ ಒಲಿಂಪಿಕ್ಸ್ ಪದಕ ಹಾದಿ ಮತ್ತಷ್ಟು ಸುಲಭವಾಗಲಿದೆ.

ಏರ್ ರೈಫಲ್ ಸ್ಪರ್ಧೆ

ಫೈನಲ್‌ಗೆ ಅರ್ಜುನ್ ಬಾಬುತಾ

ಪ್ಯಾರಿಸ್: ಭಾರತದ ಸ್ಟಾರ್ ಶೂಟರ್ ಅರ್ಜುನ್ ಬಾಬುತಾ ಪುರುಷರ 10 ಮೀಟರ್ ಏರ್ ರೈಫಲ್ ಸಿಂಗಲ್ಸ್ ಸ್ಪರ್ಧೆಯಲ್ಲಿ ಫೈನಲ್ ಪ್ರವೇಶಿಸಿದ್ದಾರೆ.

ಅರ್ಹತಾ ಸುತ್ತಿನಲ್ಲಿ 7ನೇ ಸ್ಥಾನ ಪಡೆಯುವ ಮೂಲಕ ಅರ್ಜುನ್ ಫೈನಲ್‌ಗೆ ತಮ್ಮ ಸ್ಥಾನ ಖಚಿತಪಡಿಸಿಕೊಂಡರು. ಇದೇ ಸ್ಪರ್ಧೆಯಲ್ಲಿ ಭಾಗವಹಿಸಿದ್ದ ಮತ್ತೊಬ್ಬ ಭಾರತೀಯ ಶೂಟರ್ ಸಂದೀಪ್ ಸಿಂಗ್ ಫೈನಲ್‌ಗೆ ಅರ್ಹತೆ ಪಡೆಯವಲ್ಲಿ ವಿಫಲರಾದರು. ಅವರು ಅರ್ಹತಾ ಸುತ್ತಿನಲ್ಲಿ ಒಟ್ಟು 629.3 ಅಂಕಗಳೊಂದಿಗೆ 12ನೇ ಸ್ಥಾನಕ್ಕೆ ತಲುಪಿದರು.

ಪಂದ್ಯದಲ್ಲಿ ಉತ್ತಮ ಆರಂಭ ಪಡೆದಿದ್ದ



ಅರ್ಜುನ್ ಬಾಬುತಾ ಕ್ರಮವಾಗಿ 105.7, 104.9, 105.5, 105.4, 104.0 ಮತ್ತು 104.6 ಅಂಕಗಳೊಂದಿಗೆ ಒಟ್ಟು 630.1 ಅಂಕಗಳನ್ನು ಗಳಿಸಿ 7ನೇ ಸ್ಥಾನ ಪಡೆದರು. 629.3 ಅಂಕ ಪಡೆದಿದ್ದ ಸಂದೀಪ್ ಕೊನೆಯ ಸುತ್ತಿನಲ್ಲಿ ಪುನರಾಗಮನ ಮಾಡಲು ಪ್ರಯತ್ನಿಸಿದರಾದರೂ ಫೈನಲ್ ತಲುಪಲು ಸಾಧ್ಯವಾಗಲಿಲ್ಲ.

ರೆಪೆಚೇಜ್ ಸ್ಪರ್ಧೆ: ಕ್ವಾರ್ಟರ್ ಫೈನಲ್‌ಗೆ ಬಾಲರಾಜ್



ಪ್ಯಾರಿಸ್: ಭಾನುವಾರ ನಡೆದ ಪ್ಯಾರಿಸ್ ಒಲಿಂಪಿಕ್ಸ್‌ನ ರೋಯಿಂಗ್ ಪುರುಷರ ಸಿಂಗಲ್ಸ್ ಸ್ಕಲ್ಸ್ ರೆಪೆಚೇಜ್ ಸ್ಪರ್ಧೆಯಲ್ಲಿ ಎರಡನೇ ಸ್ಥಾನ ಪಡೆಯುವ ಮೂಲಕ ಭಾರತದ ಬಾಲರಾಜ್ ಪನ್ವಾರ್ ಕ್ವಾರ್ಟರ್ ಫೈನಲ್ ತಲುಪಿದ್ದಾರೆ.

25ರ ಹರೆಯದ ಬಾಲರಾಜ್ ರೆಪೆಚೇಜ್ 2ರಲ್ಲಿ 7:12.41 ನಿಮಿಷಗಳಲ್ಲಿ ಗುರಿ ತಲುಪಿ ಎರಡನೇ ಸ್ಥಾನ ಪಡೆದರೇ, ಮೊನಾಕೊದ ಕ್ವೆಂಟಿನ್ ಆಂಟೊಗನೆಲ್ಲಿ ಮೊದಲ ಸ್ಥಾನ ಪಡೆದರು.

ಪ್ರತಿ ರೆಪೆಚೇಜ್‌ನಿಂದ ಅಗ್ರ ಇಬ್ಬರು ಆಟಗಾರರು ಕ್ವಾರ್ಟರ್ ಫೈನಲ್‌ಗೆ ಅರ್ಹತೆ ಪಡೆಯುತ್ತಾರೆ. ಒಲಿಂಪಿಕ್ಸ್‌ಗೆ ಪಾದಾರ್ಪಣೆ ಮಾಡಿರುವ ಪನ್ವಾರ್ ಜು.30ರಂದು ಮಧ್ಯಾಹ್ನ 1.40ಕ್ಕೆ ಕ್ವಾರ್ಟರ್ ಫೈನಲ್‌ನಲ್ಲಿ ಭಾಗವಹಿಸಲಿದ್ದಾರೆ. ಮೊದಲ 500 ಮೀ. ದೂರವನ್ನು 1.44.13 ನಿಮಿಷ, 1000 ಮೀ ದೂರವನ್ನು 3:33.94 ನಿಮಿಷ, ನಂತರ 1500 ಮೀಟರ್ ದೂರವನ್ನು 5:23.22 ನಿಮಿಷ ಇದರ ನಂತರ 2000 ಮೀ ದೂರದ ಓಟವನ್ನು 7:12.41 ನಿಮಿಷಗಳಲ್ಲಿ ಪೂರ್ಣಗೊಳಿಸಿದರು. ಶನಿವಾರ ಇದೇ ಸ್ಪರ್ಧೆಯಲ್ಲಿ ಬಾಲರಾಜ್ 7:07:11 ನಿಮಿಷಗಳಲ್ಲಿ ಕ್ರಮಿಸಿ 4ನೇ ಸ್ಥಾನ ಪಡೆದು ರಿಪಿಚೇಜ್ ಸುತ್ತಿಗೆ ತಲುಪಿದ್ದರು.


ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆಯ ಮಡಿಕೇರಿ ಜಿಲ್ಲಾಸ್ಪತ್ರೆ ನೂತನ ಕಟ್ಟಡದಲ್ಲಿ

ಹೊರ ರೋಗಿಗಳ ಚಿಕಿತ್ಸಾ ಸೌಲಭ್ಯ ಆರಂಭ

ಮಡಿಕೇರಿ, ಜು.28–ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆಯ ಅಧೀನದ ನಗರದ ಜಿಲ್ಲಾಸ್ಪತ್ರೆಯ 300 ಹಾಸಿಗೆಯ ನೂತನ ಕಟ್ಟಡದಲ್ಲಿ ಹೊರ ರೋಗಿಗಳ ಚಿಕಿತ್ಸಾ ಸೌಲಭ್ಯವನ್ನು ಭಾನುವಾರದಿಂದ ಆರಂಭಿಸಲಾಗಿದೆ.

ಜಿಲ್ಲಾಸ್ಪತ್ರೆ ಆವರಣದಲ್ಲಿ ಮಹಿಳಾ ಮತ್ತು ಮಕ್ಕಳ ಚಿಕಿತ್ಸಾ ವಿಭಾಗ ಮತ್ತು ಚಿಕಿತ್ಸಾ ಸೌಲಭ್ಯ ನೂತನ ಕಟ್ಟಡವನ್ನು ಸುಮಾರು 100 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗಿದೆ ಈ ಕಟ್ಟಡದ ಮೇಲಂತಸ್ತಿನ ಕೆಲಸಗಳು ಬಾಕಿ ಇದ್ದು, ಇದಕ್ಕಾಗಿ ಸುಮಾರು 60 ಕೋಟಿ ರೂ. ಪ್ರಸ್ತಾವನೆಯನ್ನು ಈಗಾಗಲೇ ಸರ್ಕಾರಕ್ಕೆ ಸಲ್ಲಿಸಲಾಗಿದೆ. ನೂತನ ಆಸ್ಪತ್ರೆ ಚಿಕಿತ್ಸಾ ಸೌಲಭ್ಯಗಳ ಆರಂಭಕ್ಕೂ ಮುನ್ನ ವಿಶೇಷ ಪೂಜಾ ಕಾರ್ಯ ನಡೆಸಲಾಯಿತು.

ಇದೇ ವೇಳೆ ಶಾಸಕ ಡಾ.ಮಂತರ್‌ಗೌಡ ಸುದ್ದಿಗಾರರೊಂದಿಗೆ ಮಾತನಾಡಿ, ವೈದ್ಯಕೀಯ ಶಿಕ್ಷಣ ಸಚಿವ ಶರಣ ಪ್ರಕಾಶ್ ಪಾಟೀಲ್ ಇತ್ತೀಚೆಗೆ ಇಲ್ಲಿಗೆ ಭೇಟಿ ನೀಡಿ ಕಟ್ಟಡ ಪರಿಶೀಲಿಸಿದ್ದಾರೆ. ಅವರ ನಿರ್ದೇಶನದಂತೆ ಇದೀಗ ಹೊರ ರೋಗಿಗಳ ಚಿಕಿತ್ಸೆ (ಓಪಿಡಿ) ಯನ್ನು ನೂತನ ಕಟ್ಟಡದಲ್ಲಿ ಆರಂಭಿಸಲಾಗಿದೆ. ಈ ಕಟ್ಟಡ ಪೂರ್ಣಕ್ಕೆ ಅಗತ್ಯ ಹೆಚ್ಚುವರಿ ಮೊತ್ತವನ್ನು ಒದಗಿಸಲು ಸಚಿವರು ಆಸಕ್ತರಾಗಿದ್ದಾರೆ ಎಂದು ತಿಳಿಸಿದರು.



ಮಡಿಕೇರಿ ಜಿಲ್ಲಾಸ್ಪತ್ರೆಯ ನೂತನ ಕಟ್ಟಡದ ಹೊರ ರೋಗಿಗಳ ವಿಭಾಗ.

ವರ್ಷದೊಳಗೆ ಕಾರ್ಡಿಯಾಲಜಿ ಕೇಂದ್ರ ನೂತನ ಆಸ್ಪತ್ರೆ ಕಟ್ಟಡದಲ್ಲಿ ಕಾರ್ಡಿಯಾಲಜಿ ವಿಭಾಗಕ್ಕೂ ಅವಕಾಶ ಕಲ್ಪಿಸಲಾಗಿದೆ. ವರ್ಷಾಂತ್ಯದ ಒಳಗಾಗಿ ನೂತನ ವಿಭಾಗ ಆರಂಭಿಸಲಾಗುವುದು. ಪ್ರಸ್ತುತ ಆಸ್ಪತ್ರೆಯಲ್ಲಿ ಅಗತ್ಯ ಚಿಕಿತ್ಸಾ ಸೌಲಭ್ಯ ಒದಗಿಸಲಾಗುತ್ತಿದೆ. ಸ್ಥಳೀಯರು ಚಿಕಿತ್ಸಾ ಸೌಲಭ್ಯ ಬಳಸಿಕೊಳ್ಳುವಂತೆ ಮನವಿ ಮಾಡಿದರು.

ಚಿಕಿತ್ಸಾ ಸೌಲಭ್ಯ ಲಭ್ಯ: ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆಗಳ ವೈದ್ಯಕೀಯ ಕಾಲೇಜಿನ ಡೀನ್ ಡಾ.ವಿಶಾಲ್ ಕುಮಾರ್ ಮಾತನಾಡಿ, ಹಳೆಯ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸಾ ಸೌಲಭ್ಯ ನೀಡಲು ಸ್ಥಳದ ಅಭಾವವಿತ್ತು. ಈ ಹಿನ್ನೆಲೆ ಇದೀಗ ಎಲ್ಲಾ ಹೊರ ರೋಗಿಗಳ ವಿಭಾಗವನ್ನು ನೂತನ ಕಟ್ಟಡಕ್ಕೆ ಸ್ಥಳಾಂತರಿಸಲಾಗಿದೆ ಎಂದು ತಿಳಿಸಿದರು.

ನೂತನ ಕಟ್ಟಡದಲ್ಲಿ ಪ್ರಮುಖವಾಗಿ ಮೈನರ್ ಆಪರೇಷನ್ ಥಿಯೇಟರ್ ತೆರೆಯಲಾಗಿದೆ. ಇದರೊಂದಿಗೆ ಜನರಲ್ ಮೆಡಿಸಿನ್, ಆರ್ಥೋಪೆಡಿಕ್ಸ್, ಜನರಲ್ ಸರ್ಜರಿ, ಫಿಸಿಯೋ, ಇಎನ್‌ಟಿ, ಆಪ್ತಮಾಲಜಿ, ಡರ್ಮಟಾಲಜಿ, ಪಲ್ಮನಾಲಜಿ ವಿಭಾಗಗಳಿಗೆ ಅವಕಾಶ ಕಲ್ಪಿಸಲಾಗಿದೆ ಎಂದು ಮಾಹಿತಿ ನೀಡಿದರು.

ಹಳೆಯ ಜಿಲ್ಲಾಸ್ಪತ್ರೆಯಲ್ಲಿ ಹಿಂದಿನಂತೆ ಓಪಿಡಿ ಹೊರತುಪಡಿಸಿ ಉಳಿದ ಚಿಕಿತ್ಸಾ ಸೌಲಭ್ಯ ಮುಂದುವರಿಯಲಿದೆ. ಇದರೊಂದಿಗೆ ವೈದ್ಯಕೀಯ ಕಾಲೇಜಿನ ಸ್ನಾತಕೋತ್ತರ ವಿದ್ಯಾರ್ಥಿಗಳ ತರಬೇತಿ, ಕಲಿಕೆಗೆ ಅವಕಾಶ ಮಾಡಲಾಗಿದೆ. ಇದೇ ಮೊದಲ ಬಾರಿಗೆ ನೂತನ ಕಟ್ಟಡದಲ್ಲಿ ನಿಮಾನ್ಸ್‌ನ ಬ್ರೈನ್ ಹೆಲ್ತ್ ಕ್ಲಿನಿಕ್ ಆರಂಭಿಸಲಾಗಿದೆ ಎಂದು ತಿಳಿಸಿದರು.

ಪೂಜಾ ಕಾರ್ಯಕ್ರಮಗಳಲ್ಲಿ ಎಂಎಲ್‌ಸಿ ಸುಜಾ ಕುಶಾಲಪ್ಪ, ಜಿಲ್ಲಾ ಸರ್ಜನ್ ಡಾ. ನಂಜುಂಡಯ್ಯ, ಸ್ಥಾನಿಕ ವೈದ್ಯಾಧಿಕಾರಿ ಡಾ.ಸತೀಶ್, ಡಾ.ರೂಪೇಶ್ ಗೋಪಾಲ್, ಮಡಿಕೇರಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ರಾಜೇಶ್ ಯಲ್ಲಪ್ಪ, ಜಿಲ್ಲಾಸ್ಪತ್ರೆ ವೈದ್ಯರು, ಸಿಬ್ಬಂದಿ, ಮೆಡಿಕಲ್ ಕಾಲೇಜು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಮಳೆ ಹಾನಿ ಪ್ರಕರಣಗಳ ವರದಿ

ಮಡಿಕೇರಿ, ಜು.28–ಕೊಡಗು ಜಿಲ್ಲೆಯಲ್ಲಿ ಮಳೆ ಪ್ರಮಾಣ ಇಳಿಮುಖವಾಗಿ ಜನಜೀವನ ಸಹಜ ಸ್ಥಿತಿಗೆ ಮರಳುತ್ತಿರುವ ನಡುವೆಯೇ ಮಳೆ ಹಾನಿ ಪ್ರಕರಣಗಳು ವರದಿಯಾಗಿವೆ.

ನದಿ ತಟದ ತೋಟಗಳು, ಭತ್ತದ ಗದ್ದೆಗಳು ಜಲಾವೃತವಾದ ಸ್ಥಿತಿಯಲ್ಲಿದ್ದು, ಕೃಷಿ ಫಸಲು ಕೊಳೆಯುವ ಆತಂಕ ಎದುರಾಗಿದೆ. ಜಿಲ್ಲೆಯಲ್ಲಿ ಮಳೆ ಇಳಿಕೆಯಾದರು ಕೂಡ ವಿವಿಧೆಡೆ ಭಾರೀ ಗಾಳಿಯಿಂದ ಹಾನಿಯಾಗಿದೆ. ಕಳೆದ 24 ಗಂಟೆ ಅವಧಿಯಲ್ಲಿ ಗಾಳಿ ಮಳೆಗೆ 3 ಮನೆಗಳಿಗೆ ಭಾಗಶಃ ಮತ್ತು 3 ಮನೆಗಳಿಗೆ ಅಲ್ಪ ಪ್ರಮಾಣದ ಹಾನಿಯಾಗಿದೆ. ಇನ್ನು ಜಿಲ್ಲೆಯ ವಿವಿಧೆಡೆ ಒಟ್ಟು 136 ವಿದ್ಯುತ್ ಕಂಬಗಳು ಮುರಿದು ಬಿದ್ದಿದ್ದು, ಸೆಸ್ಕ್‌ಗೆ 14.28 ಲಕ್ಷ ರೂ. ನಷ್ಟ ಉಂಟಾಗಿದೆ ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಘಟಕ ಮಾಹಿತಿ ನೀಡಿದೆ.



ಗಾಳಿ ಮಳೆಗೆ ವಿದ್ಯುತ್ ಕಂಬ ಮುರಿದು ಬಿದ್ದಿರುವುದು.

ನಾಪೋಕ್ಲು ವ್ಯಾಪ್ತಿಯಲ್ಲಿ ಜಲಾವೃತ

ನಾಪೋಕ್ಲು, ಜು.28–ನಾಪೋಕ್ಲು ಹೋಬಳಿ ವ್ಯಾಪ್ತಿ ಮಳೆಯಿಂದ ಕಾವೇರಿ ನದಿ ತುಂಬಿ ಹರಿಯುತ್ತಿದ್ದು, ನಾಪೋಕ್ಲು–ಮೂರ್ನಾಡು ಸಂಪರ್ಕ ರಸ್ತೆಯ ಹೊದ್ದೂರು ಗ್ರಾಮದ ಬೊಳಿಬಾಣೆ ಜಲಾವೃತವಾಗಿದೆ. ವಾಹನ ಸಂಚಾರ ಸ್ಥಗಿತಗೊಂಡ ಕಾರಣ ನಾಪೋಕ್ಲು ಕೊಟ್ಟಮುಡಿ, ಕೇಮಾಟ್, ಕುಯ್ಯಂಗೇರಿ ಹೊದ್ದೂರು ಮಾರ್ಗವಾಗಿ ಬಳಸಿ ಮೂರ್ನಾಡಿಗೆ ಸಂಪರ್ಕಿಸಲಾಗುತ್ತಿದೆ. ಚೆರಿಯಪರಂಬುವಿನಲ್ಲೂ ರಸ್ತೆ ಜಲಾವೃತವಾಗಿ ನಾಪೋಕ್ಲು–ಕಲ್ಲುಮೊಟ್ಟೆ ಸಂಪರ್ಕ ರಸ್ತೆ ಕಡಿತಗೊಂಡಿತ್ತು. ಕಾವೇರಿ ನದಿ ತುಂಬಿ ಹರಿಯುತ್ತಿರುವುದರಿಂದ ಬಹುತೇಕ ಗದ್ದೆಗಳು, ಕಾಫಿ ತೋಟಗಳು ಪ್ರವಾಹದಲ್ಲಿ ಮುಳುಗಿವೆ.

ಕೋಳಿ ಮಾಂಸದಲ್ಲೂ ಉಚಿತ ಭಾಗ್ಯ



ಸುಂಟಿಕೊಪ್ಪ, ಜು.28–ಸುಂಟಿಕೊಪ್ಪದಲ್ಲಿ ಕೋಳಿ ಮಾಂಸ ಪ್ರಿಯರಿಗೆ ಮಾರಾಟಗಾರರು ಈರುಳ್ಳಿ ಮತ್ತು ಮೊಟ್ಟೆಗಳ 'ಉಚಿತ ಭಾಗ್ಯ' ನೀಡುತ್ತಿದ್ದು, ಗ್ರಾಹಕರು ಮುಗಿ ಬೀಳುವಂತೆ ಮಾಡುತ್ತಿದ್ದಾರೆ.

ಸುಂಟಿಕೊಪ್ಪ ಜನತಾ ಕಾಲೋನಿಗೆ ಸೇರಿದ ಮಾರುಕಟ್ಟೆಯಲ್ಲಿ 1 ವಾರದ ಹಿಂದೆ 1 ಕೆಜಿ ಕೋಳಿ ಮಾಂಸ ಖರೀದಿಸಿದರೆ 2 ಮೊಟ್ಟೆ ನೀಡಲಾಗುತ್ತಿತ್ತು. ಇದರೊಂದಿಗೆ ಹೆದ್ದಾರಿ ಬದಿಯ ಮಳಿಗೆಗಳಲ್ಲಿ 1 ಕೆಜಿ ಮಾಂಸ ಖರೀದಿಸಿದರೆ ಮಾಂಸ ಮಸಾಲೆ ಉಚಿತವಾಗಿ ನೀಡಲಾಗುತ್ತಿತ್ತು.

ಈ ವಾರ ಗ್ರಾಹಕರನ್ನು ಸೆಳೆಯುವ ನಿಟ್ಟಿನಲ್ಲಿ ಗ್ರಾಮ ಪಂಚಾಯಿತಿಗೆ ಸೇರಿದ ಮಳಿಗೆಯಲ್ಲಿ 199 ರೂ. ಪಾವತಿಸಿ 1 ಕೆಜಿ ಕುಕ್ಕುಟ ಮಾಂಸ ಖರೀದಿಸಿದರೆ ಅರ್ಧ ಕೆಜಿ ಈರುಳ್ಳಿ ನೀಡಿದರೆ, ಹೆದ್ದಾರಿ ಬದಿ ಮಳಿಗೆಗಳಲ್ಲಿ 1 ಕೆಜಿ ಮಾಂಸ ಖರೀದಿಸಿದರೆ 2 ಮೊಟ್ಟೆ ನೀಡಲಾಗುತ್ತಿದೆ. ಇದರಿಂದ ಕೋಳಿ ಮಾಂಸ ಪ್ರಿಯರು ಮುಗಿಬಿದ್ದು 'ಫ್ರಿ ಆಫರ್' ಲಾಭ ಪಡೆಯುತ್ತಿದ್ದಾರೆ. ಮಾತ್ರವಲ್ಲದೇ ಮುಂದಿನ ದಿನಗಳಲ್ಲಿ ಇನ್ನಾವ 'ಆಫರ್' ಬರಲಿದೆ ಎಂದು ಕಾಯುವಂತಾಗಿದೆ.

ರಸ್ತೆಗೆ ಯೋಧ ನಾಯಕ್ ಕೋಳೇರ ಸವಿನ್ ಅಪ್ಪಯ್ಯ ಹೆಸರು ನಾಮಕರಣ

ಮಡಿಕೇರಿ, ಜು.28– ಪೊನ್ನಂಪೇಟೆ ತಾಲೂಕಿನ ಕೋಟೂರು ಗ್ರಾಮದ ರಸ್ತೆಗೆ ಕಾರ್ಗಿಲ್ ಯುದ್ಧದಲ್ಲಿ ಹುತಾತ್ಮರಾದ ಯೋಧ ನಾಯಕ್ ಕೋಳೇರ ಸವಿನ್ ಅಪ್ಪಯ್ಯ ಅವರ ಹೆಸರನ್ನು ನಾಮಕರಣ ಮಾಡುವ ಮೂಲಕ 25ನೇ ವರ್ಷದ ಕಾರ್ಗಿಲ್ ವಿಜಯ್ ದಿವಸ್ ಆಚರಿಸಲಾಯಿತು.

ಕಿರುಗೂರು ಗ್ರಾಪಂನಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಹುತಾತ್ಮ ಯೋಧನ ಮನೆಗೆ ತೆರಳುವ ರಸ್ತೆಗೆ ನಾಮ ಕರಣ ಫಲಕವನ್ನು ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಅಧ್ಯಕ್ಷ ಕೊಟ್ಟುಕತ್ತೀರ ಸೋಮಣ್ಣ ಅನಾವರಣಗೊಳಿಸಿದರು. ನಿವೃತ್ತ ಕ್ಯಾಪ್ಟನ್ ತಿರುನೆಲ್ಲಿಮಾಡ ಪೂಣಚ್ಚ, ಪೊನ್ನಂಪೇಟೆ ಮಾಜಿ ಸೈನಿಕರ ಸಂಘದ ಅಧ್ಯಕ್ಷ ಐನಂಡ ಕೆ.ಮಂದಣ್ಣ, ಗ್ರಾಪಂ ಅಧ್ಯಕ್ಷ ಚೆಪ್ಪುಡೀರ ರಾಕೇಶ್ ದೇವಯ್ಯ, ಹಿರಿಯರಾದ ಕಾಟಿಮಾಡ ಜಿಮ್ಮಿ ಅಣ್ಣಯ್ಯ, ಕೋಳೇರ ಸವಿನ್ ಅಪ್ಪಯ್ಯ ಅವರ ತಾಯಿ ನಂಜಮ್ಮ ಅಪ್ಪಯ್ಯ, ಸಹೋದರ ಸಂಜು, ಗ್ರಾಪಂ ಸದಸ್ಯರು, ಕೋಟೂರು ದೇವಸ್ಥಾನ ಆಡಳಿತ ಮಂಡಳಿ ಅಧ್ಯಕ್ಷರು ಹಾಗೂ ಸದಸ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.



ಹದಗೆಟ್ಟ ರಸ್ತೆಗಳಿಂದ ಸಂಚಾರಕ್ಕೆ ತೊಂದರೆ

ವಿರಾಜಪೇಟೆ, ಜು.28–ತಾಲೂಕಿನಲ್ಲಿ ನಿರಂತರ ಮಳೆಯಿಂದ ಪುರಸಭೆ ವ್ಯಾಪ್ತಿಯ ರಸ್ತೆಗಳೆಲ್ಲಾ ದುಸ್ಥಿತಿಯಲ್ಲಿದ್ದು, ಸಾರ್ವಜನಿಕರಿಗೆ ಸಂಚಾರ ಅಸಾಧ್ಯವಾಗಿದೆ ಎಂದು ಭಾರತ ಕಮ್ಯುನಿಸ್ಟ್ ಪಕ್ಷ (ಎಂ)ದ ವಿರಾಜಪೇಟೆ ಕಾರ್ಯದರ್ಶಿ ಶಾಜಿ ರಮೇಶ್ ತಿಳಿಸಿದರು.

ಪಕ್ಷದ ಸಿಪಿಐಎಂ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಪಟ್ಟಣದಲ್ಲಿ ವಾಹನಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿವೆ. ಕಿರಿದಾದ ರಸ್ತೆಯಲ್ಲಿ ಸದಾ ಟ್ರಾಫಿಕ್ ಜಾಮ್ ಉಂಟಾಗುತ್ತಿದೆ. ಗಡಿಯಾರ ಕಂಬದಿಂದ ದೊಡ್ಡಟ್ಟಿ ಚೌಕಿವರೆಗೆ ಪಾದಚಾರಿಗಳಿಗೆ ಕಾಲುದಾರಿ ನಿರ್ಮಿಸಬೇಕಾದ ಪುರಸಭೆ ಕಂಡರೂ ಕಾಣದಂತೆ ಇದೆ. ಜೈನರ ಬೀದಿಯಿಂದ ಪಂಜರು ಪೇಟೆವರೆಗೆ ರಸ್ತೆ ಎರಡು ಬದಿಯಲ್ಲಿ ವಾಹನಗಳು ನಿಲ್ಲುವುದರಿಂದ ಇತರ ವಾಹನಗಳು ಓಡಾಡಲು ಸಮಸ್ಯೆಯಾಗುತ್ತಿದೆ ಎಂದು ಆರೋಪಿಸಿದರು.



ವಿರಾಜಪೇಟೆ ಸಿಪಿಐಎಂ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಶಾಜಿ ರಮೇಶ್ ಮಾತನಾಡಿದರು.

ಇದರ ಬಗ್ಗೆ ಪುರಸಭೆ ಗಮನ ಹರಿಸಬೇಕು. ರಾಜಕಾಲುವೆಗಳ ಮೇಲೆ ಕಟ್ಟಡ ಕಟ್ಟಲು ಮುಂದಾಗಿರುವುದು ಸರಿಯಲ್ಲ. ಸಾರ್ವಜನಿಕರ ಜಾಗವನ್ನು ಯಾರು ಒತ್ತುವರಿ ಮಾಡದಂತೆ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಜಿಲ್ಲಾ ಸಂಘಟನಾ ಸಮಿತಿಯ ಎ.ಸಿ. ಸಾಬು ಮಾತನಾಡಿ, ಪಟ್ಟಣದ ಅಭಿವೃದ್ಧಿಗಾಗಿ ಪುರಸಭೆಗೆ ಅನುದಾನ ಬಂದಿದೆ ಎಂದು ಹೇಳುತ್ತಾರೆ. ಆದರೆ, ಕೆಲಸಗಳು ನಡೆಯುತ್ತಿಲ್ಲ. ಪಟ್ಟಣದಲ್ಲಿ ಬೀಡಾಡಿ ದನಗಳ ಹಾವಳಿಯಿಂದ ವಾಹನ ಸವಾರರಿಗೆ ಸಮಸ್ಯೆಯಾಗಿದೆ. ಜೊತೆಗೆ ಮುಖ್ಯರಸ್ತೆಗಳಲ್ಲಿ ಬೀದಿನಾಯಿಗಳ ಹಾವಳಿ ಹೆಚ್ಚಾಗಿದ್ದರೂ ಕ್ರಮ ಕೈಗೊಂಡಿಲ್ಲ ಎಂದರು. ಸಭೆಯಲ್ಲಿ ಪಕ್ಷದ ಕೆ.ಕೆ. ಹರಿದಾಸ್, ಕೆ.ಎ.ಖಾಸಿಂ, ಬಾಪುಟ್ಟಿ ಮತ್ತಿತರರು ಉಪಸ್ಥಿತರಿದ್ದರು.

ಮಳೆ ಹಾನಿ ಪ್ರದೇಶಗಳಿಗೆ ಶಾಸಕ ಪೊನ್ನಣ್ಣ ಭೇಟಿ



ದಕ್ಷಿಣ ಕೊಡಗಿನ ಮಳೆ ಹಾನಿ ಪ್ರದೇಶಗಳಿಗೆ ಶಾಸಕ ಅಜ್ಜಿಕುಟ್ಟಿರ ಎಸ್. ಪೊನ್ನಣ್ಣ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ವಿರಾಜಪೇಟೆ, ಜು.28–ದಕ್ಷಿಣ ಕೊಡಗಿನ ವಿವಿಧೆಡೆಯ ಮಳೆ ಹಾನಿ ಪ್ರದೇಶಗಳಿಗೆ ಶಾಸಕ ಅಜ್ಜಿಕುಟ್ಟಿರ ಎಸ್.ಪೊನ್ನಣ್ಣ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಬಿರುನಾಣಿಯ ಕಳಕೂರು ಗ್ರಾಮದ ರಸ್ತೆ ಕುಸಿತ, ಕುಟ್ಟದಲ್ಲಿ ಭೂ ಕುಸಿತದಿಂದ ರಸ್ತೆ ಸಂಪರ್ಕ ಬಂದ್ ಆಗಿರುವುದು, ಬಿರುನಾಣಿ ಸೇತುವೆ ಹಾನಿ, ಶ್ರೀಮಂಗಲ–ನಾಲ್ಕೇರಿ ಸೇತುವೆ ಸೇರಿದಂತೆ ಬರೆ ಕುಸಿತ ಪ್ರದೇಶಗಳನ್ನು ಶಾಸಕರು ಪರಿಶೀಲಿಸಿದರು. ಮಳೆ ಹಾನಿ ಪ್ರದೇಶಗಳಲ್ಲಿ ರಸ್ತೆ ಸಂಚಾರಕ್ಕೆ ಅಡಚಣೆಯಾಗದಂತೆ ತಕ್ಷಣ ತಾತ್ಕಾಲಿಕ ಕಾಮಗಾರಿ ನಡೆಸಬೇಕು. ಮಳೆಗಾಲ ನಂತರ ಹಾನಿ ಸ್ಥಳಗಳಲ್ಲಿ ಶಾಶ್ವತ ಕಾಮಗಾರಿ ಕೈಗೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭ ಪೊನ್ನಂಪೇಟೆ ತಹಸೀಲ್ದಾರ್ ಮೋಹನ್ ಕುಮಾರ್, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಇಂಜಿನಿಯರ್ ಸಿದ್ದೇಗೌಡ, ಸಹಾಯಕ ಇಂಜಿನಿಯರ್ ಲಿಂಗರಾಜು, ಪೊನ್ನಂಪೇಟೆ ತಾಪಂ ಕಾರ್ಯನಿರ್ವಹಣಾಧಿಕಾರಿ ಕೋಣಿಯಂಡ ಅಪ್ಪಣ್ಣ, ಕುಟ್ಟ ವೃತ್ತ ನಿರೀಕ್ಷಕ ಮಂಜಪ್ಪ, ಶ್ರೀಮಂಗಲ ಉಪನಿರೀಕ್ಷಕ ಶಿವಾನಂದ್, ಕಾಂಗ್ರೆಸ್ ಜಿಲ್ಲಾಧ್ಯಕ್ಷ ತೀತಿರ ಧರ್ಮಜ ಉತ್ತಪ್ಪ, ಬಿರುನಾಣಿ ವಲಯ ಕಾಂಗ್ರೆಸ್ ಅಧ್ಯಕ್ಷ ಕುಪ್ಪಣಮಾಡ ಪ್ರೀತಮ್, ಪಕ್ಷ ಪ್ರಮುಖರು ಉಪಸ್ಥಿತರಿದ್ದರು.

ಕಲಿಕೆ ಅಲ್ಪವಾದರೂ ಬಾಳಿನ ಬೆಳಕಾಗಬೇಕು



ಚಂದಕವಾಡಿ ಸರ್ಕಾರಿ ಪದವಿಪೂರ್ವ ಕಾಲೇಜು ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳು ಮತ್ತು ಉಪನ್ಯಾಸಕರನ್ನು ಸನ್ಮಾನಿಸಲಾಯಿತು.

ಚಾಮರಾಜನಗರ, ಜು. 28–ಕಲಿಕೆ ಎಂಬುದು ಸಾಗರ, ಅದರಲ್ಲಿ ಕಲಿಯುವುದು ಅಲ್ಪವಾದರೂ ಆ ಶಿಕ್ಷಣ ಬಾಳಿನ ಬೆಳಕಾಗಬೇಕು ಎಂದು ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥ ಪ್ರಸನ್ನ ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ತಾಲೂಕಿನ ಚಂದಕವಾಡಿ ಸರ್ಕಾರಿ ಪದವಿಪೂರ್ವ ಕಾಲೇಜು ಆವರಣದಲ್ಲಿ ನಡೆದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳು ಮತ್ತು ವಿಷಯವಾರು ಶೇ.100ರಷ್ಟು ಫಲಿತಾಂಶ ತಂದುಕೊಟ್ಟ ಉಪನ್ಯಾಸಕರನ್ನು ಸನ್ಮಾನಿಸಿ ಮಾತನಾಡಿದ ಅವರು, ಶಿಕ್ಷಣ ಸಂಸ್ಕಾರ ಕಲಿಸುತ್ತದೆ. ವಿದ್ಯೆ ಸರ್ಕಾರಿ ಕೆಲಸಕ್ಕೆ ಮಾತ್ರವಲ್ಲ, ನೈತಿಕ ಜೀವನ ರೂಪಿಸಿಕೊಳ್ಳಲು ಕಲಿಯಬೇಕು ಎಂದರು.

ಚಂದಕವಾಡಿ ಸರ್ಕಾರಿ ಕಾಲೇಜಿಗೆ ಹೆಚ್ಚು ಮಕ್ಕಳು ದಾಖಲಾಗುತ್ತಿದ್ದಾರೆ. ಇದಕ್ಕೆ ಕಾರಣ ಉತ್ತಮ ಪಾಠ ಪ್ರವಚನ, ಖಾಸಗಿ ವಿದ್ಯಾಸಂಸ್ಥೆಗಳ ಜೊತೆಗೆ ಸರ್ಕಾರಿ ಕಾಲೇಜುಗಳು ಪೈಪೋಟಿಗಿಳಿದಿವೆ. ಇಂತಹ ಸಂದರ್ಭಗಳಲ್ಲಿ ವಿದ್ಯಾರ್ಥಿಗಳು ಫಲವತ್ತಾದ ಫಲಿತಾಂಶದ ಬೆಳೆಯನ್ನು ಹೊತ್ತು ಮನೆಗೆ ಹೋದರೆ ತಂದೆ–ತಾಯಿಯ ಶ್ರಮ ಸಾರ್ಥಕವಾಗುತ್ತದೆ ಎಂದು ತಿಳಿಸಿದರು.

ಪ್ರಾಂಶುಪಾಲ ಹೆಚ್.ಎನ್.ಸ್ವಾಮಿ ಮಾತನಾಡಿ, ಶಿಕ್ಷಣಕ್ಕೆ ಯಾವುದೇ ಜಾತಿ, ಧರ್ಮವಿಲ್ಲ, ಇದು ನನ್ನಿಂದ ಸಾಧ್ಯವಿದೆಯೇ ಎನ್ನುವ ಕೀಳರಿಮೆ ಬಿಡಿ. ಆಗ ಒಳ್ಳೆಯ ವಿದ್ಯಾರ್ಥಿಯಾಗಿ ರೂಪುಗೊಳ್ಳಲು ಸಾಧ್ಯ ಎಂದು ಹೇಳಿದರು.

ಉಪ ಪ್ರಾಂಶುಪಾಲ ಚಂದ್ರಶೇಖರ್ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಗ್ರಾಮ ವಿದ್ಯುತ್ ಪ್ರತಿನಿಧಿ ದಡದಹಳ್ಳಿ ರಮೇಶ್ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ವೈಯಕ್ತಿಕವಾಗಿ ನಗದು ಪುರಸ್ಕಾರ ನೀಡಿದರು. ಹಿರಿಯ ಉಪನ್ಯಾಸಕರಾದ ಎಂ. ಲಕ್ಷ್ಮಣ್, ಪಿ.ನಟರಾಜ್, ಶಕುಂತಲಾ, ಬಿ.ವಿ.ಸುಧಾ, ಗಾಯತ್ರಿ, ಚೈತ್ರಾ, ಹೇಮಾ, ಪ್ರಕೃತಿ, ಕವಿತ, ಶೃತಿ, ಮತೀನ ಇದ್ದರು.

ಆ.10, ಆಲೂರಲ್ಲಿ ರಾಚಯ್ಯ ಸ್ಮಾರಕ ಉದ್ಘಾಟನೆ

ಶಾಸಕ ಎ.ಆರ್.ಕೃಷ್ಣಮೂರ್ತಿ, ಜಿಲ್ಲಾಧಿಕಾರಿ ಶಿಲ್ಪನಾಗ್ ಸಿದ್ಧತೆ ಪರಿಶೀಲನೆ

ಚಾಮರಾಜನಗರ, ಜು.28–ಮಾಜಿ ರಾಜ್ಯಪಾಲ ದಿ.ಬಿ.ರಾಚಯ್ಯ ಅವರ 102 ಜನ್ಮದಿನೋತ್ಸವ ಅಂಗವಾಗಿ ಆ.10ರಂದು ತಾಲೂಕಿನ ಆಲೂರಿನಲ್ಲಿ ಬಿ.ರಾಚಯ್ಯ ಅವರ ಸ್ಮಾರಕ ಲೋಕಾರ್ಪಣೆಗೊಳ್ಳಲಿದೆ.

ಈ ಹಿನ್ನೆಲೆಯಲ್ಲಿ ಶಾಸಕ ಎ.ಆರ್.ಕೃಷ್ಣಮೂರ್ತಿ ಹಾಗೂ ಜಿಲ್ಲಾಧಿಕಾರಿ ಶಿಲ್ಪನಾಗ್ ಅವರು ಅಧಿಕಾರಿಗಳೊಂದಿಗೆ ಭಾನುವಾರ ಆಲೂರಿನ ಬಿ.ರಾಚಯ್ಯ ಸ್ಮಾರಕ ನಿರ್ಮಾಣ ಸ್ಥಳಕ್ಕೆ ಭೇಟಿ ನೀಡಿ, ಸಿದ್ಧತೆ ಪರಿಶೀಲಿಸಿದರು. ನಂತರ ಸ್ಥಳದಲ್ಲೇ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ನಡೆಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಮಾರಕ ಲೋಕಾರ್ಪಣೆಗೊಳಿಸಲಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್, ಸಮಾಜ ಕಲ್ಯಾಣ ಇಲಾಖೆಯ ಸಚಿವ ಎಚ್.ಸಿ.ಮಹದೇವಪ್ಪ, ಸಂಸದ ಸುನೀಲ್ ಬೋಸ್ ಸೇರಿದಂತೆ ಶಾಸಕರು ಆಗಮಿಸಲಿದ್ದಾರೆ. ಈ ಕಾರ್ಯಕ್ರಮ ಬಹಳ ಅಚ್ಚುಕಟ್ಟಾಗಿ ನಡೆಯಲು ಎಲ್ಲಾ ಪೂರ್ವ ಸಿದ್ಧತೆಗಳನ್ನು ಅಧಿಕಾರಿಗಳು ಕೈಗೊಳ್ಳಬೇಕು. ರಾಚಯ್ಯ ಅವರ ಜೀವನ ಚರಿತ್ರೆ ಬಿಂಬಿಸುವ ಛಾಯಾಚಿತ್ರ, ಸಾಧನೆ ಮತ್ತು ಅವರು ಉಪಯೋಗಿಸುತ್ತಿದ್ದ ವಸ್ತುಗಳ ಸಂಗ್ರಹಾಲಯವನ್ನು ಬಹಳ ವ್ಯವಸ್ಥಿತವಾಗಿ ನಿರ್ಮಿಸಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪನಾಗ್ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಆಲೂರಿನ ದಿ.ರಾಚಯ್ಯ ಸ್ಮಾರಕ ನಿರ್ಮಾಣ ಕಟ್ಟಡವನ್ನು ಶಾಸಕ ಕೃಷ್ಣಮೂರ್ತಿ, ಡಿಸಿ ಶಿಲ್ಪಾನಾಗ್ ಅಧಿಕಾರಿಗಳೊಂದಿಗೆ ಪರಿಶೀಲಿಸಿದರು.

ಶಾಸಕ ಎ.ಆರ್.ಕೃಷ್ಣಮೂರ್ತಿ ಮಾತನಾಡಿ, 2013ರಲ್ಲಿ ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯ ಸ್ಮಾರಕ ನಿರ್ಮಾಣಕ್ಕೆ ಚಾಲನೆ ನೀಡಿ ಅನುದಾನವನ್ನು ನೀಡಿದ್ದರು. ನಂತರ ಸಮಾಜ ಕಲ್ಯಾಣ ಇಲಾಖೆ ಸಚಿವರಾಗಿದ್ದ ಶ್ರೀರಾಮುಲು 52 ಲಕ್ಷ ರೂ. ನೀಡಿದ್ದರು. ಎಸ್‌ಆರ್ ದರ ಹೆಚ್ಚಳವಾದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳಾಗಿದ್ದ ಬಸವರಾಜ ಬೊಮ್ಮಾಯಿ ಅವಧಿಯಲ್ಲಿ 2.12 ಕೋಟಿ ರೂ. ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಯಿತು. ಹೆಚ್ಚುವರಿ ಅನುದಾನವನ್ನು ಸರ್ಕಾರ ಬಿಡುಗಡೆ ಮಾಡಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಟಿ.ಕವಿತಾ, ಅಪರ ಜಿಲ್ಲಾಧಿಕಾರಿ ಗೀತಾ ಹುಡೇದ, ಜಿಪಂ ಉಪಕಾರ್ಯದರ್ಶಿ ಲಕ್ಷ್ಮಿ, ನಿರ್ಮಿತಿ ಕೇಂದ್ರದ ವ್ಯವಸ್ಥಾಪಕಿ ಮಂಜುಳಾ, ಪಿಡಬ್ಲ್ಯೂಡಿ ಕಾರ್ಯಪಾಲಕ ಇಂಜಿನಿಯರ್ ಮಹೇಶ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ರಾಜು, ಎಸಿ ಮಹೇಶ್, ತಹಸೀಲ್ದಾರ್ ಗಿರಿಜಾ, ತಾಪಂ ಇಓ ಪೂರ್ಣಿಮಾ, ಗ್ಯಾರಂಟಿ ಯೋಜನಾ ಸಮಿತಿಯ ಅಧ್ಯಕ್ಷ ಹೊಂಗನೂರು ಚಂದ್ರು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ತೋಟೇಶ್, ಎಪಿಎಂಸಿ ನಿರ್ದೇಶಕ ಆಲೂರು ಪ್ರದೀಪ್, ಮುಖಂಡರಾದ ಆರ್.ಮಹದೇವ್, ಎ.ಸಿ. ಪ್ರವೀಣ್, ಗುತ್ತಿಗೆದಾರ ಆಲೂರು ಲಿಂಗಣ್ಣ, ಕಂದಹಳ್ಳಿ ನಂಜುಂಡಸ್ವಾಮಿ, ಪ್ರಭುಪ್ರಸಾದ್, ಮಹದೇವಪ್ರಸಾದ್, ಮಹದೇವ್, ಹೊಂಗನೂರು ಚೇತನ್ ಇದ್ದರು.

ಕಾವೇರಿ ನದಿಗೆ ಹೆಚ್ಚಿನ ನೀರು: ತಗ್ಗು ಪ್ರದೇಶಗಳ ಗ್ರಾಮಸ್ಥರಿಗೆ ಎಚ್ಚರಿಕೆ

ಚಾಮರಾಜನಗರ, ಜು.28– ಕೃಷ್ಣರಾಜಸಾಗರ ಹಾಗೂ ಕಬಿನಿ ಜಲಾಶಯದಿಂದ ಹೆಚ್ಚಿನ ಪ್ರಮಾಣದಲ್ಲಿ ಕಾವೇರಿ ನದಿಗೆ ನೀರು ಬಿಡುಲಾಗುತ್ತಿರುವುದರಿಂದ ಜಿಲ್ಲೆಯ ಕಾವೇರಿ ನದಿ ತಗ್ಗು ಪ್ರದೇಶದ ಕೊಳ್ಳೇಗಾಲ ತಾಲೂಕಿನ ಕೆಲ ಗ್ರಾಮಸ್ಥರು ತಮ್ಮ ಆಸ್ತಿ–ಪಾಸ್ತಿ ಹಾಗೂ ಜಾನುವಾರು ರಕ್ಷಣೆಗೆ ಎಚ್ಚರಿಕೆ ವಹಿಸಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪನಾಗ್ ತಿಳಿಸಿದ್ದಾರೆ.

ಕಾವೇರಿ ಜಲಾನಯನ ಪ್ರದೇಶದಲ್ಲಿ ಭಾರೀ ಮಳೆಯಾಗುತ್ತಿರುವುದರಿಂದ ಕೆಆರ್‌ಎಸ್ ಜಲಾಶಯಕ್ಕೆ ಹೆಚ್ಚಿನ ನೀರು ಬರುತ್ತಿದ್ದು, ಕಬಿನಿ ಹಾಗೂ ಕೆಆರ್‌ಎಸ್ ಜಲಾಶಯದಿಂದ ಸುಮಾರು 1,70,000 ಕ್ಯುಸೆಕ್‌ಗಿಂತಲೂ ಹೆಚ್ಚಿನ ನೀರನ್ನು ಕಾವೇರಿ ನದಿಗೆ ಬಿಡಲಾಗುತ್ತಿದೆ. ನದಿ ತಗ್ಗು ಪ್ರದೇಶಗಳ ಕೊಳ್ಳೇಗಾಲ ತಾಲೂಕಿನ ಮುಳ್ಳೂರು, ದಾಸನಪುರ, ಹಳೇ ಹಂಪಾಪುರ, ಹೊಸ ಹಂಪಾಪುರ, ಹಳೇ ಅಣಗಳ್ಳಿ, ಯಡಕುರಿಯ, ಧನಗೆರೆ, ಹರಳೆ, ಅಗ್ರಹಾರ ಮತ್ತು ಸರಗೂರು ಗ್ರಾಮಗಳ ಗ್ರಾಮಸ್ಥರು ಆಸ್ತಿ–ಪಾಸ್ತಿ ಹಾಗೂ ಜಾನುವಾರು ರಕ್ಷಣೆಗೆ ಎಚ್ಚರಿಕೆ ವಹಿಸಬೇಕೆಂದು ತಿಳಿಸಿದ್ದಾರೆ.

ಜಿಲ್ಲಾಡಳಿತದಿಂದ ಹಲವಾರು ಮುನ್ನೆಚ್ಚರಿಕೆ ಹಾಗೂ ಸುರಕ್ಷಿತ ಕ್ರಮಗಳನ್ನು ಕೈಗೊಳ್ಳುತ್ತಿರುವುದರಿಂದ ಪ್ರವಾಹ ಪೀಡಿತ ಗ್ರಾಮಗಳ ಗ್ರಾಮಸ್ಥರು ಯಾವುದೇ ವದಂತಿಗೆ ಕಿವಿಗೊಡದಂತೆ ಮನವಿ ಮಾಡಿದ್ದಾರೆ.

ತುರ್ತು ಸಂದರ್ಭದಲ್ಲಿ ಸಹಾಯವಾಣಿ ಜಿಲ್ಲಾಧಿಕಾರಿ ಕಚೇರಿ ವಿಪತ್ತು ನಿರ್ವಹಣಾ ಕೇಂದ್ರ: 08226–223160, 223161, ಟೋಲ್ ಫ್ರೀ: 1077, ಉಪವಿಭಾಗಾಧಿಕಾರಿ ಮೊ.ಸಂ: 9740942901, ಕೊಳ್ಳೇಗಾಲ ತಹಸೀಲ್ದಾರ್ ಮೊ.ಸಂ: 8277863119, ಕೊಳ್ಳೇಗಾಲ ತಾಲೂಕು ಕಚೇರಿ ಸಂಖ್ಯೆ : 08224–252329 ಅನ್ನು ಸಂಪರ್ಕಿಸಬಹುದು.

ವಿನೋದಕ್ಕ ನಿಧನ



ಚಾಮರಾಜನಗರ, ಜು.28–ನಗರದ ರಥದ ಬೀದಿಯ ನಿವಾಸಿ ವಿನೋದಕ್ಕ (82) ಭಾನುವಾರ ನಿಧನರಾದರು.

ಮೃತರು ಇಬ್ಬರು ಪುತ್ರಿಯರು ಹಾಗೂ ಪುತ್ರನನ್ನು ಅಗಲಿದ್ದಾರೆ. ಆರ್ಯ ವೈಶ್ಯ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಯಿತು.

ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಮುಖ್ಯ ಸಂಚಾಲಕಿ ರಾಜಯೋಗಿನಿ ಬ್ರಹ್ಮಾಕುಮಾರಿ ದಾನೇಶ್ವರೀಜೀ ಸಂತಾಪ ಸೂಚಿಸಿದ್ದಾರೆ.

ಮಳೆಗೆ ಮನೆಗಳ ಗೋಡೆ ಕುಸಿತ

ಬೇಗೂರು, ಜು.28–ಗುಂಡ್ಲುಪೇಟೆ ತಾಲೂಕಿನ ಬೆಟ್ಟದಮಾದಹಳ್ಳಿ ಗ್ರಾಮದಲ್ಲಿ ಮಳೆಗೆ ಎರಡು ಮನೆಗಳ ಗೋಡೆ ಕುಸಿದಿವೆ. ಗ್ರಾಮದ ಬಸಪ್ಪ ದೇವರಿಗೆ ಸೇರಿದ ಮನೆಯ ಗೋಡೆ ಬಿರುಕು ಬಿಟ್ಟಿದೆ. ನಾಗಮ್ಮ ಅವರ ಮನೆಯ ಭಾವಣಿಯ ಒಂದು ಭಾಗ ಕುಸಿದಿದೆ. ಇದರಿಂದ ನಾಗಮ್ಮ ಕುಟುಂಬದವರಿಗೆ ವಾಸಕ್ಕೆ ಕಷ್ಟವಾಗಿದ್ದು, ಕೂಡಲೇ ತಾಲೂಕು ಆಡಳಿತ ಪರಿಹಾರ ನೀಡಬೇಕು ಎಂದು ಗ್ರಾಪಂ ಮಾಜಿ ಸದಸ್ಯ ಬಿ.ಸಿ.ಮಹದೇವಸ್ವಾಮಿ ಆಗ್ರಹಿಸಿದ್ದಾರೆ.



ಗ್ರಾಮಾಂತರ ಪ್ರದೇಶದ ಎಸ್ಸಿ, ಎಸ್ಟಿ ಫಲಾನುಭವಿಗಳ ಯೋಜನೆ ಬಳಕೆಗೆ ಪರಿಶೀಲನಾ ತಂಡ ರಚನೆ



ಪರಿಶಿಷ್ಟ ಜಾತಿ ಹಾಗೂ ವರ್ಗಗಳ ಹಿತರಕ್ಷಣಾ ಸಮಿತಿಯ ಸಭೆಯಲ್ಲಿ ತಹಸೀಲ್ದಾರ್ ಗಿರಿಜಾ ಮಾತನಾಡಿದರು.

ಚಾಮರಾಜನಗರ, ಜು.28–ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಪರಿಶಿಷ್ಟ ಜಾತಿ ಹಾಗೂ ಪಂಗಡಗಳಿಗೆ ಸರ್ಕಾರದ ವಿವಿಧ ಯೋಜನೆಗಳ ಅನುದಾನ ಸದ್ಬಳಕೆ ಹಾಗೂ ಫಲಾನುಭವಿಗಳ ಸ್ಥಿತಿಗತಿಗಳ ಕುರಿತು ತಾಲೂಕು ಮಟ್ಟದ ಪರಿಶೀಲನಾ ತಂಡ ರಚಿಸಿ, ಆಗಿದ್ದಾಂಗೆ ಭೇಟಿ ನೀಡಲು ಸೂಕ್ತ ಕ್ರಮ ವಹಿಸುವುದಾಗಿ ತಹಸೀಲ್ದಾರ್ ಗಿರಿಜಾ ತಿಳಿಸಿದರು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ನಡೆದ ಪರಿಶಿಷ್ಟ ಜಾತಿ ಹಾಗೂ ವರ್ಗಗಳ ಹಿತರಕ್ಷಣಾ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಎಸ್‌ಇಪಿ, ಟಿಎಸ್‌ಪಿ ಯೋಜನೆ ಅನುದಾನದಡಿಯಲ್ಲಿ ತಾಲೂಕು ಮಟ್ಟದಲ್ಲಿ ಆಯಾ ಪಂಚಾಯಿತಿ ಹಾಗೂ ವಿವಿಧ ಇಲಾಖೆ ವತಿಯಿಂದ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಿ, ಸವಲತ್ತುಗಳನ್ನು ನೀಡಲಾಗುತ್ತಿದೆ ಎಂದರು.

ಇವು ಸಮರ್ಪಕವಾಗಿ ಅರ್ಹರಿಗೆ ತಲುಪುತ್ತಿವೆ ಎಂಬುವುದು ಖಾತರಿಯಾಗಬೇಕು. ಅಲ್ಲದೆ, ಪಂಚಾಯಿತಿ ಮಟ್ಟದಲ್ಲಿ ಆಯ್ಕೆಯಾಗಿ ಫಲಾನುಭವಿಗಳ ಸ್ಥಿತಿಗತಿ ಹಾಗೂ ಆರ್ಥಿಕ ಪ್ರಗತಿಯನ್ನು ಖುದ್ದು ಪರಿಶೀಲಿಸುವಂತೆ ತಾಪಂ ಇಓ ಹಾಗೂ ತಾಲೂಕು ಅಧಿಕಾರಿಗಳ ನೇತೃತ್ವದಲ್ಲಿ ತಂಡ ಕಳುಹಿಸುವುದಾಗಿ ತಿಳಿಸಿದರು.

ಈ ಸಂಬಂಧ ಡಾ.ಬಿ.ಆರ್. ಅಂಬೇಡ್ಕರ್ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಸಿ.ಕೆ.ಮಂಜುನಾಥ್, ದಡದಹಳ್ಳಿ ಶಂಕರ್, ಮುತ್ತಿಗೆ ಮೂರ್ತಿ, ಗಣೇಶಪ್ರಸಾದ್ ಹಾಗೂ ಅನೇಕ ಮುಖಂಡರು ಅನುದಾನಗಳ ಬಳಕೆ ಬಗ್ಗೆ ಚರ್ಚಿಸಿ, ದುರುಪಯೋಗದ ಬಗ್ಗೆ ಸಭೆಯ ಗಮನ ಸೆಳೆದರು. ಇದಕ್ಕೆ ಪ್ರತಿಕ್ರಿಯೆ ನೀಡಿ, ಪರಿಶೀಲನಾ ತಂಡ ರಚನೆ ಮಾಡುವ ಬಗ್ಗೆ ತಹಸೀಲ್ದಾರ್ ತಿಳಿಸಿದರು.

ಸಭೆಯಲ್ಲಿ ತಾಪಂ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಪೂರ್ಣಿಮಾ, ಡಿವೈಎಸ್ಪಿ ಲಕ್ಷ್ಮಯ್ಯ, ತಾಲೂಕು ಸಮಾಜ ಕಲ್ಯಾಣಾಧಿಕಾರಿ ನಂಜುಂಡಯ್ಯ, ನಗರಸಭೆ ಆಯುಕ್ತ ರಾಮದಾಸ್, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಸುಬ್ಬರಾಯ, ಪೂರ್ವ ಠಾಣೆ ಪೊಲೀಸ್ ಇನ್ಸ್‌ಪೆಕ್ಟರ್ ದಿವಾಕರ್, ದಲಿತ ಮುಖಂಡರಾದ ಕೆ.ಎಂ.ನಾಗರಾಜು, ಬಸವರಾಜು, ಮಹೇಶ್ ಕುದರ್, ಸಿ.ಕೆ ರವಿಕುಮಾರ್, ಸಿ.ಎಂ.ಶಿವಣ್ಣ ಸಿ.ಎಂ. ಕೃಷ್ಣಮೂರ್ತಿ, ಪರ್ವತರಾಜು, ಹಂಡ್ರಕಳ್ಳಿ ಬಸವರಾಜು, ಮೊದಲಾದವರು ಇದ್ದರು.

ಮೈಸೂರು ಮಿತ್ರ

ಸೋಮವಾರ 29 ಜುಲೈ 2024

ಶ್ರೀಕಂಠೇಶ್ವರಸ್ವಾಮಿ ದೇವಾಲಯಕ್ಕೆ ಕೇಂದ್ರ ಸಚಿವ

ಹೆಚ್.ಡಿ.ಕುಮಾರಸ್ವಾಮಿ ಭೇಟಿ, ವಿಶೇಷ ಪೂಜೆ



ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಶ್ರೀಕಂಠೇಶ್ವರಸ್ವಾಮಿ ದರ್ಶನ ಪಡೆದರು.

ನಂಜನಗೂಡು, ಜು.28– ನಗರದ ಶ್ರೀಕಂಠೇಶ್ವರಸ್ವಾಮಿ ದೇವಾಲಯಕ್ಕೆ ಭಾನುವಾರ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಭೇಟಿ ನೀಡಿ, ದೇವರ ದರ್ಶನ ಪಡೆದರು. ಮೊದಲಿಗೆ ಶ್ರೀಕಂಠೇಶ್ವರಸ್ವಾಮಿ ದರ್ಶನ ಪಡೆದು ವಿಶೇಷ ಪ್ರಾರ್ಥನೆ ಸಲ್ಲಿಸಿದ ಅವರು, ನಂತರ ದೇಗುಲದ ಒಳಾವರಣದಲ್ಲಿರುವ ಗಣಪತಿ, ಸುಬ್ರಹ್ಮಣ್ಯ, ಪಾರ್ವತಮ್ಮನವರ ಗುಡಿಗಳಿಗೂ ತೆರಳಿ ದೇವರ ದರ್ಶನ ಪಡೆದರು.

ಇದಕ್ಕೂ ಮುನ್ನ ದೇವಾಲಯದ ವತಿಯಿಂದ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಪೂರ್ಣಕುಂಭ ಸ್ವಾಗತದೊಂದಿಗೆ ಬರಮಾಡಿಕೊಳ್ಳಲಾಯಿತು. ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಷ್ಟೇ ದೇವಾಲಯಗಳನ್ನು ಸುತ್ತಿದರೂ ಕುಮಾರಸ್ವಾಮಿ ಮತ್ತೊಮ್ಮೆ ಮುಖ್ಯಮಂತ್ರಿಯಾಗುವುದಿಲ್ಲ ಎಂಬ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ ಹೆಚ್.ಡಿ.ಕುಮಾರಸ್ವಾಮಿ, ಈ ಹಿಂದೆ ಅವರಪ್ಪನಾಣೆ ಕುಮಾರಸ್ವಾಮಿ ಗೆಲ್ಲುವುದಿಲ್ಲ ಎಂದು ಭವಿಷ್ಯ ನುಡಿದಿದ್ದರು. ಆದರೆ ನಾನು ಗೆದ್ದು ಕೇಂದ್ರ ಸಚಿವನಾಗಿಲ್ಲವೇ ಹಾಗೆಯೇ ಅವರ ಹೇಳಿಕೆಗಳಿಗೆ ತದ್ವಿರುದ್ಧವಾಗಿ ನನಗೆ ಒಳ್ಳೆಯದು ನಡೆಯುತ್ತದೆ. ಅದರಲ್ಲಿ ಯಾವೂದೇ ಸಂಶಯ ಬೇಡ ಎಂದರು. ಈ ಸಂದರ್ಭ ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸುರೇಶ್ ಬಾಬು, ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ಮಾಜಿ ಸಚಿವ ಸಾ.ರಾ.ಮಹೇಶ್ ಮತ್ತಿತರರಿದ್ದರು.

ಜೀವನದಲ್ಲಿ ಸಾಧಿಸುವ ಗುರಿ ನಿರ್ದಿಷ್ಟವಾಗಿರಲಿ

ವಿದ್ಯಾರ್ಥಿಗಳಿಗೆ ಸಂಸದ ಸುನೀಲ್ ಬೋಸ್ ಕರೆ



ಸಮಾರಂಭವನ್ನು ಸಂಸದ ಸುನೀಲ್ ಬೋಸ್ ಉದ್ಘಾಟಿಸಿದರು.

ತಿ.ನರಸೀಪುರ, ಜು.28– ಶಿಕ್ಷಣ ಕ್ಷೇತ್ರದಲ್ಲಿ ಸಾಧನೆಗೈಯಲು ವಿದ್ಯಾರ್ಥಿಗಳು ಯಾವುದೇ ಒತ್ತಡಕ್ಕೊಳಗಾಗಬಾರದು. ಕಲಿಕೆ ವಿಷಯದ ಆಯ್ಕೆ ಐಚ್ಛಿಕವಾಗಿರಲಿ, ಜೀವನದಲ್ಲಿ ಸಾಧಿಸುವ ಗುರಿ ನಿರ್ದಿಷ್ಟವಾಗಿರಲಿ ಎಂದು ಸಂಸದ ಸುನೀಲ್ ಬೋಸ್ ಕರೆ ನೀಡಿದರು.

ತಾಲೂಕಿನ ಬನ್ನೂರು ಸಂತೆಮಾಳದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜು ಆವರಣದಲ್ಲಿ 2024–25ನೇ ಶೈಕ್ಷಣಿಕ ಸಾಲಿನ ಸಹಪಠ್ಯ ಚಟುವಟಿಕೆಗಳ ಉದ್ಘಾಟನೆ, ಪ್ರಥಮ ಪಿಯುಸಿ ವಿದ್ಯಾರ್ಥಿಗಳಿಗೆ ಸ್ವಾಗತ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉನ್ನತ ಶ್ರೇಣಿಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾರ್ಥಿ ಜೀವನ ಅಮೂಲ್ಯವಾದದ್ದು, ಕಲಿಯುವ ವಯಸ್ಸು ಮತ್ತೆ ಸಿಗಲ್ಲ. ಹಾಗಾಗಿ ಕಲಿಯುವ ಉತ್ಸಾಹದೊಂದಿಗೆ ವಿದ್ಯಾರ್ಥಿ ಬದುಕನ್ನು ಪೂರ್ಣವಾಗಿ ಅನುಭವಿಸ ಬೇಕು ಎಂದು ಕಿವಿಮಾತು ಹೇಳಿದರು.

ಪ್ರತಿಯೊಬ್ಬ ವಿದ್ಯಾರ್ಥಿಯಲ್ಲಿಯೂ ಕಲಿಯುವ ಬೌದ್ಧಿಕ ಸಾಮರ್ಥ್ಯ ವಿಭಿನ್ನವಾಗಿರುತ್ತದೆ. 45 ನಿಮಿಷ ಗಳಷ್ಟೇ ನಮ್ಮ ಮೆದುಳು ಯಾವುದೇ ವಿಷಯ ಗ್ರಹಿಸುವ ಸಾಮರ್ಥ್ಯ ಹೊಂದಿದೆ. ಹೀಗಾಗಿ ಕಲಿಕೆ ಯಲ್ಲಿ ಒತ್ತಡ ಬೇಡ. ಇಷ್ಟವಾಗುವ ವಿಷಯವನ್ನು ಆಯ್ಕೆ ಮಾಡಿಕೊಂಡು ನಿರಂತರ ಅಧ್ಯಯನದ ಮೂಲಕ ವ್ಯಾಸಂಗ ಪೂರ್ಣಗೊಳಿಸಿ. ಕ್ರೀಡಾಕೂಟ ಗಳು ಸೇರಿದಂತೆ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲೂ ಹುಮ್ಮಸ್ಸಿನಿಂದ ಭಾಗವಹಿಸಿ, ಶಿಕ್ಷಣದಿಂದ ಉತ್ತಮ ಬದುಕನ್ನು ಕಟ್ಟಿಕೊಳ್ಳಬೇಕು ಎಂದರು.

ಮಾಜಿ ಶಾಸಕಿ ಜೆ.ಸುನೀತಾ ವೀರಪ್ಪಗೌಡ ಮಾತ ನಾಡಿ, ಯುವ ಜನತೆಯಲ್ಲಿ ಸಾಮಾಜಿಕ ಜವಾಬ್ದಾರಿ ಮತ್ತು ನೈತಿಕ ಮೌಲ್ಯಗಳು ಕ್ಷೀಣಿಸುತ್ತಿರುವ ಕಾಲಘಟ್ಟ ದಲ್ಲಿ ನಾವೆಲ್ಲರೂ ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕೃತಿ ಹಾಗೂ ಸಂಸ್ಕಾರ ಕಲಿಸಬೇಕಿದೆ. ಶಿಕ್ಷಣ ವಿಷಯದ ಆಯ್ಕೆಯನ್ನು ಪೋಷಕರು ಮಕ್ಕಳ ವಿವೇಚನೆಗೆ ಬಿಡಬೇಕು. ಶಾಲಾ ಕಾಲೇಜುಗಳಲ್ಲಿ ಪಠ್ಯದಷ್ಟೇ ಪಠ್ಯೇತರ ಚಟುವಟಿಕೆಗಳು ಮುಖ್ಯವಾಗಿರುವುದ ರಿಂದ ವಿದ್ಯಾರ್ಥಿಗಳು ಎರಡರಲ್ಲೂ ಭಾಗವಹಿಸ ಬೇಕು ಎಂದು ಸಲಹೆ ನೀಡಿದರು.

ಇದೇ ವೇಳೆ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪುರಸ್ಕಾರ ನೀಡಿ ಗೌರವಿಸಲಾಯಿತು. ಕಾರ್ಯಕ್ರಮ ದಲ್ಲಿ ಮೈಮುಲ್ ನಿರ್ದೇಶಕ ಆರ್.ಚಲುವರಾಜು, ಪಿಕಾರ್ಡ್ ಬ್ಯಾಂಕ್ ನಿರ್ದೇಶಕ ಕೆ.ವಜ್ರೇಗೌಡ, ಪುರಸಭೆ ಮಾಜಿ ಅಧ್ಯಕ್ಷ ಮುನಾವರ್ ಪಾಷ, ಕಾಂಗ್ರೆಸ್ ಯುವ ಮುಖಂಡ ಲಕ್ಷ್ಮೀನಾರಾಯಣ, ಮಾಜಿ ಉಪಾಧ್ಯಕ್ಷ ಬಿ.ಎಸ್.ರಾಮಲಿಂಗೇಗೌಡ, ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಮರಿಸ್ವಾಮಿ, ಸಹಾಯಕ ಪ್ರಾಧ್ಯಾಪಕ ಡಾ.ಬಿ.ಕೆ.ಜ್ಞಾನಪ್ರಕಾಶ್, ಕಾಲೇಜು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಬಿ.ಸಿ.ನಂದೀಶ್, ಪ್ರಾಂಶುಪಾಲ ಗೂಳೀಗೌಡ, ಉಪ ಪ್ರಾಂಶುಪಾಲೆ ಬಟ್ಟಮ್ಮ, ಸದಸ್ಯ ಹೆಚ್.ಎಂ.ಮಹದೇವು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಚನ್ನಕೇಶವ, ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷ ಎ.ಎನ್.ಸ್ವಾಮಿ, ಕಾರ್ಮಿಕ ಅಧ್ಯಕ್ಷ ಶಿವಸಿದ್ದು, ಮಹಿಳಾ ಅಧ್ಯಕ್ಷೆ ವೀಣಾ ಶಿವಕುಮಾರ್, ಗ್ರಾಪಂ ಮಾಜಿ ಅಧ್ಯಕ್ಷ ಕೃಷ್ಣೆಗೌಡ, ದರಖಾಸ್ತು ಸಮಿತಿ ಸದಸ್ಯ ಮರಿಗೌಡ, ಎಸ್ಸಿ/ಎಸ್ಟಿ ಗುತ್ತಿಗೆದಾರರ ಸಂಘದ ಜಿಲ್ಲಾಧ್ಯಕ್ಷ ಕೆ.ಮಲ್ಲು, ಉಪನ್ಯಾಸಕರಾದ ಪ್ರಭುಸ್ವಾಮಿ, ಎಸ್.ಭಾಗ್ಯಲಕ್ಷ್ಮೀ, ಮುಖಂಡರಾದ ಬಸವನಹಳ್ಳಿ ಮಹೇಂದ್ರ, ಟಿ.ಎಸ್.ಲೋಕೇಶ, ನಾಗೇಶ, ರಂಜಿತ, ದಾಸೇಗೌಡ ಹಾಗೂ ಇನ್ನಿತರರಿದ್ದರು.

ಪ್ರೋತ್ಸಾಹ ಧನ ಘೋಷಣೆ

ದ್ವಿತೀಯ ಪಿಯುಸಿಯಲ್ಲಿ ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾದ ನಾಲ್ವರು ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿದ ಸಂಸದ ಸುನೀಲ್ ಬೋಸ್ ಅವರು ವೇದಿಕೆಯಲ್ಲಿ ವಿದ್ಯಾರ್ಥಿಗಳ ಮುಂದಿನ ಶಿಕ್ಷಣಕ್ಕೆ ನೆರವು ನೀಡಲು ನಾಲ್ವರಿಗೂ ತಲಾ 15000 ಪ್ರೋತ್ಸಾಹ ಧನವನ್ನು ಘೋಷಣೆ ಮಾಡಿ, ಪ್ರತಿಭಾನ್ವಿತ ವಿದ್ಯಾರ್ಥಿಗಳ ಬೆನ್ನು ತಟ್ಟಿದರು.

ಆಕಸ್ಮಿಕ ಬೆಂಕಿ: ಬ್ಯಾರನ್ ಭಸ್ಮ



ತಂಬಾಕು ಹದಗೊಳಿಸುವ ಬ್ಯಾರನ್ ಬೆಂಕಿಗೆ ಆಹುತಿಯಾಗಿರುವುದು.

ಹನಗೋಡು, ಜು.28– ಆಕಸ್ಮಿಕ ಬೆಂಕಿ ಬಿದ್ದು ತಂಬಾಕು ಹದ ಮಾಡುವ ಬ್ಯಾರನ್ ಸಂಪೂರ್ಣ ಭಸ್ಮವಾಗಿರುವ ಘಟನೆ ಇಲ್ಲಿಗೆ ಸಮೀಪದ ಬಿ.ಆರ್.ಕಾವಲು ಗ್ರಾಮದಲ್ಲಿ ನಡೆದಿದೆ.

ಗ್ರಾಮದ ನಿವಾಸಿ ಪದ್ಮಮ್ಮ ಅವರಿಗೆ ಸೇರಿದ ತಂಬಾಕು ಹದ ಮಾಡುವ ಬ್ಯಾರನ್ ಭಸ್ಮವಾಗಿದೆ. ತಂಬಾಕು ಹದಗೊಳಿಸುತ್ತಿದ್ದ ವೇಳೆ ಆಕಸ್ಮಿಕ ಬೆಂಕಿ ಬಿದ್ದು ತಂಬಾಕು, ಹದಗೊಳಿಸುವ ಪರಿಕರಗಳು, ಮೇಲ್ಛಾವಣಿ ಹಾಗೂ ಪೈಪ್‌ಗಳು ಭಸ್ಮವಾಗಿ ಐದು ಲಕ್ಷಕ್ಕೂ ಹೆಚ್ಚು ನಷ್ಟ ಸಂಭವಿಸಿದೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಹುಣಸೂರು ಅಗ್ನಿಶಾಮಕ ದಳದ ಸಿಬ್ಬಂದಿ ಬೆಂಕಿ ನಂದಿಸಿದ್ದಾರೆ.

ಸೈನಿಕರ ಸೇವೆ ಸ್ವಾರ್ಥರಹಿತವಾದದು

ಕಾರ್ಗಿಲ್ ವಿಜಯೋತ್ಸವದಲ್ಲಿ ಬಿಜೆಪಿ ಅಧ್ಯಕ್ಷ ರಾಜೇಂದ್ರ



ಪಿರಿಯಾಪಟ್ಟಣದಲ್ಲಿ ಕಾರ್ಗಿಲ್ ವಿಜಯೋತ್ಸವ ಆಚರಿಸಲಾಯಿತು.

ಪಿರಿಯಾಪಟ್ಟಣ, ಜು.28– ನಮ್ಮ ಸೈನಿಕರ ದೇಶ ಸೇವೆ ಸ್ವಾರ್ಥ ರಹಿತವಾದದು ಎಂದು ತಾಲೂಕು ಬಿಜೆಪಿ ಅಧ್ಯಕ್ಷ ರಾಜೇಂದ್ರ ತಿಳಿಸಿದರು.

ಪಟ್ಟಣದ ಜಿಜೆಸಿಪಿ ಕಾಲೇಜಿನ ಆವರಣದಲ್ಲಿ ಹುತಾತ್ಮ ಯೋಧ ಬೆಳ್ಳಿಯಪ್ಪ ಪ್ರತಿಮೆಗೆ ಪುಷ್ಪಾರ್ಚನೆ ಸಲ್ಲಿಸಿ, ಕಾರ್ಗಿಲ್ ವಿಜಯೋತ್ಸವ ಆಚರಿಸಿ ಮಾತನಾಡಿದರು.

ಮಾಜಿ ಯೋಧ ಜೆ.ಸಿ.ವಿಕ್ರಂ ರಾಜ್ ಮಾತನಾಡಿ, ಭಾರತೀಯ ಸೇನಾ ಬಲ ಕಂಡು ನಮ್ಮ ನೆರೆಯ ರಾಷ್ಟ್ರಗಳಾದ ಚೀನಾ, ಪಾಕಿಸ್ತಾನ ಸೇರಿದಂತೆ ಇನ್ನಿತರ ದೇಶಗಳು ಹೆದರುವಂತಾಗಿದೆ. ಕಾರ್ಗಿಲ್ ಯುದ್ಧದ ನಂತರ ಭಾರತ ಸೇನೆಯ ಯೋಚನಾ ಲಹರಿ ಮತ್ತು ದಿಕ್ಕು ಬದಲಾ ಗಿದೆ. ಈ ಹಿಂದೆ ನಮ್ಮ ದೇಶ ಯುದ್ಧ ಸಾಮಗ್ರಿಗಳಿಗಾಗಿ ಬೇರೆ ರಾಷ್ಟ್ರಗಳನ್ನು ಅವಲಂಬಿಸುತ್ತಿತ್ತು. ಆದರೆ ಈಗ ಯುದ್ಧ ಸಾಮಗ್ರಿಗಳ ಉತ್ಪಾದನೆಯಲ್ಲಿ ಸ್ವಾವಲಂಬಿಯಾಗುತ್ತಿರುವುದು ಹೆಮ್ಮೆಯ ಸಂಗತಿ ಎಂದ ಅವರು ಯುದ್ಧದಲ್ಲಿ ಜೀವ ಕಳೆದುಕೊಂಡ ಯೋಧರ ಕುಟುಂಬ ಹಾಗೂ ಮಾಜಿ ಯೋಧರ ಆಸ್ತಿ, ಕುಟುಂಬದ ರಕ್ಷಣೆಗೆ ಸರ್ಕಾರ ಹೆಚ್ಚಿನ ಗಮನ ನೀಡಬೇಕು ಎಂದರು.

ಈ ವೇಳೆ ಮಾಜಿ ಸೈನಿಕರ ಸಂಘದ ಅಧ್ಯಕ್ಷ ನರಸೇಗೌಡ, ಮಾಜಿ ಸೈನಿಕ ಸಂಘದ ಪದಾಧಿಕಾರಿಗಳಾದ ರಮೇಶ್, ಗೋವಿಂದೇಗೌಡ, ಧ್ರುವರಾಜ್, ಪುಷ್ಪಕರನ್, ಪೂಣಚ್ಚ, ಲೋಕನಾಥ್, ಸಾಮ್ರಾಟ್, ಸತೀಶ್, ಕಿರಣ್, ಜಯರಾಮೇಗೌಡ, ಲೋಕಪಾಲಯ್ಯ, ನಳಿನಿ, ನಿರ್ಮಲ, ಮೀನಾಕ್ಷಿ, ಶಿವರಾಮ್, ರಾಜೇಗೌಡ ಸೇರಿದಂತೆ ಕಾಲೇಜಿನ ವಿದ್ಯಾರ್ಥಿ ವಿದ್ಯಾರ್ಥಿನಿಯರು ಹಾಜರಿದ್ದರು.

ಗಂಧನಹಳ್ಳಿ ವೆಂಕಟೇಶ್ ಹುಟ್ಟುಹಬ್ಬ ಆಚರಣೆ



ಮಾರಗೌಡನಹಳ್ಳಿಯಲ್ಲಿ ಕಾಂಗ್ರೆಸ್ ಯುವ ಮುಖಂಡ ವೆಂಕಟೇಶ್ ಹುಟ್ಟುಹಬ್ಬ ಆಚರಿಸಲಾಯಿತು.

ಭೇರ್ಯ, ಜು.28– ಮೈಸೂರಿನ ಶ್ರೀನಿವಾಸ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ವ್ಯವಸ್ಥಾಪಕ ನಿರ್ದೇಶಕ ಹಾಗೂ ಕಾಂಗ್ರೆಸ್ ಯುವ ಮುಖಂಡ ಗಂಧನಹಳ್ಳಿ ವೆಂಕಟೇಶ್ ಹುಟ್ಟುಹಬ್ಬವನ್ನು ಅಭಿಮಾನಿಗಳು ಕೆ.ಆರ್.ನಗರ ತಾಲೂಕಿನ ಮಾರಗೌಡನಹಳ್ಳಿಯ ಶ್ರೀಬಸವೇಶ್ವರ ದೇವಾಲಯದಲ್ಲಿ ಆಚರಿಸಿದರು.

ದೇವಾಲಯದಲ್ಲಿ ಶ್ರೀಬಸವೇಶ್ವರ ದೇವರಿಗೆ ಅಭಿಷೇಕ ನೆರವೇರಿಸಿ, ಹೂವಿನ ಅಲಂಕಾರ ಮಾಡಿ ವಿಶೇಷ ಪೂಜೆ ನೆರವೇರಿಸಿದ ಅಭಿಮಾನಿಗಳು ಬಳಿಕ ಗಂಧನಹಳ್ಳಿ ವೆಂಕಟೇಶ್ ಅವರಿಗೆ ಭಾರೀ ಗಾತ್ರದ ಹಾರ ಹಾಕಿ, ಪೇಟ ತೊಡಿಸಿ 40 ಕೆಜಿ ತೂಕದ ಕೇಕ್ ಕತ್ತರಿಸಿ ಸಂಭ್ರಮಿಸಿದರು.

ಕಾಂಗ್ರೆಸ್ ಯುವ ಮುಖಂಡ ಗಂಧನಹಳ್ಳಿ ವೆಂಕಟೇಶ್ ಮಾತನಾಡಿ, ಪಕ್ಷದ ನಾಯಕರು ಹಾಕಿಕೊಟ್ಟ ಮಾರ್ಗದಲ್ಲಿ ನಡೆಯುತ್ತಿದ್ದೇನೆ. ಕಾಂಗ್ರೆಸ್ ಬಡವರ, ಶೋಷಿತರ, ನೊಂದವರ ಪರವಾಗಿ ಹೋರಾಟ ಮಾಡುತ್ತಾ ಬಂದಿದೆ. ಹಾಗಾಗಿ ನಾನು ಕಾಂಗ್ರೆಸ್ ಮುಖಂಡನಾಗಿ ಗ್ರಾಮೀಣ ಭಾಗದ ಜನರ ಅನುಕೂಲಕ್ಕಾಗಿ ಮೈಸೂರಿನಲ್ಲಿ ಶ್ರೀನಿವಾಸ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಆರಂಭಿಸಿದ್ದೇನೆ. ಅತಿ ಕಡಿಮೆ ವೆಚ್ಚದಲ್ಲಿ ಗುಣಮಟ್ಟದ ಚಿಕಿತ್ಸೆ ನೀಡಲಾಗುತ್ತಿದೆ. ನಮ್ಮ ಆಸ್ಪತ್ರೆಯಲ್ಲಿ ಬಿಪಿಎಲ್ ಕಾರ್ಡ್, ಯಶಸ್ವಿನಿ, ಆರ್‌ಬಿಎಸ್‌ಕೆ ಕಾರ್ಡ್ ಮೂಲಕವೂ ಚಿಕಿತ್ಸೆ ನೀಡಲಾಗುತ್ತಿದೆ. ಕೆ.ಆರ್.ನಗರ ಮತ್ತು ಸಾಲಿಗ್ರಾಮ ಅವಳಿ ತಾಲೂಕಿನ ಜನತೆ ಇದರ ಸದುಪಯೋಗ ಪಡೆಯಬೇಕು ಎಂದರು.

ಈ ವೇಳೆ ಅಡಗೂರು ಗ್ರಾಪಂ ಅಧ್ಯಕ್ಷ ಮಹದೇವ್, ದೊಡ್ಡ ಯಜಮಾನ ರಘು, ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷ ಎಂ.ಎಸ್.ಮಹದೇವ, ಮಹಾನಗರಪಾಲಿಕೆ ನಾಮನಿರ್ದೇಶನ ಸದಸ್ಯ ಆರೀಫ್, ಯುವ ಮುಖಂಡರಾದ ನಂದೀಶ್, ಜಯಂತ್, ಲೋಕೇಶ್, ಮಂಜು ಅರಸ್, ಶಾಂತನಾಮಧಾರಿ, ಭೈರನಾಯಕ, ಸಚಿನ್, ವಿಕ್ಕಿ, ಜಗದೀಶ್ ಸೇರಿದಂತೆ ಇತರರಿದ್ದರು.

ಅಕ್ಷರ ಕಲಿಸಿದ ಗುರು, ಜ್ಞಾನ ನೀಡಿದ ಶಾಲೆ ಮರೆಯಬಾರದು

ಗುರುವಂದನೆ ಕಾರ್ಯಕ್ರಮದಲ್ಲಿ ಉಪ ಕಾರ್ಯದರ್ಶಿ ಎಸ್.ಸಿ.ಮಹೇಶ್



ಬೆಟ್ಟದಪುರದಲ್ಲಿ ಗುರುವಂದನೆ, ವಿದ್ಯಾರ್ಥಿಗಳಿಗೆ ತಟ್ಟೆ–ಲೋಟ ವಿತರಣಾ ಸಮಾರಂಭ ನಡೆಯಿತು.

ಬೆಟ್ಟದಪುರ, ಜು.28– ಅಕ್ಷರ ಕಲಿಸಿದ ಗುರು, ಜ್ಞಾನ ದಾಹ ತಣಿಸಿದ ಶಾಲೆಯನ್ನು ನಾವು ಎಂದಿಗೂ ಮರೆಯಬಾರದು ಎಂದು ಸರ್ಕಾರಿ ಪದವಿಪೂರ್ವ ಕಾಲೇಜಿನ ಹಿರಿಯ ವಿದ್ಯಾರ್ಥಿ ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಉಪ ಕಾರ್ಯದರ್ಶಿ ಎಸ್.ಸಿ.ಮಹೇಶ್ ತಿಳಿಸಿದರು.

ಬೆಟ್ಟದಪುರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗದಲ್ಲಿ ನಡೆದ ಗುರುವಂದನೆ ಹಾಗೂ ವಿದ್ಯಾರ್ಥಿಗಳಿಗೆ ತಟ್ಟೆ, ಲೋಟ ವಿತರಣಾ ಸಮಾರಂಭದಲ್ಲಿ ಮಾತನಾಡಿದ ಅವರು ಶಾಲೆಗೆ ಆಗಮಿಸುವ ಮಕ್ಕಳಿಗೆ ಜ್ಞಾನ ನೀಡಿ ಸಂಸ್ಕಾರ ತುಂಬುವ ಗುರುಗಳೇ ನಿಜವಾದ ರಾಷ್ಟ್ರ ನಿರ್ಮಾತೃಗಳಾಗಿದ್ದು, ಅವರು ನೀಡುವ ಮಾರ್ಗದರ್ಶನವನ್ನು ಪಾಲಿಸುವ ಮೂಲಕ ನಿರ್ದಿಷ್ಟ ಗುರಿ ತಲುಪಬೇಕು. ಕಲಿತ ಶಾಲೆ ನೆನೆದು ಅದರ ಪೂರಕ ಅಭಿವೃದ್ಧಿಗಾಗಿ ಸಹಕರಿಸುವ ನಿಟ್ಟಿನಲ್ಲಿ ಹಿರಿಯ ವಿದ್ಯಾರ್ಥಿಗಳು ನೆರವು ನೀಡಬೇಕು ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಬಿ.ಜಿ.ಜಗದೀಶ್, ಶಾಲೆ 75 ವಸಂತಗಳನ್ನು ಪೂರ್ಣಗೊಳಿಸಿರುವ ಸಂದರ್ಭ ಶಾಲೆಯಲ್ಲಿ ಸೇವೆ ಸಲ್ಲಿಸಿದ ಶಿಕ್ಷಕರು, ಹಿರಿಯ ವಿದ್ಯಾರ್ಥಿಗಳು ಒಟ್ಟಾಗಿ ಅಮೃತ ಮಹೋತ್ಸವ ಆಚರಿಸುವ ಹಾಗೂ ಶಾಲೆಯನ್ನು ಸಮಗ್ರವಾಗಿ ಅಭಿವೃದ್ಧಿ ಪಡಿಸಲು ಸಹಕಾರ ನೀಡುವಂತೆ ಮನವಿ ಮಾಡಿದರು.

ನಿವೃತ್ತ ಶಿಕ್ಷಕ ಸಣ್ಣಸ್ವಾಮಿಗೌಡ ಹಾಗೂ ಮುಖ್ಯ ಶಿಕ್ಷಕ ಮಲ್ಲೇಶ್ ಮಾತನಾಡಿದರು. ಕಾರ್ಯಕ್ರಮದಲ್ಲಿ ಶಾಲೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತರಾದ ಹಿರಿಯ ಶಿಕ್ಷಕರಾದ ಸಿ.ಪಿ.ರಾಮಚಂದ್ರ, ಬಿ.ಜಿ.ಜಗದೀಶ್, ಕೆ.ವಿ.ಪುಷ್ಪ, ಜಯಮ್ಮಣ್ಣಿ, ಬಸವರಾಜು ಅವರನ್ನು ಸನ್ಮಾನಿಸಲಾಯಿತು.

ಹಿರಿಯ ವಿದ್ಯಾರ್ಥಿಗಳಾದ ಕೋದಂಡರಾಂ, ಎಂ.ಮಲ್ಲೇಶ್, ನಟರಾಜ್, ಮಹೇಶ್, ವೆಂಕಟೇಶ್, ಶಿವಾನಂದ್, ಆಶಾ, ನಾಗೇಂದ್ರ ರಾಧ್ಯ, ಬಿ.ಟಿ.ಸಣ್ಣಸ್ವಾಮಿಗೌಡ, ವಿಶ್ವನಾಥ್, ಲತಾ, ಇರ್ಫಾನ್ ಪಾಷ, ರವಿಕುಮಾರ್, ಚಂದ್ರಶೇಖರ್, ಮಹೇಶ್, ಚಂದ್ರಿಕಾ, ತೊಂಟಪ್ಪ, ಕಾಂತ, ಭಾಗ್ಯ, ಪುಷ್ಪಲತಾ, ಗಿರಿಜಾ, ಜಯಶ್ರೀ, ಸುರೇಶ್, ಕುಮಾರ್ ಉಪ ಪ್ರಾಂಶುಪಾಲ ಮಂಜೇಗೌಡ, ಶಾಲಾ ಶಿಕ್ಷಕರು, ಮಕ್ಕಳು ಹಾಜರಿದ್ದರು.

ಪಾರ್ಶ್ವವಾಯು ವ್ಯಕ್ತಿಗಳಿಗೆ ಕಾಳಜಿ ಅವಶ್ಯಕ



ಸರಗೂರಲ್ಲಿ ಪಾರ್ಶ್ವವಾಯು ವ್ಯಕ್ತಿಗಳು, ಪೋಷಕರಿಗೆ ಪುನರ್ವಸತಿ ಶಿಬಿರ ನಡೆಯಿತು

ಸರಗೂರು, ಜು.28– ಪಾರ್ಶ್ವವಾಯು ವ್ಯಕ್ತಿಗಳಿಗೆ ಕಾಳಜಿ ಅವಶ್ಯಕ ಎಂದು ವಿವೇಕಾನಂದ ಸ್ಮಾರಕ ಆಸ್ಪತ್ರೆ ಉಪ ನಿರ್ದೇಶಕ ಡಾ.ಹೆಚ್.ಕೆ.ಶಂಕರ್ ತಿಳಿಸಿದರು.

ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್, ವಿವೇಕಾನಂದ ಸ್ಮಾರಕ ಆಸ್ಪತ್ರೆ, ವಿಶೇಷಚೇತನರಿಗಾಗಿ ಸಮಗ್ರ ಆರೈಕೆ ಬೆಂಬಲ ಚಿಕಿತ್ಸಾ ಕಾರ್ಯಕ್ರಮ ಹಾಗೂ ಸಮುದಾಯದ ಸಹಭಾಗಿತ್ವದೊಂದಿಗೆ ಹಮ್ಮಿಕೊಂಡಿದ್ದ ಪಾರ್ಶ್ವವಾಯು ವ್ಯಕ್ತಿಗಳು ಮತ್ತು ಪೋಷಕರಿಗೆ ಪುನರ್ವಸತಿ ಶಿಬಿರದ ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಶಿಬಿರದಲ್ಲಿ ನೀಡಿರುವ ಚಿಕಿತ್ಸೆಯನ್ನು ಪಾರ್ಶ್ವವಾಯು ವ್ಯಕ್ತಿಗಳು ಮತ್ತು ಪೋಷಕರು ಮನೆಯಲ್ಲಿ ಮುಂದುವರೆಸಬೇಕು. ಸಮಾಜದಲ್ಲಿ ಬೇರೆಯವರ ಮೇಲೆ ಅವಲಂಬಿತರಾಗದೆ ಸ್ವತಂತ್ರವಾಗಿ ಜೀವನ ನಡೆಸಲು ಮುಂದಾಗಬೇಕು. ವ್ಯಕ್ತಿಗಳ ಯೋಜನೆ ಮತ್ತು ಚಿಂತನೆಗಳು ಸರಿ ಇದ್ದರೆ ಮಾತ್ರ ಸ್ವಾವಲಂಬಿಗಳಾಗಿ ಮತ್ತು ಆರೋಗ್ಯವಂತರಾಗಿ ಬದುಕಲು ಸಾಧ್ಯ ಎಂದರು.

ಶಿಬಿರದ ಫಲಾನುಭವಿ ಕೆ.ಆರ್.ನಗರ ತಾಲೂಕಿನ ದಾಸ್‌ಪ್ರಕಾಶ್, ವಿಕಲಚೇತನರ ಕಲ್ಯಾಣ ಇಲಾಖೆ ತಾಲೂಕು ಸಂಯೋಜಕ ಜಯರಜ ಮಾತನಾಡಿದರು. ಕಾರ್ಯಕ್ರಮದಲ್ಲಿ ಸರಗೂರು ತಾಲೂಕು ಚಿಕ್ಕದೇವಮ್ಮ ವಿಶೇಷಚೇತನರ ಕ್ಷೇಮಾಭಿವೃದ್ಧಿ ಒಕ್ಕೂಟದ ಉಪಾಧ್ಯಕ್ಷ ಚಾಮನಾಯಕ, ಉಪಶಮನ ಆರೈಕೆ ಕಾರ್ಯಕ್ರಮದ ಹಿರಿಯ ವ್ಯವಸ್ಥಾಪಕರಾದ ಡಾ.ವಿಭಾ, ಎಸ್.ಕೆ.ವಿವೇಕಾನಂದ ಯೂತ್ ಮೂವ್‌ಮೆಂಟ್ ನಿರ್ದೇಶಕಿ ದೀಪಶ್ರೀ ಎಸ್.ಆರ್. ಸೇರಿದಂತೆ ಇನ್ನಿತರರಿದ್ದರು.

ಬಡವರ ಅನುಕೂಲಕ್ಕಾಗಿ ಕಣ್ಣಿನ ತಪಾಸಣಾ ಶಿಬಿರ ಆಯೋಜನೆ: ನಿರಂಜನ್



ಹೆಚ್.ಡಿ.ಕೋಟೆಯ ಹ್ಯಾಂಡ್‌ಪೋಸ್ಟ್‌ನಲ್ಲಿ ಉಚಿತ ಕಣ್ಣಿನ ತಪಾಸಣಾ ಶಿಬಿರ ನಡೆಯಿತು.

ಹೆಚ್.ಡಿ.ಕೋಟೆ, ಜು.28– ಬಡವರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಉಚಿತ ಕಣ್ಣಿನ ತಪಾಸಣಾ ಶಿಬಿರಗಳನ್ನು ನಡೆಸಲಾಗುತ್ತಿದೆ ಎಂದು ರೋಟರಿ ಕ್ಲಬ್ ಅಧ್ಯಕ್ಷ ನಿರಂಜನ್ ತಿಳಿಸಿದರು.

ಪಟ್ಟಣದ ಹ್ಯಾಂಡ್‌ಪೋಸ್ಟ್‌ನಲ್ಲಿರುವ ಮೈಕ್ಯಾಪ್ ಸಂಸ್ಥೆ ಆವರಣದಲ್ಲಿ ಆಯೋಜಿಸಿದ್ದ ಉಚಿತ ಕಣ್ಣಿನ ತಪಾಸಣಾ ಶಿಬಿರ ಉದ್ಘಾಟಿಸಿ ಮಾತನಾಡಿದ ಅವರು, ರೋಟರಿ ಕ್ಲಬ್, ಮೈರಾಡ ಕಾವೇರಿ ಪ್ರಾದೇಶಿಕ ಸಂಸ್ಥೆ ಮತ್ತು ಬೆಂಗಳೂರು ಶಂಕರ ಕಣ್ಣಿನ ಆಸ್ಪತ್ರೆ ವತಿಯಿಂದ ಪ್ರತಿ ತಿಂಗಳು ಬಡ ಕುಟುಂಬಗಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ನಡೆಸುತ್ತಿರುವ ಉಚಿತ ಕಣ್ಣಿನ ತಪಾಸಣಾ ಯಶಸ್ವಿಯಾಗಿದೆ ಎಂದರು.

ಶಿಬಿರದಲ್ಲಿ ಗುಣಮಟ್ಟದ ಚಿಕಿತ್ಸೆ ನೀಡುತ್ತಿರುವುದರಿಂದ ಪ್ರತಿ ತಿಂಗಳು ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಆಗಮಿಸಿ ಶಿಬಿರದ ಸದುಪಯೋಗ ಪಡೆಯುತ್ತಿದ್ದಾರೆ ಎಂದರು.

ಮೈಕ್ಯಾಪ್ ಮಹದೇವಯ್ಯ ಮಾತನಾಡಿ, ಸಂಸ್ಥೆ ವತಿಯಿಂದ ಕಳೆದ ಸಾಲಿನಲ್ಲಿ 1 ಸಾವಿರ ಮಂದಿ ಕಣ್ಣಿನ ಚಿಕಿತ್ಸೆಗೆ 2 ಕೋಟಿ ರೂ. ಖರ್ಚು ಮಾಡಲಾಗಿದೆ. ಒಂದು ಚಿಕಿತ್ಸೆಗೆ ಸುಮಾರು 20 ಸಾವಿರ ಹಣ ಖರ್ಚಾಗುತ್ತದೆ ಎಂದರು.

ಸಹಾಯಕ ಗವರ್ನರ್ ವಲಯ–08ರ ರೊ.ಎಂಪಿಎಚ್‌ಎಫ್ ಎಂ.ರಾಜೀವ್ ಮಾತನಾಡಿದರು. ರೋಟರಿ ಕಾರ್ಯದರ್ಶಿ ಶಿವಣ್ಣ, ಶಂಕರ ಕಣ್ಣಿನ ಆಸ್ಪತ್ರೆ ಕ್ಷೇತ್ರ ಅಧಿಕಾರಿ ಶ್ರೀಕಂಠಮೂರ್ತಿ, ಮಾಜಿ ಅಧ್ಯಕ್ಷ ಬಿ.ಜಿ.ಗಂಗಾಧರ್, ಸ್ವಾಮಿ, ರೋಟೇರಿಯನ್‌ಗಳಾದ ಮಹೇಶ್, ದೀಪು, ಚಿನ್ನ ಬೆಳ್ಳಿ ರವಿ ಹಾಜರಿದ್ದರು.

ತಿ.ನರಸೀಪುರದಲ್ಲಿ ದಿ.ರಾಕೇಶ್ ಪುಣ್ಯಸ್ಮರಣೆ



ಗೋಪಾಲಪುರದಲ್ಲಿ ದಿ.ರಾಕೇಶ್ ಅವರ ಪುಣ್ಯಸ್ಮರಣೆ ನಡೆಯಿತು.

ತಿ.ನರಸೀಪುರ, ಜು.28– ಪಟ್ಟಣದ ಗೋಪಾಲಪುರದಲ್ಲಿ ಭಾನುವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪುತ್ರ ದಿ.ರಾಕೇಶ್ ಅವರ ಪುಣ್ಯಸ್ಮರಣೆ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಕೆಪಿಸಿಸಿ ಹಿಂದುಳಿದ ವರ್ಗಗಳ ವಿಭಾಗದ ಪ್ರಧಾನ ಕಾರ್ಯದರ್ಶಿ ಎಂ.ರಮೇಶ್, ಸಿಎಂ ಸಿದ್ದರಾಮಯ್ಯ ಅವರ ರಾಜಕಾರಣದ ಯುವ ಸಾರಥಿಯಾಗಿದ್ದ ರಾಕೇಶ್ ಅವರು ಸಾಮಾಜಿಕ ಜವಾಬ್ದಾರಿ ಅರಿತು ಜನಸೇವೆಯನ್ನು ಬದ್ಧತೆಯಿಂದ ಮಾಡುತ್ತಿದ್ದರು ಎಂದರು.


ಇಂದು ಯುವ ನಾಯಕ ದಿ.ರಾಕೇಶ್ ಅವರ ಪುಣ್ಯಸ್ಮರಣೆ ಕಾರ್ಯಕ್ರಮ ಆಯೋಜಿಸಿ ಸಾರ್ವಜನಿಕರಿಗೆ ಹಾಲು, ಹಣ್ಣು ಹಾಗೂ ಉಪಹಾರ ವಿತರಿಸುತ್ತಿರುವುದು ಶ್ಲಾಘನೀಯ. ಮುಂದಿನ ದಿನಗಳಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಗೋಪಾಲಪುರದ ದಲಿತ ಸಹೋದರರ ನಿವೇಶನ ಸಮಸ್ಯೆ ಸೇರಿದಂತೆ ಎಲ್ಲಾ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಮನವಿ ಮಾಡಿದರು.

ಮೈಸೂರು ಜಿಲ್ಲಾ ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸದಸ್ಯ ಎಂ.ಶಿವಕುಮಾರ್ ಮಾತನಾಡಿ, ಸರ್ವೆ ನಂ.7 ಮತ್ತು ಸರ್ವೆ ನಂ.41/3 ರ ನಿವೇಶನ ಹಂಚಿಕೆ ಸಂಬಂಧ ಜಿಲ್ಲಾಡಳಿತಕ್ಕೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಹಾಗೂ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅವರು ಸೂಚಿಸಿರುವುದರಿಂದ ಗೋಪಾಲಪುರ ದಲಿತರ ನಿವೇಶನದ ಕನಸು ಸದ್ಯದಲ್ಲಿಯೇ ನನಸಾಗಲಿದೆ ಎಂದರು.

ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಎಂ.ಮಹೇಶ್, ಮಾಜಿ ಕೌನ್ಸಿಲರ್ ಎಸ್.ಶ್ರೀನಿವಾಸ್, ಯಜಮಾನ್ ಶಿವಸಿದ್ದು, ಮುಖಂಡರಾದ ರಾಮಚಂದ್ರ, ಸಿದ್ದರಾಮನಹುಂಡಿ ಶಿವಣ್ಣ, ಮೈಸೂರು ಎನ್.ರವಿ, ರಂಗಸ್ವಾಮಿ, ನಾಗರಾಜು, ಮಹದೇವಮ್ಮ, ರೇವಣ್ಣ, ಇಂದ್ರಮ್ಮ, ಪುಟ್ಟಮ್ಮ, ಚಂದ್ರಮ್ಮ ಇನ್ನಿತರರಿದ್ದರು.

ಕಠಿಣ ವಿದ್ಯಾರ್ಜನೆಯಿಂದ ಉನ್ನತ ಸಾಧನೆ ಸಾಧ್ಯ

ಮುರುಗಿ ಮಠದ ಇಮ್ಮಡಿ ಮುರುಗಿ ಸ್ವಾಮೀಜಿ



ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಚೆನ್ನಬಸವ ಸ್ವಾಮೀಜಿ ಉದ್ಘಾಟಿಸಿದರು.

ನಂಜನಗೂಡು, ಜು.28– ವಿದ್ಯಾರ್ಥಿ ಜೀವನದಲ್ಲಿ ಕಠಿಣ ತಪಸ್ಸಿನಂತೆ ವಿದ್ಯಾರ್ಜನೆಯಲ್ಲಿ ತೊಡಗಿದರೆ ಉನ್ನತ ಸ್ಥಾನ ಪಡೆಯಬಹುದು ಎಂದು ಮುರುಗಿ ಮಠದ ಇಮ್ಮಡಿ ಮುರುಗಿ ಸ್ವಾಮೀಜಿ ತಿಳಿಸಿದರು.

ತಾಲೂಕಿನ ಮಲ್ಲನಮೂಲೆ ಮಠದ ಸಭಾಂಗಣದಲ್ಲಿ ಭಾನುವಾರ ಬಸವ ಸೇವಾ ಸಮಿತಿ ಹಾಗೂ ವೀರಶೈವ ಶಿಕ್ಷಕರ ಕ್ಷೇಮಾಭಿವೃದ್ಧಿ ಸಂಘ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ವಿದ್ಯಾರ್ಥಿ ದೆಸೆಯಲ್ಲಿ ತನ್ನನ್ನು ತಾನು ಬದಲಿಸಿಕೊಂಡು, ಶಿಸ್ತನ್ನು ಮೈಗೂಡಿಸಿಕೊಂಡರೆ ಉತ್ತಮ ಸಾಧನೆ ಸಾಧ್ಯ. ಡಾಂಭಿಕತೆಯನ್ನು ಬಿಟ್ಟು ನೈಜತೆಯಿಂದ ನಡೆದು ಬದುಕನ್ನು ಸಾಧಕಗೊಳಿಸಿಕೊಳ್ಳಬಹುದು ಎಂದರು.

ಜಿಲ್ಲಾ ವೀರಶೈವ ನೌಕರರ ಸಂಘದ ಅಧ್ಯಕ್ಷ ಆಲೂರು ಬಸವರಾಜು ಮಾತನಾಡಿ, ಪ್ರಸ್ತುತ ಸಮಾಜದ ಮೇಲೆ ಹೊರಗಿನ ಸಂಸ್ಕೃತಿಯ ಪ್ರಭಾವ ಬೀರುತ್ತಿದೆ. ನಮ್ಮ ಸಂಸ್ಕೃತಿ, ಆಚಾರ, ವಿಚಾರಗಳನ್ನು ಅನುಸರಿಸುವ ಮೂಲಕ ನಮ್ಮ ಸಂಸ್ಕೃತಿ ಉಳಿಸಿಕೊಳ್ಳಬೇಕಾದ ಜವಾಬ್ದಾರಿ ಹೆಚ್ಚಾಗಿದೆ. ವಿದ್ಯಾರ್ಥಿಗಳು ಜ್ಞಾನದಾಹಿಗಳಾಗಬೇಕು. ಜಗತ್ತನ್ನು ಆಳುತ್ತಿರುವುದು ಜ್ಞಾನ, ಪುರೋಹಿತ ಶಾಯಿಗಳಷ್ಟು ನಾವು ಬಲಶಾಲಿಗಳಲ್ಲ. ಆ ಸಮಾಜ ಮೀಸಲಾತಿಯಿಲ್ಲದೆ ಬದುಕುತ್ತಿದೆ. ಜ್ಞಾನದ ಶಕ್ತಿಯಿಂದ ಹೊರ ದೇಶಗಳಲ್ಲಿ ಅವಕಾಶಗಳನ್ನು ಗಿಟ್ಟಿಸಿಕೊಂಡು ಯಶಸ್ವಿಯಾಗಿದ್ದಾರೆ. ಜ್ಞಾನಕ್ಕೆ ಮಹತ್ವ ನೀಡಿದರೆ ಉನ್ನತ ಸ್ಥಾನ ಪಡೆಯಬಹುದು ಎಂದರು.


ಇದೇ ವೇಳೆ ವೀರಶೈವ ಸಮಾಜದ ನಿವೃತ್ತ ನೌಕರರು ಹಾಗೂ ವಿದ್ಯಾರ್ಥಿಗಳಿಗೆ ನಗದು ಪುಸ್ಕಾರ ನೀಡಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಮಲ್ಲನಮೂಲೆ ಮಠದ ಚೆನ್ನಬಸವ ಸ್ವಾಮೀಜಿ, ಶರಣ ಸಂಗಮ ಮಠದ ನಾಗರಾಜೇಂದ್ರ ಸ್ವಾಮೀಜಿ, ಅಖಿಲ ಭಾರತ ವೀರಶೈವ ಮಹಾಸಭಾ ತಾಲೂಕು ಅಧ್ಯಕ್ಷ ಎಸ್.ಎಂ.ಕೆಂಪಣ್ಣ, ಬಸವ ಸೇವಾ ಸಮಿತಿ ಅಧ್ಯಕ್ಷ ಜಿ.ಎಲ್.ಸೋಮಣ್ಣ, ಡಿ.ವಿ.ಚಂದ್ರಶೇಖರ್ ದೇವನೂರು, ಶಿವಕುಮಾರ್, ಎಂ.ಎಸ್.ನಾಗೇಂದ್ರ, ಶಂಕರ್ ಪ್ರಸಾದ್, ಕುಮಾರ ಸ್ವಾಮಿ, ಮಹೇಶ್, ಗುರುಸ್ವಾಮಿ, ಅಕ್ಷರ ದಾಸೋಹ ಅಧಿಕಾರಿ ಮಲ್ಲಿಕಾರ್ಜುನ್ ಉಪಸ್ಥಿತರಿದ್ದರು.

ನಂಜನಗೂಡು ಪ್ರವಾಸಿ ಮಂದಿರಕ್ಕೆ ಬೀಗ ಹಾಕಿ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿಗೆ ಅಪಮಾನ

ಹತ್ತು ನಿಮಿಷ ಕಾರಿನಲ್ಲೇ ಕುಳಿತಿದ್ದರೂ ಬೀಗ ತೆಗೆಯದ ಸಿಬ್ಬಂದಿ



ನಂಜನಗೂಡಿನ ಪ್ರವಾಸಿ ಮಂದಿರದ ಮುಂಭಾಗ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಕಾರಿನಲ್ಲಿ ಕಾಯುತ್ತಾ ಕುಳಿತಿರುವುದು



ಪ್ರವಾಸಿ ಮಂದಿರಕ್ಕೆ ಬೀಗ ಹಾಕಿರುವುದು

ಮೈಸೂರು, ಜು.28(ಬಿಎಲ್‌ಯು)– ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ ಮೈಸೂರಿನ ನಂಜನಗೂಡು ದೇವಸ್ಥಾನಕ್ಕೆ ಭೇಟಿ ನೀಡಿದ ವೇಳೆ ಪ್ರವಾಸಿ ಮಂದಿರಕ್ಕೆ ಹೋದಾಗ ತಾಲೂಕು ಆಡಳಿತ ಪ್ರವಾಸಿ ಮಂದಿರಕ್ಕೆ ಬೀಗ ಹಾಕಿ ಅಪಮಾನ ಮಾಡಿದ ಪ್ರಸಂಗ ಇಂದು ನಡೆದಿದೆ.

ಇಂದು ಬೆಳಿಗ್ಗೆ ಕುಮಾರಸ್ವಾಮಿ ನಂಜನಗೂಡಿನ ನಂಜುಂಡೇಶ್ವರ ದೇವಸ್ಥಾನಕ್ಕೆ ಭೇಟಿ ನೀಡಿ, ದೇವರ ದರ್ಶನ ಪಡೆದರು.

ಕುಮಾರಸ್ವಾಮಿ ಭೇಟಿ ಬಗ್ಗೆ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವಾಲಯ ಸ್ಥಳೀಯ ಅಧಿಕಾರಿಗಳಿಗೆ ಮಾಹಿತಿ ನೀಡಿತ್ತು. ಜೊತೆಗೆ ಶಿಷ್ಟಾಚಾರ ಪಾಲಿಸುವಂತೆ ಸೂಚನೆ ನೀಡಿತ್ತು.

ನಂಜುಂಡೇಶ್ವರನ ದರ್ಶನ ಪಡೆದ ನಂತರ ಕುಮಾರಸ್ವಾಮಿ ವಿಶ್ರಾಂತಿಗಾಗಿ ಪ್ರವಾಸಿ ಮಂದರಕ್ಕೆ ಬಂದರು. ಆದರೆ ಪ್ರವಾಸಿ ಮಂದಿರದ ಬಾಗಿಲಿಗೆ ಬೀಗ ಹಾಕಲಾಗಿತ್ತು.

ತಾವು ಬಂದಿರುವ ವಿಚಾರ ಸಿಬ್ಬಂದಿಗಳಿಗೆ ಈಗ ತಿಳಿದಿರಬಹುದು, ಇನ್ನೇನು ಬೀಗ ತೆಗೆಯಬಹುದು ಎಂದು ಕುಮಾರಸ್ವಾಮಿ ಹತ್ತು ನಿಮಿಷ ಕಾರಿನಲ್ಲೇ ಕುಳಿತಿದ್ದರು. ಆದರೆ ತಾಲೂಕು ಆಡಳಿತದ ಸಿಬ್ಬಂದಿಗಳಾಗಲಿ, ದೇವಾಲಯದ ಸಿಬ್ಬಂದಿಗಳಾಗಲಿ ಸ್ಥಳಕ್ಕೆ ಬರಲೇ ಇಲ್ಲ. ಈ ಮೂಲಕ ಶಿಷ್ಟಾಚಾರ ಪಾಲಿಸದ ತಾಲೂಕು ಆಡಳಿತ ಮತ್ತು ದೇವಸ್ಥಾನದ ಸಿಬ್ಬಂದಿಗಳು ಕುಮಾರಸ್ವಾಮಿಗೆ ಅಪಮಾನ ಮಾಡಿದರು.

ಮೈಸೂರಿನ ಪತ್ರಕರ್ತರ ಭವನದಲ್ಲಿ ಇಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ಈ ಬಗ್ಗೆ ಕುಮಾರಸ್ವಾಮಿ ಪ್ರತಿಕ್ರಿಯಿಸಿ,

ರಾಜ್ಯ ಕಾಂಗ್ರೆಸ್ ಸರ್ಕಾರ ದ್ವೇಷ ರಾಜಕಾರಣ ಮಾಡುತ್ತಿದ್ದು, ಕರ್ನಾಟಕಕ್ಕೆ ಕಾಲಿಡಬಾರದು, ಅಷ್ಟೇ ಅಲ್ಲದೆ, ನಾನು ಪ್ರತಿನಿಧಿಸಿರುವ ಮಂಡ್ಯಕ್ಕೂ ಬರಬಾರದು ಎಂಬ ಮನೋಭಾವದಲ್ಲಿದೆ. ನಾನು ನಡೆಸುವ ಸಭೆಗೆ ಅಧಿಕಾರಿಗಳು ಹೋಗದಂತೆ ಸುತ್ತೋಲೆ ಕೂಡ ಹೊರಡಿಸಿದೆ ಎಂದು ಕಿಡಿಕಾರಿದರು.

ಮೈಸೂರಿನ ದೇವರಾಜ ಮಾರುಕಟ್ಟೆ ಹಾಗೂ ಲ್ಯಾನ್ಸ್‌ಡೌನ್ ಕಟ್ಟಡದ ಪುನರುಜ್ಜೀವನಕ್ಕೆ ಮುಂದಾಗಿದ್ದೆ. ಈ ಸಂಬಂಧ ಮುಖ್ಯಮಂತ್ರಿ ಆಗಿದ್ದಾಗ ಆ ಎರಡು ಸ್ಥಳಗಳಿಗೆ ಭೇಟಿ ನೀಡಿದ್ದೆ. ಆದರೆ ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸಿ ಮನೆಗೆ ಕಳುಹಿಸಿದರು ಎಂದು ಕುಮಾರಸ್ವಾಮಿ ಆಕ್ರೋಶ ವ್ಯಕ್ತಪಡಿಸಿದರು. ಮುಡಾಗೆ ಅರ್ಜಿ ಸಲ್ಲಿಸಿ 40 ವರ್ಷವಾದರೂ ಇನ್ನು ನಿವೇಶನ ನೀಡಿಲ್ಲ. ಆದರೂ ಆಧಾರರಹಿತ ಆರೋಪ ಮಾಡುತ್ತಿದ್ದಾರೆ. ನಾನೇನಾದರೂ ಒಂದು ವೇಳೆ ನಿವೇಶನ ಪಡೆದಿದ್ದರೆ ನನ್ನ ಕಥೆ ಮುಗಿಯುತ್ತಿತ್ತು ಎಂದು ಹೇಳಿದರು.

ಕರ್ತವ್ಯಲೋಪ ಎಸಗಿದವರ ವಿರುದ್ಧ ಶಿಸ್ತು ಕ್ರಮ- ಜಿಲ್ಲಾಧಿಕಾರಿ

ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ ನಂಜನಗೂಡಿನ ಪ್ರವಾಸಿ ಮಂದಿರಕ್ಕೆ ಭೇಟಿ ನೀಡಿದ ವೇಳೆ ಬೀಗ ಹಾಕಿರುವ ತಪ್ಪಿತಸ್ಥರ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಕುಮಾರಸ್ವಾಮಿ ಪ್ರವಾಸಿ ಮಂದಿರಕ್ಕೆ ಭೇಟಿ ನೀಡಿದಾಗ ಬೀಗ ಹಾಕಿರುವುದು ಜಿಲ್ಲಾಡಳಿತದ ಗಮನಕ್ಕೆ ಬಂದಿದೆ. ಇದನ್ನು ಜಿಲ್ಲಾಡಳಿತ ಗಂಭೀರವಾಗಿ ಪರಿಗಣಿಸಿದೆ ಎಂದು ಹೇಳಿದ್ದಾರೆ.

ಈ ಘಟನೆ ಬಗ್ಗೆ ವಿಚಾರಣೆ ಮಾಡಲಾಗುತ್ತಿದೆ. ಕರ್ತವ್ಯಲೋಪವೆಸಗಿದ ತಪ್ಪಿತಸ್ಥರ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಲಕ್ಷ್ಮಿಕಾಂತ ರೆಡ್ಡಿ ತಿಳಿಸಿದ್ದಾರೆ.

ಸಿ.ಪಿ.ಯೋಗೇಶ್ವರ್‌ಗೆ ಪಿತೃ ವಿಯೋಗ

ರಾಮನಗರ, ಜು.28– ಮಾಜಿ ಸಚಿವ ಹಾಗೂ ಬಿಜೆಪಿ ಎಂಎಲ್‌ಸಿ ಸಿ.ಪಿ.



ಯೋಗೇಶ್ವರ್ ಅವರ ತಂದೆ ಪುಟ್ಟಮಾದೇಗೌಡ(89) ಇಂದು (ಭಾನುವಾರ) ನಿಧನರಾಗಿದ್ದಾರೆ. ಕಳೆದ ಕೆಲ ದಿನಗಳಿಂದ ಅನಾರೋಗ್ಯದಿಂದ ಬಳಲುತ್ತಿದ್ದ ಪುಟ್ಟಮಾದೇಗೌಡ ಅವರನ್ನ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿತ್ತು.ಆದರೆ, ಚಿಕಿತ್ಸೆ ಫಲಕಾರಿಯಾಗದೆ ಇಂದು ಕೊನೆಯುಸಿರೆಳೆದಿದ್ದಾರೆ. ನಾಳೆ ಸ್ವಗ್ರಾಮ ಚನ್ನಪಟ್ಟಣದ ಚಕ್ಕೆರೆ ಗ್ರಾಮದಲ್ಲಿ ಅಂತ್ಯಕ್ರಿಯೆ ನಡೆಯಲಿದೆ ಎಂದು ಕುಟುಂಬಸ್ಥರಿಂದ ಮಾಹಿತಿ ಲಭ್ಯವಾಗಿದೆ. ಬಿಜೆಪಿ ಎಂಎಲ್‌ಸಿ ಸಿ.ಪಿ.ಯೋಗೇಶ್ವರ್ ಅವರ ತಂದೆ ಪುಟ್ಟಮಾದೇಗೌಡ ಶಿಕ್ಷಕರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದರು.

ಮನೆ ಬೀಗ ಮುರಿದು ಚಿನ್ನಾಭರಣ ಕಳವು



ಮೈಸೂರು, ಜು.28(ಎಸ್‌ಪಿಎನ್)– ಮನೆ ಬೀಗ ಮುರಿದು ಲಕ್ಷಾಂತರ ಮೌಲ್ಯದ 100 ಗ್ರಾಂ ಚಿನ್ನಾಭರಣ ದೋಚಿ ಪರಾರಿಯಾಗಿರುವ ಘಟನೆ ಮೈಸೂರು ಹೊರವಲಯದ ಐಶ್ವರ್ಯ ಬಡಾವಣೆಯಲ್ಲಿ ನಡೆದಿದೆ.

ಬಡಾವಣೆ ನಿವಾಸಿ ಶಾಂತಕುಮಾರಿ ಎಂಬುವರ ಮನೆಯಲ್ಲೇ ಚಿನ್ನಾಭರಣ ಕಳ್ಳತನವಾಗಿರುವುದು. ಇವರು ಶನಿವಾರ ಬೆಳಗ್ಗೆ ಕುಟುಂಬ ಸಮೇತ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಶನಿದೇವರ ದೇವಸ್ಥಾನಕ್ಕೆ ತೆರಳಿ, ಮಧ್ಯರಾತ್ರಿ 1.30ಕ್ಕೆ ಮನೆಗೆ ವಾಪಸ್ಸಾದಾಗ ಪ್ರಕರಣ ಬೆಳಕಿಗೆ ಬಂದಿದೆ.

ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಮೈಸೂರು ಗ್ರಾಮಾಂತರ ಠಾಣೆ ಪೊಲೀಸರು ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರೆಸಿದ್ದಾರೆ.

ಮಕ್ಕಳಲ್ಲಿ ಪರಿಸರ ಪ್ರಜ್ಞೆ ಬೆಳೆಸುವುದು ಅತ್ಯವಶ್ಯ

ಶಾಸಕ ಜಿ.ಟಿ.ದೇವೇಗೌಡ ಅಭಿಮತ



ಮೈಸೂರಿನ ಪೂರ್ಣಚೇತನ ಶಾಲೆಯಲ್ಲಿ ಇಕೋ ಬ್ರಿಕ್ಸ್ ತಯಾರಿ ಹಾಗೂ ಗ್ರೋ ಬ್ಯಾಗ್‌ಗಳಲ್ಲಿ ಬೀಜ ಬಿತ್ತನೆ ಮೂಲಕ ಎಲೈಟ್ ವಿಶ್ವ ದಾಖಲೆ ನಿರ್ಮಿಸಿದ ವಿದ್ಯಾರ್ಥಿಗಳನ್ನು ಅಭಿನಂದಿಸಿದ ಶಾಸಕ ಜಿ.ಟಿ.ದೇವೇಗೌಡರು, ಇತರ ಗಣ್ಯರೊಂದಿಗೆ ಎಲೈಟ್ ವಿಶ್ವ ದಾಖಲೆ ಪ್ರಮಾಣ ಪತ್ರ ಪ್ರದರ್ಶಿಸಿದರು.

ಮೈಸೂರು, ಜು.28(ಎಸ್‌ಬಿಡಿ)– ಎಳೆ ವಯಸ್ಸಿನಿಂದಲೇ ಮಕ್ಕಳಲ್ಲಿ ಪರಿಸರ ಪ್ರಜ್ಞೆ ಬೆಳೆಸುವುದು ಅತ್ಯವಶ್ಯ ಎಂದು ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರು ತಿಳಿಸಿದರು.

ಮೈಸೂರು–ಹೆಚ್.ಡಿ.ಕೋಟೆ ರಸ್ತೆಯಲ್ಲಿರುವ ಪೂರ್ಣಚೇತನ ಶಾಲೆಯಲ್ಲಿ 944 ಇಕೋ ಬ್ರಿಕ್ಸ್ ತಯಾರಿ ಹಾಗೂ 10,777 ಗ್ರೋ ಬ್ಯಾಗ್‌ಗಳಲ್ಲಿ ಬೀಜ ಬಿತ್ತನೆ ಮೂಲಕ ಎಲೈಟ್ ವಿಶ್ವ ದಾಖಲೆ ನಿರ್ಮಿಸಿದ ವಿದ್ಯಾರ್ಥಿಗಳನ್ನು ಅಭಿನಂದಿಸಿ ಅವರು ಮಾತನಾಡಿದರು.

ಹವಾಮಾನ ವೈಪರೀತ್ಯದಿಂದ ಜಗತ್ತು ದೊಡ್ಡ ಬೆಲೆ ತೆರುವಂತಹ ಸ್ಥಿತಿ ನಿರ್ಮಾಣವಾಗಿದೆ. ನಮ್ಮ ಮುಂದಿನ ಜನಾಂಗಕ್ಕೆ ಈ ಜಗತ್ತನ್ನು ಸುರಕ್ಷಿತವಾಗಿಡುವುದು ಇಂದಿನ ಬಹುದೊಡ್ಡ ಸವಾಲಾಗಿದೆ. ಈ ನಿಟ್ಟಿನಲ್ಲಿ ಎಳೆ ವಯಸ್ಸಿನಲ್ಲೇ ಮಕ್ಕಳಿಗೆ ಪರಿಸರ ಪ್ರಜ್ಞೆ ಬೆಳೆಸಬೇಕಿದೆ. ಪರಿಸರ ಸಂರಕ್ಷಣೆಯ ಅಗತ್ಯತೆ ಬಗ್ಗೆ ತಿಳಿಹೇಳಬೇಕಿದೆ ಎಂದರು.

ಶಾಲೆಯ ಅಧ್ಯಕ್ಷ ಡಾ.ಪಿ.ವಿದ್ಯಾಸಾಗರ್ ಮಾತನಾಡಿ, ಮಕ್ಕಳನ್ನು ಸಮಾಜದ ಸವಾಲುಗಳಿಗೆ ಸ್ಪಂದಿಸುವ ಪ್ರಜೆಗಳನ್ನಾಗಿ ರೂಪಿಸುವ ಮೂಲಕ ಭವ್ಯ ಭಾರತದ ಕನಸನ್ನು ನನಸಾಗಿಸುವ ನಿಟ್ಟಿನಲ್ಲಿ ಪ್ರಯತ್ನಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ. ಸ್ವಾಮಿ ವಿವೇಕಾನಂದರಂತಹ ಸಂತ ಶ್ರೇಷ್ಠರು, ದಾರ್ಶನಿಕರ ಆಶಯಗಳನ್ನು ಮುಗ್ಧ ಮನಸ್ಸುಗಳಲ್ಲಿ ಬಿತ್ತಿ ಬೆಳೆಸಲು ಪ್ರಕೃತಿ ಮಹತ್ವ ಸಾರುವಂತಹ ಈ ರೀತಿಯ ವಿಶಿಷ್ಟ ಕಾರ್ಯಕ್ರಮಗಳು ನೆರವಾಗುತ್ತವೆ ಎಂದು ತಿಳಿಸಿದರು.

ಚಾಮರಾಜನಗರ ವೃತ್ತದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಟಿ.ಹೀರಾಲಾಲ್ ಮಾತನಾಡಿ, ಇಂತಹ ವಿಶಿಷ್ಟ ಕಾರ್ಯಕ್ರಮವನ್ನು ಆಯೋಜಿಸುವ ಮೂಲಕ ಪೂರ್ಣಚೇತನ ಶಾಲೆ, ಮಕ್ಕಳನ್ನು ಪರಿಸರ ಪ್ರೇಮಿಗಳನ್ನಾಗಿಸುವತ್ತ ಮಹತ್ವದ ಹೆಜ್ಜೆ ಇಟ್ಟಿದೆ ಎಂದು ಶ್ಲಾಘಿಸಿದರು.

ಶಾಲೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ದರ್ಶನ್ ರಾಜ್ ಮಾತನಾಡಿ, ಮುಂದಿನ ದಿನಗಳಲ್ಲಿ ಈ ಇಕೋ ಬ್ರಿಕ್ಸ್ ಹಾಗೂ ಗ್ರೋ ಬ್ಯಾಗ್ ತಯಾರಿಯನ್ನು ನಿಯಮಿತವಾಗಿ ನಡೆಸಲಾಗುವುದು. ಆ ಮೂಲಕ ಪ್ಲಾಸ್ಟಿಕ್ ಸಮಸ್ಯೆಗೆ ಪರಿಹಾರ ಹುಡುಕುವ ಕೆಲಸವನ್ನು ನಮ್ಮ ಶಾಲೆ ಮಾಡಲಿದೆ. ನಮ್ಮೊಂದಿಗೆ ಸರ್ಕಾರಿ ಶಾಲೆಗಳನ್ನೂ ಒಡಗೂಡಿಸಿಕೊಂಡು ದೊಡ್ಡ ಮಟ್ಟದಲ್ಲಿ ಪ್ರಯತ್ನ ಮುಂದುವರೆಸಲಾಗುವುದು ಎಂದು ತಿಳಿಸಿದರು.

ಶಾಲೆ ಮುಖ್ಯ ಆಡಳಿತಾಧಿಕಾರಿ ಮಾಧುರ್ಯ ರಾಮಸ್ವಾಮಿ ಮಾತನಾಡಿ, ನಮ್ಮ ವಿದ್ಯಾರ್ಥಿಗಳನ್ನು ಭವಿಷ್ಯದ ಉತ್ತಮ ನಾಗರಿಕರನ್ನಾಗಿಸುವ ನಿಟ್ಟಿನಲ್ಲಿ ನಾವು ನಮ್ಮೆಲ್ಲ ಕಾರ್ಯಕ್ರಮಗಳನ್ನು ರೂಪಿಸುತ್ತಿದ್ದೇವೆ ಎಂದರು.

ಈ ಸಂದರ್ಭದಲ್ಲಿ ಎಲೈಟ್ ವರ್ಲ್ಡ್ ರೆಕಾರ್ಡ್ಸ್‌ನ ಹಿರಿಯ ತೀರ್ಪುಗಾರರಾದ ಅಮಿತ್ ಕೆಹಿಂಗೋರಾಣಿ, ಪಿ.ಜಿ.ಪ್ರತಿಬಾ, ಇಂಡಿಯಾ ರೆಕಾರ್ಡ್ಸ್ ಅಕಾಡೆಮಿ ರೆಕಾರ್ಡ್ ಮ್ಯಾನೇಜರ್ ಕೆ.ಆರ್.ವೆಂಕಟೇಶ್ವರನ್ ಹಾಗೂ ಶಾಲೆಯ ಪ್ರಾಂಶುಪಾಲೆ ಬಿ.ಪ್ರಿಯಾಂಕಾ, ಡೀನ್ ಲಾವಣ್ಯ ಉಪಸ್ಥಿತರಿದ್ದರು.

ಮಕ್ಕಳಿಂದ ದಾಖಲೆ...

ಪೂರ್ಣಚೇತನ ಶಾಲೆಯ ಪೂರ್ವ ಪ್ರಾಥಮಿಕದಿಂದ ಹತ್ತನೇ ತರಗತಿವರೆಗಿನ 550 ವಿದ್ಯಾರ್ಥಿಗಳು ಎಲೈಟ್ ವಿಶ್ವ ದಾಖಲೆಯಲ್ಲಿ ಭಾಗಿಯಾಗಿದ್ದರು. ನಗರದ ಮಾರುಕಟ್ಟೆಗಳ ಬಳಿ ಸಂಗ್ರಹಿಸಿ ತಂದಿದ್ದ ಪ್ಲಾಸ್ಟಿಕ್ ತ್ಯಾಜ್ಯ ಬಳಸಿಕೊಂಡು 944 ಇಕೋಬ್ರಿಕ್ಸ್ ತಯಾರಿಸಿದರು. ಇದೇ ವೇಳೆ ಅರಣ್ಯ ಇಲಾಖೆ ನೀಡಿದ್ದ ವಿವಿಧ ಜಾತಿ ಮರಗಳ ಬೀಜಗಳನ್ನು 10,777 ಗ್ರೋ ಬ್ಯಾಗ್‌ಗಳಲ್ಲಿ ಬಿತ್ತುವ ಮೂಲಕ ಅವರು ಎರಡು ಗಂಟೆ ಅವಧಿಯಲ್ಲಿ ಈ ದಾಖಲೆ ಸೃಷ್ಟಿಸಿದರು. ಪರಿಸರ ಕಾಯಕದ ನಡುವೆ ತುಂತುರು ಮಳೆಯಾಗಿದ್ದು ವಿಶೇಷವಾಗಿತ್ತು. ನೆರೆದಿದ್ದ ಪೋಷಕರು ಹಾಗೂ ಸಾರ್ವಜನಿಕರು, ವಿದ್ಯಾರ್ಥಿಗಳನ್ನು ಅಭಿನಂದಿಸಿದರು.

ಬಿಜೆಪಿ ಕಚೇರಿ ಬಳಿ ವಿಜಯಶಂಕರ್‌ಗೆ ಅಭಿನಂದನೆ



ಮೇಘಾಲಯದ ನೂತನ ರಾಜ್ಯಪಾಲರಾಗಿ ನೇಮಕಗೊಂಡಿರುವ ಮಾಜಿ ಸಚಿವ ಸಿ.ಹೆಚ್.ವಿಜಯಶಂಕರ್ ಅವರನ್ನು ಮೈಸೂರಿನ ಬಿಜೆಪಿ ಕಚೇರಿ ಬಳಿ ಮುಖಂಡರು ಅಭಿನಂದಿಸಿದರು. ಚಿತ್ರದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ಕಾಂಪೋಸ್ಟ್ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಎಸ್.ಮಾದೇವಯ್ಯ, ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಮಾಜಿ ಅಧ್ಯಕ್ಷ ಕೃಷ್ಣಪ್ಪಗೌಡ, ಜಿಲ್ಲಾ ಪಂಚಾಯ್ತಿ ಮಾಜಿ ಉಪಾಧ್ಯಕ್ಷ ಡಾ.ಶಿವರಾಂ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಬಾಲಕೃಷ್ಣ, ಮಹೇಶ್, ಜಿಲ್ಲಾ ಉಪಾಧ್ಯಕ್ಷ ರಮೇಶ್ ಕುಮಾರ್, ಜಿಲ್ಲಾ ಕೋಶಾಧ್ಯಕ್ಷ ಆರ್.ಚಂದ್ರಶೇಖರ್, ಜಿಲ್ಲಾ ಕಾರ್ಯಾಲಯ ಕಾರ್ಯದರ್ಶಿ ಪಾಪಣ್ಣ, ಮುಖಂಡರಾದ ವಿನಯ್ ಕುಮಾರ್, ರೇವಣ್ಣ ವೀರಭದ್ರ ಮತ್ತಿತರಿದ್ದಾರೆ.

ಸಿಎಂ ಸಿದ್ದರಾಮಯ್ಯರ ಕೆಳಗಿಳಿಸಲು ಬಿಜೆಪಿ ಹೋರಾಟ

ಬಿಜೆಪಿ ನಾಯಕಿ ಮಾಳವಿಕಾ ಅವಿನಾಶ್



ಮೈಸೂರಿನ ಸಾವಿತ್ರಮ್ಮ ನೇರಂಬಳ್ಳಿ ಕಲ್ಯಾಣ ಮಂಟಪದಲ್ಲಿ ನಡೆದ ಜಿಲ್ಲಾ ಬಿಜೆಪಿ ವಿಶೇಷ ಕಾರ್ಯಕಾರಿಣಿ ಸಭೆಯನ್ನು ಬಿಜೆಪಿ ನಾಯಕಿ ಮಾಳವಿಕಾ ಅವಿನಾಶ್ ಉದ್ಘಾಟಿಸಿದರು.

ಮೈಸೂರು, ಜು.28(ಎಂಟಿವೈ)– ಮುಡಾ ಹಗರಣ ಹಾಗೂ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದಲ್ಲಿ ಭಾಗಿಯಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಅಧಿಕಾರದಿಂದ ಕೆಳಗಿಳಿಸಲು ಬಿಜೆಪಿ ಹೋರಾಟ ಮುಂದುವರಿಸಲಿದೆ ಎಂದು ನಟಿ, ಬಿಜೆಪಿ ನಾಯಕಿ ಮಾಳವಿಕಾ ಅವಿನಾಶ್ ತಿಳಿಸಿದ್ದಾರೆ.

ಮೈಸೂರಿನ ಸಾವಿತ್ರಮ್ಮ ನೇರಂಬಳ್ಳಿ ಕಲ್ಯಾಣ ಮಂಟಪದಲ್ಲಿ ನಡೆದ ಜಿಲ್ಲಾ ಬಿಜೆಪಿ ವಿಶೇಷ ಕಾರ್ಯಕಾರಿಣಿ ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳಿಗಾಗಿ ಖಜಾನೆ ಖಾಲಿ ಮಾಡಿದೆ ಇದರಿಂದ ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿಲ್ಲ. ಗ್ಯಾರಂಟಿ ಯೋಜನೆಗಾಗಿ ದಲಿತರ ಎಸ್‌ಸಿಪಿ, ಟಿಎಸ್‌ಪಿ ಹಣವನ್ನು ಬಳಸಿಕೊಂಡು ದ್ರೋಹವೆಸಗಿದ್ದಾರೆ. ಅಹಿಂದ ಹೆಸರೇಳಿ ಅಧಿಕಾರಕ್ಕೆ ಬಂದವರು ಆ ಸಮುದಾಯಗಳನ್ನು ವಂಚಿಸುತ್ತಿದ್ದಾರೆ. ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನೂರಾರು ಕೋಟಿ ಲೂಟಿ ಮಾಡಿದ್ದಾರೆ. ಮುಡಾ ಹಗರಣವೂ ರಾಷ್ಟ್ರಾದ್ಯಂತ ಸುದ್ದಿಯಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ತವರಿನಲ್ಲಿಯೇ ದೊಡ್ಡ ಹಗರಣ ಬಯಲಾಗಿದೆ ಇದರಿಂದ ಸಿದ್ದರಾಮಯ್ಯ ಖುರ್ಚಿಗೆ ಮುಳುವಾಗುವ ಹಂತಕ್ಕೆ ತಲುಪಿದೆ ಎಂದರು.

ಭ್ರಷ್ಟಚಾರದ ಕಳಂಕ ಹೊತ್ತಿರುವ ಸಿಎಂ ಸಿದ್ದರಾಮಯ್ಯ ಅವರನ್ನು ಅಧಿಕಾರದಿಂದ ಕೆಳಗಿಳಿಸಲು ಬಿಜೆಪಿ ನಿರಂತರವಾಗಿ ಹೋರಾಟ ಮಾಡಲಿದೆ. ಬೆಂಗಳೂರಿನಿಂದ ಮೈಸೂರಿಗೆ ಪಾದಯಾತ್ರೆ ನಡೆಸಲಾಗುವುದು. ಪಕ್ಷದ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಹೋರಾಟದಲ್ಲಿ ಪಾಲ್ಗೊಳ್ಳಬೇಕು ಎಂದು ಮನವಿ ಮಾಡಿದರು.

ಹಿಂದುಳಿದ ವರ್ಗಗಳ ಮೋರ್ಚಾ ಅಧ್ಯಕ್ಷ ರಘು ಕೌಟಿಲ್ಯ ಮಾತನಾಡಿ, ಮೈಸೂರು ಮಹಾರಾಜರ ದೂರದೃಷ್ಟಿಯಿಂದಾಗಿ ಮೈಸೂರು ನಗರ ಸುಸಜ್ಜಿತ ನಗರವಾಗಿ ಬೆಳೆದಿದೆ. ಇಂದು ನಾವು ಸುಂದರ ಜೀವನ ಸಾಗಿಸಬೇಕಾದರೆ ಅದಕ್ಕೆ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಕೈಗೊಂಡ ಯೋಜನೆಗಳೇ ಕಾರಣ. ಆದರೆ, ಇಂದು ಕಾಂಗ್ರೆಸ್ ಆಡಳಿತದಲ್ಲಿ ಭ್ರಷ್ಟಾಚಾರ ನಡೆದಿದೆ. ಒಂದು ಲಕ್ಷ ಜನ ನಿವೇಶನಕ್ಕಾಗಿ ಅರ್ಜಿ ಹಾಕಿ ಕಾಯುತ್ತಿದ್ದಾರೆ. ಇದರಿಂದ ಸೂರು ಪಡೆಯಲು ಸಾಧ್ಯವಾಗಿಲ್ಲ. ಬಾಡಿಗೆ ಮನೆಯಲ್ಲೇ ಅನೇಕರು ಜೀವನ ಸಾಗಿಸುತ್ತಿದ್ದಾರೆ. ಆದರೆ, ಮುಡಾದಲ್ಲಿ ಭಾರಿ ಹಗರಣ ನಡೆದಿದೆ. ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣವನ್ನು ದುರ್ಬಳಕೆ ಮಾಡಿಕೊಳ್ಳಲಾಗಿದೆ ಎಂದು ಕಿಡಿಕಾರಿದರು.

ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ ಮಾತನಾಡಿ, ಮೂರನೇ ಬಾರಿಗೆ ನರೇಂದ್ರ ಮೋದಿ ಅವರು ಪ್ರಧಾನಿಯಾಗಿ ವಿಶೇಷ ದಾಖಲೆ ಮಾಡಿದ್ದಾರೆ. ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಪರಾಭವಗೊಂಡಿದ್ದ ಕ್ಷೇತ್ರದಲ್ಲಿ ಅವರ ಪುತ್ರ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಗೆಲುವು ಸಾಧಿಸಿದ್ದಾರೆ. ಸಿ.ಹೆಚ್. ವಿಜಯಶಂಕರ್ ಅವರು ರಾಜ್ಯಪಾಲ ರಾಗಿ ಆಯ್ಕೆ ಆಗಿರುವುದು ಹೆಮ್ಮೆಯ ಸಂಗತಿ. ಇದಕ್ಕಾಗಿ ಬಿಜೆಪಿ ವರಿಷ್ಠರಿಗೆ ಅಭಿನಂದನೆ ಸಲ್ಲಿಸುವೆ. ಬಿಜೆಪಿ ಕಾರ್ಯಕರ್ತರು ವ್ಯಕ್ತಿ ಪೂಜೆ ಮಾಡ ಬಾರದು. ಗುಂಪುಗಾರಿಕೆಗಳಿಗೆ ಅವಕಾಶ ನೀಡಬಾರದು. ಪಕ್ಷದಿಂದ ತೊಂದರೆ ಯಾಗಿದ್ದರೆ ನೇರವಾಗಿ ಪಕ್ಷದ ಜಿಲ್ಲಾಧ್ಯಕ್ಷ, ನಗರಾಧ್ಯಕ್ಷರನ್ನು ಭೇಟಿ ಮಾಡಿ ಬಗೆಹರಿಸಿಕೊಳ್ಳಿ. ಮುಂಬರುವ ಸ್ಥಳೀಯ ನಗರಪಾಲಿಕೆ ಚುನಾವಣೆಯಲ್ಲಿ ಅಧಿಕಾರ ಹಿಡಿಯಲು ಕೆಲಸ ಮಾಡಬೇಕು. ಪಕ್ಷ ಸಂಘಟನೆಗೆ ನಿಷ್ಠೆಯಿಂದ ಕೆಲಸ ಮಾಡಿದವರಿಗೆ ಮುಂದಿನ ಬಾರಿ ಅವಕಾಶ ಸಿಗಲಿದೆ ಎಂದರು. ಕಾರ್ಯಕ್ರಮದಲ್ಲಿ ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಮಾತನಾಡಿದರು. ಜಂಗಲ್ ಲಾಡ್ಜಸ್ ಅಂಡ್ ರೆಸಾರ್ಟ್‌ನ ಮಾಜಿ ಅಧ್ಯಕ್ಷ ಅಪ್ಪಣ್ಣ, ಮಾಜಿ ಮೇಯರ್‌ಗಳಾದ ಶಿವಕುಮಾರ್, ಸಂದೇಶ್ ಸ್ವಾಮಿ, ಪಾಲಿಕೆ ಮಾಜಿ ಸದಸ್ಯ ಮಂಜುನಾಥ್, ಗೋಪಾಲ್ ರಾವ್, ರವಿಶಂಕರ್ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಇಂಡಿಯನ್ 2 (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ರಾಯನ್ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಕಿಲ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಶಾಸ್ತ್ರಿ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಕಲ್ಕಿ (ಕ)	4 ಪ್ರದರ್ಶನಗಳು
ರಾಜಕಮಲ್	
ಡೆಡ್‌ಪೂಲ್ & ವೊಲ್ವೆರಿನ್ (ಇಂ)	4 ಪ್ರದರ್ಶನಗಳು
ಸಂಗಂ	
ಕಾಟನ್‌ಪೇಟೆ ಗೇಟ್ (ಕ)	4 ಪ್ರದರ್ಶನಗಳು
ಲಿಡೋ	
ರಾಜಹುಲಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ನರಬಲಿ (ತೆ)	4 ಪ್ರದರ್ಶನಗಳು
ಪ್ರಭಾ	
ರಕ್ಕಾಕ್ಷ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಡೆಡ್‌ಪೂಲ್ ಅಂಡ್ ವೊಲ್ವೆರಿನ್ (3ಡಿ)(ಇಂ): ಬೆ.8ಕ್ಕೆ, ಬೆ.10.40ಕ್ಕೆ, ರಾಯನ್ (ತ): ಮ.1.20ಕ್ಕೆ, ಸಂ.4.10ಕ್ಕೆ, ರಾ.7ಕ್ಕೆ, ರಾ.9.55ಕ್ಕೆ.
ಸ್ಕ್ರೀನ್ 2	ರಕ್ಕಾಕ್ಷ (ಕ): ಬೆ.10.30ಕ್ಕೆ, ಬ್ಯಾಡ್ ನ್ಯೂಸ್ (ಹಿಂ): ಮ.12.50ಕ್ಕೆ, ಕಲ್ಕಿ 2898 ಎಡಿ(3ಡಿ) (ತೆ): ಮ.3.35ಕ್ಕೆ, ಕಲ್ಕಿ 2898 ಎಡಿ (ಕ): ರಾ.7ಕ್ಕೆ, ಲೆವೆಲ್ ಕ್ರಾಸ್ (ಮ): ಬೆ.10.25ಕ್ಕೆ.
ಸ್ಕ್ರೀನ್ 3	ಬ್ಯಾಡ್ ನ್ಯೂಸ್ (ಹಿಂ): ಬೆ.10.30ಕ್ಕೆ, ಸಂ.4.15ಕ್ಕೆ, ರೂಪಾಂತರ (ಕ): ಮ.1.15ಕ್ಕೆ, ಫ್ಯಾಮಿಲಿ ಡ್ರಾಮಾ (ಕ): ರಾ.7.10ಕ್ಕೆ, ರುದ್ರವೀಣಾ (ತೆ): ರಾ.10.10ಕ್ಕೆ.
ಸ್ಕ್ರೀನ್ 4	ರಾಯನ್ (ತ): ಬೆ.10.35ಕ್ಕೆ, ಡೆಡ್‌ಪೂಲ್ ಅಂಡ್ ವೊಲ್ವೆರಿನ್ (3ಡಿ)(ಇಂ): ಮ.1.30ಕ್ಕೆ, ಸಂ.4.15ಕ್ಕೆ, ರಾ.7ಕ್ಕೆ, ರಾ.9.45ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821-2973519


ಸ್ಕ್ರೀನ್ 1	ರೂಪಾಂತರ (ಕ): ಬೆ.10.35ಕ್ಕೆ, ಲವ್ ಲಿ (ಕ): ಮ.1ಕ್ಕೆ, ಕೆಂಡ (ಕ): ಮ.3.50ಕ್ಕೆ, ಫ್ಯಾಮಿಲಿ ಡ್ರಾಮ (ಕ): ಸಂ.6.25ಕ್ಕೆ, ವಿದ್ಯಾರ್ಥಿ ವಿದ್ಯಾರ್ಥಿನಿಯರೆ (ಕ): ರಾ.9.15ಕ್ಕೆ.
ಸ್ಕ್ರೀನ್ 2	ಡೆಡ್‌ಪೂಲ್ ಅಂಡ್ ವೊಲ್ವೆರಿನ್ (3ಡಿ)(ಇಂ): ಬೆ.10.30ಕ್ಕೆ, ರಾ.7ಕ್ಕೆ, ರಾಯನ್ (ತ): ಮ.1.15ಕ್ಕೆ, ಸಂ.4.10ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 3	ಡೆಡ್‌ಪೂಲ್ ಅಂಡ್ ವೊಲ್ವೆರಿನ್ (3ಡಿ)(ಇಂ): ಮ.1.25ಕ್ಕೆ, ಸಂ.4ಕ್ಕೆ, ರಾ.9.20ಕ್ಕೆ, ರಾಯನ್ (ತ): ಸಂ.6.30ಕ್ಕೆ.
ಸ್ಕ್ರೀನ್ 4	ರಾಯನ್ (ತ): ಬೆ.10.30ಕ್ಕೆ, ಕಲ್ಕಿ 2898 ಎಡಿ (ಕ): ಮ.1.15ಕ್ಕೆ, ರೂಪಾಂತರ (ಕ): ಸಂ.4.35ಕ್ಕೆ, ರಾ.9ಕ್ಕೆ, ರುದ್ರವೀಣ (ತೆ): ರಾ.7ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಚಾಮುಂಡೇಶ್ವರಿ ಪೂಜೆ




ಮೈಸೂರಿನ ಕಮಾಂಡರ್ಸ್ ಕ್ರಿಕೆಟ್ ಯುವಕರ ತಂಡದ ವತಿಯಿಂದ ಶಿವಾಜಿ ರಸ್ತೆಯ ಅರಳಿಕಟ್ಟೆಯಲ್ಲಿ ಚಾಮುಂಡೇಶ್ವರಿ ವರ್ಧಂತಿ ಉತ್ಸವದ ಅಂಗವಾಗಿ ಚಾಮುಂಡೇಶ್ವರಿ ಪೂಜೆ ಮತ್ತು ಪ್ರಸಾದ ವಿತರಣೆ ಹಮ್ಮಿಕೊಳ್ಳಲಾಗಿತ್ತು.

ಕೆಆರ್‌ಎಸ್ ನೀರಿನ ಮಟ್ಟ



ಗರಿಷ್ಠ ಮಟ್ಟ	124.80 ಅಡಿ
ಭಾನುವಾರ	122.95 ಅಡಿ
ಒಳಹರಿವು	47293 ಕ್ಯೂಸೆಕ್
ಹೊರಹರಿವು	35182 ಕ್ಯೂಸೆಕ್

ಹಾರಂಗಿ ನೀರಿನ ಮಟ್ಟ



ಗರಿಷ್ಠ ಮಟ್ಟ	2859 ಅಡಿ
ಭಾನುವಾರ	2854.77 ಅಡಿ
ಒಳಹರಿವು	9926 ಕ್ಯೂಸೆಕ್
ಹೊರಹರಿವು	5875 ಕ್ಯೂಸೆಕ್

ಕಬಿನಿ ನೀರಿನ ಮಟ್ಟ



ಗರಿಷ್ಠ ಮಟ್ಟ	2284 ಅಡಿ
ಭಾನುವಾರ	2282.51 ಅಡಿ
ಒಳಹರಿವು	22334 ಕ್ಯೂಸೆಕ್
ಹೊರಹರಿವು	8000 ಕ್ಯೂಸೆಕ್





ಜೆಡಬ್ಲ್ಯೂಜೆಸಿ ಗಾಲ್ಫ್ ಕ್ಲಬ್ ಅಧ್ಯಕ್ಷರಾಗಿ ಡಾ.ಅಬ್ರಹಾಂ ಥಾಮಸ್ ಪುನರಾಯ್ಕೆ


ಡಾ.ಅಬ್ರಹಾಂ ಥಾಮಸ್


ವಿ.ಜಿ.ಆಚಾರ್


ಆರ್.ಎಸ್.ನಿತೀಶ್

ಮೈಸೂರು,ಜು.28– ಮೈಸೂರಿನ ಜಯ ಚಾಮರಾಜ ಒಡೆಯರ್ ಗಾಲ್ಫ್ ಕ್ಲಬ್ (ಜೆಡಬ್ಲ್ಯೂಜೆಸಿ) ಅಧ್ಯಕ್ಷರಾಗಿ ಡಾ.ಅಬ್ರಹಾಂ ಥಾಮಸ್ ಅವರು ಪುನರಾಯ್ಕೆಯಾಗಿದ್ದಾರೆ.

ಕ್ಲಬ್‌ನ ಆವರಣದಲ್ಲಿ ಭಾನುವಾರ ನಡೆದ 2024–25ನೇ ಆಡಳಿತ ಮಂಡಳಿ ಚುನಾವಣೆಯಲ್ಲಿ ಚಲಾವಣೆಯಾದ ಒಟ್ಟು 1,099 ಮತಗಳಲ್ಲಿ ಡಾ.ಅಬ್ರಹಾಂ ಥಾಮಸ್ ಅವರು 900 ಮತಗಳನ್ನು ಗಳಿಸಿ ಪ್ರತಿಸ್ಪರ್ಧಿ ಡಾ.ಎಸ್.ಪ್ರಸನ್ನ ಶಂಕರ್ (199 ಮತ) ವಿರುದ್ಧ ಭಾರೀ ಅಂತರದೊಂದಿಗೆ ಗೆಲವು ಸಾಧಿಸಿದರು.

ಹಾಗೆಯೇ ವಿ.ಜಿ.ಆಚಾರ್ ಅವರು (574 ಮತ) ಗೌರವ ಕಾರ್ಯದರ್ಶಿಯಾಗಿ ಆಯ್ಕೆಯಾಗಿದ್ದು, ಇವರ ಪ್ರತಿಸ್ಪರ್ಧಿ ಎ.ಎಸ್.ಸೋಮೇಶ್ 525 ಮತಗಳೊಂದಿಗೆ ಪರಾಭವಗೊಂಡರು. ಅಂತೆಯೇ ಕ್ಯಾಪ್ಟನ್ ಆಗಿ ಎಂ.ಎಸ್. ಯಶವಂತ್ (595 ಮತ) ಆಯ್ಕೆಯಾಗಿದ್ದು, ಪ್ರತಿಸ್ಪರ್ಧಿ ಕೆ.ಎ.ಅನಿಲ್‌ಕುಮಾರ್ 504 ಮತ ಗಳಿಸಿ ಪರಾಭವಗೊಂಡರು.

ಗೌರವ ಖಜಾಂಚಿಯಾಗಿ ಆರ್.ಎಸ್. ನಿತೀಶ್ ಅವಿರೋಧವಾಗಿ ಆಯ್ಕೆಯಾಗಿದ್ದು, ಸಮಿತಿ ಸದಸ್ಯರಾಗಿ ಪ್ಲೇಯಿಂಗ್ ಕೆಟಗರಿಯಲ್ಲಿ ಡಿ.ವಿ.ಶ್ರೀಧರ್ (771 ಮತ), ಹೆಚ್.ಸಿ.ಸುಬ್ರಹ್ಮಣ್ಯ (714 ಮತ) ಮತ್ತು ಸೋನಮ್ ಚುಗ್ (704 ಮತ), ಓಪನ್ ಕೆಟಗರಿಯಲ್ಲಿ ವಿನಯ್ ನಟರಾಜನ್ (960 ಮತ), ಎನ್.ನರೇಂದ್ರ ಬಾಬು (958 ಮತ) ಮತ್ತು ಎನ್. ಮನೀಶ್ (859 ಮತ) ಆಯ್ಕೆಯಾದರು.

ಯೋಗಗುರು ಪಟ್ಟಾಭಿ ಜೋಯಿಸ್‌ರ ಜಯಂತಿ ಆಚರಣೆ

ಮೈಸೂರು, ಜು.28– ಮೈಸೂರಿನ ಯೋಗ ವಿತ್ ಶ್ರೀನಾಥ ಕೇಂದ್ರದಲ್ಲಿ ಮೈಸೂರು ಯೋಗ ಒಕ್ಕೂಟದ ವತಿಯಿಂದ ಯೋಗಗುರು ಪಟ್ಟಾಭಿ ಜೋಯಿಸ್‌ರ ಜಯಂತಿ ಆಚರಿಸಲಾಯಿತು.


ಮೈಸೂರು ಯೋಗ ಒಕ್ಕೂಟದಿಂದ ಪಟ್ಟಾಭಿ ಜೋಯಿಸ್‌ರ ಜಯಂತಿ ಆಚರಿಸಲಾಯಿತು.

ಈ ವೇಳೆ ಪಟ್ಟಾಭಿ ಜೋಯಿಸರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿದ ಒಕ್ಕೂಟದ ಅಧ್ಯಕ್ಷ ಕೆ.ಜಿ ದೇವರಾಜ್ ಮಾತನಾಡಿ, ಕೃಷ್ಣಮಾಚಾರ್ಯರ ಶಿಷ್ಯರಲ್ಲಿ ಅಗ್ರಗಣ್ಯರಾದ ಪಟ್ಟಾಭಿ ಜೋಯಿಸ್ ಮೈಸೂರನ್ನು ಯೋಗ ನಗರಿಯಾಗಿಸುವಲ್ಲಿ ಮಹತ್ವದ ಕೊಡುಗೆ ನೀಡಿದ್ದಾರೆ. ಮೈಸೂರಲ್ಲಿ ಯೋಗದ ಸಸಿ ನೆಟ್ಟು ಅದನ್ನು ಮಹಾವೃಕ್ಷವಾಗಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದು ಸ್ಮರಿಸಿದರು.

ಸಮಾಜ ಸೇವಕ ಡಾ.ಬಿ.ಆರ್ ನಟರಾಜ ಜೋಯಿಸ್ ಮಾತನಾಡಿ, ಕಡು ಬಡತನದಿಂದ ಬಂದ ಪಟ್ಟಾಭಿ ಜೋಯಿಸರು, ಮೈಸೂರಿನ ಸಂಸ್ಕೃತ ಪಾಠಶಾಲೆಯಲ್ಲಿ ಅಧ್ಯಯನ ಮಾಡಿದ್ದು, ಅಲ್ಲಿಯೇ ಕೃಷ್ಣಮಾಚಾರ್ಯರು ನಡೆಸುತ್ತಿದ್ದ ಯೋಗ ತರಗತಿಗೆ ಸೇರಿಕೊಂಡು ಪರಿಶ್ರಮದಿಂದ ಯೋಗಾಭ್ಯಾಸ ಮಾಡಿ ತಾವೇ ಯೋಗ ಗುರುಗಳಾಗಿ ಹೊರಹೊಮ್ಮಿದರು ಎಂದು ಗುಣಗಾನ ಮಾಡಿದರು.

ಹಿರಿಯ ಸಮಾಜಸೇವಕ ಡಾ.ಕೆ.ರಘುರಾಮ್ ವಾಜಪೇಯಿ ಮಾತನಾಡಿ, ಮೈಸೂರಿನಲ್ಲಿ ಅಷ್ಟಾಂಗ ವಿನ್ಯಾಸ ಯೋಗ ಮಾರ್ಗವನ್ನು ಪರಿಚಯಿಸಿದ ಕೀರ್ತಿ ಪಟ್ಟಾಭಿ ಜೋಯಿಸ್ ಅವರಿಗೆ ಸಲ್ಲುತ್ತದೆ. ಯೋಗ ಕಲಿಯಲು ಬರುವ ವಿದೇಶಿಯರಿಗೆ ಆಹಾರ ಕ್ರಮದ ಬಗ್ಗೆ ಸಲಹೆ ನೀಡುತ್ತಿದ್ದರು ಎಂದು ನೆನೆದರು.

ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್, ಮೈಸೂರು ಯೋಗ ಒಕ್ಕೂಟದ ಕಾರ್ಯಾಧ್ಯಕ್ಷ ಡಾ.ಬಿ.ಪಿ.ಮೂರ್ತಿ, ಹಿಮಾಲಯ ಪ್ರತಿಷ್ಠಾನದ ಅಧ್ಯಕ್ಷ ಎನ್.ಅನಂತ, ಯೋಗಾಚಾರ್ಯ ಡಾ.ಬಿ.ಶ್ರೀನಾಥ, ಹರ್ಷವರ್ಧನ್ ಮತ್ತಿತರರಿದ್ದರು.

ಜಾರ್ಖಂಡ್‌ನಲ್ಲಿ ಬುಡಕಟ್ಟು ವಿದ್ಯಾರ್ಥಿಗಳೊಂದಿಗೆ ಘರ್ಷಣೆ

6 ಪೊಲೀಸರು ಸೇರಿದಂತೆ 15 ಮಂದಿಗೆ ಗಾಯ

ಪಾಕುರ್: ಜಾರ್ಖಂಡ್‌ನ ಪಾಕುರ್ ಜಿಲ್ಲೆಯಲ್ಲಿ ಕಾನೂನು ಪರಿಪಾಲಕರು ಮತ್ತು ಬುಡಕಟ್ಟು ವಿದ್ಯಾರ್ಥಿಗಳ ನಡುವಿನ ಘರ್ಷಣೆಯಲ್ಲಿ ಆರು ಪೊಲೀಸ್ ಸಿಬ್ಬಂದಿ ಸೇರಿದಂತೆ 15ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಅಪಹರಣ ಪ್ರಕರಣದ ತನಿಖೆಗಾಗಿ ಪೊಲೀಸ್ ತಂಡ ಕೆಕೆಎಂ ಕಾಲೇಜು ಕ್ಯಾಂಪಸ್‌ಗೆ ಆಗಮಿಸಿದಾಗ ಶುಕ್ರವಾರ ರಾತ್ರಿ ಈ ಘಟನೆ ನಡೆದಿದೆ.

ಕಾಲೇಜು ಆವರಣದಲ್ಲಿರುವ ಬುಡಕಟ್ಟು ಹಾಸ್ಟೆಲ್‌ನ ವಿದ್ಯಾರ್ಥಿಗಳ ಗುಂಪೊಂದು ಕ್ಯಾಂಪಸ್‌ಗೆ ಪೊಲೀಸರ ಪ್ರವೇಶವನ್ನು ವಿರೋಧಿಸಿತು. ಇದು ಪೊಲೀಸರು ಮತ್ತು ವಿದ್ಯಾರ್ಥಿಗಳ ನಡುವೆ ಘರ್ಷಣೆಗೆ ಕಾರಣವಾಯಿತು ಎಂದು ಹೇಳಿದ್ದಾರೆ.

ಶನಿವಾರ ಜಿಲ್ಲೆಯ ಮಹೇಶ್‌ಪುರ ಪ್ರದೇಶದಲ್ಲಿ ಬಾಂಗ್ಲಾದೇಶದ ಒಳ ನುಸುಳುವಿಕೆ ವಿರುದ್ಧ ಪ್ರತಿಭಟನಾ ರ್‍ಯಾಲಿ ನಡೆಸಲು ಉದ್ದೇಶಿಸಲಾಗಿದ್ದ ಬುಡಕಟ್ಟು ವಿದ್ಯಾರ್ಥಿಗಳನ್ನು ಪೊಲೀಸರು ಅಮಾನುಷವಾಗಿ ಥಳಿಸಿದ್ದಾರೆ ಎಂದು ರಾಜ್ಯ ಭಾರತೀಯ ಜನತಾ ಪಕ್ಷ ಆರೋಪಿಸಿದೆ. ಘಟನೆಯಲ್ಲಿ ಭಾಗಿಯಾಗಿರುವ ಪೊಲೀಸ್ ಸಿಬ್ಬಂದಿ ವಿರುದ್ಧ ಕ್ರಮ ಕೈಗೊಳ್ಳುವಂತೆ ಕೇಸರಿ ಪಕ್ಷ ಆಗ್ರಹಿಸಿದೆ.

ಸುಮಾರು 10ಕ್ಕೂ ಹೆಚ್ಚು ಮಂದಿ ಯನ್ನು ಪೊಲೀಸರು ಅಮಾನುಷವಾಗಿ ಥಳಿಸಿದ್ದು, ಅವರೆಲ್ಲರೂ ಪಾಕುರ್‌ನ ಸ್ಥಳೀಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಹಾಸ್ಟೆಲ್‌ನ ವಿದ್ಯಾರ್ಥಿಗಳು ಹೇಳಿದ್ದಾರೆ. ತಮ್ಮ ವಿರೋಧದ ನಡುವೆಯೂ ಪೊಲೀಸರು ಬಲವಂತವಾಗಿ ಕಾಲೇಜು ಕ್ಯಾಂಪಸ್‌ಗೆ ಪ್ರವೇಶಿಸಿದ್ದಾರೆ ಎಂದು ವಿದ್ಯಾರ್ಥಿಯೊಬ್ಬರು ಆರೋಪಿಸಿದ್ದಾರೆ

ಸಾರ್ವಜನಿಕ ಪ್ರಕಟಣೆ

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವುದೇನೆಂದರೆ, ಮಂಗಳೂರು ನಗರ, ಗೌರಿಮಠದ ರಸ್ತೆ, ಸ್ಟಾಂಡರ್ಡ್ ಬೇಕರಿ ಆವರಣದಲ್ಲಿರುವ ಶ್ರೀ ಜೆ.ಪಾಂಡುರಂಗನಾಯಕ ರವರ ಮಗ ನಾದ ಶ್ರೀ ವಿಶ್ವನಾಥ್ ಪಿ ನಾಯಕ ರವರು ನಮ್ಮ ಕಕ್ಷಿದಾರರು, ಮೈಸೂರು ಸಿಟಿ, ದೇವರಾಜ ಮೊಹಲ್ಲಾ, ಹೆಬ್ಬಾಳು. 1ನೇ ಹಂತದಲ್ಲಿರುವ ನಿವೇಶನ ನಂ.363ರ ವಿಸ್ತೀರ್ಣ ಪೂರ್ವ ಪಶ್ಚಿಮ 40.00 ಅಡಿ ದಕ್ಷಿಣೋತ್ತರ 60.00 ಅಡಿಗಳುಳ್ಳ ಸ್ವತ್ತಿಗೆ ಸಂಬಂಧಿಸಿದಂತೆ ದಿನಾಂಕ:26.05.2004ರ ಒಂದನೇ ಪುಸ್ತಕದ ದಸ್ತಾವೇಜು ನಂಬರ್:ಎಂ.ವೈ-ಎಸ್-1-01820- 2004-05 ಆಗಿ ಸಿ.ಡಿ.ನಂಬರ್ ಎಂವೈಎಸ್‌ಡಿ20ನೇದ್ದರಲ್ಲಿ ರ ಶುದ್ಧ ಕ್ರಯಪತ್ರದ ಮೂಲ ದಾಖಲಾತಿಯನ್ನು ಕಳೆದು ಕೊಂಡಿರುತ್ತಾರೆ. ನನ್ನ ಕಕ್ಷಿದಾರರು ಈ ಸಂಬಂಧವಾಗಿ ಮೈಸೂರು ನಗರ, ಹೆಬ್ಬಾಳ್ ಪೋಲೀಸ್ ಠಾಣೆಯಲ್ಲಿ ದಿನಾಂಕ: 13.03.2024 ರಂದು ದಾಖಲಾತಿ ಕಳೆದಿರುವ ಬಗ್ಗೆ ದೂರು ನೀಡಿರುತ್ತಾರೆ.

ಯಾರಿಗಾದರೂ ಮೇಲೆ ಹೇಳಿದ ದಾಖಲಾತಿಗಳು ಸಿಕ್ಕಿದ್ದಲ್ಲಿ ಸದರಿ ದಾಖಲಾತಿಗಳನ್ನು ಈ ಕೆಳಗಿನ ವಿಳಾಸಕ್ಕೆ ಈ ದಿನದಿಂದ 15 ದಿನಗಳ ಒಳಗಾಗಿ ತಲುಪಿಸಿ ಸ್ವೀಕೃತಿ ಪಡೆಯಲು ತಿಳಿಸಿದೆ.

ಸಹಿ/– ಎಂ.ಎ ಹೇಮಲತಾ, ವಕೀಲರು ಮತ್ತು ನೋಟರಿ, ನಂ.3848/1, "ಪ್ರತಿಬಿಂಬ" 12ನೇ ಕ್ರಾಸ್, ಕರುಣಾಪುರ, ಸೆಂಟ್ ಮೇರಿಸ್ ರಸ್ತೆ, ಎನ್.ಆರ್.ಮೊಹಲ್ಲಾ, –570007.
ಮೊಬೈಲ್ : 99005 43370, ದಿನಾಂಕ: 26.07.2024

ಸಾರ್ವಜನಿಕ ಪ್ರಕಟಣೆ

ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ ನನ್ನ ಕಕ್ಷಿದಾರರು ಈ ಕೆಳಗೆ ಕಾಣಿಸಿರುವ ಷೆಡ್ಯೂಲ್ ಸ್ವತ್ತಿನ ಮಾಲೀಕರಾದ ಚಾಮರಾಜನಗರ ಜಿಲ್ಲೆ, ಗುಂಡ್ಲುಪೇಟೆ ತಾಲ್ಲೂಕು, ಬೇಗೂರು ಹೋಬಳಿ ಮತ್ತು ಗ್ರಾಮದಲ್ಲಿ ವಾಸವಾಗಿರುವ ಶ್ರೀ ಬಿ.ಎನ್. ಪುನೀತ್ ಕುಮಾರ್‌ರವರ ಧರ್ಮಪತ್ನಿಯಾದ ಶ್ರೀಮತಿ ಧನುಶ್ರೀ ಎಂ.ಎಲ್. ರವರಿಂದ ಷೆಡ್ಯೂಲ್ ಸ್ವತ್ತನ್ನು ಕ್ರಯಕ್ಕೆ ಕೊಂಡುಕೊಳ್ಳಲು ಇಚ್ಛಿಸಿರುತ್ತಾರೆ.

ಷೆಡ್ಯೂಲ್ ಸ್ವತ್ತನ್ನು ಹಾಲಿ ಮಾರಾಟಗಾರರಾದ ಶ್ರೀಮತಿ ಧನುಶ್ರೀ ಎಂ.ಎಲ್.ರವರು ದಿನಾಂಕ 27.03.2024 ರಂದು ಶ್ರೀ ಉನ್ನಿಕೃಷ್ಣನ್ ನಾಯರ್ ರವರ ಮಗನಾದ ಶ್ರೀ ಗಿರೀಶ್‌ಬಾಬುರವರು ನೋಂದಾಯಿತ ಶುದ್ಧಕ್ರಯ ಪತ್ರದ ಮೂಲಕ ಕ್ರಯಕ್ಕೆ ಪಡೆದುಕೊಂಡಿರುತ್ತಾರೆ. ಸದರಿ ನೋಂದಾಯಿತ ಶುದ್ಧಕ್ರಯ ಪತ್ರವು ಗುಂಡ್ಲುಪೇಟೆ ಉಪ ನೋಂದಣಾಧಿಕಾರಿರವರ ಕಛೇರಿಯ 1ನೇ ಪುಸ್ತಕದ ದಸ್ತಾವೇಜು ನಂಬರ್ GUN-1-08998/2023-24 ಆಗಿ ನೋಂದಾಯಿಸಲ್ಪಟ್ಟಿರುತ್ತದೆ. ಈ ರೀತಿಯಾಗಿ ಹಾಲಿ ಮಾರಾಟಗಾರರಾದ ಶ್ರೀಮತಿ ಧನುಶ್ರೀ ಎಂ.ಎಲ್.ರವರು ಮಾಲೀಕರಾಗಿರುತ್ತಾರೆ ಎಂದು ತಿಳಿಸಿರುತ್ತಾರೆ. ಷೆಡ್ಯೂಲ್ ಸ್ವತ್ತನ್ನು ಸದರಿ ಮೇಲೆ ಹೇಳಿದ ಶ್ರೀ ಗಿರೀಶ್‌ಬಾಬು ರವರು ದಿನಾಂಕ 03.02.2012 ರಂದು ಶ್ರೀಮತಿ ನೀಲಮ್ಮ ಮತ್ತು ಇವರ ಕುಟುಂಬದವರಿಂದ ನೋಂದಾಯಿತ ಶುದ್ಧಕ್ರಯ ಪತ್ರದ ಮೂಲಕ ಕ್ರಯಕ್ಕೆ ಪಡೆದುಕೊಂಡಿರುತ್ತಾರೆ. ಸದರಿ ನೋಂದಾಯಿತ ಶುದ್ಧಕ್ರಯ ಪತ್ರವು ಗುಂಡ್ಲುಪೇಟೆ ಉಪ ನೋಂದಣಾಧಿಕಾರಿರವರ ಕಛೇರಿಯ 1ನೇ ಪುಸ್ತಕದ ದಸ್ತಾವೇಜು ನಂಬರ್ GUN-1-04867/2011-12 ಆಗಿ ಸಿ.ಡಿ.ನಂಬರ್ GUND54 ನೇ ದ್ದರಲ್ಲಿ ನೋಂದಾಯಿಸಲ್ಪಟ್ಟಿರುತ್ತದೆ. ಸದರಿ ಮೇಲೆ ಹೇಳಿದ ಶ್ರೀ ಗಿರೀಶ್‌ಬಾಬು ರವರು ದಿನಾಂಕ 03.02.2012 ರಂದು ನೋಂದಾಯಿಸಲ್ಪಟ್ಟಿರುವ ಅಸಲು ಕ್ರಯ ಪತ್ರ ಸಂಖ್ಯೆ GUN-1-04867/2011-12 ವನ್ನು ಕಳೆದು ಕೊಂಡಿದ್ದು, ಈ ಸಂಬಂಧವಾಗಿ ಸದರಿ ಶ್ರೀ ಗಿರೀಶ್‌ಬಾಬು. ರವರು ದಿನಾಂಕ 03.07. 2024 ರಂದು ಕೇರಳ ರಾಜ್ಯದ ಮಲ್ಲಪುರಂ ಜಿಲ್ಲೆಯ ಕುಟ್ಟಿಪುರಂ ಪೋಲೀಸ್ ಠಾಣೆ ಯಲ್ಲಿ ದೂರನ್ನು ನೀಡಿ, ಎನ್.ಸಿ.ಆರ್ ಸಂಖ್ಯೆ 15295018/2024-5-00134 ದೂರು ಸ್ವೀಕೃತಿಯನ್ನು ಪಡೆದುಕೊಂಡಿರುತ್ತಾರೆ. ಸದರಿ ದೂರಿನ ಅನ್ವಯ ಶ್ರೀ ಗಿರೀಶ್ ಬಾಬುರವರು ದಿನಾಂಕ 17.07.2024 ರಂದು ಮೈಸೂರು ಮಿತ್ರ ಎಂಬ ಕನ್ನಡ ದಿನ ಪತ್ರಿಕೆಯಲ್ಲಿ ಹಾಗೂ ದಿನಾಂಕ 20.07.2024 ರಂದು ಮಾತೃಭೂಮಿ ಎಂಬ ಮಲೆಯಾಳಂ ದಿನ ಪತ್ರಿಕೆಯಲ್ಲಿ ಕಳೆದು ಹೋಗಿರುವ ಬಗ್ಗೆ ಜಾಹಿರಾತು ಪ್ರಕಟಣೆಯನ್ನು ನೀಡಿರುತ್ತಾರೆ.

ಆದ್ದರಿಂದ ಮೇಲೆ ಹೇಳಿದ ಅಸಲು ಕ್ರಯಪತ್ರ ಸಂಖ್ಯೆ GUN-1-04867/2011-12ರ ಆಧಾರದ ಮೇರೆಗೆ ಯಾರಾದರೂ ಅಂದರೆ ಯಾವುದೇ ಖಾಸಗಿ ವ್ಯಕ್ತಿಗಳು, ಬ್ಯಾಂಕ್‌ಗಳು, ಕೋ-ಅಪರೇಟಿವ್ ಸಂಘ- ಸಂಸ್ಥೆಗಳು, ಫೈನಾನ್ಸ್ ಸಂಸ್ಥೆಗಳು ಅಥವಾ ಇನ್ನಿತರರು ಸದರಿ ಅಸಲು ಕ್ರಯಪತ್ರದ ಮೇಲೆ ಅಡಮಾನ, ಸಾಲ, ಭೋಗ್ಯ, ಬಾಡಿಗೆ, ಕ್ರಯದ ಕರಾರು, ಎಂಓಯು, ಜಂಟಿ ಭೂ ಅಭಿವೃದ್ಧಿ ಕರಾರು ಮತ್ತು ಜಿ.ಪಿ.ಎ ಗಳನ್ನು ಮಾಡಿಕೊಂಡಿದ್ದಲ್ಲಿ ಅಥವಾ ಸಾಲ, ಫೈನಾನ್ಸ್ ಮಾಡಿದ್ದಲ್ಲಿ ಮತ್ತು ಷೆಡ್ಯೂಲ್ ಸ್ವತ್ತಿಗೆ ಸಂಬಂಧಪಟ್ಟಂತೆ ಮೇಲೆ ಕಾಣಿಸಿದ ವ್ಯಕ್ತಿಗಳಲ್ಲದೇ ಬೇರೆ ಯಾರಿಗಾದರು/ಇತರೆ ಯಾವುದೇ ರೀತಿಯ ಕಾನೂನುಬದ್ಧ ಹಕ್ಕು ವಗೈರು ಮತ್ತು ಹಿತಾಸಕ್ತಿ ಇದ್ದಲ್ಲಿ ಈ ದಿನದಿಂದ ಹದಿನೈದು ದಿನಗಳ ಒಳಗಾಗಿ ಸಂಬಂಧಪಟ್ಟ ದಾಖಲೆಗಳೊಂದಿಗೆ ಈ ಕೆಳಕಂಡ ವಕೀಲರನ್ನು ಸಂಪರ್ಕಿಸಿ ದಾಖಲಾತಿಗಳೊಂದಿಗೆ ತಕರಾರನ್ನು ಸಲ್ಲಿಸತಕ್ಕದ್ದು. ಆನಂತರ ಸ್ವೀಕರಿಸಲಾದ ಆಕ್ಷೇಪಣೆಗಳು ಮತ್ತು ಹಕ್ಕುಗಳು ನನ್ನ ಕಕ್ಷಿದಾರರನ್ನು ಬದ್ಧರನ್ನಾಗಿಸುವುದಿಲ್ಲ ಮತ್ತು ನನ್ನ ಕಕ್ಷಿದಾರರು ಯಾವುದೇ ಹಕ್ಕಗಳು/ಆಕ್ಷೇಪಣೆಗಳು ಇಲ್ಲವೆಂದು ಮತ್ತು ಹಾಲೀ ಮಾರಾಟಗಾರರನ್ನು ಷೆಡ್ಯೂಲ್ ಸ್ವತ್ತಿನ ಮಾಲೀಕರೆಂದು ಪರಿಗಣಿಸಿ ಕೆಳಗೆ ತಿಳಿಸಿದ ಷೆಡ್ಯೂಲ್ ಸ್ವತ್ತನ್ನು ಕ್ರಯಕ್ಕೆ ಪಡೆದುಕೊಳ್ಳಲು ಮುಂದಾಗುತ್ತಾರೆ.

ಷೆಡ್ಯೂಲ್ ಸ್ವತ್ತು: ಚಾಮರಾಜನಗರ ಜಿಲ್ಲೆ, ಗುಂಡ್ಲುಪೇಟೆ ತಾಲ್ಲೂಕು, ಬೇಗೂರು ಹೋಬಳಿ, ಕಬ್ಬಹಳ್ಳಿ ಗ್ರಾಮಕ್ಕೆ ಸೇರಿದ ಸರ್ವೆ ನಂ. 261/2 ಇದರ ವಿಸ್ತೀರ್ಣ ಒಟ್ಟು ವಿಸ್ತೀರ್ಣ 2 ಎಕರೆ 17 ಗುಂಟೆ ಖುಷ್ಕಿ ಜಮೀನಿನ ಸ್ವತ್ತಿಗೆ ಚಕ್ಕುಬಂದಿ : ಪೂರ್ವಕ್ಕೆ : ಶ್ರೀ ವೆಂಕಟಶೆಟ್ಟಿರವರಿಗೆ ಸೇರಿದ ಜಮೀನು, ಪಶ್ಚಿಮಕ್ಕೆ : ಶ್ರೀ ಕೊಂತಪ್ಪ @ ಲಿಂಗಪ್ಪರವರಿಗೆ ಸೇರಿದ ಜಮೀನು ಉತ್ತರಕ್ಕೆ : ಶ್ರೀ ಜವನಪ್ಪರವರಿಗೆ ಸೇರಿದ ಜಮೀನು, ದಕ್ಷಿಣಕ್ಕೆ : ಸರ್ಕಾರಿ ರಸ್ತೆ. ಈ ಮಧ್ಯೆ ಇರುವ 2 ಎಕರೆ 17 ಗುಂಟೆ ಖುಷಿ ಜಮೀನು

ಸಹಿ/– ಬಿ.ಎಸ್. ಶಿವಕುಮಾರ್, ವಕೀಲರು. ನಂ. 518/2, 1ನೇ ಮಹಡಿ, ಪ್ರಗತಿ ಮೆಡಿಕಲ್ ಕಾಂಪ್ಲೆಕ್ಸ್, ತ್ಯಾಗರಾಜ ರಸ್ತೆ, ಅಗ್ರಹಾರ, ಮೈಸೂರು-04, 94480-69586
ದಿನಾಂಕ: 26.07.2024, ಸ್ಥಳ: ಮೈಸೂರು